

ಮೈಸೂರು ಮಿತ್ರ


ಮೈಸೂರು-ಮಂಡ್ಯ-ಚಾಮರಾಜನಗರ-ಕೊಡಗು-ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಜನವರಿ 13 ಸೋಮವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ-ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 267 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ದಕ್ಷಿಣ ಡೈರಿ ಶೃಂಗಸಭೆ-2025

ಪಾಂಡವಪುರದ ರೈತ ಮಹಿಳೆಗೆ 'ಅತ್ಯುತ್ತಮ ಹೈನುಗಾರ್ತಿ' ಪ್ರಶಸ್ತಿ

ಕಳೆದ ವರ್ಷ ಡಿಂಕ ಗ್ರಾಮದ ಡೈರಿಗೆ ಲಕ್ಷ ಲೀಟರ್ ಹಾಲು ಸರಬರಾಜು ಮಾಡಿ 33 ಲಕ್ಷ ಗಳಿಸಿದ್ದ ಮಂಗಳಮ್ಮ


ಮಂಗಳಮ್ಮ

ಪಾಂಡವಪುರ, ಜ.12- ಮಂಡ್ಯ ಜಿಲ್ಲೆ ಪಾಂಡವಪುರ ತಾಲೂಕು ಡಿಂಕ ಗ್ರಾಮದ ಅವಿದ್ಯಾವಂತ ರೈತ ಮಹಿಳೆಯೋರ್ವರು ಹೈನುಗಾರಿಕೆಯಿಂದಲೇ ಸಾಧನೆಗೈದು ಶನಿವಾರ ಬೆಂಗಳೂರಿನಲ್ಲಿ ನಡೆದ ದಕ್ಷಿಣ ಡೈರಿ ಶೃಂಗಸಭೆಯಲ್ಲಿ 'ಅತ್ಯುತ್ತಮ ಹೈನುಗಾರ್ತಿ' ಪ್ರಶಸ್ತಿ ಸ್ವೀಕರಿಸಿದರು.

ಭಾರತೀಯ ಡೈರಿ ಅಸೋಸಿಯೇಷನ್, ದಕ್ಷಿಣ ವಲಯ ಆಯೋಜಿಸಿದ್ದ ದಕ್ಷಿಣ ಡೈರಿ ಶೃಂಗಸಭೆ-2025ರ ಅಂತಿಮ ದಿನವಾದ ಶನಿವಾರದಂದು ದಕ್ಷಿಣ ಭಾರತದ ಮಹಿಳಾ ಡೈರಿ ರೈತರ ಶ್ರಮವನ್ನು ಪುರಸ್ಕರಿಸಿ ರಾಜ್ಯವಾರು 2024ರ 'ಅತ್ಯುತ್ತಮ ಹೈನುಗಾರ್ತಿ' ಪ್ರಶಸ್ತಿ ಪ್ರದಾನ ಮಾಡಿದ್ದು, ಕರ್ನಾಟಕದಿಂದ ಪಾಂಡವಪುರ ತಾಲೂಕಿನ ಡಿಂಕ ಗ್ರಾಮದ ಮಂಗಳಮ್ಮ ಈ ಪ್ರಶಸ್ತಿ ಪಡೆದರೆ, ಆಂಧ್ರಪ್ರದೇಶದಿಂದ ನವೀನಕುಮಾರಿ, ಕೇರಳ ಮತ್ತು ಲಕ್ಷದ್ವೀಪದಿಂದ ವಿಧು ರಾಜೀವ್, ತೆಲಂಗಾಣದಿಂದ ಮಧಾರಿ ಗಂಗವ್ವ ಮತ್ತು ಪುದುಚೇರಿಯಿಂದ ಸೆಲ್ವನಾಯಕಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ಸಮಾರಂಭದಲ್ಲಿ ರಾಜ್ಯದ ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಸಾಧಕ ಮಹಿಳೆಯರಿಗೆ ಪ್ರಶಸ್ತಿ ಪ್ರದಾನ ಮಾಡಿದರು.

ಪಾಂಡವಪುರ ತಾಲೂಕು ಡಿಂಕ ಗ್ರಾಮದ ಮಹದೇವಪ್ಪ ಅವರ ಪತ್ನಿ ಮಂಗಳಮ್ಮ ಓದಿದ್ದು ಕೇವಲ 5ನೇ ತರಗತಿ. ಆದರೆ ತಮಗಿದ್ದ 2 ಎಕರೆ ಜಮೀನಿನಲ್ಲಿ ವ್ಯವಸಾಯ ಮಾಡುತ್ತಾ ಸುಮಾರು 20 ವರ್ಷಗಳ ಹಿಂದೆ ಒಂದು ಹಸುವನ್ನು ಸಾಕಲಾರಂಭಿಸಿದರು. ನಂತರ ಹಂತ-ಹಂತವಾಗಿ ಈಗ 30 ಹಸುಗಳಿರುವ ಫಾರಂ ಅನ್ನೇ ತಮ್ಮ ಜಮೀನಿನಲ್ಲಿ ಸ್ಥಾಪಿಸಿದ್ದಾರೆ. ಅಲ್ಲದೇ ಅದೇ ಜಮೀನಿನ ಒಂದು ಭಾಗದಲ್ಲಿ ಹಸುಗಳಿಗೆ ಮೇವು ಬೆಳೆಸುತ್ತಿದ್ದಾರೆ.


ಪ್ರಶಸ್ತಿ ಸ್ವೀಕರಿಸಿದ ನಂತರ ಡಿಂಕ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ಹಾಗೂ ಇನ್ನಿತರರೊಂದಿಗೆ ಬಹುಮಾನ ಚೆಕ್ ಪ್ರದರ್ಶಿಸುತ್ತಿರುವ ಮಂಗಳಮ್ಮ

ಡಿಂಕ ಗ್ರಾಮದ ಹಾಲು ಉತ್ಪಾದಕರ ಸಹಕಾರಿ ಸಂಘದ ಸದಸ್ಯರಾಗಿರುವ ಮಂಗಳಮ್ಮ 2024ನೇ ವರ್ಷದಲ್ಲಿ ಡೈರಿಗೆ 1,01,915 ಲೀಟರ್ ಹಾಲು ಸರಬರಾಜು ಮಾಡಿ 33 ಲಕ್ಷ ರೂ. ಆದಾಯ ಗಳಿಸುವ ಮೂಲಕ ಹೈನುಗಾರಿಕೆಯಲ್ಲಿ ಸಾಧನೆ ಮಾಡಿ ದಕ್ಷಿಣ ಡೈರಿ ಶೃಂಗಸಭೆಯಲ್ಲಿ ಅತ್ಯುತ್ತಮ ಹೈನುಗಾರ್ತಿ ಪ್ರಶಸ್ತಿ ಪಡೆದಿದ್ದಾರೆ.

ಈಕೆ ಅವಿದ್ಯಾವಂತೆಯಾದರೂ, ಹಾಲು ಮಾರಿದ ಹಣದಲ್ಲೇ ತಮ್ಮ ಪುತ್ರ ದಿನೇಶ್‌ನನ್ನು ಐಟಿಐವರೆಗೆ ■ 9ನೇ ಪುಟಕ್ಕೆ

ಕಾಂಗ್ರೆಸ್‌ನಲ್ಲಿ ನಿಲ್ಲದ ಸಿಎಂ ಬಣ ರಾಜಕೀಯ
ಕುತೂಹಲ ಕೆರಳಿಸಿರುವ ಸಿಎಲ್‌ಪಿ ಸಭೆ

ಬೆಂಗಳೂರು, ಜ.12- ಆಡಳಿತಾರೂಢ ಕಾಂಗ್ರೆಸ್ ಪಾಳಯದಲ್ಲಿ ಸಿಎಂ ಕುರ್ಚಿಗಾಗಿ ಕಾದಾಟಗಳು ಮುಂದುವರೆದಿರುವ ನಡುವೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ (ಸಿಎಲ್‌ಪಿ) ಸಭೆ ಕರೆದಿದ್ದು, ಈ ಸಭೆ ಸಾಕಷ್ಟು ಕುತೂಹಲಗಳನ್ನು ಮೂಡಿಸಿದೆ.

ಮುಖ್ಯಮಂತ್ರಿಗಳು ಸಭೆ ಕರೆದಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದೊಳಗೆ ಇರುವ ಬಣಗಳು ಸಕ್ರಿಯವಾಗಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಇರುವ ಬಣವು ಸಭೆ ವೇಳೆ ಸ್ಪಷ್ಟ ಸಂದೇಶವೊಂದನ್ನು ಪಕ್ಷದ ಹೈಕಮಾಂಡ್‌ಗೆ ಪರೋಕ್ಷವಾಗಿ ರವಾನಿಸುವ ಸಾಧ್ಯತೆಯಿದೆ.

ಈ ನಡುವೆ ಶನಿವಾರ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್‌ಕೆ ಪಾಟೀಲ್ ಮತ್ತು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರ ಮನೆಗೆ ಭೇಟಿ ನೀಡಿದ್ದು, ಈ ಭೇಟಿ ಮಹತ್ವ ಪಡೆದುಕೊಂಡಿದೆ. ಪರಮೇಶ್ವರ್ ಅವರ ನಿವಾಸದಲ್ಲಿ ನಡೆದ ನಾಯಕರ ಮಾತುಕತೆಗಳು ಸಿಎಲ್‌ಪಿ ಸಭೆಯಲ್ಲಿ ಪ್ರಸ್ತಾಪವಾಗುವ ಸಾಧ್ಯತೆಗಳಿವೆ ಎಂದು ಮೂಲಗಳು ತಿಳಿಸಿವೆ.

2023 ರಲ್ಲಿ ಮಾಡಿಕೊಂಡ ಒಪ್ಪಂದದ ಪ್ರಕಾರ, ಎರಡನೇ ಬಾರಿಗೆ ಮುಖ್ಯಮಂತ್ರಿಯಾಗುವಲ್ಲಿ ಯಶಸ್ವಿಯಾದ ಸಿದ್ದರಾಮಯ್ಯ ಅವರು ತಮ್ಮ ಅಧಿಕಾರಾವಧಿಯ ಎರಡು ವರ್ಷ ಪೂರ್ಣಗೊಳಿಸಿದ ನಂತರ ಅಧಿಕಾರ ಹಸ್ತಾಂತರಿಸಬೇಕಿದ್ದು, ಇದಕ್ಕೆ ಅವರು ಬದ್ಧರಾಗಿದ್ದಾರೆ. ಆದರೆ, ತಾವು ಆಯ್ಕೆ ಮಾಡಿದ ನಾಯಕ ಮುಖ್ಯಮಂತ್ರಿಯಾಗಬೇಕೆಂದು ಬಯಸುತ್ತಿದ್ದಾರೆಂದು ಉನ್ನತ ಮೂಲಗಳು ಮಾಹಿತಿ ನೀಡಿವೆ.


ಸಿದ್ದರಾಮಯ್ಯ


ಸುರ್ಜೇವಾಲ

ಈ ಉದ್ದೇಶದಿಂದಲೇ ಪರಮೇಶ್ವರ್ ಅವರ ಪರ ಅಭಿಪ್ರಾಯ ಮೂಡಿಸಲು ಎಸ್‌ಸಿ/ಎಸ್‌ಟಿ ಶಾಸಕರ ಸಭೆ ನಡೆಸುವಂತೆ ಸೂಚಿಸಿದ್ದರು ಎನ್ನಲಾಗಿದ್ದು, ಆದರೆ, ಶಿವಕುಮಾರ್ ಅವರು ಹೈಕಮಾಂಡ್ ಮೂಲಕ ಸಭೆಗೆ ಬ್ರೇಕ್ ಹಾಕಿಸಿದ್ದರು ಎನ್ನಲಾಗಿದೆ.

ಎಐಸಿಸಿ ಪ್ರಧಾನ ಕಾರ್ಯದರ್ಶಿ (ಕರ್ನಾಟಕದ ಉಸ್ತುವಾರಿ) ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಡಾ.ಪರಮೇಶ್ವರ್ ಅವರಿಗೆ ಸಭೆ ■ 9ನೇ ಪುಟಕ್ಕೆ

ಸಿದ್ದರಾಮಯ್ಯರನ್ನು ಯಾರೂ ಏನೂ ಮಾಡೋಕ್ಕಾಗಲ್ಲ



ರಾಯಚೂರು, ಜ.12- ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಯಾರೂ ಏನೂ ಮಾಡೋಕ್ಕಾಗಲ್ಲ. ನಮ್ಮ ಹೈಕಮಾಂಡ್, ರಾಹುಲ್ ಗಾಂಧಿ, ಸೋನಿಯಾ, ಸುರ್ಜೇವಾಲಾ ಎಲ್ಲರೂ ಸಿದ್ದರಾಮಯ್ಯ ಪರ ಇದ್ದಾರೆ ಎಂದು ಸಚಿವ ಭೈರತಿ ಸುರೇಶ್ ಹೇಳಿದ್ದಾರೆ.

ರಾಯಚೂರಿನ ದೇವದುರ್ಗದ ತಿಂಥಣಿ ಬ್ರಿಡ್ಜ್ ಕನಕಗುರು ಪೀಠದ ಹಾಲುಮತ ಸಂಸ್ಕೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಂವಿಧಾನವನ್ನು ಜೀವನ ಧ್ಯೇಯವನ್ನಾಗಿ ಇಟ್ಟುಕೊಂಡು ಸಿದ್ದರಾಮಯ್ಯ ರಾಜ್ಯವನ್ನು ಆಳುತ್ತಿದ್ದಾರೆ. ರಾಜ್ಯದಲ್ಲಿರುವ ಸಮುದಾಯದ 60 ಲಕ್ಷದಲ್ಲಿ ಜನರಲ್ಲಿ ಶೇ.90ರಷ್ಟು ಜನ ಸಿದ್ದರಾಮಯ್ಯನವರ ಜೊತೆಗಿದ್ದೀರಿ. ಕುರುಬ ಸಮುದಾಯದ ಜೊತೆ ಕೆಳವರ್ಗದವರು, ದಲಿತರು, ಮೇಲ್ವರ್ಗದ ಬಡವರು ■ 9ನೇ ಪುಟಕ್ಕೆ

ಶೀಘ್ರವೇ ಡಿಕೆಶಿ ಸಿಎಂ ಆಗುವುದರಲ್ಲಿ ಯಾವುದೇ ಅನುಮಾನವಿಲ್ಲ



ದಾವಣಗೆರೆ, ಜ.12- ವಿಧಾನಸಭಾ ಚುನಾವಣೆಯ ಬಳಿಕ ನಡೆದ ಕೆಲ ಬೆಳವಣಿಗೆಗಳಿಂದ ಸಿದ್ದರಾಮಯ್ಯ ಅವರಿಗೆ ಮುಖ್ಯಮಂತ್ರಿ ಹುದ್ದೆ ಒಲಿದಿದೆ. ಕುರ್ಚಿ ಖಾಲಿಯಾದ ತಕ್ಷಣ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಲಿದ್ದಾರೆ. ಇದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ ತಿಳಿಸಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಐದು ವರ್ಷಗಳ ಅವಧಿಗೆ ಮುಖ್ಯಮಂತ್ರಿ ಆಗಬೇಕಿತ್ತು. ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಅವರ ಪಾತ್ರ ದೊಡ್ಡದಿದೆ. ಮೂರು ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವ ಮೂಲಕ ಉಪಚುನಾವಣೆಯಲ್ಲಿ ಕೂಡ ಶಕ್ತಿ ಪ್ರದರ್ಶಿಸಿದ್ದಾರೆ. ಹೈಕಮಾಂಡ್ ಇದನ್ನು ಗಮನಿಸಿ ತೀರ್ಮಾನ ಕೈಗೊಳ್ಳುತ್ತದೆ. ಅವರಿಗೆ ಪ್ರತಿಫಲ ಸಿಗುವ ವಿಶ್ವಾಸವಿದೆ ಎಂದು ಭಾನುವಾರ ಸುದ್ದಿಗಾರರೊಂದಿಗೆ ■ 9ನೇ ಪುಟಕ್ಕೆ

ಯುವ ಮೋರ್ಚಾದಿಂದ 'ವಿವೇಕ ನಡಿಗೆ' ವಾಕಥಾನ್


ಮೈಸೂರಲ್ಲಿ ಬಿಜೆಪಿ ಯುವ ಮೋರ್ಚಾ ಆಯೋಜಿಸಿದ್ದ ವಿವೇಕ ನಡಿಗೆ ವಾಕಥಾನ್‌ನಲ್ಲಿ ಪಾಲ್ಗೊಂಡಿರುವ ಯುವ ಮೋರ್ಚಾ ಕಾರ್ಯಕರ್ತರು.

ಮೈಸೂರು, ಜ.12(ಎಂಟಿವೈ)- ಸ್ವಾಮಿ ವಿವೇಕಾನಂದರ ಜಯಂತಿಯ ಅಂಗವಾಗಿ ಬಿಜೆಪಿ ಯುವ ಮೋರ್ಚಾ ವತಿಯಿಂದ ಮೈಸೂರಲ್ಲಿ ಭಾನುವಾರ ಆಯೋಜಿಸಿದ್ದ ವಾಕಥಾನ್‌ನಲ್ಲಿ ನೂರಾರು ಮಂದಿ ಪಾಲ್ಗೊಂಡು ಸ್ವಾಮಿ ವಿವೇಕಾನಂದರನ್ನು ಸ್ಮರಿಸಿದರು.

ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ಬಿಜೆಪಿ ಮೈಸೂರು ನಗರ ಹಾಗೂ ಜಿಲ್ಲಾ ಯುವ ಮೋರ್ಚಾ ವತಿಯಿಂದ ಆಯೋಜಿಸಿದ್ದ ವಾಕಥಾನ್‌ನಲ್ಲಿ ಯುವ ಮೋರ್ಚಾ ಕಾರ್ಯಕರ್ತರು ಸ್ವಾಮಿ ವಿವೇಕಾನಂದರ ಭಾವಚಿತ್ರವುಳ್ಳ ಬಿಳಿ ಬಣ್ಣದ ಟಿ-ಶರ್ಟ್ ಧರಿಸಿ ನಡಿಗೆಯಲ್ಲಿ ಪಾಲ್ಗೊಂಡು ಗಮನ ಸೆಳೆದರು. ರಾಮಸ್ವಾಮಿ ವೃತ್ತದಲ್ಲಿ ವಾಕಥಾನ್‌ಗೆ ರಾಜ್ಯ ಯುವ ಮೋರ್ಚಾ ಅಧ್ಯಕ್ಷ, ಶಾಸಕ ಧೀರಜ್ ಮುನಿರಾಜು, ಶಾಸಕ ಟಿ.ಎಸ್. ಶ್ರೀವತ್ಸ, ಮಾಜಿ ಸಂಸದ ಪ್ರತಾಪ ಸಿಂಹ ಹಾಗೂ ಇನ್ನಿತರರು ಚಾಲನೆ ನೀಡಿದರು. ಮೆರವಣಿಗೆ ಆರಂಭವಾದ ಬಳಿಕ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ವಾಕಥಾನ್‌ನಲ್ಲಿ ಭಾಗಿಯಾದರು.

ಚಾಮರಾಜ ಜೋಡಿ ರಸ್ತೆ, ತಾತಯ್ಯ ವೃತ್ತ(ಶಾಂತಲಾ), ನಾರಾಯಣಶಾಸ್ತ್ರಿ ರಸ್ತೆ, ವಿವೇಕ ಸ್ಮಾರಕದ ಮುಂಭಾಗ ಸಾಗಿ, ಡಿ.ದೇವರಾಜ ಅರಸು ರಸ್ತೆ, ಜೆಎಲ್‌ಬಿ ರಸ್ತೆ, ರಾಮಸ್ವಾಮಿ ವೃತ್ತದ ಮೂಲಕ ಚಾಮರಾಜ ಮೊಹಲ್ಲಾದಲ್ಲಿರುವ ಬಿಜೆಪಿ ಕಚೇರಿ ಬಳಿ ಸಮಾಪ್ತಿಯಾಯಿತು. ಮೆರವಣಿಗೆಯುದ್ದಕ್ಕೂ ಹೆಜ್ಜೆ ಹಾಕಿದ ಯುವ ಮೋರ್ಚಾ ಕಾರ್ಯಕರ್ತರು ಸಾಗಿ ಜೈಕಾರದ ಘೋಷಣೆ, ವಂದೇ ಮಾತರಂ ಘೋಷಣೆ ಕೂಗಿ ಗಮನ ಸೆಳೆದರು. ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಸ್ವಾಮಿ ■ 9ನೇ ಪುಟಕ್ಕೆ

ಪ್ರಯಾಗ್‌ರಾಜ್‌ನಲ್ಲಿ ಇಂದಿನಿಂದ ಫೆ.26ರವರೆಗೆ ಮಹಾ ಕುಂಭಮೇಳ

ಪ್ರಯಾಗ್‌ರಾಜ್, ಜ.12- ಐತಿಹಾಸಿಕ ಕುಂಭಮೇಳಕ್ಕೆ ಉತ್ತರ ಪ್ರದೇಶದ ಪ್ರಯಾಗ್ ನಗರ ಸರ್ವ ರೀತಿ ಸಿದ್ಧಗೊಂಡಿದೆ. ನಾಳೆ (ಜ.13)ಯಿಂದ ಆರಂಭವಾಗಲಿರುವ ಕುಂಭಮೇಳಕ್ಕೆ ಕ್ಷಣಗಣನೆ ಶುರುವಾಗಿದೆ. 144 ವರ್ಷಗಳ ನಂತರ ನಡೆಯುತ್ತಿರುವ ಅಪರೂಪದ ಕುಂಭಮೇಳ ಇದಾಗಿದ್ದು, ಕೋಟ್ಯಂತರ ಭಕ್ತರ ಸಮಾಗಮಕ್ಕೆ ಸಾಕ್ಷಿಯಾಗಲಿದ್ದು 7 ಹಂತದಲ್ಲಿ ಬಿಗಿ ಭದ್ರತೆ ಒದಗಿಸಲಾಗಿದೆ.

ಸಚಿತ್ರ ವರದಿ ಪುಟ-3

ಮಹಾಮೇಳದಲ್ಲಿ ಆಪಲ್ ಕಂಪನಿ ಮಾಲೀಕ ಸ್ಟೀವ್ ಜಾಬ್ಸ್ ಪತ್ನಿ ಲಾರೆನ್

ವಾರಣಾಸಿಯಿಂದ ಇಂದು ಪ್ರಯಾಗ್‌ರಾಜ್ ಪ್ರವೇಶ

• ಸನ್ಯಾಸಿ ನಿಲುವಂಗಿ ಧರಿಸಿದ ಲಾರೆನ್‌ಗೆ ಕಮಲಾ ಹೆಸರು ನಾಮಕರಣ ಮಾಡಿದ ಮಹಂತ್ ಕೈಲಾಶಾನಂದ ಗಿರಿ ಸ್ವಾಮೀಜಿ • 10 ದಿನ ಕಲ್ಪವಾಸ ವ್ರತ ಆಚರಣೆ • ಸನಾತನ, ಆಧ್ಯಾತ್ಮಿಕತೆ, ಭಾರತೀಯ ಸಂಸ್ಕೃತಿ ಕಲಿಕೆ


ಆಪಲ್ ಕಂಪನಿ ಮಾಲೀಕ ಸ್ಟೀವ್ ಜಾಬ್ಸ್ ಪತ್ನಿ ಲಾರೆನ್ ಅವರು ಭಾನುವಾರ ಕಾಶಿ ವಿಶ್ವನಾಥನ ದರ್ಶನ ಪಡೆದರು.

ಪ್ರಯಾಗ್‌ರಾಜ್, ಜ.12- ಉತ್ತರ ಪ್ರದೇಶದ ಧಾರ್ಮಿಕ ನಗರವಾದ ಪ್ರಯಾಗರಾಜ್‌ನಲ್ಲಿ ನಡೆಯಲಿರುವ ಮಹಾಕುಂಭಮೇಳಕ್ಕೆ ಕೌಂಟ್‌ಡೌನ್ ಶುರುವಾಗಿದೆ. ನಾಳೆ(ಜ.13)ಯಿಂದ ಪ್ರಯಾಗ್‌ರಾಜ್‌ನಲ್ಲಿ ಲಕ್ಷಾಂತರ ಜನರ ಸಮ್ಮುಖದಲ್ಲಿ ಮಹಾ ಕುಂಭಮೇಳ ನಡೆಯಲಿದೆ.

ಇದೀಗ ಮಹಾ ಕುಂಭಮೇಳದಲ್ಲಿ ವಿಶೇಷ ಸಂಗತಿ ಎಂದರೆ, ಜಗತ್ಪ್ರಸಿದ್ಧ ಆಪಲ್ ಕಂಪನಿ ಮಾಲೀಕ ಸ್ಟೀವ್ ಜಾಬ್ಸ್ ಅವರ ಪತ್ನಿ ಲಾರೆನ್ ಮಹಾ ಕುಂಭಮೇಳದಲ್ಲಿ ಪಾಲ್ಗೊಳ್ಳಲಿದ್ದಾರೆ. ಅವರು ಕಲ್ಪವಾಸ ವ್ರತ ಮಾಡಲಿದ್ದಾರೆ.

ಕುಂಭಮೇಳದ ಜಾಗಕ್ಕೆ ತಲುಪುವ ಮೊದಲೇ ಕೇಸರಿ ಬಣ್ಣದ ಬಟ್ಟೆಗಳನ್ನು ಧರಿಸಿದ ಲಾರೆನ್ ಅವರು ತನ್ನ ಹೆಸರನ್ನು ಸಹ ಬದಲಾಯಿಸಿಕೊಂಡಿದ್ದು, ಗುರು ನಿರಂಜನಿ ಪೀಠಾಧೀಶ್ವರ ಮಹಂತ್ ಕೈಲಾಶಾನಂದ ಗಿರಿ ಅವರಿಗೆ ತಮ್ಮ ಗೋತ್ರವನ್ನು ನೀಡಿದ ಬಳಿಕ ಲಾರೆನ್‌ಗೆ ಅವರು ಕಮಲಾ ಎಂದು ಹೆಸರಿಟ್ಟರು. ನಂತರ ಆಪಲ್ ಕಂಪನಿ ಮಾಲೀಕ ಸ್ಟೀವ್ ಜಾಬ್ಸ್ ಅವರ ಪತ್ನಿ ಲಾರೆನ್ ಪಾಶ್ಚಿಮಾತ್ಯ ಉಡುಗೆಯ ಬದಲು ಸನ್ಯಾಸಿ ನಿಲುವಂಗಿಯನ್ನು ಧರಿಸಿರುವುದು ಅಚ್ಚರಿ ಮೂಡಿಸಿದೆ.

ಪ್ರಯಾಗರಾಜ್‌ನಲ್ಲಿ ನಡೆಯುವ ಮಹಾಕುಂಭಮೇಳದಲ್ಲಿ ಲಾರೆನ್ ಅವರು ತಮ್ಮ ಹೆಸರನ್ನು ಕಮಲಾ ಎಂದು ಬದಲಾಯಿಸಿಕೊಳ್ಳುವ ಮೂಲಕ ಸನಾತನ ಧರ್ಮದ ಆಚರಣೆಗಳನ್ನು ಅರ್ಥೈಸಿಕೊಳ್ಳಲು ಮುಂದಾಗಿದ್ದಾರೆ. ಅವರು ಮಹಾಕುಂಭಮೇಳದ ಸಮಯದಲ್ಲಿ ಅಲ್ಲಿ ನಡೆಯುವ ಕಥೆಗಳು ಮತ್ತು ಪ್ರವಚನಗಳಲ್ಲಿ ಭಾಗವಹಿಸುತ್ತಾರೆ ಎಂದು ತಿಳಿದು ಬಂದಿದೆ. ಸ್ವಾಮಿ ಕೈಲಾಶಾನಂದ ಗಿರಿ ಅವರ ■ 9ನೇ ಪುಟಕ್ಕೆ

ಮೈಸೂರು ಮಹಾರಾಜರ ಮುಂದೆ
ಸಿದ್ದರಾಮಯ್ಯ ಬಿಗ್ ಝೀರೊ

• ಮೈಸೂರೆಂದರೆ ಮಹಾರಾಜರು ನೆನಪಿಗೆ ಬರುತ್ತಾರೆ • 1924ರಲ್ಲೇ ಮಹಾರಾಜರು ಮೀಸಲಾತಿ ಜಾರಿ ಮಾಡಿದ್ದರು • ನಕಲಿ ಗಾಂಧಿಗಳ ರಾಜ್ಯಭಾರವಾಗಿದೆ • ಕಾಂಗ್ರೆಸ್ ಮಾಫಿಯಾ ಹೊಸಬರಿಗೆ ಅವಕಾಶ ನೀಡಲ್ಲ

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ


ಮೈಸೂರಿನ ಕುರಿಮಂಡಿಯಲ್ಲಿ ಬಿಜೆಪಿ ಆಯೋಜಿಸಿದ್ದ ಸಮಾರಂಭವನ್ನು ಡಾ. ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಉದ್ಘಾಟಿಸಿದರು. ಶಾಸಕ ಟಿ.ಎಸ್. ಶ್ರೀವತ್ಸ, ಮಾಜಿ ಮೇಯರ್ ಸಂದೇಶ್‌ಸ್ವಾಮಿ ಇನ್ನಿತರರನ್ನು ಕಾಣಬಹುದು.

ಮೈಸೂರು, ಜ.12(ಬಿಎಲ್‌ಯು)- ಮೈಸೂರು ಎಂದ ಕೂಡಲೇ ನೆನಪಿಗೆ ಬರುವುದು ಮಹಾರಾಜರೇ ಹೊರತು ಸಿದ್ದರಾಮಯ್ಯ ಅಲ್ಲ. ಮೈಸೂರು ಮಹಾರಾಜರ ಮುಂದೆ ಸಿದ್ದರಾಮಯ್ಯ ಬಿಗ್ ಝೀರೊ ಎಂದು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಲೇವಡಿ ಮಾಡಿದರು.

ಮೈಸೂರಿನ ಎನ್.ಆರ್.ಮೊಹಲ್ಲಾ ಬಳಿಯ ಕುರಿಮಂಡಿಯಲ್ಲಿ ಬಿಜೆಪಿ ಎಸ್‌ಸಿ ಮೋರ್ಚಾದಿಂದ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, 1924 ರಲ್ಲೆ ಮೈಸೂರು ಮಹಾರಾಜರು ಪರಿಶಿಷ್ಟ ಜಾತಿ ಮತ್ತು ವರ್ಗದವರಿಗೆ ಮೀಸಲಾತಿ ನೀಡಿದ್ದರು. ಇದಲ್ಲದೆ ಹಲವು ಅವಿಸ್ಮರಣೀಯ ಕಾರ್ಯ ಮಾಡಿದ್ದು, ದೇಶಕ್ಕೆ ಮಾದರಿಯಾಗಿದೆ. ಈ ಕಾರಣದಿಂದ ಮೈಸೂರು ಮಹಾರಾಜರನ್ನು ಯಾರೂ ಮರೆಯುವುದಿಲ್ಲ ಎಂದರು.

ಭಾರತದ 500ಕ್ಕೂ ಹೆಚ್ಚು ರಾಜರು ಪ್ರಜಾಪ್ರಭುತ್ವ ಸ್ಥಾಪನೆಗೆ ಮುನ್ನುಡಿ ಬರೆದರು. ತರುವಾಯ ಅಧಿಕಾರಕ್ಕೆ ಬಂದ ನಕಲಿ ಗಾಂಧಿಗಳು ಸ್ವಾರ್ಥ ಮೆರೆದರು. ಅಧಿಕಾರದ ಲಾಲಸೆ ಹಾಗೂ ಸ್ವಾರ್ಥಕ್ಕಾಗಿ ನಕಲಿ ಗಾಂಧಿಗಳು ತಮಗಿಷ್ಟ ಬಂದಂತೆ ಆಡಳಿತ ನಡೆಸಿದರು. ಇಷ್ಟು ದಿನ ಮುಚ್ಚಿಟ್ಟಿರುವ ಈ ಸತ್ಯವನ್ನು ನಾವು ಹೇಳುತ್ತಿದ್ದೇವೆ. ಚುನಾವಣೆಯಲ್ಲಿ ಅಂಬೇಡ್ಕರ್ ಅವರನ್ನು ಸೋಲಿಸಿದ ನೆಹರು ಅವರ ರಾಜಕೀಯ ತಂತ್ರಗಾರಿಕೆಯನ್ನು ಮನದಟ್ಟು ಮಾಡುತ್ತಿದ್ದೇವೆ ಎಂದು ಛಲವಾದಿ ನಾರಾಯಣ ಸ್ವಾಮಿ ತಿಳಿಸಿದರು.

ಕಾಂಗ್ರೆಸ್‌ನಲ್ಲಿ ಹೊಸಬರಿಗೆ ಅವಕಾಶವೇ ಇಲ್ಲದಂತಾಗಿದೆ. ಡಾ. ಹೆಚ್.ಸಿ.ಮಹದೇವಪ್ಪ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಬಹಳಷ್ಟು ನಾಯಕರು ■ 9ನೇ ಪುಟಕ್ಕೆ

ನರಸಿಂಹರಾಜ ಕ್ಷೇತ್ರದ ಅಭಿವೃದ್ಧಿ ಕುಂಠಿತ

ಸಂಸದ ಯದುವೀರ್

ಮೈಸೂರಿನ ಬೇರೆ ವಿಧಾನಸಭಾ ಕ್ಷೇತ್ರಗಳಿಗೆ ಹೋಲಿಸಿದರೆ ನರಸಿಂಹರಾಜ ಕ್ಷೇತ್ರದ ಅಭಿವೃದ್ಧಿ ಕುಂಠಿತವಾಗಿದೆ ಎಂದು ಮೈಸೂರು-ಕೊಡಗು ಲೋಕಸಭಾ ಸದಸ್ಯ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಟೀಕಿಸಿದರು.

ನಗರಪಾಲಿಕೆಗೆ ಚುನಾವಣೆ ನಡೆದರೆ ಆಯ್ಕೆಯಾಗುವ ಜನಪ್ರತಿನಿಧಿಗಳು ಸ್ಥಳೀಯ ಸಮಸ್ಯೆಗಳನ್ನು ಶೀಘ್ರ ಪರಿಹಾರ ಮಾಡುತ್ತಾರೆ. ಸಂಸದನಾಗಿ ನಾನು ಮಾಡುವ ಕೆಲಸ ಕಾರ್ಯಗಳಿಗೆ ಸ್ಥಳೀಯ ಜನಪ್ರತಿನಿಧಿಗಳು ಒತ್ತಾಸೆಯಾಗಿ ನಿಲ್ಲುತ್ತಾರೆ. ಈ ಹಿನ್ನೆಲೆ ನಗರ ಪಾಲಿಕೆ ಚುನಾವಣೆ ಶೀಘ್ರದಲ್ಲೆ ನಡೆಯಬೇಕು. ಈ ಹೋರಾಟಕ್ಕೆ ನೀವೆಲ್ಲಾ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಪ್ರಧಾನಿ ನರೇಂದ್ರ ಮೋದಿ ಅವರ ವಿಕಸಿತ್ ಭಾರತ್ ಪರಿಕಲ್ಪನೆಯ ಯೋಜನೆಯಲ್ಲಿ ಕರ್ನಾಟಕ ಹಾಗೂ ಮೈಸೂರು ಮಾದರಿಯಾಗಬೇಕು. ಈ ನಿಟ್ಟಿನಲ್ಲಿ ನಾನು ಕೈಗೊಳ್ಳುವ ಕಾರ್ಯಗಳಿಗೆ ಜನರು ಕೈ ಜೋಡಿಸಬೇಕು ಎಂದು ಕೋರಿದರು. ವಿರೋಧ ಪಕ್ಷದ ನಾಯಕ ಯಾವ ರೀತಿ ಹೋರಾಟ ಮಾಡಬೇಕೆಂದು ಛಲವಾದಿ ನಾರಾಯಣ ಸ್ವಾಮಿ ತೋರಿಸಿದ್ದಾರೆ. ಆದರೆ ಲೋಕಸಭೆಯಲ್ಲಿರುವ ವಿರೋಧ ಪಕ್ಷದ ನಾಯಕರು ಯಾವ ರೀತಿ ನಡೆದುಕೊಳ್ಳುತ್ತಿದ್ದಾರೆ ಎಂಬುದು ದೇಶಕ್ಕೆ ತಿಳಿದಿರುವ ವಿಚಾರ ಎಂದು ಪರೋಕ್ಷವಾಗಿ ರಾಹುಲ್ ಗಾಂಧಿ ಅವರ ಕಾರ್ಯವನ್ನು ಟೀಕಿಸಿದರು.

ಹಿರಿಯ ಸಾಹಿತಿ ಬನ್ನೂರು ರಾಜುಗೆ 'ಎಚ್.ನರಸಿಂಹಯ್ಯ ರಾಜ್ಯ ಪ್ರಶಸ್ತಿ' ಪ್ರದಾನ



ಬಾಗಲೂರು ವಿಜೆ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ನಡೆದ ವೈಜ್ಞಾನಿಕ ಸಮ್ಮೇಳನದಲ್ಲಿ ಬನ್ನೂರು ರಾಜುರಿಗೆ 'ಡಾ.ಎಚ್. ನರಸಿಂಹಯ್ಯ ರಾಜ್ಯ ಪ್ರಶಸ್ತಿ' ನೀಡಲಾಯಿತು.

ಮೈಸೂರು,ಜ.12–ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಕರ್ನಾಟಕ ರಾಜ್ಯ ಖಾಸಗಿ ಶಾಲಾ ಕಾಲೇಜು ಆಡಳಿತ ಮಂಡಳಿಗಳ ಒಕ್ಕೂಟದಿಂದ ಬೆಂಗಳೂರಿನ ಯಲಹಂಕದ ಬಾಗಲೂರು ವಿಜೆ ಇಂಟರ್‌ನ್ಯಾಷನಲ್ ಶಾಲಾ ಮೈದಾನದಲ್ಲಿ ಚಿತ್ರನಟಿ, ಮಾಜಿ ಸಚಿವೆ, ವಿಧಾನಪರಿಷತ್ ಸದಸ್ಯೆ ಡಾ.ಉಮಾಶ್ರೀ ಅವರ ಸಮ್ಮೇಳನಾಧ್ಯಕ್ಷತೆಯಲ್ಲಿ ನಡೆದ ವೈಜ್ಞಾನಿಕ ಸಮ್ಮೇಳನದಲ್ಲಿ ಪತ್ರಕರ್ತರೂ ಆದ ಸಾಹಿತಿ ಬನ್ನೂರು ಕೆ.ರಾಜು ಅವರಿಗೆ 'ಡಾ.ಎಚ್.ನರಸಿಂಹಯ್ಯ ರಾಜ್ಯ ಪ್ರಶಸ್ತಿ' ನೀಡಲಾಯಿತು.

ಇಸ್ರೋದ ಮಾಜಿ ಅಧ್ಯಕ್ಷರೂ ಆದ ಅಂತಾರಾಷ್ಟ್ರೀಯ ಖ್ಯಾತಿಯ ವಿಜ್ಞಾನಿ ಪದ್ಮಶ್ರೀ ಡಾ.ಎ.ಎಸ್.ಕಿರಣ್‌ಕುಮಾರ್ ಅವರು ಬನ್ನೂರು ರಾಜು ಅವರಿಗೆ ಬೆಳ್ಳಿ ಪದಕ, ಹತ್ತು ಸಾವಿರ ರೂ.ಗಳ ಗೌರವ ಧನ ಜತೆಗೆ ಶಾಲು ಹೊದಿಸಿ, ಮೈಸೂರು ಪೇಟ ತೊಡಿಸಿ, ಪ್ರಶಸ್ತಿ ಫಲಕ ನೀಡಿ ಆತ್ಮೀಯವಾಗಿ ಅಭಿನಂದಿಸಿದರು.

ನಂತರ ಮಾತನಾಡಿದ ಅವರು, ಮೌಢ್ಯದ ಕತ್ತಲಿಂದ ಜ್ಞಾನದ ಬೆಳಕಿನತ್ತ ಕರೆದೊಯ್ಯುವುದೇ ವಿಜ್ಞಾನ. ಮಹಾಕವಿ ಕುವೆಂಪು ಹೇಳಿರುವಂತೆ ಪ್ರತಿಯೊಬ್ಬರೂ ಮೌಢ್ಯತೆಯ ಮಾರಿಯನ್ನು ಹೊರದೂಡಿ ವಿಜ್ಞಾನ ದೀವಿಗೆಯನ್ನು ಹಿಡಿಯಬೇಕು. ಅಂತಹ ಜಗಬೆಳಗುವ ವಿಜ್ಞಾನ ದೀವಿಗೆಯ ಬೆಳಕಿನಲ್ಲಿ ವಿಚಾರವಂತರಾಗಿ ವೈಚಾರಿಕ ಪ್ರಜ್ಞೆಯನ್ನು ಬೆಳೆಸಿಕೊಂಡು ಜ್ಞಾನ–ವಿಜ್ಞಾನದ ವೈಚಾರಿಕ ಸಮಾಜವನ್ನು ಸದೃಢವಾಗಿ ಕಟ್ಟಬೇಕು. ಸಮಸ್ತ ಮಾನವ ಕುಲ ವಿಜ್ಞಾನ ಪಥದಲ್ಲಿ ಸಾಗಬೇಕು. ಈ ಹಿನ್ನೆಲೆಯಲ್ಲಿ ಜನ ಜಾಗೃತಿ ಮೂಡಿಸಿ ಸಕಲರನ್ನೂ ಅಜ್ಞಾನದಿಂದ ವಿಜ್ಞಾನದತ್ತ ಕರೆದೊಯ್ಯಲು ಮೌಢ್ಯ ವಿರೋಧಿ ಹೋರಾಟದಲ್ಲಿ ಮುಂಚೂಣಿಯಲ್ಲಿರುವ ಡಾ.ಹುಲಿಕಲ್ ನಟರಾಜ್ ನೇತೃತ್ವದಲ್ಲಿ ಪ್ರತೀ ವರ್ಷ ಇಂತಹ ವಿಜ್ಞಾನ, ಶಿಕ್ಷಣ, ಸಾಹಿತ್ಯ, ಸಂಸ್ಕೃತಿ ಸಮಾಗಮದಂತಹ ಸಾರ್ಥಕವಾದ ವೈಜ್ಞಾನಿಕ ಸಮ್ಮೇಳನವನ್ನು ರಾಜ್ಯಾದ್ಯಂತ ನಡೆಸುತ್ತಿರುವುದು ನಿಜಕ್ಕೂ ಶ್ಲಾಘನೀಯವೆಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗಡಿನಾಡ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ಸಿ.ಸೋಮಶೇಖರ್ ಮಾತನಾಡಿದರು. ಆದಿಚುಂಚನಗಿರಿಯ ಚಿಕ್ಕಬಳ್ಳಾಪುರ ಶಾಖಾ ಮಠದ ಶ್ರೀ ಮಂಗಳನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ರಾಜ್ಯಾಧ್ಯಕ್ಷ ಡಾ.ಹುಲಿಕಲ್ ನಟರಾಜ್, ಮೈಸೂರು ಜಿಲ್ಲಾ ಅಧ್ಯಕ್ಷ ಡಾ.ಮಂಗಳ ಮೂರ್ತಿ, ಸಂಗಮೇಶ್ ಹಚ್ಚಡದ ಚಿಕ್ಕೋಡಿ, ಆನಂದ ಕೆ.ನಾಯಕ್ ಕಾರವಾರ, ಎಚ್.ಕೆ.ಸುರೇಶ್ ಚಿಕ್ಕಮಗಳೂರು, ಸಿದ್ದಲಿಂಗ ಪೂಲಬಾವಿ ಕೊಪ್ಪಳ, ಆನಂದ ಬಾಳಿಗಾರ್ ಉಡುಪಿ ಮತ್ತಿತರರು ಉಪಸ್ಥಿತರಿದ್ದರು.

ಮೊಬೈಲ್‌ನಿಂದ ವಿದ್ಯಾರ್ಥಿಗಳ ಮೇಲೆ ಮಾರಕ ಪರಿಣಾಮ

ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಡಾ.ಆಂತೋಣಿ ಪಾಲರಾಜ್ ಆತಂಕ



ಶಾರದಾವಿಲಾಸ ಪಿಯು ಕಾಲೇಜಲ್ಲಿ ನಡೆದ ವಿದ್ಯಾರ್ಥಿ ವೇದಿಕೆ ಸಮಾರೋಪದಲ್ಲಿ ಸಿಂಡಿಕೇಟ್ ಸದಸ್ಯ ಡಾ.ಆಂತೋಣಿ ಪಾಲರಾಜ್ ಅವರನ್ನು ಸನ್ಮಾನಿಸಲಾಯಿತು.

ಮೈಸೂರು, ಜ.12(ಎಸ್‌ಪಿಎನ್)– ಡಿಜಿಟಲ್ ಹಾಗೂ ಮೊಬೈಲ್ ಯುಗದಲ್ಲಿ ವಿದ್ಯಾರ್ಥಿಗಳ ಬದುಕು ಅತಂತ್ರವಾಗುತ್ತಿದೆ. ಮೊಬೈಲ್ ಬಳಕೆಯಿಂದ ವಿದ್ಯಾರ್ಥಿಗಳಲ್ಲಿ ತಾಳ್ಮೆ ಮರೆಯಾಗುತ್ತಿದೆ ಎಂದು ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಡಾ.ಆಂತೋಣಿ ಪಾಲರಾಜ್ ಬೇಸರ ಹೊರಹಾಕಿದರು.

ಮೈಸೂರು ಶಾರದಾವಿಲಾಸ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ವಿದ್ಯಾರ್ಥಿ ವೇದಿಕೆ ಸಮಾರೋಪದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಜೀವನದಲ್ಲಿ ಬದುಕುವ ಛಲವಿದ್ದರೆ ಬದುಕು ಅರ್ಥಪೂರ್ಣವಾಗುತ್ತದೆ. ಇಂದು ವಿದ್ಯಾರ್ಥಿಗಳಿಗೆ ಮೊಬೈಲ್‌ಗಳೇ ವಿಶ್ವವಿದ್ಯಾನಿಲಯಗಳಾಗಿವೆ. ಇದರಿಂದಾಗಿ ದೇಶದಲ್ಲಿ ಮೊಬೈಲ್ ಇಲ್ಲದ ಮನೆಯೇ ಇಲ್ಲದಂತಾಗಿದೆ ಎಂದು ತಿಳಿಸಿದರು.

ಸದಾ ಒತ್ತಡದಲ್ಲಿರುವ ಪೋಷಕರು ತಮ್ಮ ಮಕ್ಕಳ ಭವಿಷ್ಯದ ಬಗ್ಗೆ, ವಿದ್ಯಾಭ್ಯಾಸದ ಬಗ್ಗೆ ಎಚ್ಚರವಹಿಸುವುದು ಬಹಳ ಮುಖ್ಯ. ವಿದ್ಯಾರ್ಥಿಗಳ ಓದಿನ ಮೇಲೆ ಪೋಷಕರು, ಉಪನ್ಯಾಸಕರು ಗಮನ ನೀಡಿದರೆ, ಅವರ ವ್ಯಾಸಂಗ ಅವಧಿಯಲ್ಲಿ ಸಮಯ ಪರಿಪಾಲನೆ, ವಿವೇಕ ಅಳವಡಿಕೆಗೆ ಸಹಕಾರಿಯಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಶಾರದಾವಿಲಾಸ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ.ಬಿ.ಎಂ. ಸುಬ್ರಾಯ ಮಾತನಾಡಿದರು. ಸಂಸ್ಥೆಯ ಗೌರವ ಕಾರ್ಯದರ್ಶಿ ಆರ್.ದಿನೇಶ್, ಕಾಲೇಜು ಪ್ರಾಂಶುಪಾಲ ಸಿ.ಕೆ.ಅಶೋಕ್ ಕುಮಾರ್ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿ ನಯನ ಪ್ರಾರ್ಥಿಸಿದರೆ, ಉಪನ್ಯಾಸಕ ರಾಜೇಂದ್ರ ಪ್ರಸಾದ್ ಹೊನ್ನಲಗೆರೆ ಸ್ವಾಗತಿಸಿದರು. ಉಪನ್ಯಾಸಕರಾದ ಡಾ.ಪೂಜಾ, ಡಾ.ಲಾವಣ್ಯ, ಮನೋಜ್‌ಕುಮಾರ್, ಪ್ರವೀಣ್ ಕುಮಾರ್ ಉಪಸ್ಥಿತರಿದ್ದರು. ಈ ವೇಳೆ ಸಿಂಡಿಕೇಟ್ ಸದಸ್ಯ ಡಾ.ಆಂತೋಣಿ ಪಾಲರಾಜ್ ಅವರನ್ನು ಸನ್ಮಾನಿಸಲಾಯಿತು.

ಕ್ಯಾಲೆಂಡರ್ ಬಿಡುಗಡೆ



ಮೈಸೂರಿನ ಡಾ.ರಾಜ್ ಶಿವಸೈನ್ಯ ಅಭಿಮಾನಿಗಳ ಸಂಘದ ನೂತನ ವರ್ಷದ ಕ್ಯಾಲೆಂಡರ್ ಅನ್ನು ಮಾಜಿ ಸಂಸದ ಪ್ರತಾಪ್ ಸಿಂಹ ಬಿಡುಗಡೆ ಮಾಡಿದರು. ಈ ವೇಳೆ ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್‌ನ ನಿರ್ದೇಶಕ ಎಸ್.ಆರ್.ರವಿಕುಮಾರ್, ಸಂಘದ ಅಧ್ಯಕ್ಷ ರವಿ, ಯುವ ಮುಖಂಡ ಕಿರಣ್‌ಗೌಡ, ಕುಮಾರ್, ವಸಂತ, ಮುನೀಶ್, ರೋಹಿತ್, ಬಾಬು ಮತ್ತಿತರರು ಉಪಸ್ಥಿತರಿದ್ದರು.

ಬಿಸಿಸಿಐನ ನೂತನ ಕಾರ್ಯದರ್ಶಿಯಾಗಿ ದೇವಜಿತ್ ಸೈಕಿಯಾ ನೇಮಕ



ನವದೆಹಲಿ, ಜ.12– ಇಂದು ನಡೆದ ಭಾರತೀಯ ಕ್ರಿಕೆಟ್ ನಿಯಂತ್ರಣಾ ಮಂಡಳಿಯ (ಬಿಸಿಸಿಐ) ವಿಶೇಷ ಸಾಮಾನ್ಯ ಸಭೆಯಲ್ಲಿ ದೇವಜಿತ್ ಸೈಕಿಯಾ ಮತ್ತು ಪ್ರಭತೇಜ್ ಸಿಂಗ್ ಭಾಟಿಯಾ ಅವರನ್ನು ಕ್ರಮವಾಗಿ ಬಿಸಿಸಿಐ ಕಾರ್ಯದರ್ಶಿ ಮತ್ತು ಖಜಾಂಚಿಯಾಗಿ ಅಧಿಕೃತವಾಗಿ ಆಯ್ಕೆ ಮಾಡಲಾಗಿದೆ. ಬಿಸಿಸಿಐ ಚುನಾವಣಾ ಅಧಿಕಾರಿ ಮತ್ತು ಭಾರತದ ಮಾಜಿ ಮುಖ್ಯ ಚುನಾವಣಾ ಆಯುಕ್ತ ಅಚಲ್ ಕುಮಾರ್ ಜ್ಯೋತಿ ಅವರು ಪಟ್ಟಿಯನ್ನು ಅಂತಿಮಗೊಳಿಸಿದ್ದು ಖಾಲಿ ಇರುವ ಹುದ್ದೆಗಳಿಗೆ ಸೈಕಿಯಾ ಮತ್ತು ಪ್ರಭತೇಜ್ ಮಾತ್ರ ಕಣದಲ್ಲಿದ್ದರು. ದೇವಜಿತ್ ಸೈಕಿಯಾ ಅಸ್ಸಾಂ ನಿವಾಸಿಯಾಗಿದ್ದು ಕ್ರಿಕೆಟ್, ಕಾನೂನು ಮತ್ತು ಆಡಳಿತದಂತಹ ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡಿದ್ದಾರೆ.

ಸ್ವಾಮಿ ವಿವೇಕಾನಂದರ 163ನೇ ಜಯಂತೋತ್ಸವ

ವಿವೇಕಾನಂದರ ಸಂದೇಶದಂತೆ ತಾರತಮ್ಯ ತೊರೆದು ದೇಶ ಮುನ್ನಡೆಸುವ ಸಂಕಲ್ಪ ಮಾಡಬೇಕು

ಮೈಸೂರು ಶ್ರೀ ರಾಮಕೃಷ್ಣ ಆಶ್ರಮದ ಸ್ವಾಮಿ ಮುಕ್ತಿದಾನಂದಜೀ ಕರೆ





ಮೈಸೂರಿನ ವಿವೇಕಾನಂದ ವೃತ್ತದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಸ್ವಾಮಿ ವಿವೇಕಾನುದರ 163ನೇ ಜಯಂತೋತ್ಸವವನ್ನು ವಿವೇಕಾನಂದ, ರಾಮಕೃಷ್ಣ ಪರಮಹಂಸ ಮತ್ತು ಮಾತೆ ಶಾರದಾದೇವಿಯವರ ಫೋಟೋಗಳಿಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಶ್ರೀ ರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಸ್ವಾಮಿ ಮುಕ್ತಿದಾನುದಜೀ ಮಹಾರಾಜ್ ಉದ್ಘಾಟಿಸಿದರು. ಮತ್ತೊಂದು ಚಿತ್ರದಲ್ಲಿ ಜಯಂತೋತ್ಸವ ಪ್ರಯುಕ್ತ ಸ್ವಾಮಿ ವಿವೇಕಾನಂದರ ಫೋಟೋ ಮೆರವಣಿಗೆ ಮಾಡಿದ್ದನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು,ಜ.12(ಪಿಎಂ)– ಸ್ವಾಮಿ ವಿವೇಕಾನಂದರ ಸಂದೇಶದಂತೆ ನಾವೆಲ್ಲರೂ ಜಾತಿ, ಕುಲ ಮತ್ತು ಗೋತ್ರದ ತಾರತಮ್ಯ ತೊರೆದು ಸಂಘಟಿತರಾಗಿ ಮೈಸೂರು ಮಾತ್ರವಲ್ಲದೆ, ನಮ್ಮ ಇಡೀ ದೇಶವನ್ನು ಮುನ್ನಡೆಸುವ ಸಂಕಲ್ಪ ಮಾಡಬೇಕೆಂದು ಮೈಸೂರು ಶ್ರೀ ರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಸ್ವಾಮಿ ಮುಕ್ತಿದಾನಂದಜೀ ಮಹಾರಾಜ್ ಕರೆ ನೀಡಿದರು.

ಮೈಸೂರಿನ ವಿವೇಕಾನಂದನಗರದ ಸ್ವಾಮಿ ವಿವೇಕಾನಂದ ವೃತ್ತದಲ್ಲಿ ಶ್ರೀರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನದ ವತಿಯಿಂದ ಶ್ರೀವಿವೇಕಾನಂದ ಯುವಕರ ಬಳಗ, ಶ್ರೀನಾಡಪ್ರಭು ಕೆಂಪೇಗೌಡರ ಸಂಘ, ವಿವೇಕಾನಂದನಗರ ನಿವಾಸಿಗಳ ವೇದಿಕೆ ಸೇರಿದಂತೆ ವಿವಿಧ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಸ್ವಾಮಿ ವಿವೇಕಾನಂದರ 163ನೇ ಜಯಂತೋತ್ಸವವನ್ನು ವಿವೇಕಾನಂದ, ರಾಮಕೃಷ್ಣ ಪರಮಹಂಸ ಮತ್ತು ಮಾತೆ ಶಾರದಾದೇವಿಯವರ ಫೋಟೋಗಳಿಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತ ಸರ್ಕಾರವು ವಿವೇಕಾನಂದರ ಜನ್ಮದಿನವನ್ನು ರಾಷ್ಟ್ರೀಯ ಯುವ ದಿನಾಚರಣೆಯಾಗಿ ಘೋಷಿಸಿದೆ. ದೇಶದಲ್ಲಿ ಈಗ ದೊಡ್ಡ ಯುವ ಶಕ್ತಿ ಇದ್ದು, ಶೇ.60ಕ್ಕೂ ಹೆಚ್ಚು ಯುವ ಜನರು ದೇಶದಲ್ಲಿದ್ದಾರೆ. ನಮ್ಮ ಯುವ ಶಕ್ತಿ ಯನ್ನು ರಾಷ್ಟ್ರೀಯ ಶಕ್ತಿಯನ್ನಾಗಿ ಮಾಡಿ ಭಾರತದ ಸಾಮಾಜಿಕ ಪರಿವರ್ತನೆ ಯೊಂದಿಗೆ ದೇಶದ ಅಭ್ಯುದಯ ಮತ್ತು ಸರ್ವಜನರ ಹಿತ ಸಾಧಿಸಬೇಕಿದೆ. ಇದು ವಿವೇಕಾನಂದರ ಸಂದೇಶವಾಗಿದ್ದು, ಶ್ರದ್ಧೆ, ತ್ಯಾಗ ಮತ್ತು ಸಾಮಾಜಿಕ ಪ್ರಜ್ಞೆ ಹೊಂದಿರುವ ಯುವ ಸಮುದಾಯದಿಂದ ಬಹುಬೇಗನೇ ದೇಶವನ್ನು ಪ್ರಗತಿಪರ ಹಾಗೂ ಸಾಮರಸ್ಯದ ಶಾಂತಿ ತಾಣವಾಗಿ ಪರಿವರ್ತಿಸಬಹುದು ಎಂದು ವಿವೇಕಾನಂದರು ಹೇಳಿದ್ದಾರೆ ಎಂದರು.

ವಿವೇಕಾನಂದರ ಜೀವನ ಮತ್ತು ಸಂದೇಶದ ಚಿಂತನ–ಮಂಥನದೊಂದಿಗೆ ನಮ್ಮಲ್ಲಿನ ಆತ್ಮ ಪರಿವರ್ತನೆ ಹಾಗೂ ಸಮಾಜ ಪರಿವರ್ತನೆಗಾಗಿ ಶ್ರಮಿಸಬೇಕು. ಪ್ರತಿಯೊಬ್ಬರು ಸದ್ಗುಣ ಸಂಪನ್ನರಾಗಬೇಕೆಂಬುದು ಸ್ವಾಮಿ ವಿವೇಕಾನಂದರ ಕರೆಯಾಗಿದೆ. ಅವರ ಆಶಯದಂತೆ ನಾವು ದೇಶಪ್ರೇಮಿಗಳಾಗಿ, ಸಮಾಜದ ಬಗ್ಗೆ ಕಳಕಳಿಯುಳ್ಳವರಾಗುವ ಮೂಲಕ ಆದರ್ಶ ಸಮಾಜ ಸೃಷ್ಟಿಗೆ ಕಂಕಣ ಬದ್ಧರಾಗಬೇಕು. ನಿಸ್ವಾರ್ಥವೇ ದೇವರು ಎಂದು ವಿವೇಕಾನಂದರು ಹೇಳೀದ್ದಾರೆ. ಅಮೆರಿಕದಿಂದಲೇ ನಿಸ್ವಾರ್ಥದ ಬಗ್ಗೆ ಮೈಸೂರು ಮಹಾರಾಜರಿಗೂ ಅವರು ಪತ್ರ ಬರೆದಿದ್ದರು. ಯಾರು ಇತರರಿಗಾಗಿ ಬಾಳುತ್ತಾರೋ ಅವರೇ ನಿಜವಾದ ಮನುಷ್ಯರು ಎಂದು ಪತ್ರದಲ್ಲಿ ಪ್ರಸ್ತಾಪಿಸಿದ್ದರು ಎಂದು ಸ್ಮರಿಸಿದರು.

ಪ್ರತಿಷ್ಠಾನದ ಕಾರ್ಯಾಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ ಮಾತನಾಡಿ, ಸನಾತನ ಧರ್ಮದಲ್ಲಿ ಜಾತಿ ಭೇದವಿಲ್ಲ. ಎಲ್ಲಾ ಮಾನವರು ಒಂದೇ ಎನ್ನುವ ಮಹಾನ್ ವೈಜ್ಞಾನಿಕ ಸನಾತನ ಧರ್ಮದ ಮೂಲತತ್ವದಲ್ಲಿ ಜಾತಿ–ಬೇಧವಿಲ್ಲ. ಇದನ್ನು ಸನಾತನ ಧರ್ಮಕ್ಕೆ ಅಪಪ್ರಚಾರದ ಮೂಲಕ ಅಂಟಿಸಲಾಯಿತು. ಈ ಎಲ್ಲವನ್ನೂ ಕೂಡ ಸನಾತನ ಧರ್ಮದಿಂದ ಕಳಚಿ ಆ ಧರ್ಮದ ಮೂಲ ಮಂತ್ರವನ್ನು ಇಡೀ ಪ್ರಪಂಚಕ್ಕೆ ಹೇಳಿದವರು ವಿವೇಕಾನಂದರು ಎಂದು ತಿಳಿಸಿದರು.

ಇದಕ್ಕೂ ಮುನ್ನ ಸ್ವಾಮಿ ವಿವೇಕಾನಂದರ ಭಾವಚಿತ್ರದ ಮೆರವಣಿಗೆ ಮಾಡಲಾಯಿತು. ಕುವೆಂಪುನಗರ ಆದಿಚುಂಚನಗಿರಿ ರಸ್ತೆಯ ಉದ್ಭವ ಬನಶಂಕರಿ ದೇವಸ್ಥಾನದ ಎದುರು ಮೆರವಣಿಗೆಗೆ ಚಾಲನೆ ನೀಡಲಾಯಿತು. ಕುವೆಂಪುನಗರ ಎಂ ಬ್ಲಾಕ್ ಸೇರಿದಂತೆ ವಿವಿಧ ರಸ್ತೆಗಳಲ್ಲಿ ಸಂಚರಿಸಿದ ಮೆರವಣಿಗೆಯು ವಿವೇಕಾನಂದ ವೃತ್ತದಲ್ಲಿ ಮುಕ್ತಾಯ ಕಂಡಿತು.

ಶಾಸಕರಾದ ಜಿ.ಟಿ.ದೇವೇಗೌಡ, ಟಿ.ಎಸ್.ಶ್ರೀವತ್ಸ ಅತಿಥಿಯಾಗಿ ಪಾಲ್ಗೊಂಡಿದ್ದರು. ಪ್ರತಿಷ್ಠಾನದ ಅಧ್ಯಕ್ಷ ಡಿ.ಮಾದೇಗೌಡರು ಅಧ್ಯಕ್ಷತೆ ವಹಿಸಿದ್ದರು. 'ಸ್ವಾಮಿ ವಿವೇಕಾನಂದರ ಜೀವನ ಮತ್ತು ಸಂದೇಶ' ಕುರಿತು ವಿವೇಕಾನಂದ ವಿದ್ಯಾ ವಾಹಿನಿ ಟ್ರಸ್ಟ್ ಸ್ಥಾಪಕ ನಿತ್ಯಾನಂದ ವಿವೇಕಾವಂಶಿ ದಿಕ್ಸೂಚಿ ಭಾಷಣ ಮಾಡಿದರು. ಶ್ರೀ ರಾಮಕೃಷ್ಣ ಆಶ್ರಮದ ಸ್ವಾಮಿ ಯುಕ್ತೇಶಾನಂದಜೀ ಮಹಾರಾಜ್, ಮಾಜಿ ಮೇಯರ್ ಸುನಂದ ಪಾಲನೇತ್ರ, ನಗರ ಪಾಲಿಕೆ ಮಾಜಿ ಸದಸ್ಯರಾದ ಜಗದೀಶ್, ಸೀಮಾ ಪ್ರಸಾದ್ ಮತ್ತಿತರರು ಹಾಜರಿದ್ದರು.

ಸ್ವಾಮಿ ವಿವೇಕಾನಂದರ ಕೃತಿಗಳಲ್ಲಿ ಮಾನವೀಯ ಮೌಲ್ಯಗಳು ಸಾಗರೋಪಾದಿಯಲ್ಲಿ ಹರಿದಿವೆ:

ಶಾಸಕ ಜಿ.ಟಿ.ದೇವೇಗೌಡರಿಂದ ಸ್ಮರಣೆ

ಮೈಸೂರು,ಜ.12(ಪಿಎಂ)– ಸ್ವಾಮಿ ವಿವೇಕಾನಂದರ ಕೃತಿಗಳಲ್ಲಿ ಮಾನವೀಯ ಮೌಲ್ಯಗಳು ಸಾಗರೋಪಾದಿಯಲ್ಲಿ ಹರಿದಿವೆ ಎಂದು ಶಾಸಕ ಜಿ.ಟಿ.ದೇವೇಗೌಡರು ಸ್ಮರಿಸಿದರು. ದೀನ ದಲಿತರ ಅಂತಃಕರಣ ಅತ್ಯಂತ ನಿರ್ಮಲ ಮತ್ತು ಮಧುರವೆಂದು ವಿವೇಕಾನಂದರು ಅರಿತಿದ್ದರು. ಆದ್ದರಿಂದ ಅವರ ಕೃತಿಗಳಲ್ಲಿ ಮಾನವೀಯ ಮೌಲ್ಯಗಳು ಸಾಗರೋಪಾದಿಯಲ್ಲಿ ಹರಿದಿವೆ ಎಂದು ಹೇಳಿದರು.

ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರು ಕೇವಲ 39 ವರ್ಷ 6 ತಿಂಗಳು ಮಾತ್ರ ಜೀವಿಸಿದ್ದರು. ಅವರನ್ನು ವಿದ್ಯಾರ್ಥಿ ಸಾಧಕರು, ಅಲೆಮಾರಿ ಸನ್ಯಾಸಿ, ವೇದಾಂತ ಪ್ರಚಾರಕರು ಎಂದೆಲ್ಲಾ ಬಣ್ಣಿಸಲಾಗಿದೆ. ವಿದ್ಯಾರ್ಥಿಯಾಗಿದ್ದಾಗ ಗುರುವಿನ ನಿರ್ದೇಶನದಲ್ಲಿ ಸಾಧನೆ ಮಾಡಿದರು. ಜನರ ಕಷ್ಟಗಳನ್ನು ಕಿವಿಗೊಟ್ಟು ಕೇಳಿದರು. ದೇಶದ ಹೀನಸ್ಥಿತಿ ಕಂಡು ಮರುಗಿದರು. ಭಾರತದ ಬಡತನವನ್ನು ಕಂಡು ನೊಂದುಕೊಂಡರು. ಅನ್ನ ಆಹಾರವಿಲ್ಲದೇ ಶ್ರಮವಹಿಸಿ ದುಡಿಯುವ ಶ್ರಮಿಕರನ್ನು ಕಂಡು ಕಣ್ಣೀರು ಹಾಕಿದರು ಎಂದರು.

ಜನ ಸಾಮಾನ್ಯರ ಘೋರ ಅಜ್ಞಾನವನ್ನು ಕಂಡು ಮಮ್ಮಲ ಮರುಗಿದರು. ನಿಂತಲ್ಲಿ ನಿಲ್ಲದೆ ದೇಶ ಪರ್ಯಾಟನೆಯಲ್ಲಿ ತೊಡಗಿದರು. ವಿವೇಕಾನಂದರ ಪ್ರಭಾವದಿಂದ ಮಹಾ ಕವಿ ಕುವೆಂಪು ಅವರ ಜೀವನ ಪಾವನವಾಯಿತು. ವಿವೇಕಾನಂದರು ಅಮೆರಿಕಾದ ಚಿಕಾಗೋ ಸರ್ವಧರ್ಮ ಸಮ್ಮೇಳನದಲ್ಲಿ ಪಾಲ್ಗೊಂಡು ಭಾರತಕ್ಕೆ ಕೀರ್ತಿ ತಂದರು. ಅವರ ಸಾಮಾಜಿಕ, ಧಾರ್ಮಿಕ ಚಿಂತನೆಗಳು ಹಾಗೂ ಆತ್ಮವಿಶ್ವಾಸ ಮೂಡಿಸುವ ಚಿಂತನೆ ನಮಗೆ ಅಗತ್ಯವಾಗಿವೆ. ಅವರ ಕೃತಿಗಳ ಪುಟ ಪುಟಗಳಲ್ಲಿ ಆತ್ಮನಂಬಿಕೆಯ ಅಮರ ಸಂದೇಶ ಸಾರಿದ್ದಾರೆ ಎಂದು ಸ್ಮರಿಸಿದರು.

ನಾಮಪತ್ರ ಸಲ್ಲಿಕೆ




ಮೈಸೂರು ಕೋ–ಆಪರೇಟಿವ್ ಬ್ಯಾಂಕ್‌ನ 2025–30ನೇ ಸಾಲಿನ ಆಡಳಿತ ಮಂಡಳಿಯ ನಿರ್ದೇಶಕ ಸ್ಥಾನದ ಚುನಾವಣೆಗೆ ಪೈಲ್ವಾನ್ ಚಿಕ್ಕಪುಟ್ಟಿ ನಾಮಪತ್ರ ಸಲ್ಲಿಸಿದರು. ಮುಡಾ ಮಾಜಿ ಸದಸ್ಯ ಕೆ.ಮಾದೇಶ್, ಲಕ್ಷ್ಮಿ ನಾರಾಯಣ್, ಮಂಚಪ್ಪ, ಡಾ.ಲೋಕೇಶ್ ಅವರನ್ನು ಚಿತ್ರದಲ್ಲಿ ಕಾಣಬಹುದು.

ಇಂದು ವಿದ್ಯುತ್ ವ್ಯತ್ಯಯ

ಮೈಸೂರು,ಜ.12– ಜನವರಿ 13 ರಂದು ಬೆಳಗ್ಗೆ 10ರಿಂದ 5 ಗಂಟೆಯ ವರೆಗೆ ದೇವನೂರು ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ಹುಲಿಯಮ್ಮ ಫೀಡರ್‌ನ ವ್ಯಾಪ್ತಿಯಲ್ಲಿ ರ‍್ಯಾಬಿಟ್ ಕಂಡಕ್ಟರ್ ಅನ್ನು ಕವರ್ಡ್ ಕಂಡಕ್ಟರ್‌ಗೆ ಬದಲಾಯಿಸುವ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿರುವುದರಿಂದ, ಬಿ.ಪಿ.ಆಸ್ಪತ್ರೆ, ಕಲ್ಯಾಣಗಿರಿ, ಅಜೀಜ್‌ಸೇಠ್ ನಗರ, ಹೈದರಾಲಿ ಬ್ಲಾಕ್, ಮಹದೇವಪುರ ಮುಖ್ಯ ರಸ್ತೆ, ಗೌಸಿಯಾನಗರ ಹಾಗೂ ಸುತ್ತ–ಮುತ್ತ ಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ಅನಿಯಮಿತ ವ್ಯತ್ಯಯ ಉಂಟಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

13.01.2025 ಸೋಮವಾರ, ಮಳೆ ನಕ್ಷತ್ರ: ಪೂಷಾ, 29.12.2024ರಿಂದ 16.01.2025 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಪುಷ್ಯ ಮಾಸ, ಶುಕ್ಲ ಪಕ್ಷ, ತಿಥಿ: ಹುಣ್ಣಿಮೆ, ನಕ್ಷತ್ರ: ಆರ್ದ್ರಾ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ಪಾಲ್ಯಂ ಶ್ರೀ ಶಾಸ್ತಾ ಪೀಠಂ, ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ:** ಧನುರ್ಮಾಸದ ವಿಶೇಷ ಪೂಜಾ ಲಕ್ಷಾರ್ಚನಾ ಮತ್ತು ವಾರ್ಷಿಕ ಕುಂಭಾಭಿಷೇಕ ಪೂಜಾ ಮಹೋತ್ಸವ, ಬೆಳಗ್ಗೆಯಿಂದ ಮಹತೋಭಾರ ಶ್ರೀ ಧರ್ಮಶಾಸ್ತ ಸ್ವಾಮಿಯವರಿಗೆ, ಮಹಾಭಿಷೇಕ, ಅಲಂಕಾರ, ನಾಮಾರ್ಚನೆ, ಮಹಾನಿವೇದನೆ, ಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ರಾಘವೇಂದ್ರನಗರ.

■ **ಬೆಂಗಳೂರು ಪದವಿ ಪೂರ್ವ ಶಿಕ್ಷಣ ಇಲಾಖೆ, ರಾಷ್ಟ್ರೀಯ ಸೇವಾ ಯೋಜನೆ ಮತ್ತು ಮಾತೃಮಂಡಲಿ ಬಾಲಕಿಯರ ಪದವಿ ಪೂರ್ವ ಕಾಲೇಜು (ಮೈಸೂರು):** 2024–25ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರ, ಬೆಳಗ್ಗೆ 7.30ಕ್ಕೆ ಧ್ವಜಾರೋಹಣ, ಮಾತೃಮಂಡಲಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಭೂಗೋಳ ಉಪನ್ಯಾಸಕ ವೆಂಕಟೇಶ್‌ಕುಮಾರ್ ಅವರಿಂದ. ಮಧ್ಯಾಹ್ನ 3.30ಕ್ಕೆ ಡಿಜಿಟಿಎಂ ಇಂಗ್ಲಿಷ್ ಸ್ಕೂಲ್‌ನ ಪ್ರಾಂಶುಪಾಲ ಡಾ.ಪಾಂಡುರಂಗ ಅವರಿಂದ ಯುವಜನತೆಯಲ್ಲಿ ಆತ್ಮವಿಶ್ವಾಸ ವಿಷಯ ಕುರಿತು ಉಪನ್ಯಾಸ, ಸಂಜೆ 7 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮ, ಸ್ಥಳ: ಮಾತೃಮಂಡಳಿ ಶಿಶು ವಿಕಾಸ ಕೇಂದ್ರ, ಗೋಕುಲಂ 2ನೇ ಹಂತ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಮೂತ್ರಪಿಂಡ (ಕಿಡ್ನಿ) ಕಾಯಿಲೆ, ಸಂಧಿವಾತ, ಮಂಡಿ ನೋವು, ಕೀಲು ನೋವು ಮತ್ತು ಆರೋಗ್ಯಾಯುಷ್ಯ ಆರೋಗ್ಯವರ್ಧಕ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಗೆ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10 ಗಂಟೆಗೆ.

■ **ಶ್ರೀ ದುರ್ಗಾ ಫೌಂಡೇಷನ್ ಟ್ರಸ್ಟ್, ಕಾಂಗರೂ ಕೇರ್ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಮತ್ತು ಫರ್ಟಿಲಿಟಿ ಕೇರ್ ಸೆಂಟರ್:** ಸಂಕ್ರಾಂತಿ–ಸುಗ್ಗಿ ಹಬ್ಬದ ಪ್ರಯುಕ್ತ ಮಹಿಳಾ ಪೌರಕಾರ್ಮಿಕರಿಗೆ ಬಾಗಿನ ವಿತರಣೆ ಕಾರ್ಯಕ್ರಮ, ಮುಖ್ಯ ಅತಿಥಿಗಳು: ಶಾಸಕ ಹರೀಶ್‌ಗೌಡ, ಸ್ಥಳ: ಕಾಂಗರೂ ಕೇರ್ ಸೆಂಟರ್ ಮುಂಭಾಗ, ಕಾಳಿದಾಸ ರಸ್ತೆ, ವಿಜಯನಗರ 1ನೇ ಹಂತ, ಬೆಳಗ್ಗೆ 10.30ಕ್ಕೆ.

■ **ಶ್ರೀಕಾಂತ ವಿದ್ಯಾಸಂಸ್ಥೆಗಳು, ಶ್ರೀ ಕೆ.ಎನ್. ವರದರಾಜ ಅಯ್ಯಂಗಾರ್ ಮೆಮೋರಿಯಲ್ ಟ್ರಸ್ಟ್, ಶ್ರೀಕಾಂತ ಬಾಲಿಕಾ ಪ್ರೌಢಶಾಲೆ:** ಶಾಲೆಯ 2024–25ನೇ ಸಾಲಿನ ವಾರ್ಷಿಕೋತ್ಸವ, ಸ್ಥಳ: ಶಾಲೆಯ ಸಭಾ ಭವನ, ಶಂಕರಮಠ ಬಡಾವಣೆ, ಖಿಲ್ಲೆ ಮೊಹಲ್ಲಾ, ಬೆಳಗ್ಗೆ 11 ಗಂಟೆಗೆ.

■ **ಉತ್ತಿಷ್ಠ ಭಾರತ ಪ್ರತಿಷ್ಠಾನ:** 2025 ಸಂಕ್ರಾಂತಿಯ ನೂತನ ದಿನದರ್ಶಿಕೆ ಮತ್ತು ಮಣ್ಣು ಬಳಸಿ ಜನಜಾಗೃತಿ ವಾರ್ಷಿಕ ಅಭಿಯಾನ, ದಿವ್ಯಸಾನ್ನಿಧ್ಯ ಮತ್ತು ಉದ್ಘಾಟನೆ: ಶ್ರೀ ಯೋಗ ನರಸಿಂಹ ಸ್ವಾಮಿ ದೇವಸ್ಥಾನದ ನಾಡೋಜ ಡಾ. ಪ್ರೊ. ಭಾಷ್ಯಂ ಸ್ವಾಮೀಜಿ, ಅಧ್ಯಕ್ಷತೆ: ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸ್ಥಳ: ಮೈಸೂರು ಜಿಲ್ಲಾ ಪತ್ರಕರ್ತರ ಭವನ, ಬೆಳಗ್ಗೆ 11.30ಕ್ಕೆ.


■ **ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಸಾಹಿತ್ಯ ಕಲಾ ಕೂಟ (ಮೈಸೂರು):** ಪ್ರೊ.ಮುಜಾಫರ್ ಅಸ್ಸಾದಿ ಹಾಗೂ ನಾಡೋಜ ನಾ.ಡಿಸೋಜ ಅವರಿಗೆ ನುಡಿನಮನ, ಮುಖ್ಯ ಅತಿಥಿಗಳು: ಸಾಹಿತಿ ಪ್ರೊ.ಕಾಳೇಗೌಡ ನಾಗವಾರ, ವಿಶ್ರಾಂತ ಕುಲಪತಿ ಪ್ರೊ. ಸಬಿತಾ ಭೂಮಿಗೌಡ, ಮೈಸೂರು ವಿವಿ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ.ಕೃಷ್ಣ ಹೊಂಬಾಳ್, ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ರಂಗಾಯಣ ಮಾಜಿ ನಿರ್ದೇಶಕ ಜನಾರ್ದನ್ (ಜನ್ನಿ), ಸ್ಥಳ: ಕನ್ನಡ ಸಾಹಿತ್ಯ ಭವನ, ವಿಜಯನಗರ, ಸಂಜೆ 4.30ಕ್ಕೆ.

■ **ಶ್ರೀ ರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನ:** ತಿಂಗಳ ತಿಳಿವು, ಸಂಚಿಕೆ–11, ದಿವ್ಯ ಆಶೀರ್ವಾದ ರಾಮಕೃಷ್ಣ ಆಶ್ರಮದ ಅಧ್ಯಕ್ಷ ಸ್ವಾಮಿ ಮುಕ್ತಿದಾನಂದ ಜೀ ಮಹಾರಾಜ್, ತಿಂಗಳ ಅತಿಥಿ: ಕೃಷ್ಣ ವಿಜ್ಞಾನಿ ಡಾ. ವಸಂತಕುಮಾರ್ ತಿಮಕಾಪುರ, ಸ್ಥಳ: ಪರಮಹಂಸ ಧ್ಯಾನ ಕೇಂದ್ರ, ರಾಮಕೃಷ್ಣ ವೃತ್ತದ ನೆಲಮಹಡಿ, ಸಂಜೆ 6.30ಕ್ಕೆ.

■ **ಶ್ರೀ ಮಹಾಜನ ಸಭಾ:** ಧನುರ್ಮಾಸದ ಪ್ರಯುಕ್ತ ಶ್ರೀ ವೈಷ್ಣವ ಭಕ್ತ ಪರಾಯಣೆ ಆಂಡಾಳ್ (ಗೋದಾ ದೇವಿ) ವಿರಚಿತ ತಿರುಪ್ಪಾವೈ ಪಾಶುರಗಳ ಪ್ರವಚನ, ಮೇಲುಕೋಟೆಯ ಉ॥ ವೇ॥ ಶ್ರೀ ಮುಡುಂಬೆ ರಾಮಾನುಜನ್ ಅವರಿಂದ, ಸ್ಥಳ: ಶ್ರೀರಾಮ ಮಂದಿರ, ಕೃಷ್ಣಮೂರ್ತಿಪುರಂ, ಸಂಜೆ 6.30ಕ್ಕೆ.

■ **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ:** ತಿರುಪ್ಪಾವೈ ಪ್ರವಚನ ಕಾರ್ಯಕ್ರಮ, ಮೈಸೂರು ಮಹಾರಾಣಿ ಕಲಾ ಕಾಲೇಜಿನ ನಿವೃತ್ತ ಸಂಸ್ಕೃತ ಪ್ರಾಧ್ಯಾಪಕರಾದ ವಿದ್ವನ್ಮಣಿ, ದರ್ಶನವಾರಿದಿ ವಿದುಷಿ ಡಾ. ಕೆ.ಎಲ್.ಪ್ರಸನ್ನಾಕ್ಷಿ ಅವರಿಂದ, ಸ್ಥಳ: ದೇವಸ್ಥಾನದ ಆವರಣ, ತ್ಯಾಗರಾಜ ರಸ್ತೆ, ಸಂಜೆ 6.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10–ಚಿಂತನ, 6.15–ಗೀತಾರಾಧನ, 6.35 ಮತ್ತು ಸಂಜೆ 6.10: ಅಂಚೆ–ಅಂಕನ–ಆಕಾಶವಾಣಿ ಅಂಕಣ, ಪ್ರಸ್ತುತಿ: ಡಾ.ಅಮ್ಮಸಂದ್ರ ಸುರೇಶ ಹಾಗೂ ಎಂ.ಎನ್.ವಿಜಯಲಕ್ಷ್ಮಿ, ಪ್ರಾಯೋಜಕರು: ಭಾರತೀಯ ಅಂಚೆ, ಮೈಸೂರು ವಿಭಾಗ, 6.40–ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಡಾ.ಪಿ.ಎಸ್. ಮುರಳೀಧರ್, ವ್ಯಾಖ್ಯಾನ–ಡಾ.ಬೋರೇಗೌಡ ಚಿಕ್ಕಮರಳಿ, 6.50–ರೈತರಿಗೆ ಸಲಹೆ, 7.15–ಭರವಸೆ ಹೊನಲು–ವೈದ್ಯರ ಕಿವಿಮಾತು, ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು–ಟ್ರಸ್ಟ್‌ವೆಲ್ ಆಸ್ಪತ್ರೆ, ಜೆ.ಸಿ.ರಸ್ತೆ, ಬೆಂಗಳೂರು, 8.30–ಮೈಸೂರು ರಂಗಾಯಣ ಆಯೋಜಿಸುತ್ತಿರುವ ಈ ಬಾರಿಯ 'ಬಹುರೂಪಿ ರಾಷ್ಟ್ರೀಯ ರಂಗೋತ್ಸವ' ಕುರಿತು ಮಾತುಕತೆ. ಭಾಗವಹಿಸುತ್ತಾರೆ–ರಂಗಾಯಣದ ನಿರ್ದೇಶಕ ಸತೀಶ್ ತಿಪಟೂರ್ ಹಾಗೂ ಪ್ರಭಾರಿ ಉಪನಿರ್ದೇಶಕ ಡಾ.ಎಂ.ಡಿ.ಸುದರ್ಶನ್ ಇವರೊಂದಿಗೆ ಭಾಗವಹಿಸುತ್ತಾರೆ, ಪ್ರಭುಸ್ವಾಮಿ ಮಳಿಮಠ್, 9.00–ನೆನಪಿನಂಗಳ (ಧ್ವನಿ ಭಂಡಾರದಿಂದ) ಹಿರಿಯ ರಂಗಕರ್ಮಿ ಪ್ರಸನ್ನ ಅವರೊಂದಿಗೆ ಹೆಚ್. ಶ್ರೀನಿವಾಸ್ ಅವರು ನಡೆಸಿದ್ದ ಸಂವಾದದ ಮೊದಲ ಭಾಗ. 10.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಮಧುರೈ. ಎಂ.ಪಿ.ಎನ್.ಸೇತುರಾಮನ್ ಮತ್ತು ಎಂ.ಪಿ.ಎನ್.ಪೊನ್ನುಸ್ವಾಮಿ–ಯುಗಳ ನಾಗಸ್ವರ ವಾದನ, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್–ಇನ್ ಕಾರ್ಯಕ್ರಮ, ಗೇಮ್ ಶೋ–ಪ್ರಸ್ತುತಿ: ದಿಗ್ವಿಜಯ್ ಬಿ., **ಮಧ್ಯಾಹ್ನ:** 12.05–ವನಿತಾ ವಿಹಾರ, 12.35–ದೇವರನಾಮ, 12.45–ನಮ್ಮ ಆರೋಗ್ಯ: 'ಕ್ಷಯಮುಕ್ತ ಭಾರತ ಅಭಿಯಾನ, 100 ದಿನಗಳ ಜಾಗೃತಿ ಆಂದೋಲನ' ಕುರಿತು, ಮೈಸೂರಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಭಾಗೀಯ ಸಹನಿರ್ದೇಶಕರ ಕಚೇರಿಯಲ್ಲಿ ಉಪನಿರ್ದೇಶಕ ಡಾ.ಮಲ್ಲಿಕಾ ಬಿ. ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 1.00–ಪ್ರಗತಿಪಥ–ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳ ಸರಣಿ ಉಮಂಗ್ ಕುರಿತು ಮಾಹಿತಿ ಹೆಚ್.ಎಸ್.ಪ್ರದೀಪ್‌ಕುಮಾರ್ ಅವರಿಂದ 1.20–ಭಾವಗೀತೆಗಳು, 2.40–ಚಿತ್ರಗೀತೆಗಳು, 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಡಿ.ಕೆ. ಪಟ್ಟಮಾಲ್–ಹಾಡುಗಾರಿಕೆ, 4.00–ಮಹಿಳಾರಂಗ–ಸಂಕ್ರಾಂತಿ ಕುರಿತು ವಿಶೇಷ ಕಾರ್ಯಕ್ರಮ. ಭಾಗವಹಿಸುತ್ತಾರೆ–ಮೈಸೂರಿನ ನಿವೇದಿತಾನಗರದ ಚಿತ್ಕಲಾ ಮಹಿಳಾ ಸಂಘದ ಸದಸ್ಯರು, 4.45–ಹಿಂದಿ ಪಾಠ, ಪ್ರಸ್ತುತಿ: ವಿದ್ಯಾಕುಮಾರ್, 5.05–ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50–ಕೃಷಿರಂಗ: ಸಾವಯವ ವಿಧಾನದಲ್ಲಿ ದಾಸ್ತಾನು ಕೀಟದ ನಿರ್ವಹಣೆ. ಈ ಕುರಿತು ನಿವೃತ್ತ ವಿಜ್ಞಾನಿ ಡಾ.ವೀರಣ್ಣ ಎನ್.ಪಟೇಲ್ ಅವರೊಂದಿಗೆ ಸಂದರ್ಶನ, ಸಂದರ್ಶಕರು: ಎನ್.ಕೇಶವಮೂರ್ತಿ, 7.45–ಕನ್ನಡ ಚಿತ್ರಗೀತೆಗಳು, 8.00–ಯುವವಾಣಿ, ಸಂಕ್ರಾಂತಿ ಹಬ್ಬದ ಸಂದರ್ಭದಲ್ಲಿ ವಿಶೇಷ ರೂಪಕ. ಪ್ರಸ್ತುತಪಡಿಸುತ್ತಾರೆ, ಮೈಸೂರಿನ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್‌ನ ಶ್ರೀದೇವಿ ನಚಿಕೇತ್ ಮತ್ತು ತಂಡದವರು, 9.30–ಕರ್ನಾಟಕ ಶಾಸ್ತ್ರೀಯ ಸಂಗೀತ: ಯು.ಶ್ರೀನಿವಾಸ್, ಮ್ಯಾಂಡೋಲಿನ್ ವಾದನ, 10.00–ರೂಪಕ, ಹರಿಯನ್ನರಸಿದ ವನಿತೆಯರು ರಚನೆ ಮತ್ತು ಪ್ರಸ್ತುತಿ: ಡಾ.ಸುಕನ್ಯಾ ಪ್ರಭಾಕರ್, 10.30–ಸವಿನೆನಪು

ಸಿದ್ದರಾಮಯ್ಯರೇ ಸಿಎಂ ಆಗಿ ಮುಂದುವರೆಯುತ್ತಾರೆ

ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಸ್ಪಷ್ಟನೆ

ಮೈಸೂರು, ಜ.12(ಎಂಟಿವೈ)– ರಾಜ್ಯದ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರು ಕಾರ್ಯ ನಿರ್ವಹಿಸುತ್ತಿದ್ದು, ರಾಜ್ಯದಲ್ಲಿ ಮುಖ್ಯಮಂತ್ರಿ ಕುರ್ಚಿ ಖಾಲಿ ಇಲ್ಲ. ಅಲ್ಲದೆ, ನಾಯಕತ್ವ ಬದಲಾವಣೆ ವಿಚಾರ ಕೇವಲ ಊಹಾಪೋಹ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಸ್ಪಷ್ಟಪಡಿಸಿದ್ದಾರೆ.



ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಕೆಲಸ ಮಾಡುತ್ತಿದ್ದಾರೆ. ಅವರೇ ಸಿಎಂ ಆಗಿಯೂ ಮುಂದುವರಿಯುತ್ತಾರೆ. ಸಿಎಂ ಕುರ್ಚಿ ವಿಚಾರವಾಗಿ ಯಾವುದೇ ಕೂಗಾಟವೂ ಇಲ್ಲ, ಚರ್ಚೆಯೂ ನಡೆಯುತ್ತಿಲ್ಲ. ಈಗ ಸಿದ್ದರಾಮಯ್ಯ ಸಿಎಂ ಆಗಿದ್ದಾರೆ. ಕುರ್ಚಿಯ ಬಗ್ಗೆ ಯಾವ ಚರ್ಚೆಗಳೂ ಆಗಿಲ್ಲ ಅನವಶ್ಯಕವಾಗಿ ಚರ್ಚೆ ಆಗುತ್ತಿದೆ ಎಂದು ಹೇಳಿದರು.

ಹೈಕಮಾಂಡ್ ಎಲ್ಲ ಕಾಂಗ್ರೆಸ್ ಕಾರ್ಯಕರ್ತರ ಪರವಾಗಿದೆ. ಡಿ.ಕೆ.ಶಿವಕುಮಾರ್ ಹೇಳಿರುವುದರಲ್ಲಿ ಸರಿ ಇದೆ. ಅಂತಿಮವಾಗಿ ಪಕ್ಷದ ಹೈಕಮಾಂಡ್ ಏನು ತೀರ್ಮಾನ ತೆಗೆದುಕೊಳ್ಳುತ್ತದೆಯೋ ಅದೇ ಅಂತಿಮ ಎಂದರು.

ಒಂದು ಕಡೆ ಸೇರಿ ಊಟ ಮಾಡುವುದು ಅಪರಾಧವೇ? ಟೀ ಕುಡಿಯಲು ಸೇರುವುದು ಗುಂಪುಗಾರಿಕೆಯೇ? ಆ ರೀತಿ ಕಾಂಗ್ರೆಸ್‌ನಲ್ಲಿ ಇಲ್ಲ. ನಮ್ಮಲ್ಲಿ ಎಲ್ಲರೂ ಒಗ್ಗಟ್ಟಾಗಿದ್ದೇವೆ. ಡಾ.ಜಿ.ಪರಮೇಶ್ವರ್ ಅವರು ಕರೆದಿದ್ದ ಔತಣಕೂಟದ ಸಭೆಗೆ ತಡೆಯಾಗಿಲ್ಲ. ಪಕ್ಷದ ರಾಜ್ಯ ಉಸ್ತುವಾರಿ ರಣದೀಪ್ ಸುರ್ಜೇವಾಲ ಜ.13ರಂದು ಬರುತ್ತಿದ್ದಾರೆ. ಚರ್ಚೆ ಮಾಡಿ ಕಾರ್ಯಕ್ರಮ ಮಾಡುತ್ತೇವೆ. ಡಿ.ಕೆ. ಶಿವಕುಮಾರ್ ಇದ್ದಾಗಲೂ ಡಿನ್ನರ್ ನಡೆದಿದೆ, ಇಲ್ಲದಿದ್ದಾಗಲೂ ನಡೆದಿದೆ. ಅದಕ್ಕೆ ರಾಜಕೀಯ ಅರ್ಥ ಕಲ್ಪಿಸುವ ಅಗತ್ಯ ಇಲ್ಲ ಎಂದು ಹೇಳಿದರು

ಡಿ.ಕೆ.ಶಿವಕುಮಾರ್ ಧಾರ್ಮಿಕವಾಗಿ ಸಾಕಷ್ಟು ನಂಬಿಕೆ ಇಟ್ಟುಕೊಂಡಿದ್ದಾರೆ. ಅದಕ್ಕೆ ಸಂವಿಧಾನದಲ್ಲಿ ಸ್ವಾತಂತ್ರ್ಯ ಇದೆ. ರಾಜಕಾರಣದಲ್ಲಿ ಯಾರೂ ಸನ್ಯಾಸಿಗಳಲ್ಲ. ಅಧಿಕಾರ ಬೇಕು ಎಂಬ ಆಸೆ ಎಲ್ಲರಿಗೂ ಇರುತ್ತದೆ. ಜನಗಳಿಗೆ, ದೇಶ ಮತ್ತು ಸಂವಿಧಾನಕ್ಕೆ ಒಳ್ಳೆಯದಾಗಬೇಕೆಂಬ ಆಸೆ ಇದೆ. ನನಗೆ ಯಾವುದೇ ಹುದ್ದೆಯ ಮೇಲೆ ಆಸೆ ಇಲ್ಲ ಎಂದು ತಿಳಿಸಿದರು.

ಸ್ವಾಮಿ ವಿವೇಕಾನಂದರು ಯುವ ಜನತೆಯ ಸ್ಫೂರ್ತಿ



ಸ್ವಾಮಿ ವಿವೇಕಾನಂದರ ಜಯಂತಿ ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಜೆ.ದಿನೇಶ್ ಉದ್ಘಾಟಿಸಿದರು.

ಮೈಸೂರು,ಜ.12(ಎಸ್‌ಪಿಎನ್)– ಸ್ವಾಮಿ ವಿವೇಕಾನಂದರು ಯುವ ಜನತೆಯ ಸ್ಫೂರ್ತಿಯಾಗಿದ್ದರು. ಹಾಗಾಗಿ ಅವರ ತತ್ವ ಆದರ್ಶಗಳನ್ನು ಯುವ ಸಮೂಹ ಮೈಗೂಡಿಸಿಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಜೆ.ದಿನೇಶ್ ಕರೆ ನೀಡಿದರು.

ಮೈಸೂರು ಚಾಮುಂಡೇಶ್ವರಿ ಹಾಕಿ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಿವಿದ ಯೋಗ ಸಂಸ್ಥೆಗಳ ಸಹಯೋಗದಲ್ಲಿ ನಡೆದ ರಾಷ್ಟ್ರೀಯ ಯುವದಿನ ಹಾಗೂ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ವಿವೇಕಾನಂದರು ತತ್ವಜ್ಞಾನವಲ್ಲದೆ, ಎಲ್ಲಾ ವಿಚಾರಗಳನ್ನು ತಿಳಿದವರಾಗಿದ್ದರು. ನಮ್ಮ ದೇಶದ ಬಗ್ಗೆ, ಬೇರೆ ದೇಶಗಳು ಹೆಮ್ಮೆ ಪಡುವಂತೆ ಮಾಡಿದ್ದರು. ಆದ್ದರಿಂದ ನಾವು–ನೀವೆಲ್ಲರೂ ನಮ್ಮ ನಮ್ಮ ಕ್ಷೇತ್ರದಲ್ಲಿ ಏಕಾಗ್ರತೆಯಿಂದ ಕೆಲಸ ಮಾಡಿದರೆ ಆ ಕ್ಷೇತ್ರದಲ್ಲಿ ಸಾಧನೆ ಮಾಡಬಹುದು ಎಂದರು.

ಸಮಾರಂಭದಲ್ಲಿ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಭಾಸ್ಕರ ನಾಯಕ್, ಡಾ.ಜಯರೇವಣ್ಣ, ಯೋಗಪಟು ಶ್ರೀಶೈಲಕುಂಬಾರ್, ದೇವರಾಜ್, ರಾವಣೀಕರ್, ಲಾವಣ್ಯ, ಅಮ್ಮ ರಾಮಚಂದ್ರ ಹಾಜರಿದ್ದರು. ಯೋಗ ಪಟುಗಳಿಂದ ಯೋಗಾಸನ ನಡೆಯಿತು.

ಪೂರ್ಣಪ್ರಜ್ಞ ವಿದ್ಯಾಕೇಂದ್ರದ ವಾರ್ಷಿಕೋತ್ಸವ



ಮೈಸೂರಿನ ಪೂರ್ಣಪ್ರಜ್ಞ ವಿದ್ಯಾಕೇಂದ್ರ ಶಾಲೆಯ ವಾರ್ಷಿಕೋತ್ಸವದಲ್ಲಿ ನಾಗರಿಕ ವೇದಿಕೆಯ ಹಿರಿಯ ಸದಸ್ಯರನ್ನು ಸನ್ಮಾನಿಸಲಾಯಿತು.

ಮೈಸೂರು, ಜ.12(ಎಸ್‌ಬಿಡಿ)– ಮೈಸೂರಿನ ಕುವೆಂಪುನಗರ ವಿಶ್ವಮಾನವ ಜೋಡಿ ರಸ್ತೆಯಲ್ಲಿರುವ ನಾಗರಿಕ ವೇದಿಕೆಯ ಪೂರ್ಣಪ್ರಜ್ಞ ವಿದ್ಯಾಕೇಂದ್ರ ಶಾಲೆಯ 20ನೇ ವಾರ್ಷಿಕೋತ್ಸವ ನಡೆಯಿತು.

ಕುವೆಂಪುನಗರದ ಶ್ರೀ ಆದಿಶಕ್ತಿ ಬಂದಂತಮ್ಮ ಸಭಾಂಗಣದಲ್ಲಿ ನಡೆದ ಸಮಾರಂಭವನ್ನು ಚಲನಚಿತ್ರ ಮತ್ತು ಕಿರುತೆರೆ ನಟ ಸಿದ್ದು ಮೂಲಿಮನಿ ಹಾಗೂ ಅಂತರರಾಷ್ಟ್ರೀಯ ಕ್ರೀಡಾಪಟು ಕುಮಾರಿ ಎಂ.ಆರ್.ಧನುಷ ಉದ್ಘಾಟಿಸಿದರು.

ಇದೇ ವೇಳೆ ನಾಗರಿಕ ವೇದಿಕೆಯ 10 ಹಿರಿಯ ಸದಸ್ಯರನ್ನು ಸನ್ಮಾನಿಸಲಾಯಿತು. ಆಟೋಟ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳು ಹಾಗೂ ಪೋಷಕರಿಗೆ ಬಹುಮಾನ ವಿತರಿಸಲಾಯಿತು. ಶ್ರೀಮತಿ ಲೀನಾ ಲೋಕೇಶ್ ಅವರ ಸ್ಮರಣಾರ್ಥ ಕಳೆದ ಸಾಲಿನಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ಹಾಗೂ ಪಾರಿತೋಷಕ ನೀಡಿ ಪ್ರೋತ್ಸಾಹಿಸಲಾಯಿತು. ಬಳಿಕ ಶಾಲೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನೆರವೇರಿತು.

ಸಮಾರಂಭದಲ್ಲಿ ವೇದಿಕೆ ಗೌರವಾಧ್ಯಕ್ಷ ಬಿ.ಪಿ.ಪುಟ್ಟಸ್ವಾಮಿ, ಅಧ್ಯಕ್ಷ ಶ್ರೀರಂಗಯ್ಯ, ಕಾರ್ಯದರ್ಶಿ ಬಿ.ಶ್ರೀಕಾಂತ್, ಶಾಲಾ ಸಮಿತಿ ಅಧ್ಯಕ್ಷ ಜೆ.ಲೋಕೇಶ್, ಉಪಾಧ್ಯಕ್ಷ ಹೆಚ್.ಅರವಿಂದ್, ಖಜಾಂಚಿ ಎಸ್.ಪಿ.ತ್ಯಾಗರಾಜು, ಕಾರ್ಯಕಾರಿ ಸಮಿತಿ ಸದಸ್ಯರಾದ ಕೃಷ್ಣ, ಹೆಚ್.ಕೆ. ಅಪ್ಪಾಜಿಗೌಡ, ಪಿ.ರಮೇಶ್, ಬಿ.ಶಿವಣ್ಣ, ರೇವಣರಾಜು, ಎಂ.ಎಸ್.ರಮೇಶ್, ಶೈಲೇಂದ್ರ, ಮುರಾರಿ, ಶಾಲಾ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಶಾಮಲದೇವಿ ಮತ್ತಿತರರು ಉಪಸ್ಥಿತರಿದ್ದರು.

ಮಾ.23ಕ್ಕೆ 2025ರ ಐಪಿಎಲ್ ಆರಂಭ

ಮುಂಬೈ, ಜ.12– ಐಸಿಸಿ ಚಾಂಪಿಯನ್ಸ್ ಟ್ರೋಫಿ ಮುಗಿದ ಬಳಿಕ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಯಾವಾಗ ಪ್ರಾರಂಭವಾಗುತ್ತದೆ ಎಂದು ಎದುರು ನೋಡುತ್ತಿರುವ ಐಪಿಎಲ್ ಪ್ರಿಯರಿಗೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಯ ಉಪಾಧ್ಯಕ್ಷ ರಾಜೀವ್ ಶುಕ್ಲಾ ಶುಭಸುದ್ದಿ ನೀಡಿದ್ದಾರೆ. ಈ ವರ್ಷ ನಡೆಯಲಿರುವ 18ನೇ ಆವೃತ್ತಿಯ ಲೀಗ್‌ನ ದಿನಾಂಕವನ್ನು ಘೋಷಣೆ ಮಾಡಿದ್ದಾರೆ.

ಮುಂಬೈನಲ್ಲಿಂದು ನಡೆದ ಬಿಸಿಸಿಐ ಸಾಮಾನ್ಯ ಸಭೆಯ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಶುಕ್ಲಾ, ಐಪಿಎಲ್ 2025ರ ಆರಂಭದ ದಿನಾಂಕವನ್ನು ಘೋಷಿಸಿದರು. ಚಾಂಪಿಯನ್ಸ್ ಟ್ರೋಫಿ ಮುಕ್ತಾಯಗೊಂಡ 14 ದಿನಗಳ ಬಳಿಕ ಚುಟುಕು ಕ್ರಿಕೆಟ್ ಹಬ್ಬ ಪ್ರಾರಂಭವಾಗಲಿದೆ ಎಂದು ತಿಳಿಸಿದ್ದಾರೆ. ಈ ಬಾರಿಯ ಐಪಿಎಲ್ ಹಬ್ಬ ಮಾರ್ಚ್ 23 ರಿಂದ ಪ್ರಾರಂಭವಾಗಲಿದೆ. ಫೈನಲ್ ಪಂದ್ಯದ ದಿನಾಂಕ ಘೋಷಣೆ ಆಗಿಲ್ಲ. ಆದರೆ ಮೇ 25ರಂದು ಫೈನಲ್ ಪಂದ್ಯ ನಡೆಸುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ. ಈ ಬಗ್ಗೆ ಬಿಸಿಸಿಐನಿಂದ ಅಧಿಕೃತ ಪ್ರಕಟಣೆ ಇನ್ನಷ್ಟೇ ಬರಬೇಕಿದೆ.

ಕಳೆದ ವರ್ಷ ಐಪಿಎಲ್ ವೇಳಾಪಟ್ಟಿಯನ್ನು ಕೊನೆಯ ಕ್ಷಣದಲ್ಲಿ ಬಿಡುಗಡೆ ಮಾಡಲಾಗಿತ್ತು. ಆದರೆ ಈ ಬಾರಿ ಎರಡು ತಿಂಗಳ ಮೊದಲೇ ಐಪಿಎಲ್ ದಿನಾಂಕ ಬಹಿರಂಗಗೊಂಡಿದೆ. ಅಂತಾರಾಷ್ಟ್ರೀಯ ಕ್ರಿಕೆಟ್ ವೇಳಾಪಟ್ಟಿಯೊಂದಿಗೆ ಐಪಿಎಲ್ ವೇಳಾಪಟ್ಟಿ ಘರ್ಷಣೆಯಾಗದಂತೆ ಬಿಸಿಸಿಐ ಈ ನಿರ್ಧಾರ ಕೈಗೊಂಡಿದೆ ಎಂದು ವರದಿಯಾಗಿದೆ.

ಚಾಂಪಿಯನ್ಸ್ ಟ್ರೋಫಿ: ಐಸಿಸಿ ಚಾಂಪಿಯನ್ಸ್ ಟ್ರೋಫಿ ಟೂರ್ನಿಗೆ ಭಾರತ ತಂಡವನ್ನು ಯಾವಾಗ ಪ್ರಕಟಿಸಲಾಗುತ್ತದೆ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಶುಕ್ಲಾ, ಜ.18 ಮತ್ತು 19ರಂದು ಬಿಸಿಸಿಐ ಸಭೆ ನಡೆಯಲಿದೆ. ಬಳಿಕ ತಂಡವನ್ನು ಪ್ರಕಟಿಸಲಾಗುತ್ತದೆ ಎಂದು ತಿಳಿಸಿದರು.

ಮಲಗಿದ್ದ ಹಸುಗಳ ಕೆಚ್ಚಲು ಕೊಯ್ದ ಕಿಡಿಗೇಡಿಗಳು

ಬೆಂಗಳೂರಲ್ಲಿ ಅಮಾನವೀಯ ಕೃತ್ಯ




ಬೆಂಗಳೂರು,ಜ.12–ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಅಮಾನವೀಯ ಘಟನೆಗಳ ಸಂಖ್ಯೆ ಹೆಚ್ಚುತ್ತಿದೆ. ಇದೀಗ ಅತೀ ಭೀಕರ ಘಟನೆಯೊಂದು ವರದಿಯಾಗಿದೆ. ತಡರಾತ್ರಿ ಕಿಡಿಗೇಡಿಗಳು ಮಲಗಿದ್ದ ಮೂರು ಹಸುಗಳ ಕೆಚ್ಚಲು ಕೊಯ್ದ ಘಟನೆ ಚಾಮರಾಜಪೇಟೆ ವಿನಾಯಕನಗರದಲ್ಲಿ ನಡೆದಿದೆ. ರಸ್ತೆಯಲ್ಲಿ ಮಲಗಿದ್ದ ಹಸುಗಳ ಕೆಚ್ಚಲನ್ನು ಕೊಯ್ದು ಕಿರಾತಕರು ಪರಾರಿಯಾಗಿದ್ದಾರೆ. ಇಂದು ಬೆಳಗ್ಗೆ ಘಟನೆ ಬೆಳಕಿಗೆ ಬಂದಿದೆ. ಸದ್ಯ ಹಸುಗಳಿಗೆ ಚಾಮರಾಜಪೇಟೆ ಪಶು ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಚಾಮರಾಜಪೇಟೆಯ ಕರ್ಣ ಎಂಬುವವರಿಗೆ ಸೇರಿದ ಹಸುಗಳ ಮೇಲೆ ಕಿಡಿಗೇಡಿಗಳು ವಿಕೃತಿ ಮೆರೆದಿದ್ದಾರೆ. ಒಟ್ಟು 8 ಹಸುಗಳನ್ನು ಸಾಕಿರುವ ಕರ್ಣ ಪ್ರತಿ ದಿನ ಆರೈಕೆ ಮಾಡುತ್ತಾರೆ. ಈ ಪೈಕಿ ಮೂರರಿಂದ ನಾಲ್ಕು ಹಸುಗಳು ಮನೆಯಿಂದ ಕೆಲವೇ ದೂರದಲ್ಲಿರುವ ರಸ್ತೆಯಲ್ಲಿ ಮಲಗುತ್ತವೆ. ಹೀಗೆ ನಿನ್ನೆ ಮಲಗಿದ್ದ ಹಸುಗಳ ಕೆಚ್ಚಲನ್ನು ತಡರಾತ್ರಿ ಕಿಡಿಗೇಡಿಗಳು ಕೊಯ್ದಿದ್ದಾರೆ. ಮೂಕ ಪ್ರಾಣಿಗಳ ನರಳಾಟ ಇಂದು ಬೆಳಗ್ಗೆ ಬೆಳಕಿಗೆ ಬಂದಿದೆ. ಮಾಹಿತಿ ತಿಳಿದು ಸ್ಥಳಕ್ಕೆ ಕಾಟನ್‌ಪೇಟೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸ್ಥಳೀಯರಿಂದ ಮಾಹಿತಿ ಪಡೆದಿರುವ ಪೊಲೀಸರು, ಸಿಸಿಟಿವಿ ದೃಶ್ಯಗಳ ಪರಿಶೀಲನೆ ನಡೆಸುತ್ತಿದ್ದಾರೆ. ಇದೇ ವೇಳೆ ಘಟನಾ ಸ್ಥಳಕ್ಕೆ ಸಂಸದ ಪಿ.ಸಿ. ಮೋಹನ್ ಭೇಟಿ ನೀಡಿದ್ದರು. ಮೂಕ ಪ್ರಾಣಿಗಳ ಕೆಚ್ಚಲು ಕೊಯ್ದ ಘಟನೆ ವಿರುದ್ಧ ಆಕ್ರೋಶ ಹೆಚ್ಚಾಗುತ್ತಿದೆ. ಸ್ಥಳೀಯರು ಕಿಡಿಗೇಡಿಗಳಿಗೆ ಕಠಿಣ ಶಿಕ್ಷೆ ನೀಡುವಂತೆ ಆಗ್ರಹಿಸಿದ್ದಾರೆ. ಆಕ್ರೋಶಗಳು ಹೆಚ್ಚಾಗುತ್ತಿದ್ದಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಪ್ರತಿಕ್ರಿಯೆ ನೀಡಿದ್ದಾರೆ. ಘಟನೆ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಈ ಘಟನೆಯ ವರದಿ ತರಿಸಿಕೊಳ್ಳುತ್ತೇನೆ. ಸ್ಥಳೀಯ ಪೊಲೀಸರ ಜೊತೆ ಚರ್ಚಿಸುತ್ತೇನೆ. ತಪ್ಪು ಮಾಡಿದವರ ವಿರುದ್ಧ ಕಾನೂನು ರೀತಿ ಕ್ರಮ ಕೈಗೊಳ್ಳುತ್ತೇವೆ ಎಂದಿದ್ದಾರೆ.

ಬೆಂಗಳೂರಿನಲ್ಲಿ ಇತ್ತೀಚೆಗೆ ಮೂಕ ಪ್ರಾಣಿಗಳ ಮೇಲೆ ನಡೆಯುತ್ತಿರುವ ದಾಳಿಗಳು ಹೆಚ್ಚಾಗುತ್ತಿದೆ. ಮಲಗಿದ್ದ ನಾಯಿಗಳ ಮೇಲೆ ವಾಹನ ಚಲಾಯಿಸಿದ ಘಟನೆ ಸೇರಿದಂತೆ ಹಲವು ಘಟನೆಗಳು ವರದಿಯಾಗಿದೆ. ಇತ್ತೀಚಿನ ದಿನಗಳಲ್ಲಿ ಮೂಕ ಪ್ರಾಣಿಗಳ ಮೇಲೆ ದಾಳಿ ಪೈಕಿ ನಡೆದ ಅತೀ ಭೀಕರ ಘಟನೆ ಇದಾಗಿದೆ. ಹಸುಗಳ ಮಾಲೀಕ ಕರ್ಣ ಈ ಕುರಿತು ಪ್ರತಿಕ್ರಿಯೆ ನೀಡಿದ್ದಾರೆ. ಮೂಕ ಪ್ರಾಣಿಗಳ ಮೇಲೆ ಯಾಕೆ ಇಷ್ಟು ದ್ವೇಷ? ಅವುಗಳ ನೋವು ನೋಡಲು ಸಾಧ್ಯವಾಗುತ್ತಿಲ್ಲ. ರಾತ್ರಿಯಿಂದ ಹಸುಗಳು ನರಳಾಡುತ್ತಿದೆ. ನಮಗೆ ಬೆಳಗ್ಗೆ ತಿಳಿದಿದೆ. ಈ ಕೃತ್ಯ ಎಸಗಿದವರನ್ನು ಕಾನೂನಿನ ಅಡಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಕಿಡಿಗೇಡಿಗಳ ವಿರುದ್ಧ ಕಠಿಣ ಕ್ರಮಕ್ಕೆ ಮಾಜಿ ಸಿಎಂ ಬೊಮ್ಮಾಯಿ ಆಗ್ರಹ

ಬೆಂಗಳೂರು, ಜ.12– ಚಾಮರಾಜಪೇಟೆಯ ವಿನಾಯಕ ನಗರದಲ್ಲಿ ಹಸುಗಳ ಕೆಚ್ಚಲು ಕೊಯ್ದ ದುರುಳರ ಕೃತ್ಯ ಅತ್ಯಂತ ಅಮಾನವೀಯವಾಗಿದ್ದು, ಈ ಹೀನ ಕೃತ್ಯವನ್ನು ತೀವ್ರವಾಗಿ ಖಂಡಿಸುತ್ತೇನೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.



ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಗೋಮಾತೆಯನ್ನು ತಾಯಿಯಂತೆ ಪೂಜಿಸುವ ನಮಗೆಲ್ಲ ಈ ಕೃತ್ಯ ಅತ್ಯಂತ ಘಾಸಿಯುಂಟು ಮಾಡಿದೆ. ಸುಗ್ಗಿಯ ಹಬ್ಬ ಮಕರ ಸಂಕ್ರಾತಿಯ ಸಂದರ್ಭದಲ್ಲಿ ರಾಜ್ಯದ ರಾಜ್ಯಧಾನಿಯಲ್ಲಿಯೇ ಇಂತಹ ಅಮಾನವೀಯ ಕೆಲಸ ಮಾಡಿರುವ ಪುಂಡರಿಗೆ ಈ ಸರ್ಕಾರದಲ್ಲಿ ಯಾವುದೇ ಭಯ ಇಲ್ಲದಂತೆ ಕಾಣಿಸುತ್ತಿದೆ ಎಂದು ಕಿಡಿಕಾರಿದ್ದಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರ ಗೋವುಗಳಿಗೆ ಸರಿಯಾದ ರಕ್ಷಣೆ ನೀಡದಿರುವುದು, ಗೋಶಾಲೆಗಳಿಗೆ ಸರಿಯಾದ ಅನುದಾನ ನೀಡದೇ ನಿರ್ಲಕ್ಷ್ಯ ಮಾಡಿರುವುದರ ಪರಿಣಾಮ ಇಂತಹ ಹೃದಯ ಹೀನ ಕೃತ್ಯಗಳು ನಡೆಯಲು ಪ್ರೇರಣೆ ನೀಡಿದಂತಾಗಿದೆ. ಮೂಕ ಪ್ರಾಣಿಗಳ ಮೇಲೆ ಮಾಡಿರುವ ಇಂತಹ ಕೃತ್ಯವನ್ನು ಅಂತಃಕರಣ ಇರುವವರು ಯಾರೂ ಕ್ಷಮಿಸಲು ಸಾಧ್ಯವಿಲ್ಲ. ಈ ಸರ್ಕಾರಕ್ಕೆ ಗೋಮಾತೆಯ ಮೇಲೆ ಕಿಂಚಿತ್ತಾದರೂ ಗೌರವ ಇದ್ದರೆ ಇಂತಹ ಹೇಯ ಕೃತ್ಯ ಮಾಡಿರುವ ಪುಂಡರನ್ನು ಪತ್ತೆ ಹಚ್ಚಿ ತಕ್ಷಣ ಬಂಧಿಸಿ, ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಗಾಯಗೊಂಡಿರುವ ಹಸುಗಳಿಗೆ ಸೂಕ್ತ ಚಿಕಿತ್ಸೆ ಕೊಡಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ತನಿಖೆಗೆ ಸಿಎಂ ಸಿದ್ದರಾಮಯ್ಯ ಆದೇಶ

ಬಳ್ಳಾರಿ, ಜ.12– ಬೆಂಗಳೂರಿನ ಚಾಮರಾಜಪೇಟೆಯ ವಿನಾಯಕನಗರದಲ್ಲಿ ಅಪರಿಚಿತರು ಮೂರು ಹಸುಗಳ ಕೆಚ್ಚಲು ಕತ್ತರಿಸಿರುವ ಹಿನ್ನೆಲೆಯಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ. ಪ್ರಕರಣದ ತನಿಖೆ ನಡೆಸಿ ಕ್ರಮ ಕೈಗೊಳ್ಳುವಂತೆ ಬೆಂಗಳೂರು ಪೊಲೀಸ್ ಆಯುಕ್ತ ಬಿ.ದಯಾನಂದ ಅವರಿಗೆ ಸೂಚಿಸಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಪೊಲೀಸ್ ಆಯುಕ್ತರ ಜೊತೆ ಮಾತನಾಡಿದ್ದೇನೆ. ತಪ್ಪಿತಸ್ಥರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳುವಂತೆ ಹೇಳಿದ್ದೇನೆ. ಯಾರೇ ಕೃತ್ಯ ಎಸಗಿದ್ದರು ಅವರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಬಳ್ಳಾರಿಯಲ್ಲಿ ಸಿಎಂ ಸುದ್ದಿಗಾರರಿಗೆ ತಿಳಿಸಿದರು.




ಸಂಕ್ರಾಂತಿಗೆ ಹಸುವಿನ ಕೆಚ್ಚಲು ಕೊಯ್ದಿರೋ ಗಿಫ್ಟ್ ಕೊಟ್ಟಿದ್ದಾರೆ: ಅಶೋಕ್ ಕಿಡಿ

ಬೆಂಗಳೂರು, ಜ.12– ಗೋ ಪೂಜೆ ಬಹಳ ಪವಿತ್ರ ಸಂಕ್ರಾಂತಿಗೆ ಸಂಭ್ರಮ ಇರುತ್ತದೆ. ಕಾಂಗ್ರೆಸ್ ಸರ್ಕಾರ ಬಂದಮೇಲೆ ಸಂಕ್ರಾಂತಿಗೆ ಹಸುವಿನ ಕೆಚ್ಚಲು ಕೊಯ್ದಿರೋ ಗಿಫ್ಟ್ ಕೊಟ್ಟಿದ್ದಾರೆ. ಜಿಹಾದಿ ಮನಸ್ಥಿತಿ ಇದು ಎಂದು ವಿಪಕ್ಷ ನಾಯಕ ಆರ್ ಅಶೋಕ್ ಆಕ್ರೋಶ ಹೊರಹಾಕಿದ್ದಾರೆ. ಚಾಮರಾಜಪೇಟೆಯಲ್ಲಿ ಹಸುವಿನ ಕೆಚ್ಚಲು ಕೊಯ್ದ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹಾಲು ಕೊಡುವ ಹಸುವಿನ ಕೆಚ್ಚಲು ಕೊಯ್ದಿದ್ದಾರೆ. ಹಸುವಿನ ಮಾಲೀಕ ಆರ್‌ಎಸ್‌ಎಸ್ ಕಾರ್ಯಕರ್ತ. ಸ್ಥಳೀಯ ಪಶು ಆಸ್ಪತ್ರೆ ಉಳಿವಿಗಾಗಿ ಹಸುವಿನ ಮಾಲೀಕರು ಹೋರಾಟ ಮಾಡಿದ್ದರು. ಹಸುಗಳನ್ನು ಪಶು ಆಸ್ಪತ್ರೆಗೆ ತೆಗೆದುಕೊಂಡು ಹೋಗಿದ್ದರು. ಪ್ರತಿಭಟನೆಯಲ್ಲಿ ಭಾಗಿಯಾಗಿದ್ದವು ಎಂಬುದಕ್ಕೆ ಕಾಲು ಕಟ್ ಮಾಡಿದ್ದಾರೆ. ಕೆಚ್ಚಲಿಗೆ ಹಾನಿ ಮಾಡಿದ್ದಾರೆ. ಕಾಂಗ್ರೆಸ್ ಮಾತೆತ್ತಿದರೆ ದೇವಸ್ಥಾನ, ಹೋಮ ಮಾಡುತ್ತಾರೆ. ಇದು ವೋಟ್‌ಗಾಗಿ ಮಾಡುತ್ತಿರುವುದು ಎಂದು ಕಿಡಿಕಾರಿದರು. ಪರಿಶೀಲನೆ ಬಳಿಕ ಅಶೋಕ್ 1 ಲಕ್ಷ ರೂ. ವೈಯಕ್ತಿಕ ಪರಿಹಾರ ಘೋಷಣೆ ಮಾಡಿದ್ದಾರೆ.



ಮೂರು ಹೊಸ ಹಸುಗಳನ್ನು ನಾನೇ ಕೊಡಿಸುತ್ತೇನೆ: ಸಚಿವ ಜಮೀರ್

ಬೆಂಗಳೂರು,ಜ.12– ಪ್ರಾಣಿಗಳ ಮೇಲೆ ಯಾಕೆ ದ್ವೇಷ? ಈ ಥರ ಮಾಡಿದವನು ಮನುಷ್ಯನೇ ಅಲ್ಲ. ಏನೇ ದ್ವೇಷ, ಗಲಾಟೆ ಇದ್ದರೂ ಈ ಥರ ಮಾಡಬಾರದು ಎಂದು ಸಚಿವ ಜಮೀರ್ ಅಹ್ಮದ್ ಹೇಳಿದ್ದಾರೆ.



ಚಾಮರಾಜಪೇಟೆಯಲ್ಲಿ ಹಸುಗಳ ಕೆಚ್ಚಲು ಕೊಯ್ದ ಘಟನಾ ಸ್ಥಳಕ್ಕೆ ಭೇಟಿ ನೀಡಿದ ಅವರು, ಇರಿತಕ್ಕೊಳಗಾಗಿ ಚಿಕಿತ್ಸೆ ಪಡೆಯುತ್ತಿದ್ದ ಹಸುಗಳನ್ನು ಪರಿಶೀಲನೆ ನಡೆಸಿದರು. ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಾನು, ಮುಖ್ಯಮಂತ್ರಿಗಳು ಬಳ್ಳಾರಿಯಲ್ಲಿ ಇದ್ದೆವು. ವಿಚಾರ ಗೊತ್ತಾದ ತಕ್ಷಣ ಮುಖ್ಯಮಂತ್ರಿಗಳು ಕಮೀಷನರ್‌ಗೆ ಕರೆ ಮಾಡಿ ಅದು ಯಾರೇ ಆಗಿರಲಿ ಕೂಡಲೇ ಬಂಧಿಸುವಂತೆ ಹೇಳಿದ್ದಾರೆ. ನಾನು ಕೂಡ ಪೊಲೀಸರಿಗೆ ಹೇಳಿದ್ದೇನೆ. ಯಾರೇ ಆದರೂ ಅವನ ಮೇಲೆ ಕಠಿಣ ಕ್ರಮ ಆಗಬೇಕು. ಮೂರು ಹೊಸ ಹಸುಗಳನ್ನು ನಾನೇ ಕೊಡಿಸುತ್ತೇನೆ. ಅವರ ಕುಟುಂಬದ ಜೊತೆಗೆ ನಾನು ಇದ್ದೇನೆ ಎಂದು ಭರವಸೆ ನೀಡಿದರು. ನಾಳೆ ಅವರ ಮನೆ ಬಳಿ ಹೋಗಿ ಹೊಸ ಹಸುಗಳನ್ನು ಕೊಡಿಸಿ. ಹಸು ಕೊಡಿಸೋ ಜವಾಬ್ದಾರಿ ನಿನ್ನದು ಎಂದು ತಮ್ಮ ಕಾರ್ಯಕರ್ತ ವಿನಯ್ ಎಂಬಾತನಿಗೆ ಜಮೀರ್ ಸೂಚನೆ ನೀಡಿದರು.

ವಿಜಯನಗರ 4ನೇ ಹಂತಕ್ಕೆ ವರ್ಷದೊಳಗೆ ಕಾವೇರಿ ನೀರು

ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಭರವಸೆ

ಮೈಸೂರು, ಜ.12(ಎಂಟಿವೈ)– ಮೈಸೂರಿನ ವಿಜಯನಗರದ 4ನೇ ಹಂತದ ಸಮಗ್ರ ಅಭಿವೃದ್ಧಿಗೆ ಪಣತೊಟ್ಟಿದ್ದು, 2025ರೊಳಗೆ ಕಾವೇರಿ ನೀರು ಪೂರೈಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಜಿ.ಟಿ.ದೇವೇಗೌಡ ಭರವಸೆ ನೀಡಿದ್ದಾರೆ.



ಮೈಸೂರಿನ ವಿಜಯ ನಗರದ 4ನೇ ಹಂತದ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ನಡೆದ ಸರ್ವ ಸದಸ್ಯರ ವಾರ್ಷಿಕ ಸಾಮಾನ್ಯ ಸಭೆಯನ್ನು ಶಾಸಕ ಜಿ.ಟಿ.ದೇವೇಗೌಡ ಉದ್ಘಾಟಿಸಿದರು.

ಮೈಸೂರಿನ ವಿಜಯನಗರದ 4ನೇ ಹಂತದ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ನಡೆದ ಸರ್ವ ಸದಸ್ಯರ ವಾರ್ಷಿಕ ಸಾಮಾನ್ಯ ಸಭೆಯನ್ನು ಉದ್ಘಾಟಿಸಿ, ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದ ಅವರು, ಈ ಬಡಾವಣೆಯ ಸಮಸ್ಯೆ ನನಗೆ ಗೊತ್ತಿದೆ. ಕೆ.ಆರ್.ಎಸ್ ಹಿನ್ನೀರಿನ ಉಂಡವಾಡಿಯಿಂದ ನೀರು ತರಲು ಪೈಪ್‌ಲೈನ್ ಕಾಮಗಾರಿ ನಡೆಯುತ್ತಿದೆ. 26 ಟ್ಯಾಂಕ್‌ಗಳನ್ನು ಕಟ್ಟಿಸುತ್ತಿದ್ದೇವೆ. ನೆಲ ಟ್ಯಾಂಕ್ ತುಂಬಿಸಿ ದಿನ ಬಿಟ್ಟು ದಿನ ನೀರು ಕೊಡುತ್ತೇವೆ. ಈ ತಿಂಗಳಲ್ಲಿ ಬಡಾವಣೆಯ ಸ್ವಚ್ಛತೆ ಮಾಡಿಸುತ್ತೇನೆ. ಹಿರಿಯ ನಾಗರಿಕರ ಸಂಘದವರು ಕೋರ್ಟ್‌ನಲ್ಲಿರುವ ಕೇಸನ್ನು ಹಿಂದಕ್ಕೆ ಪಡೆದ ತಕ್ಷಣ ಹೂಟಗಳ್ಳಿ ನಗರಸಭೆಯಿಂದ 10 ಕೋಟಿ ವೆಚ್ಚದಲ್ಲಿ ಪಾರ್ಕ್, ಒಳಚರಂಡಿ, ರಸ್ತೆ ಡಾಂಬರೀಕರಣ ಮಾಡಲಾಗುವುದು. ಈಗಾಗಲೇ PWD ಯಿಂದ ಡಬಲ್ ರೋಡ್ ಮಾಡಿಸಿದ್ದೇನೆ. ಅನ್ನಪೂರ್ಣೇಶ್ವರಿ ದೇವಸ್ಥಾನ ನಿರ್ಮಾಣಕ್ಕೆ ಸಹಕಾರ ನೀಡಿದ್ದೇನೆ. ಇನ್ನು ಒಂದು ವಾರದಲ್ಲಿ ಜಿಲ್ಲಾಧಿಕಾರಿ, ನಗರ ಸಭೆ ಆಯುಕ್ತರು, ಇಂಜಿನಿಯರ್‌ಗಳನ್ನು 4ನೇ ಹಂತಕ್ಕೆ ಕರೆಸಿ ನಿಮ್ಮೆಲ್ಲರ ಸಮ್ಮುಖದಲ್ಲಿ ಸಭೆ ಮಾಡಿ ಖಾತೆ, ಕಂದಾಯ ಆಗಬೇಕಾದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಚರ್ಚಿಸಿ ಸಮಸ್ಯೆ ಬಗೆಹರಿಸುತ್ತೇನೆ. ಮೈಸೂರನ್ನು ಬೃಹತ್ ಮಹಾನಗರ ಪಾಲಿಕೆ ಮಾಡಲು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಮನವಿ ಮಾಡಿದ್ದೇನೆ ಎಂದರು.

ಮೈಸೂರಿನ ವಿಜಯನಗರದ 4ನೇ ಹಂತದ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೆಚ್.ಎನ್.ರಾಮಕೃಷ್ಣೇಗೌಡ ಸಭೆಯಲ್ಲಿ ಮಾತನಾಡಿ, 4ನೇ ಹಂತದ ಕುಡಿಯುವ ನೀರಿನ ಸಮಸ್ಯೆ – ಕಸ ವಿಲೇವಾರಿ, ಚರಂಡಿ ವ್ಯವಸ್ಥೆ, ಕ್ರೀಡಾಂಗಣ, ರಸ್ತೆ ಡಾಬರೀಕರಣ, ಬೀದಿ ದೀಪ, ಬಸ್ ವ್ಯವಸ್ಥೆ, ಪಾರ್ಕ್ ಅಭಿವೃದ್ಧಿ, ಒಳ ಚರಂಡಿ ಸಮಸ್ಯೆ ಕುರಿತಂತೆ ಬೆಳಕು ಚೆಲ್ಲಿದರು.

ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯ ಕೆ. ವಿವೇಕಾನಂದ, ವಿಜಯ ನಗರದ 4ನೇ ಹಂತದ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ ಎಸ್.ಜಿ.ಶಿವಣ್ಣೇಗೌಡ, ಪ್ರಧಾನ ಕಾರ್ಯದರ್ಶಿ ಡಾ.ಆನಂದ್, ಖಜಾಂಚಿ ಹರೀಶ್, ಹೂಟಗಳ್ಳಿ ನಗರ ಸಭೆ ಎಇಇ ಮಧುಸೂಧನ್, ನಿರ್ದೇಶಕರುಗಳಾದ ಬೆಳವಾಡಿ ಶಿವಕುಮಾರ ಸ್ವಾಮಿ, ಬಿ.ಎಲ್.ಮಂಜುನಾಥ್, ಡಾ.ಟಿ.ರಾಜು, ಹಿರಿಯ ನಾಗರಿಕರ ಸಂಘದ ಅಧ್ಯಕ್ಷ ಚಲುವೇಗೌಡ, ರಂಗೇಗೌಡ, ಲೇಔಟ್ ಮಂಜುನಾಥ್.ಎಸ್ ಹಾಗೂ ಸಂಘದ ಪದಾಧಿಕಾರಿಗಳು ಸದಸ್ಯರುಗಳು ಉಪಸ್ಥಿತರಿದ್ದರು.

ಜಾತಿಗಣತಿ ನಡೆಸಲು ಕೇಂದ್ರ ಸರ್ಕಾರ ಈಗಾಗಲೇ ತೀರ್ಮಾನಿಸಿದೆ

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ

ಬೆಂಗಳೂರು, ಜ.12– ರಾಜ್ಯ ಸರ್ಕಾರ ಜಾತಿಗಣತಿ ಬಗ್ಗೆ ಮಾತನಾಡುತ್ತಿದೆಯಷ್ಟೆ ಆದರೆ, ಜಾತಿಗಣತಿ ನಡೆಸಲು ಕೇಂದ್ರ ಸರ್ಕಾರ ಈಗಾಗಲೇ ತೀರ್ಮಾನಿಸಿದೆ'ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ಪಕ್ಷದ ಕಚೇರಿಯಲ್ಲಿ ಸುದ್ದಿಗಾರರ ಜತೆ ಮಾತನಾಡಿದ ಅವರು, ಜಾತಿಗಣತಿ ವರದಿ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡುತ್ತಲೇ ಇರುತ್ತಾರೆ. ಆದರೆ, ಕಾಂತರಾಜ ವರದಿ ಸರ್ಕಾರದ ಕೈ ಸೇರಿ ಎಷ್ಟು ವರ್ಷವಾಯಿತು, ಜಾತಿಗಳ ಸಮಸ್ಯೆಗಳಿಗೆ ಇವರು ಪರಿಹಾರ ಕೊಟ್ಟಿದ್ದಾರೆಯೇ? ಸಿದ್ದರಾಮಯ್ಯ ಏಳು ವರ್ಷಗಳವರೆಗೆ ಮುಖ್ಯಮಂತ್ರಿ ಆಗಿದ್ದರು. ಹೀಗಿದ್ದೂ ಏನೂ ಮಾಡಿಲ್ಲ ಎಂದರು.

10 ವರ್ಷಗಳ ಹಿಂದೆ ನಡೆಸಿದ ಜಾತಿ ಗಣತಿಯ ವರದಿಯನ್ನು ಮತ್ತೆ ಮತ್ತೆ ಪರಿಶೀಲನೆಗೆ ನೀಡಲಾಗುತ್ತಿದೆ. ಆ ವರದಿ ದೋಷಪೂರಿತವಾಗಿದೆ ಅದನ್ನು ಬಿಡಿ. ರಾಜ್ಯ ಸರ್ಕಾರದಲ್ಲಿ ದುಡ್ಡೇನೂ ಬರವಿಲ್ಲ. ಗಂಜಿ ಕೇಂದ್ರಗಳಿಗಾಗಿ ಬಾಯಿಬಿಟ್ಟುಕೊಂಡು ಹಲವರು ಕಾದಿದ್ದಾರೆ. ಅವರನ್ನು ಸೇರಿಸಿಕೊಂಡು ಸಮಿತಿ ರಚಿಸಿ, ಅವರಿಂದ ಹೊಸದಾಗಿ ಗಣತಿ ಮಾಡಿಸಿ ಎಂದರು.

ಪ್ರಯಾಗ್‌ರಾಜ್‌ನಲ್ಲಿ ಇಂದಿನಿಂದ ಫೆ.26ರವರೆಗೆ ಮಹಾ ಕುಂಭಮೇಳ



ಪ್ರಯಾಗ್‌ರಾಜ್, ಜ.12– ಐತಿಹಾಸಿಕ ಕುಂಭಮೇಳಕ್ಕೆ ಉತ್ತರಪ್ರದೇಶದ ಪ್ರಯಾಗ್ ನಗರ ಸರ್ವ ರೀತಿ ಸಿದ್ಧಗೊಂಡಿದೆ. ನಾಳೆ (ಜ.13)ಯಿಂದ ಆರಂಭವಾಗಲಿರುವ ಕುಂಭಮೇಕ್ಕೆ ಕ್ಷಣಗಣನೆ ಶುರುವಾಗಿದೆ. 144 ವರ್ಷಗಳ ನಂತರ ನಡೆಯುತ್ತಿರುವ ಅಪರೂಪದ ಕುಂಭಮೇಳ ಇದಾಗಿದ್ದು ಕೋಟ್ಯಂತರ ಭಕ್ತರ ಸಮಾಗಮಕ್ಕೆ ಸಾಕ್ಷಿಯಾಗಲಿದ್ದು 7 ಹಂತದಲ್ಲಿ ಬಿಗಿ ಭದ್ರತೆ ಒದಗಿಸಲಾಗಿದೆ.

ನಾಳೆಯಿಂದ ಫೆಬ್ರವರಿ 26ರ ವರೆಗೆ ನಡೆಯಲಿರುವ ಮಹಾ ಕುಂಭಮೇಳ ಸರಿಸುಮಾರು 45 ದಿನಗಳ ಕಾಲ ಗಂಗಾ ಯಮುನಾ ಸರಸ್ವತಿ ನದಿಗಳ ಸಂಗಮದಲ್ಲಿ ನಡೆಯಲಿದ್ದು 45 ಕೋಟಿಗೂ ಅಧಿಕ ಭಕ್ತರು ಸಾಧು ಸಂತರು ರಾಜಕಾರಣಿಗಳು ಸೇರಿದಂತೆ ಸಾರ್ವಜನಿಕರು ಭಾಗಿಯಾಗುವ ನಿರೀಕ್ಷೆ ಇದೆ.

ನಾಲ್ಕು ಗ್ರಹಗಳ ಅಪರೂಪದ ಸಂಯೋಜನೆಯಾಗುತ್ತಿರುವ ಹಿನ್ನೆಲೆಯಲ್ಲಿ 144 ವರ್ಷಗಳ ಬಳಿಕ ಈ ಕುಂಭಮೇಳ ನಡೆಯುತ್ತಿದೆ. ಈ ಬಾರಿ ನಡೆಯುತ್ತಿರುವ ಕುಂಭಮೇಳದಲ್ಲಿ ಸುಮಾರು 45 ಕೋಟಿಗೂ ಅಧಿಕ ಮಂದಿ ಪುಣ್ಯ ಸ್ನಾನ ಮಾಡುವ ನಿರೀಕ್ಷೆ ಇದೆ.

ಕುಂಭಮೇಳ, ಅರ್ಧ ಕುಂಭ ಮತ್ತು ಪೂರ್ಣ ಕುಂಭಗಳಿಗೆ ಹೋಲಿಸಿದರೆ ಮಹಾ ಕುಂಭಮೇಳ ಏಕೆ ವಿಶೇಷವಾಗಿದೆ ಕುಂಭಮೇಳ ವಿಶ್ವದ ಅತಿದೊಡ್ಡ ಧಾರ್ಮಿಕ ಮತ್ತು ಸಾಂಸ್ಕೃತಿಕ ಸಭೆಯಾಗಿದ್ದು, ಇದನ್ನು ಪ್ರತಿ 12 ವರ್ಷಗಳಿಗೊಮ್ಮೆ ಭಾರತದ ನಾಲ್ಕು ಪವಿತ್ರ ಸ್ಥಳಗಳಲ್ಲಿ ಒಂದಾದ ಪ್ರಯಾಗ್‌ರಾಜ್, ಹರಿದ್ವಾರ, ಉಜ್ಜಯಿನಿ ಅಥವಾ ನಾಸಿಕ್‌ನಲ್ಲಿ ನಡೆಸಲಾಗುತ್ತದೆ. ಈ ವರ್ಷ ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಕುಂಭಮೇಳ ನಡೆಯುತ್ತಿದೆ.

ಗಂಗಾ, ಯಮುನಾ ಮತ್ತು ಪೌರಾಣಿಕ ಸರಸ್ವತಿ ನದಿಗಳ ಸಂಗಮವಾದ ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಲು ಪ್ರಪಂಚದಾದ್ಯಂತದ ಲಕ್ಷಾಂತರ ಭಕ್ತರು ಈ ಪವಿತ್ರ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗಮಿಸುತ್ತಿದ್ದಾರೆ. ಪವಿತ್ರ ನದಿಯಲ್ಲಿ ಸ್ನಾನ ಮಾಡುವುದರಿಂದ ಪಾಪಗಳು ಕಳೆದು ಮೋಕ್ಷ ಸಿಗುತ್ತದೆ ಎಂದು ನಂಬಲಾಗಿದೆ.

ಪವಿತ್ರ ನದಿಗಳು ಸಂಗಮವಾಗುವ ಪ್ರದೇಶದಲ್ಲಿ ಕುಂಭಮೇಳ ನಡೆಯುತ್ತಿವೆ. ಹರಿದ್ವಾರ, ಉತ್ತರಾಖಂಡ, ಗಂಗಾನದಿಯ ದಡದಲ್ಲಿ ಉಜ್ಜಯಿನಿ, ಮಧ್ಯಪ್ರದೇಶ, ಶಿಪ್ರಾದ ದಡದಲ್ಲಿ ಮಹಾರಾಷ್ಟ್ರ, ನಾಸಿಕ್, ಗೋದಾವರಿ ದಡದಲ್ಲಿ ಉತ್ತರಪ್ರದೇಶ, ಪ್ರಯಾಗ್‌ರಾಜ್‌ನಲ್ಲಿ, ಗಂಗಾ, ಯಮುನಾ ಮತ್ತು ಅದೃಶ್ಯ ಸರಸ್ವತಿಯ ಸಂಗಮದಲ್ಲಿ ಕುಂಭಮೇಳಗಳು ನಡೆಯಲಿದೆ. ಈ ಬಾರಿ ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಕುಂಭಮೇಳ ನಡೆಯುತ್ತಿದೆ.

12 ವರ್ಷಗಳಿಗೊಮ್ಮೆ ಪೂರ್ಣ ಕುಂಭಮೇಳ ನಡೆಯುತ್ತದೆ. ಇದು ಪ್ರಯಾಗ್‌ರಾಜ್‌ನ ಸಂಗಮದ ದಡದಲ್ಲಿ ನಡೆಯುತ್ತದೆ. ಪ್ರಯಾಗ್‌ರಾಜ್‌ನಲ್ಲಿ ನಡೆಯುವ ಕುಂಭಮೇಳ ವಿಶೇಷ ಮಹತ್ವವನ್ನು ಹೊಂದಿದೆ, ಏಕೆಂದರೆ ಗ್ರಹಗಳ ಶುಭ ಜೋಡಣೆಯ ಆಧಾರದ ಮೇಲೆ ಕುಂಭಮೇಳದ ದಿನಾಂಕವನ್ನು ನಿರ್ಧರಿಸಲಾಗುತ್ತದೆ, ಈ ಅವಧಿಯಲ್ಲಿ ಲಕ್ಷಾಂತರ ಹಿಂದೂಗಳು ಶಾಹಿ ಸ್ನಾನ ಮಾಡಲಿದ್ದಾರೆ.

ಜನವರಿ 13–ಪೌಷ ಪೂರ್ಣಿಮಾ ಸ್ನಾನ, ಜ.15ಕ್ಕೆ ಮಕರ ಸಂಕ್ರಾಂತಿ ಸ್ನಾನ, ಜ.29ಕ್ಕೆ ಮೌನಿ ಅಮಾವಾಸ್ಯೆ ಸ್ನಾನ, ಫೆ.3ಕ್ಕೆ ವಸಂತ ಪಂಚಮಿ ಸ್ನಾನ, ಫೆ,12ಕ್ಕೆ ಮಾಘಿ ಪೂರ್ಣಿಮಾ ಸ್ನಾನ, ಫೆ.26ಕ್ಕೆ ಮಹಾ ಶಿವರಾತ್ರಿ ಸ್ನಾನ ನಡೆಯಲಿದೆ.

ಬಿಗಿ ಭದ್ರತೆ: ಪ್ರಯಾಗ್‌ರಾಜ್‌ನ ತ್ರಿವೇಣಿ ಸಂಗಮದಲ್ಲಿ 45 ದಿನಗಳ ಕಾಲ ನಡೆಯಲಿರುವ ಮಹಾ ಕುಂಭಮೇಳದಲ್ಲಿ ಆಗಮಿಸುವ ಭಕ್ತಾದಿಗಳು ಸಾಧು ಸಂತರು ಸೇರಿದಂತೆ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಏಳು ಹಂತಗಳಲ್ಲಿ ಬಿಗಿ ಭದ್ರತೆ ಒದಗಿಸಲಾಗಿದೆ. ಸಾಮೂಹಿಕ ಧಾರ್ಮಿಕ ಸಭೆಯಲ್ಲಿ ಯಾವುದೇ ಅಹಿತಕರ ಘಟನೆಯನ್ನು ತಪ್ಪಿಸಲು ಉತ್ತರ ಪ್ರದೇಶ ಪೊಲೀಸರು ಏಳು ಪದರದ ಭದ್ರತಾ ಯೋಜನೆಯನ್ನು ಜಾರಿಗೆ ತರಲಿದ್ದಾರೆ. ಜೊತೆಗೆ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನ ಬಳಸಿಕೊಂಡು ಮುಖಚರ್ಯೆ ಪತ್ತೆ ಹಚ್ಚುವ ಕೆಲಸವನ್ನು ಭದ್ರತಾ ಸಿಬ್ಬಂದಿ ಮಾಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸರಿಸುಮಾರು 2,700ಕ್ಕೂ ಅಧಿಕ ಕೃತಕ ಬುದ್ಧಿಮತ್ತೆ ತಂತ್ರಜ್ಞಾನದ ಸಿಸಿಟಿವಿ ಅಳವಡಿಸಲಾಗಿದೆ.

ಮೂಲಸೌಕರ್ಯಕ್ಕೆ ಒತ್ತು: ಉತ್ತರ ಪ್ರದೇಶ ರಾಜ್ಯ ಸರ್ಕಾರ 125 ರಸ್ತೆ ಆಂಬುಲೆನ್ಸ್‌ಗಳು ಮತ್ತು ಏಳು ನದಿ ಆಂಬುಲೆನ್ಸ್ ಸೇರಿದಂತೆ ಅಗತ್ಯ ಮೂಲ ಸೌಕರ್ಯಕ್ಕೆ ಒತ್ತು ನೀಡಿದೆ. ಉತ್ತರ ಪ್ರದೇಶದ ಉಪ ಮುಖ್ಯಮಂತ್ರಿ ಬ್ರಜೇಶ್ ಪಾಠಕ್, ಮಾತನಾಡಿ, "125 ರಸ್ತೆ ಆಂಬುಲೆನ್ಸ್‌ಗಳಲ್ಲಿ 15 ಅಡ್ವಾನ್ಸ್ ಲೈಫ್ ಸಪೋರ್ಟ್ ಅಳವಡಿಸಲಾಗಿದೆ. ಹೆಚ್ಚುವರಿಯಾಗಿ, ಏರ್ ಆಂಬುಲೆನ್ಸ್‌ಗಳು ಮತ್ತು ಏಳು ನದಿ ಆಂಬುಲೆನ್ಸ್‌ಗಳನ್ನು ಸಹ ನಿಯೋಜಿಸಲಾಗಿದೆ. ಏಳು ನದಿ ಆಂಬುಲೆನ್ಸ್ ಸನ್ನದ್ಧಗೊಳಿಸಲಾಗಿದೆ. ಯಾವುದೇ ರೀತಿಯ ವ್ಯವಹರಿಸಲು ಎಲ್ಲಾ ಸಿದ್ಧತೆ ಮಾಡಲಾಗಿದೆ ಎಂದಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಹೆಂಡತಿ : ರೀ ಎಲ್ಲಾದ್ರೂ ಪಿಕ್ನಿಕ್ ಕರ್ಕೊಂಡು ಹೋಗ್ರಿ.
ಗಂಡ : ಸರಿ ಅಂತ ಹೇಳಿ ಹೆಂಡತಿಯನ್ನು ಸ್ಮಶಾನಕ್ಕೆ ಕರ್ಕೊಂಡ್ ಹೋದ
ಹೆಂಡತಿ : ನಿಮ್ಗೇನು ತಲೆ ಕೆಟ್ಟಿದ್ಯಾ, ಇಲ್ಲಿಗೆ ಕರ್ಕೊಂಡ್ ಬಂದಿದಿರಲ್ಲ...
ಗಂಡ : ಅಯ್ಯೋ ಹುಚ್ಚಿ ಜನ ಇಲ್ಲಿಗ್ ಬರ್ಬೇಕು ಅಂತ ಸಾಯ್ತಾರೆ...!

ಮೈಸೂರು ಮಿತ್ರ
ಸೋಮವಾರ, 13 ಜನವರಿ 2025
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

'ಮನುಷ್ಯನನ್ನು ಮನುಷ್ಯನಿಂದ ಬೇರ್ಪಡಿಸುವುದು
ಮೊದಲನೆಯದು ನಾಲಿಗೆ ಮತ್ತು ಎರಡನೆಯದು ಹಣ'

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಾಲು ಕಂಡಲ್ಲಿ ಬೆಕ್ಕು, ಕೂಳು ಕಂಡಲ್ಲಿ ನಾಯಿ

ನಿಮ್ಮ ಪತ್ರಗಳು

■ ತೆಲಂಗಾಣ ಮಾದರಿ ಅನುಸರಿಸಿ; ನುಡಿದಂತೆ ನಡೆಯಲಿ ರಾಜ್ಯ ಸರ್ಕಾರ

ಮಾನ್ಯರೆ,

ತೆಲಂಗಾಣದ ಮುಖ್ಯಮಂತ್ರಿ ರೇವಂತ್ ರೆಡ್ಡಿ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಒಂದು ವರ್ಷದಲ್ಲೇ 55 ಸಾವಿರಕ್ಕೂ ಹೆಚ್ಚು ಸರ್ಕಾರಿ ಹುದ್ದೆ ಭರ್ತಿ ಮಾಡಿದ್ದಾಗಿ ವರದಿಗಳು ಬಂದಿವೆ. ನಿಜಕ್ಕೂ ಇದು ಇಡೀ ದೇಶಕ್ಕೆ ಮಾದರಿ ಹಾಗೂ ಅಭೂತಪೂರ್ವ ನಡೆ. ಇದೆ ಹಾದಿಯಲ್ಲಿ ರಾಜ್ಯ ಸರ್ಕಾರ ಕೂಡ ದಿಟ್ಟ ಹೆಜ್ಜೆ ಇಡಲು ಸೂಕ್ತ ಸಮಯವಿದು.

2023ರ ರಾಜ್ಯ ವಿಧಾನಸಭಾ ಚುನಾವಣೆ ಪೂರ್ವ ಕಾಂಗ್ರೆಸ್ ಪಕ್ಷ ಪ್ರಣಾಳಿಕೆಯಲ್ಲಿ ಅಧಿಕಾರಕ್ಕೆ ಬಂದರೆ ಖಾಲಿ ಇರುವ 2.52 ಲಕ್ಷ ಸರ್ಕಾರಿ ಹುದ್ದೆಗಳನ್ನು ಭರ್ತಿ ಮಾಡುವುದಾಗಿ ಭರವಸೆ ನೀಡಿತ್ತು. ಕೆಲವೇ ತಿಂಗಳುಗಳಲ್ಲಿ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದು ಎರಡು ವರ್ಷ ಪೂರೈಸಲಿದೆ. ತಾವು ನೀಡಿದ ಆಶ್ವಾಸನೆ ಕೇವಲ ಘೋಷಣೆಯಾಗಿ ಉಳಿದಿದ್ದು, ರಾಜ್ಯಾದ್ಯಂತ ಲಕ್ಷಾಂತರ ಅಭ್ಯರ್ಥಿಗಳು ಹಗಲು ರಾತ್ರಿ ಎನ್ನದೇ ಕೆಲಸಕ್ಕಾಗಿ ಪರಿಶ್ರಮ ಪಡುತ್ತಿದ್ದಾರೆ. ಯಾವುದೇ ಹುದ್ದೆಗಳಿಗೆ ಕಳೆದ ಕೆಲವು ವರ್ಷಗಳಿಂದ ಸರಿಯಾಗಿ ಅಧಿಸೂಚನೆ ಹೊರಡಿಸದ ಕಾರಣ ನಿರುದ್ಯೋಗ ಸಮಸ್ಯೆ ತೀರಾ ಉಲ್ಬಣಗೊಳ್ಳುತ್ತಿದೆ.

ಇತ್ತ ವಯಸ್ಸು ಕೂಡ ಮೀರುತ್ತ ಅರ್ಹತೆ ಕೂಡ ಕಳೆದು ಹೋಗುವ ಆತಂಕದಲ್ಲಿ ಅಭ್ಯರ್ಥಿಗಳು ಇದ್ದಾರೆ. ಇನ್ನಾದರೂ ಸಂಬಂಧಪಟ್ಟ ಆಯೋಗ, ಪ್ರಾಧಿಕಾರಗಳು, ಕಾರ್ಯದರ್ಶಿಗಳು, ಆಯುಕ್ತರು, ಆರ್ಥಿಕ ಇಲಾಖೆ, ಮುಖ್ಯಮಂತ್ರಿಗಳು, ಗೃಹ ಹಾಗೂ ಹಣಕಾಸು ಸಚಿವರು ಇಡೀ ಸಚಿವ ಸಂಪುಟ ಒಳ ಮೀಸಲಾತಿ ವರದಿ ಬಂದ ನಂತರ ತಕ್ಷಣ ಅನುಷ್ಠಾನಕ್ಕೆ ತಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ಆದೇಶಿಸುವ ಮೂಲಕ ಖಾಲಿ ಇರುವ ಲಕ್ಷಾಂತರ ಹುದ್ದೆಗಳನ್ನು ಭರ್ತಿ ಮಾಡಿ ತಾವು ಈ ಹಿಂದೆ ನೀಡಿದ ವಾಗ್ದಾನವನ್ನು ಗೌರವದಿಂದ ಉಳಿಸಿಕೊಳ್ಳಬೇಕಿದೆ.

–ಅನಿಲ್ ಕುಮಾರ್, ನಂಜನಗೂಡು.

■ ಬಸ್ ನಿಲ್ದಾಣದಲ್ಲಿ ದ್ವಿಚಕ್ರ ವಾಹನಗಳ ಓಡಾಟ

ಮಾನ್ಯರೆ,

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಪಟ್ಟಣದಲ್ಲಿರುವ ಕೆಎಸ್ಆರ್‌ಟಿಸಿ (ಕರ್ನಾಟಕ ರಾಜ್ಯ ರಸ್ತೆ ಸಾರಿಗೆ) ಬಸ್ ನಿಲ್ದಾಣದಲ್ಲಿ ಪ್ರತಿನಿತ್ಯ ಅಂತರ ರಾಜ್ಯ ಸೇರಿ ರಾಜ್ಯದ ಅನೇಕ ನಗರಗಳಿಗೆ ಬಸ್ ಸಂಪರ್ಕವಿರುವುದರಿಂದ ಈ ನಿಲ್ದಾಣಕ್ಕೆ ದಿನ ನೂರಾರು ಬಸ್ಸುಗಳು ಓಡಾಡುತ್ತವೆ. ಜೊತೆಗೆ ಈ ಭಾಗದ ಗ್ರಾಮೀಣ ಪ್ರದೇಶದ ಜನರು ಸೇರಿದಂತೆ ಹಿರಿಯ ನಾಗರಿಕರು, ವಿದ್ಯಾರ್ಥಿಗಳು, ಮಹಿಳೆಯರು, ಗರ್ಭಿಣಿ ಯರು ನಿಲ್ದಾಣಕ್ಕೆ ಬರುತ್ತಾರೆ. ಇದೆಲ್ಲವನ್ನು ಲೆಕ್ಕಿಸದೆ ದ್ವಿಚಕ್ರ ವಾಹನಗಳ ಸವಾರರು ಹೆಲ್ಮೆಟನ್ನು ಧರಿಸದೆ ಬಸ್ ನಿಲ್ದಾಣದೊಳಗೆ ದ್ವಿಚಕ್ರ ವಾಹನಗಳನ್ನು ಚಾಲನೆ ಮಾಡುತ್ತಿದ್ದಾರೆ. ಹೀಗೆ ಹೆಚ್ಚೆಚ್ಚು ಓಡಾಡುವಾಗ ನಿಲ್ದಾಣದಲ್ಲಿ ಅಪಘಾತಗಳಾದರೆ ಯಾರು ಹೊಣೆ? ಇದನ್ನು ಕಂಡು ಕಾಣದಂತೆ ಕರ್ತವ್ಯ ನಿರ್ವಹಿಸುತ್ತಿರುವ ಗುಂಡ್ಲುಪೇಟೆಯ ಬಸ್ ನಿಲ್ದಾಣದಲ್ಲಿರುವ ಸಾರಿಗೆ ಇಲಾಖೆ ಅಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ನಿಲ್ದಾಣದ ಒಳಗಡೆ ದ್ವಿಚಕ್ರ ವಾಹನಗಳು ಓಡಾಡುವುದನ್ನು ಕಡ್ಡಾಯವಾಗಿ ನಿಷೇಧ ಮಾಡಬೇಕೆಂದು ಪ್ರಯಾಣಿಕರು ಮತ್ತು ವಿದ್ಯಾರ್ಥಿಗಳ ಪರವಾಗಿ ಮನವಿ.

–ನಾಗೇಶ್, ಮಾನಸ ಗಂಗೋತ್ರಿ, ಮೈಸೂರು

■ ತಮಿಳುನಾಡು ಸರ್ಕಾರದ ಖಂಡನಾರ್ಹ ನಡೆ

ಮಾನ್ಯರೆ,

ತಮಿಳುನಾಡಿನ ವಿಧಾನಸಭೆಯ ಅಧಿವೇಶನದ ಮೊದಲ ದಿನ ರಾಜ್ಯಪಾಲರ ಭಾಷಣಕ್ಕೂ ಮುನ್ನ ರಾಷ್ಟ್ರಗೀತೆಯ ಗಾಯನಕ್ಕೆ ಡಿಎಂಕೆ ನೇತೃತ್ವದ ರಾಜ್ಯ ಸರ್ಕಾರ ನಿರಾಕರಿಸಿರುವುದು ಸಾಕಷ್ಟು ವಿವಾದಗಳಿಗೆ ಕಾರಣವಾಗಿದೆ. ಇದನ್ನು ತೀವ್ರವಾಗಿ ವಿರೋಧಿಸಿ ಅಲ್ಲಿನ ರಾಜ್ಯಪಾಲ ಎನ್.ರವಿಯವರು ತಮ್ಮ ಸಾಂಪ್ರದಾಯಿಕ ಭಾಷಣ ಮಾಡದೇ ಸಭೆಯಿಂದ ನಿರ್ಗಮಿಸಿರುವುದರಿಂದ ಆ ರಾಜ್ಯದಲ್ಲಿ ಸಾಂವಿಧಾನಿಕ ಬಿಕ್ಕಟ್ಟು ಸೃಷ್ಟಿಯಾಗಿದೆ. ಕಳೆದ ವರ್ಷ ಕೂಡ ಅಲ್ಲಿನ ರಾಜ್ಯಪಾಲರು ತಮ್ಮ ಭಾಷಣವನ್ನು ಅರ್ಧಕ್ಕೆ ಮೊಟಕುಗೊಳಿಸಿ, ವಿಧಾನಸಭೆಯಿಂದ ಹೊರ ನಡೆದಿದ್ದರು.

ತಮಿಳುನಾಡಿನಲ್ಲಿ ರಾಜ್ಯ ಸರ್ಕಾರ ಮತ್ತು ರಾಜ್ಯಪಾಲರ ನಡುವಿನ ಬಿಕ್ಕಟ್ಟು ಈ ಪ್ರಕರಣದಿಂದ ಮತ್ತಷ್ಟು ಉಲ್ಬಣಗೊಂಡಂತಾಗಿದೆ. ಸಾಮಾನ್ಯವಾಗಿ ಎಲ್ಲಾ ಸರ್ಕಾರಿ ಸಮಾರಂಭಗಳಲ್ಲೂ ರಾಷ್ಟ್ರಗೀತೆಯನ್ನು ಹಾಡುವ ಮೂಲಕ ದೇಶದ ಐಕ್ಯತೆ, ಅಖಂಡತೆ ಮತ್ತು ಸಾರ್ವಭೌಮತ್ವಕ್ಕೆ ಗೌರವ ನೀಡಿ, ನಮ್ಮ ದೇಶದ ಭವ್ಯ ಇತಿಹಾಸ, ಸಂಸ್ಕೃತಿ ಮತ್ತು ಪರಂಪರೆಯನ್ನು ಸ್ಮರಿಸಲಾಗುತ್ತದೆ. ದೇಶದ ಎಲ್ಲಾ ರಾಜ್ಯಗಳ ವಿಧಾನಸಭೆಗಳ ಅಧಿವೇಶನಗಳಲ್ಲಿ ಈ ಸಂಪ್ರದಾಯವನ್ನು ಪಾಲಿಸಲಾಗುತ್ತಿದೆ. ಆದರೆ ತಮಿಳುನಾಡಿನ ವಿಧಾನಸಭೆಯಲ್ಲಿ ಇದಕ್ಕೆ ವ್ಯತಿರಿಕ್ತವಾಗಿ ನಡೆದುಕೊಂಡಿರುವುದು ಸಂವಿಧಾನಬಾಹಿರವಾಗಿದೆ. ಈ ಸಂವಿಧಾನ ವಿರೋಧಿ ನಡೆ ಖಂಡನಾರ್ಹವಾಗಿದ್ದು, ಸಂವಿಧಾನದ ಸಂರಕ್ಷಕರಾಗಿರುವ ಘನತೆವೆತ್ತ ರಾಷ್ಟ್ರಪತಿಗಳು ಇನ್ನು ಮುಂದಾದರೂ ಇಂತಹ ದುರ್ಘಟನೆಗಳು ಯಾವುದೇ ರಾಜ್ಯದಲ್ಲಿ ಸಂಭವಿಸದೇ ಇರುವ ಹಾಗೆ ಸೂಕ್ತ ಕ್ರಮ ಕೈಗೊಳ್ಳಬೇಕಾಗಿದೆ.

–ಕೆ.ವಿ.ವಾಸು, ವಕೀಲರು–ನೋಟರಿ, ವಿವೇಕಾನಂದನಗರ, ಮೈಸೂರು.


■ ಬಾಣಂತಿಯರ ಸಾವು ಬೆಚ್ಚಿ ಬೀಳಿಸುತ್ತಿದೆ!!

ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ಬಾಣಂತಿಯರ ಸಾವಿನ ಪ್ರಕರಣ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದೆ. ನಿಜಕ್ಕೂ ಇದು ಕರುಳು ಹಿಂಡುವ ವಿಚಾರ. ಇಂತಹ ಪ್ರಕರಣಗಳಲ್ಲಿ ಮಹಿಳೆಯರ ಆರೋಗ್ಯದಲ್ಲಿ ಏರುಪೇರಾ ಅಥವಾ ವೈದ್ಯರ ನಿರ್ಲಕ್ಷ್ಯವೂ? ನಿಖರವಾದ ಸತ್ಯಾಸತ್ಯತೆ ತಿಳಿಯದೆ ನಿಜಕ್ಕೂ ಕಣ್ಣಿಗೆ ಬಟ್ಟೆ ಕಟ್ಟಿ ಕಾಡಿಗೆ ಬಿಟ್ಟಂತಾಗಿದೆ.

ಈ ಜಗತ್ತಿಗೆ ಕಾಲಿಡುವ ಮುನ್ನವೇ ಮಮತೆಯ ಮಡಿಲು ಸೇರುವ ಕಂದಮ್ಮಗಳು ಸಾವನ್ನಪ್ಪುತ್ತಿವೆ. 21ನೇ ಶತಮಾನದಲ್ಲಿ ವಿಜ್ಞಾನ, ತಂತ್ರಜ್ಞಾನ ಪ್ರಗತಿಯಲ್ಲಿದ್ದರೂ ಬಾಣಂತಿಯರು ಹಾಗೂ ಮಕ್ಕಳ ಸಾವು ಶರವೇಗದಲ್ಲಿ ಶಿಖರ ಮುಟ್ಟುತ್ತಿದೆ. ವೈದ್ಯಕೀಯ ಸೌಲಭ್ಯ, ಶಿಕ್ಷಣವೇ ಕಾಣದ ನಾಡಿನ ನಾಟಿ ವೈದ್ಯರೆಂದೇ ಪ್ರಖ್ಯಾತಿಯಾದ ಸೂಲಗಿತ್ತಿ ನರಸಮ್ಮ ನಾಡಿಮಿಡಿತದಲ್ಲೇ ಬಾಣಂತಿಯರ ಆರೋಗ್ಯ ಪರೀಕ್ಷಿಸುತ್ತಿದ್ದರು. ಆದರೆ ಇಂದಿನ ಆಧುನಿಕ ಕಾಲದಲ್ಲಿ ಅವರ ಮುಂದೆ ವಿಜ್ಞಾನ ತಂತ್ರಜ್ಞಾನ ತಳಕೆಳಕಾಗಿದೆ. ಅಲ್ಲದೆ ಸರಿಯಾದ ವೈದ್ಯಕೀಯ ಸೌಲಭ್ಯಗಳು ಬಡವರಿಗೆ ದೊರಕದೆ ಸಾವಿಗೆ ತುತ್ತಾಗುತ್ತಿದ್ದಾರೆ. ರಾಜ್ಯದಲ್ಲಿ ಕಳೆದೊಂದು ತಿಂಗಳಿಂದ ಬಾಣಂತಿಯರ ಸಾವು ಹೆಚ್ಚಾಗುತ್ತಿದೆ. ಇನ್ನಾದರೂ ಇಂತಹ ಸಾವುಗಳಿಗೆ ಸೂಕ್ತ ರೀತಿಯಲ್ಲಿ ತನಿಖೆ ತಂಡ ನೇಮಿಸಿ ಸಾವುಗಳು ಮತ್ತೆ ಮರಳು ಕಳಿಸಿದಂತೆ ಸುಸಜ್ಜಿತ ಸೌಲಭ್ಯಕ್ಕೆ ನೀಡಬೇಕಾಗಿದೆ. –ಶಿವು, ಬಂಡಳ್ಳಿ.

ಅರವತ್ತರ ನಂತರದ ಬದುಕು.....


ಸಾಂದರ್ಭಿಕ ಚಿತ್ರ

ಇತ್ತೀಚೆಗೆ ಅರವತ್ತು ದಾಟಿದವರೆಂದರೆ ಏನೋ ಪ್ರೀತಿ ಹಾಗೂ ಅಭಿಮಾನ ಏಕೆಂದು ತಿಳಿಯದು, ಬಹುಶಃ ನಾನೂ ಕೂಡ ಆ ಹಂತ ತಲುಪಿರುವ ಕಾರಣವೂ ಇರಬಹುದು. ಇನ್ನು ನೂರರ ಗಡಿಯನ್ನು ತಲುಪಲು ಸಮೀಪ ಇರುವವರನ್ನು ಕಂಡರೆ ಪ್ರೀತಿ, ಅಭಿಮಾನದ ಜೊತೆಗೆ ಕನಿಕರವೂ ಆಗುವುದುಂಟು. ಸೃಷ್ಟಿಯಲ್ಲಿ ಅದೇನು ಚಮತ್ಕಾರ ಇದೆಯೋ ಮುಪ್ಪೆನ್ನುವುದು ವಿಜ್ಞಾನಿಗಳಿಗೂ ಸಿಗದ ಕಗ್ಗಂಟಾಗಿದೆ. ಏನೆಲ್ಲಾ ಆವಿಷ್ಕಾರಗಳು, ಸಂಶೋಧನೆಗಳು ಆಗಿವೆಯಾದರೂ ಜೀವನಚಕ್ರವನ್ನು ನಮಗಿಷ್ಟ ಆಗುವಂತೆ ಬದಲಾವಣೆ ಮಾಡಿಕೊಳ್ಳಲಾಗಿಲ್ಲ. ಬಾಲ್ಯ, ಯೌವ್ವನ ಹಾಗೂ ಮುಪ್ಪು ಇವು ಪ್ರತೀ ಜೀವಿಗೆ ಕ್ರಮವಾಗಿ ಬರುವ ಮಜಲುಗಳು. ಮೊದಲೆರಡು ಸೂಪರ್ ಓಕೆ, ಆದರೆ ಕೊನೆಯದ್ದು ಇಷ್ಟವಾಗದಿದ್ದರು ಅನಿವಾರ್ಯ ಅಕಸ್ಮಾತ್ ಬದುಕುಳಿದಿದ್ದರೆ.

ಪ್ರಬುದ್ಧ ವಯಸ್ಸಿಗೆ ಬಂದವರ ಮೇಲೇಕೆ ಕನಿಕರ ಎನ್ನುವುದಕ್ಕೆ ಕಾರಣಗಳಿವೆ. ಆ ವಯಸ್ಸಿಗೆ ತಲುಪಿ ವೃದ್ಧರೆನಿಸಿಕೊಂಡವರ ದಿನಗಳು ಉರುಳುತ್ತಿದ್ದಂತೆ ಸಾರ್ವಜನಿಕವಾಗಿ ಗೌರವ ಏರುತ್ತಲಿರುತ್ತದೆ, ತಿರಸ್ಕಾರಕ್ಕೂ ಒಳಗಾಗುವ ಸಂದರ್ಭಗಳು ಕಡಿಮೆ ಇಲ್ಲ. ವಯಸ್ಸು ದಿನದಿಂದ ದಿನಕ್ಕೆ ಶಕ್ತಿಯನ್ನು ಕುಂದಿಸುತ್ತದೆ. ಬಹಳಷ್ಟು ಕಾರ್ಯಗಳಿಗೆ ಪರಾವಲಂಬಿಗಳಾಗಿರುತ್ತಾರೆ. ಹೆಚ್ಚೆಚ್ಚು ಮತ್ತೊಬ್ಬರನ್ನು ಆಶ್ರಯಿಸಿದಂತೆ 'ಅಯ್ಯೋ ಇವನದು ಇದ್ದೇ ಇರುತ್ತದೆ' ಎನ್ನುವ ಮಾತುಗಳು ಎದುರಾಗುತ್ತವೆ. ಹಣ್ಣಣ್ಣು ಮುದುಕರಾಗಿದ್ದವರ ಮೇಲೆ ಮನೆಯವರಿಂದಲೇ ಸಣ್ಣಪುಟ್ಟದಕ್ಕೂ ನಿಂದನೆಗಳು ನಿರಂತರ. ಮನೆಯೊಳಗಿದ್ದರೂ ಹೊರಗಿನವನಂತಿರುವ ಆ ಹಿರಿಯ ಜೀವಕ್ಕೆ ಬದುಕು ಬೇಡವಾಗಿರುತ್ತದೆ.

ಪೂರ್ಣಾಯಸ್ಸು ಪಡೆದವರು ನಿಧನರಾದ ಸಮಯದ ಚಿತ್ರಣವನ್ನು ಅವಲೋಕಿಸಿ, ಅಂತಿಮ ಕಾರ್ಯದ ವಿಧಿ–ವಿಧಾನಗಳು ಸಾವದಾನವಾಗಿ ನಡೆಯುತ್ತಿರುತ್ತದೆ. ನೆರೆದಿದ್ದವರಲ್ಲಿ ದುಃಖದ ಛಾಯೆ ಸ್ವಲ್ಪವೂ ಇರುವುದಿಲ್ಲ, ಒಳಗೊಳಗೆ ದುಃಖವಿದ್ದರೂ ಯಾರೂ ಅಳುವುದಿಲ್ಲ. ನಮಗೂ ಇವರಷ್ಟೇ ಆಯಸ್ಸು ಕೊಡು ಭಗವಂತ ಎಂದು ಕೈಮುಗಿಯುತ್ತಾರೆ. ಬದುಕಿದ್ದಾಗ ಕಿರಿಕ್ ಮಾಡಿದ ಪಾರ್ಟಿಯಾದರೆ ಖುಷಿ ಖುಷಿಯಾಗಿಯೇ ಬೀಳ್ಕೊಡುಗೆ ಕೊಟ್ಟು ನೆಮ್ಮದಿಯ ಉಸಿರು ಬಿಡುತ್ತಾರೆ.

ಹಿರಿಯರೆಂದರೆ ವಯಸ್ಸಿಗೆ ತಕ್ಕಂತೆ ಅರುಳೋ.. ಮರುಳೋ.. ನೆನಪಿನ ಶಕ್ತಿ ಇರುವುದಿಲ್ಲ, ಕಿವಿಗಳು ಸ್ಪಷ್ಟವಾಗಿ ಕೇಳಿಸುವುದಿಲ್ಲ ಮಾತು ಮಾತಿಗೂ ಹಾ.. ಹಾ.... ಎನ್ನುತ್ತಿರುತ್ತಾರೆ ಹೇಳಿದ್ದನ್ನೇ ಎಷ್ಟು ಸಾರಿ ಹೇಳಬೇಕು ಈ ಮುದುಕನಿಗೆ, ಎದುರಿಗಿದ್ದವರನ್ನು ಗುರುತಿಸುವುದಕ್ಕೆ ಸಶಕ್ತವಲ್ಲದ ಕಣ್ಣುಗಳು, ತಿಂದದ್ದನ್ನು ಅಗಿದು ನುಂಗಲು ಆಗದಂತೆ ಬಾಯಲ್ಲಿ ಒಂದಷ್ಟು ಹಲ್ಲುಗಳು ಮುಕ್ತಿ ಕಂಡಿರುತ್ತವೆ. ಮನುಷ್ಯನಾಗಿದ್ದವನು ಪೂರ್ಣಾಯುಸ್ಸಿಗೆ ಮುಟ್ಟುವಷ್ಟರಲ್ಲಿ ದೇಹದಲ್ಲಿನ ಮಾಂಸವು ಕರಗಿ ಬರಿ ತೊಗಲು ಮತ್ತು ಮೂಳೆಗಳಷ್ಟೇ ಉಳಿದು ಮುಖದ ಕಳೆಯು ಮಂಗನ ರೂಪವಾಗಿರುತ್ತದೆ.

ರಾಜ್ಯವನ್ನಾಳುವ ಅರಸನಾಗಲಿ, ಕೂಲಿ ಮಾಡುವ ಕಾರ್ಮಿಕನಾಗಲಿ ಮುಪ್ಪಿನಲ್ಲಿ ಸಮಾನರೆ, ಅದೆಷ್ಟೇ ಪೌಷ್ಟಿಕ ಆಹಾರ ಸೇವಿಸಿದ್ದರೂ ಕಾಲ ಕಳೆದಂತೆ ದೇಹದಲ್ಲಿ ಆಗುವ ಬದಲಾವಣೆಯಲ್ಲಿ ಯಾವುದೇ ರಿಯಾಯಿತಿ ಇರುವುದಿಲ್ಲ.

ಇತ್ತೀಚಿನ ಕುಟುಂಬಗಳಲ್ಲಿ ಮಕ್ಕಳು ಒಂದು ಅಥವಾ ಹೆಚ್ಚೆಂದರೆ ಎರಡು ಅದಕ್ಕೂ ಮೀರಿ ಯಾರೂ ಮಕ್ಕಳನ್ನು ಪಡೆಯಲು ಸಿದ್ಧರಿಲ್ಲ, ಮಕ್ಕಳೇ ಬೇಡ ಎನ್ನುವ ಹೈಟೆಕ್ ದಂಪತಿಗಳ ಸಂಖ್ಯೆಯೂ ಕಡಿಮೆ ಏನಿಲ್ಲ. ಮಕ್ಕಳನ್ನು ಹೆರುವುದು ಮದುವೆ ಮಾಡಿಕೊಂಡರೆ ಅಲ್ಲವೇ? ಮದುವೆಯೇ ಆಗದಿದ್ದರೆ ಮಕ್ಕಳನ್ನು ಹೆರುವ ಸಮಸ್ಯೆಯೇ ಉದ್ಭವಿಸುವುದಿಲ್ಲ ಎನ್ನುವ ಮಟ್ಟಕ್ಕೆ ಬಂದಿದ್ದಾರೆ ಯುವಕರು.

ಇರುವ ಇಬ್ಬರು ಮಕ್ಕಳು, ವಿದ್ಯಾಭ್ಯಾಸದ ನಂತರ ದೂರದ ಊರುಗಳಲ್ಲಿ ನೌಕರಿಯ ಕಾರಣ ನೆಲೆಸಿರುತ್ತಾರೆ. ಇಂಥಹ ಪರಿಸ್ಥಿತಿಯಲ್ಲಿ ವೃದ್ಧರು ಊರುಗಳಲ್ಲಿ ಒಂಟಿಯಾಗಿಯೇ ಜೀವನ ನಡೆಸುತ್ತಿರುವ ಸಂಖ್ಯೆಗೆ ಮಿತಿ ಇಲ್ಲ. ಸಂತಾನ ನಿಯಂತ್ರಣಕ್ಕೂ ಹಿಂದಿನ ದಿನಗಳೇ ಸರಿ ಇತ್ತು, ಹಡೆದ ಎಂಟತ್ತು ಮಕ್ಕಳಲ್ಲಿ ಒಂದಿಬ್ಬರಾದರೂ ಅವಿದ್ಯಾವಂತರಾಗಿ ಊರಿನಲ್ಲೇ ಕೂಲಿನಾಲಿ ಮಾಡಿಕೊಂಡು ತಂದೆ–ತಾಯಿಯರನ್ನು ನೋಡಿಕೊಳ್ಳುತ್ತಿದ್ದರು.

> **"** ಮುಪ್ಪಿಗೆ ಸಿಗುವ ಗೌರವವು ಆತನಿಗಿರುವ ಅಧಿಕಾರ, ಆಸ್ತಿ ಅಂತಸ್ತಿನ ಮೇಲೆ ನಿಂತಿರುತ್ತದೆ. ಅಧಿಕಾರ ಇಲ್ಲದವರು ಮೂರು ಕಾಸಿಗೂ ಬೆಲೆ ಬಾಳುವುದಿಲ್ಲ. ಅದೇ ಸ್ಥಿತಿವಂತನಾದರೆ ಕಾಲಿಗೆ ನಮಸ್ಕರಿಸಿ ಆಶೀರ್ವಾದ ಪಡೆದು ತಲೆಯ ಮೇಲೆ ಹೊತ್ತು ಮೆರೆಯುತ್ತಾರೆ. ಒಮ್ಮೊಮ್ಮೆ ಆಸ್ತಿಯೂ ಮುದುಕರಿಗೆ ಮಾರಕವಾಗುವುದುಂಟು. ಹಿರಿಯರು ಹೇಗೆ ಬದುಕಬೇಕು ಎನ್ನುವುದಕ್ಕಿಂತ ಅವರನ್ನು ಹೇಗೆ ನೋಡಿಕೊಳ್ಳಬೇಕೆನ್ನುವ ಪ್ರಶ್ನೆಗೆ ತಿಳುವಳಿಕೆಯ ಉತ್ತರವನ್ನು ಕಲಿಯುವ ವಿದ್ಯೆಯನ್ನು ಮಕ್ಕಳಿಗೆ ಕಲಿಸಬೇಕಾಗಿದೆ.

ಮುಪ್ಪಿಗೆ ಸಿಗುವ ಗೌರವವು ಆತನಿಗಿರುವ ಅಧಿಕಾರ, ಆಸ್ತಿ ಅಂತಸ್ತಿನ ಮೇಲೆ ನಿಂತಿರುತ್ತದೆ. ಅಧಿಕಾರ ಇಲ್ಲದವರು ಮೂರು ಕಾಸಿಗೂ ಬೆಲೆ ಬಾಳುವುದಿಲ್ಲ, ಅದೇ ಸ್ಥಿತಿವಂತನಾದರೆ ಕಾಲಿಗೆ ನಮಸ್ಕರಿಸಿ ಆಶೀರ್ವಾದ ಪಡೆದು ತಲೆಯ ಮೇಲೆ ಹೊತ್ತು ಮೆರೆಯುತ್ತಾರೆ. ಒಮ್ಮೊಮ್ಮೆ ಆಸ್ತಿಯೂ ಮುದುಕರಿಗೆ ಮಾರಕವಾಗುವುದುಂಟು. ಹಿರಿಯರು ಹೇಗೆ ಬದುಕಬೇಕು ಎನ್ನುವುದಕ್ಕಿಂತ ಅವರನ್ನು ಹೇಗೆ ನೋಡಿಕೊಳ್ಳಬೇಕೆನ್ನುವ ಪ್ರಶ್ನೆಗೆ ತಿಳುವಳಿಕೆಯ ಉತ್ತರವನ್ನು ಕಲಿಯುವ ವಿದ್ಯೆಯನ್ನು ಮಕ್ಕಳಿಗೆ ಕಲಿಸಬೇಕಾಗಿದೆ. ಹರೆಯದವರಾಗಿದ್ದಾಗ ಭವಿಷ್ಯದ ಮುಪ್ಪನ್ನು ಸುಖದಿಂದ ಅಪ್ಪಿಕೊಂಡು ಆನಂದವಾಗಿರಲು ಹೇಗೆಲ್ಲಾ ಯೋಜನೆಗಳನ್ನು ರೂಪಿಸಿಕೊಳ್ಳಬೇಕು ಎನ್ನುವ ಬುದ್ಧಿವಂತಿಕೆಯನ್ನು ಹೊಂದಿರಬೇಕಾಗುತ್ತದೆ. ಹರೆಯದರಲ್ಲಿ ಮುಂದೆ ಬರಬಹುದಾದ ಕಷ್ಟಗಳನ್ನು ಅರಿಯದೆ ಉಂಡಾಡಿ ಗುಂಡನಾಗಿ ಇದ್ದುಬಿಟ್ಟು ಮುಪ್ಪಿನಲ್ಲಿ ಚಿಂತಿಸಿದರೆ ಪ್ರಯೋಜನವಿಲ್ಲ.

ವಿಶ್ವ ಆರೋಗ್ಯ ಸಂಸ್ಥೆಯು ಹಿರಿಯರ ಯೋಗಕ್ಷೇಮಕ್ಕಾಗಿ ಕೆಲಸ ಮಾಡುತ್ತಿದೆ. ಸಂಸ್ಥೆಯ ವರದಿ ಪ್ರಕಾರ 2030ರ ಹೊತ್ತಿಗೆ ವಿಶ್ವದ ಆರು ಜನರಲ್ಲಿ ಒಬ್ಬರು ಅರವತ್ತು ಅಥವಾ ಅದಕ್ಕಿಂತ ಹೆಚ್ಚಿನ ವಯಸ್ಸಿನವರಾಗಿರುತ್ತಾರೆ. ಏಕಾಂಗಿತನ ಮತ್ತು ಕುಟುಂಬದ ಪ್ರತ್ಯೇಕತೆಯ ಫಲವಾಗಿ ಮಾನಸಿಕವಾಗಿ ಕುಂದುತ್ತಾರೆ. ಹಿರಿಯ ನಾಗರಿಕರ ಸಂಖ್ಯೆಯ ಶೇ.14ರಷ್ಟು ಮಾನಸಿಕ ಅಸ್ವಸ್ಥತೆಯಿಂದ ಬಳಲುತ್ತಿದ್ದಾರೆ. 2020ರಲ್ಲಿ 100 ಕೋಟಿ ಜನರು ಹಿರಿಯ ನಾಗರಿಕರಿದ್ದರೆ, ಈ ಅಂಕಿಯು 2030ರ ಹೊತ್ತಿಗೆ 140 ಕೋಟಿಗೆ ಏರುತ್ತದೆ. 2050ರ ಹೊತ್ತಿಗೆ 210 ಕೋಟಿಗೆ ತಲುಪುವುದು.

ಇವರಲ್ಲಿ ಹೆಚ್ಚಿನವರು ಆರ್ಥಿಕವಾಗಿ ಸದೃಢವಲ್ಲದ ಕಾರಣ, ಎರಡೊತ್ತಿನ ಊಟಕ್ಕಾಗಿ ವಯಸ್ಸಿಗೆ ಅನುಗುಣವಾಗಿ ಅಂಗಡಿಗಳಲ್ಲಿ ಲೆಕ್ಕ ಬರೆಯುವುದು, ಸೆಕ್ಯೂರಿಟಿ, ವಾಚ್‌ಮನ್‌ನಂತಹ ಕೆಲಸಗಳಲ್ಲಿ ಅನ್ಯಮಾರ್ಗವಿಲ್ಲದೆ ತಮ್ಮನ್ನು ತೊಡಗಿಸಿಕೊಂಡಿರುತ್ತಾರೆ, ವಯಸ್ಸಾಗಿ ದೇಹದಲ್ಲಿ ಶಕ್ತಿ ಇಲ್ಲದಿದ್ದರೂ ದುಡಿಯಲೇಬೇಕು. ದೀರ್ಘಕಾಲಿಕ ಆರೈಕೆಯನ್ನು ಬೇಡುವ ನೋವು, ದೌರ್ಬಲ್ಯ, ಬುದ್ಧಿ ಮಾಂದ್ಯತೆ ಅಥವಾ ಇತರೆ ಆರೋಗ್ಯ ಸಮಸ್ಯೆಗಳು ಇರುತ್ತವೆ, ಅವರುಗಳ ದೇಹಕ್ಕೆ ನೋವಿಲ್ಲದ ದಿನಗಳಿಲ್ಲ. 2019ರ ಅಂಕಿ–ಅಂಶಗಳ ಪ್ರಕಾರ ವಯಸ್ಕರು ಖಿನ್ನತೆ ಮತ್ತು ಆತಂಕಕ್ಕೆ ಒಳಗಾಗಿ ಆತ್ಮಹತ್ಯೆಯಿಂದ ಕಾಲುಭಾಗದಷ್ಟು ಸಾವುಗಳು 60 ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಜನರಲ್ಲಿ ಆಗಿವೆ ಎನ್ನುತ್ತದೆ ವರದಿಯು.

ವಯಸ್ಸು ಆದವರಲ್ಲಿ ಮಾನಸಿಕ ಆರೋಗ್ಯವು ದೈಹಿಕ ಮತ್ತು ಸಾಮಾಜಿಕ ಪರಿಸರದಿಂದ ಮಾತ್ರವಲ್ಲದೆ ಹಿಂದಿನ ಬದುಕಿನ ಅನುಭವಗಳ ಪ್ರಭಾವ ಹಾಗೂ ಒತ್ತಡಗಳಿಂದ ಬರುತ್ತದೆ. ಸಾಮಾನ್ಯವಾಗಿ ನನಗೇನಾಗಿದೆ, ಚೆನ್ನಾಗಿಯೇ ಇದ್ದೇನಲ್ಲ ಎಂಬ ಧೋರಣೆಯಿಂದ ವೈದ್ಯಕೀಯ ಪರೀಕ್ಷೆಗಳಿಗೆ ಹಾಗೂ ಸೂಕ್ತ ಚಿಕಿತ್ಸೆಗೆ ಒಳಗಾಗುವುದಿಲ್ಲ. ಮಾನಸಿಕ ಆರೋಗ್ಯಕ್ಕೆ ತುತ್ತಾಗಲು ಪ್ರಮುಖವಾಗಿ ವಯೋನಿವೃತ್ತಿಯಿಂದಾಗಿ ಅಧಿಕಾರ ಇಲ್ಲದಿರುವುದು, ಆದಾಯದಲ್ಲಿ ಗಣನೀಯವಾಗಿ ಕುಸಿತವಾಗಿರುವುದು ಹಾಗೂ ವಯೋಮಾನ ಸಹಜವಾದ ದೇಹದ ಪರಿಸ್ಥಿತಿ.

ದೀರ್ಘಕಾಲದ ಕಾಯಿಲೆಗಳಾದ ಹೃದಯ ಕಾಯಿಲೆ, ನರಗಳ ಸಂಬಂಧಿತ ಕಾಯಿಲೆ, ಕ್ಯಾನ್ಸರ್, ಪಾರ್ಶ್ವವಾಯು, ರಕ್ತದ ಒತ್ತಡ, ಮಧುಮೇಹ ಕಾಯಿಲೆಗಳಿಗೆ ನಿತ್ಯವೂ ಆರೈಕೆಗಳು ಅವಶ್ಯಕ, ನೋಡಿಕೊಳ್ಳಲು ಇಲ್ಲದ ಹಿರಿಯರಿಗೆ ಕ್ಷಣವೂ ಯುಗವಾಗುವುದುಂಟು, ಇಂತಹವರು ಬೇರೆಯವರ ಆಶ್ರಯವಿಲ್ಲದೆ ದಿನ ಕಳೆಯಲಾಗದು, ಯಾರೂ ಇಲ್ಲದವರು ಸೌಲಭ್ಯಗಳಿರುವ ವೃದ್ಧಾಶ್ರಮಗಳಲ್ಲಿ ಮನಸ್ಸಿಲ್ಲದೆ ಕೊನೆಗಾಲದ ಬದುಕನ್ನು ನಡೆಸಬೇಕಾಗುವ ದುಸ್ಥಿತಿ ಆಗಿರುತ್ತದೆ.

ಕುಟುಂಬದಲ್ಲಿ ಹಿರಿಯರನ್ನು ಮಕ್ಕಳಂತೆ ನೋಡಿಕೊಳ್ಳಬೇಕಾಗುತ್ತದೆ. ಮಾತುಮಾತಿಗೂ ಕೋಪ ತೋರುತ್ತಾರೆಯಾದರೂ ಅದಕ್ಕೆ ಮನ್ನಣೆ ಕೊಡಬಾರದು. ವಯಸ್ಸಿನಲ್ಲಿ ಹುಲಿಯಂತೆ ದರ್ಪದಲ್ಲಿ ಜೀವನ ಸವೆಸಿದವರು ಮುಪ್ಪಿನಲ್ಲಿ ತೂಕಡಿಸುವ ರೋಗದ ಕೋಳಿಯಂತಾಗಿ ಬಿಡುತ್ತಾರೆ. ಪ್ರಾಣಿಪಕ್ಷಿಗಳು ಮುಪ್ಪಿನಲ್ಲೂ ಸ್ವಾವಲಂಬಿಗಳು ಆದರೆ ಮನುಷ್ಯರು ಹಾಗೆ ಇರಲಾಗದು, ನಿತ್ಯಕರ್ಮಕ್ಕೆ ಹೋಗುವಾಗಲೂ ಒಬ್ಬರ ಆಶ್ರಯ ಬೇಕಾಗಿದೆ. ಒಟ್ಟಿನಲ್ಲಿ ಮನುಷ್ಯ ರಾಜನಾಗಿದ್ದರೂ ಮುಪ್ಪಿನಲ್ಲಿ ಆಳಿನಂತೆ ಜೀವನ ನಡೆಸಬೇಕಾಗುತ್ತದೆ.

ಎಲ್ಲಾ ಸಮಸ್ಯೆಗಳಿಗೂ ಹೋರಾಡಲು ಸಂಘಗಳುಂಟು ಆದರೆ ಮುದುಕರ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಲು ಸಂಘಟನೆಗಳಿಲ್ಲ. ಸಮಾಜದಲ್ಲಿ ರೈತ ಮತ್ತು ವೃದ್ಧರ ಸಮಸ್ಯೆಗಳು ಈ ಯುಗದಲ್ಲಿ ಬಗೆಹರಿಯುವುದಿಲ್ಲ. ಮುಪ್ಪು ಮುಪ್ಪೆಂದು ತೀರಾ ಅಲ್ಲಗಳೆಯದಿರಿ. ಇಳಿವಯಸ್ಸಿನಲ್ಲೂ ಮದುವೆ ಮಾಡಿಕೊಂಡವರಿದ್ದಾರೆ. ಅವರಿಗೂ ಮಕ್ಕಳಾಗಿವೆ. ತಾಕತ್ತು ಹಾಗೂ ಸಾಧನೆಯಲ್ಲಿ ಗಿನ್ನಿಸ್ ಬುಕ್‌ಗೂ ಸೇರಿದ್ದಾರೆ. 70 ವರ್ಷಕ್ಕಿಂತಲೂ ಹೆಚ್ಚು ವಯಸ್ಸಾಗಿದ್ದರೂ ಯುವಕರನ್ನು ನಾಚಿಸುವಂತೆ ವಾರಕ್ಕೆ 70 ಗಂಟೆಯಿಂದ 100 ಗಂಟೆಯವರೆಗೆ ವಿರಮಿಸದೆ ದುಡಿಯುವ ಉದ್ಯಮಿ ಎನ್.ಆರ್.ನಾರಾಯಣಮೂರ್ತಿ ಹಾಗೂ ಪ್ರಧಾನಿಗಳು ಇದ್ದಾರಲ್ಲ. ಮನಸ್ಸು ಮತ್ತು ಏಕಾಗ್ರತೆ ಇದ್ದಲ್ಲಿ ವಯಸ್ಸಿನ ಅಂಕೆಗಳು ಲೆಕ್ಕಕ್ಕೆ ಬರುವುದೇ ಇಲ್ಲ. ಮುಪ್ಪು ಶಾಪವಾಗದ ರೀತಿ ಲವಲವಿಕೆಯಿಂದ ಇರುವಂತೆ ಹೇಗೆಲ್ಲಾ ಇರಬೇಕೋ ಹಾಗೆ ಇರಲು ಪ್ರಯತ್ನ ಹಿರಿಯದಾಗಲಿ.


ಮಿರ್ಲೆ ಚಂದ್ರಶೇಖರ
ಮೊ: 9916129654

2025ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ



ಮೈಸೂರಿನ ನಜರ್‌ಬಾದ್‌ನಲ್ಲಿರುವ ವೈದ್ಯರ ಭವನದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳ ಸಂಘದ 2025ನೇ ವರ್ಷದ ಕ್ಯಾಲೆಂಡರ್ ಅನ್ನು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕುಮಾರಸ್ವಾಮಿ ಬಿಡುಗಡೆ ಮಾಡಿದರು. ಚಿತ್ರದಲ್ಲಿ ಡಿಸ್ಟ್ರಿಕ್ಟ್ ಮೆಡಿಕಲ್ ಆಫೀಸರ್ ಡಾ.ಸುವರ್ಣ, ಡಿಟಿಓ ಡಾ.ಜಯಂತ್, ಡಿಎಲ್‌ಓ ಡಾ.ಬೃಂದಾ, ಸಂಘದ ಅಧ್ಯಕ್ಷ ಚಿಕ್ಕಣ್ಣ, ಆಲ್ ಇಂಡಿಯಾ ಮೆಡಿಕಲ್ ಲ್ಯಾಬ್ ಟೆಕ್ನಾಲಜಿಸ್ಟ್ ಅಸೋಸಿಯೇಷನ್ ಅಧ್ಯಕ್ಷ ಧನಂಜಯ್, ಕಾರ್ಯದರ್ಶಿ ಶಿವಶಂಕರ್, ಪುಟ್ಟರಾಜು, ಚೆಲುವರಾಜು, ಗಿರೀಶ್ ಇನ್ನಿತರನ್ನು ಕಾಣಬಹುದು.

ಫೆಲೋಶಿಪ್‌ಗೆ ಅರ್ಜಿ ಆಹ್ವಾನ

ಮೈಸೂರು: 2024–25ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ), ಹಾಗೂ 3(ಬಿ)ಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ಜ.20ರೊಳಗೆ ಅರ್ಜಿ ಸಲ್ಲಿಸಬೇಕು. ಆಸಕ್ತರು https://bcwd.karnataka.gov.in ನಲ್ಲಿ ಮಾಹಿತಿ ಪಡೆಯಬಹುದು. ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿದ್ದು, ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ), ಹಾಗೂ 3(ಬಿ)ಗೆ ಸೇರಿರಬೇಕು. ಪ್ರವರ್ಗI, ರೂ.4.50 ಲಕ್ಷ 2(ಎ), 3(ಎ) ಹಾಗೂ 3(ಬಿ) ರೂ.3.50ಲಕ್ಷ ವಾರ್ಷಿಕ ಆದಾಯ ಮಿತಿ ಹೊಂದಿರಬೇಕು. ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದಿರಬೇಕು. ಅಭ್ಯರ್ಥಿಗಳು ಪೂರ್ಣಾವಧಿ ಪಿಎಚ್.ಡಿ ಅಧ್ಯಯನಕ್ಕಾಗಿ ಮಾಡಿಸುವ ನೋಂದಣಿ ದಿನಾಂಕವು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಯಿಂದ ನೀಡುವ ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಹಿಂದಿನ ಎರಡು ವರ್ಷದೊಳಗಿದ್ದು, ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಾಲಿನಿಂದ ಪ್ರಥಮ ವರ್ಷದ ಪಿಹೆಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು. ಮಾಹಿತಿಗೆ ದೂ.ಸಂಖ್ಯೆ:8050770004 ನ್ನು ಸಂಪರ್ಕಿಸಬಹುದು.

ಮೈಸೂರಲ್ಲಿ ಎರಡು ರೈಲು ಕೋಚ್ ರೆಸ್ಟೋರೆಂಟ್

ಮೈಸೂರು ಮತ್ತು ಚಾಮರಾಜಪುರಂ ರೈಲ್ವೆ ನಿಲ್ದಾಣದಲ್ಲಿ ಸ್ಥಾಪನೆ; ಜ.20ರಿಂದ ಹರಾಜು ಪ್ರಕ್ರಿಯೆ ಆರಂಭ

ಮೈಸೂರು, ಜ.12 (ಜಿಎ)–ನೈಋತ್ಯ ರೈಲ್ವೆಯ ಮೈಸೂರು ವಿಭಾಗವು ಮೈಸೂರಿನ ಕೇಂದ್ರ ರೈಲ್ವೆ ನಿಲ್ದಾಣ ಮತ್ತು ಚಾಮರಾಜಪುರಂ ರೈಲು ನಿಲ್ದಾಣಗಳಲ್ಲಿ 'ರೈಲು ಕೋಚ್ ರೆಸ್ಟೋರೆಂಟ್'ಗಳ ಸ್ಥಾಪನೆಗೆ ನಿರ್ಧರಿಸಿದ್ದು, ಜನವರಿ 20ರಿಂದ ಇ–ಹರಾಜು ಪ್ರಕ್ರಿಯೆ ಆರಂಭಿಸಲಿದೆ.

ಮೈಸೂರು ಮತ್ತು ಚಾಮರಾಜಪುರಂ ರೈಲು ನಿಲ್ದಾಣಗಳಲ್ಲಿ ರೈಲು ಕೋಚ್ ರೆಸ್ಟೋರೆಂಟ್‌ಗಳನ್ನು ಗುತ್ತಿಗೆ ಆಧಾರದಲ್ಲಿ ನೀಡಲು ಮುಂದಾಗಿದ್ದು, ನಿಷ್ಕ್ರಿಯಗೊಂಡ ರೈಲ್ವೆ ಕೋಚ್‌ಗಳಿಂದ ಅಭಿವೃದ್ಧಿಪಡಿಸಲಾಗುವ ಈ ವಿಶಿಷ್ಟವಾದ ಉಪಾಹಾರ ಸ್ಥಳಗಳು, ಪ್ರಯಾಣಿಕರು ಮತ್ತು ಸಂದರ್ಶಕರಿಗೆ ಪೂರ್ವ ಕಾಲದ ಮೋಡಿ ಮತ್ತು ಆಧುನಿಕ ಸೌಕರ್ಯಗಳ ಸಂಯೋಜನೆಯಲ್ಲಿ ವಿಶಿಷ್ಟ ಮತ್ತು ಗತಕಾಲದ 'ಆಹಾರದ ಸವಿ'ಯ ಅನುಭವವನ್ನು ಒದಗಿಸುತ್ತವೆ.

ಈ ಹಿಂದೆ ಮೈಸೂರಿನ ಒಂಟಿಕೊಪ್ಪಲು ಜಂಕ್ಷನ್‌ನಲ್ಲಿರುವ ವಿವೇಕಾನಂದ ರೈಲ್ವೇ ಉದ್ಯಾನವನದಲ್ಲಿ ಈ ಮಾದರಿಯ ರೆಸ್ಟೋರೆಂಟ್ ನಿರ್ಮಿಸಲು ಚಿಂತಿಸಿ, ರೈಲ್ವೇ ಹಳಿಗಳನ್ನು ತಂದು ಇರಿಸಲಾಗಿತ್ತು. ಆದರೆ, ಯಾದವಗಿರಿ ನಿವಾಸಿಗಳು ಮತ್ತು ಕೆಲವು ಸಂಘ–ಸಂಸ್ಥೆಗಳ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಮೈಸೂರು ಮತ್ತು ಚಾಮರಾಜಪುರಂ ರೈಲು ನಿಲ್ದಾಣಗಳಲ್ಲಿ ರೈಲು ಕೋಚ್ ರೆಸ್ಟೋರೆಂಟ್‌ಗಳನ್ನು ಮಾಡಲು ನಿರ್ಧರಿಸಿದೆ.





ಮೈಸೂರಿನ ಕೇಂದ್ರ ರೈಲ್ವೆ ನಿಲ್ದಾಣದಲ್ಲಿರುವ ರೈಲ್ವೇ ಸಂಗ್ರಾಹಲಯದ ಆವರಣದಲ್ಲಿರುವ ರೆಸ್ಟೋರೆಂಟ್‌ನ ಸಂಗ್ರಹ ಚಿತ್ರ

> **"** ಒಂಟಿಕೊಪ್ಪಲಿನ ವಿವೇಕಾನಂದ ರೈಲ್ವೇ ಉದ್ಯಾನವನದಲ್ಲಿ ರೆಸ್ಟೋರೆಂಟ್ ನಿರ್ಮಿಸಲು ಎಲ್ಲಾ ರೀತಿ ಸಿದ್ಧತೆ ಮಾಡಿಕೊಂಡು ಟೆಂಡರ್ ಪ್ರಕ್ರಿಯೆ ಆರಂಭಿಸಲಾಗಿತ್ತು. ಆದರೆ, ಟೆಂಡರ್‌ನಲ್ಲಿ ಯಾರೂ ಭಾಗವಹಿಸಲಿಲ್ಲ. ಈ ಹಿನ್ನೆಲೆಯಲ್ಲಿ ಅದನ್ನು ಮೊಟಕುಗೊಳಿಸಲಾಗಿದೆ. ಮುಂದಿನ ದಿನಗಳಲ್ಲಿ ಅಲ್ಲಿಯೂ ರೆಸ್ಟೋರೆಂಟ್ ಮಾಡುವ ಚಿಂತನೆ ಇದೆ.
> –ಗಿರೀಶ ಧರ್ಮರಾಜ ಕಲಗೊಂಡ,
> ನೈಋತ್ಯ ರೈಲ್ವೆ ಮೈಸೂರು ವಿಭಾಗದ ವಾಣಿಜ್ಯ ವ್ಯವಸ್ಥಾಪಕರು, ಸಾರ್ವಜನಿಕ ಸಂಪರ್ಕಾಧಿಕಾರಿ

ಬೆಂಗಳೂರಿನಲ್ಲಿ ಎರಡು ಸ್ಥಳದಲ್ಲಿ ಹಾಗೂ ಇತ್ತೀಚೆಗೆ ಹುಬ್ಬಳ್ಳಿಯ ರೈಲ್ವೇ ನಿಲ್ದಾಣದಲ್ಲಿ ರೈಲು ರೆಸ್ಟೋರೆಂಟ್‌ಗಳನ್ನು ನಿರ್ಮಿಸಿದ್ದು, ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಮೈಸೂರಿನ ಕೇಂದ್ರ ರೈಲ್ವೇ ನಿಲ್ದಾಣಕ್ಕೆ ನಿತ್ಯವೂ 55 ಸಾವಿರಕ್ಕೂ ಅಧಿಕ ಜನರು ಭೇಟಿ ನೀಡುವ ಹಿನ್ನೆಲೆಯಲ್ಲಿ ಮೈಸೂರಿಗೆ ಬರುವ ಪ್ರವಾಸಿಗರಿಗೆ ಆಕರ್ಷಣೀಯವಾಗಲಿದೆ ಎಂಬ ದೃಷ್ಟಿಯಿಂದ ರೆಸ್ಟೋರೆಂಟ್ ತೆರೆಯಲು ಮುಂದಾಗಿದ್ದಾರೆ.

ನಿಲ್ದಾಣದ ಆವರಣದಲ್ಲಿ ನೆಲೆಗೊಂಡು ಕಾರ್ಯನಿರ್ವಹಿಸುವ ಈ ರೆಸ್ಟೋರೆಂಟ್‌ಗಳು ಪ್ರಯಾಣಿಕರ ಅಗತ್ಯಗಳನ್ನು ಪೂರೈಸುತ್ತವೆ ಮತ್ತು ಅವರ ಒಟ್ಟಾರೆ ಪ್ರಯಾಣದ ಆಹ್ಲಾದಕರ ಅನುಭವವನ್ನು ಹೆಚ್ಚಿಸುತ್ತವೆ. ಜೊತೆಯಲ್ಲಿ ಈ ಉಪಕ್ರಮವು, ಹಳೆಯ ಕೋಚ್‌ಗಳನ್ನು ಮರುಬಳಕೆ ಮಾಡುವ ಮೂಲಕ ಪ್ರಾಕೃತಿಕ ಸ್ಥಿರತೆಯೆಡೆಗೆ ನೈಋತ್ಯ ರೈಲ್ವೆಗೆ ಇರುವ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಹಾಗೂ ಪ್ರಯಾಣಿಕರ ಸೌಕರ್ಯ ಹೆಚ್ಚಿಸಲು ಮತ್ತು ಪರಿಸರ ಉಳಿಸುವ ಜವಾಬ್ದಾರಿ ಎರಡಕ್ಕೂ ಕೊಡುಗೆ ನೀಡಲು ಚಿಂತಿಸಿದೆ. ಈ ಸ್ಥಳಗಳನ್ನು ಗುತ್ತಿಗೆ ನೀಡಲು, ಮೈಸೂರು ವಿಭಾಗವು ಇ–ಹರಾಜನ್ನು ನಡೆಸುತ್ತಿದೆ. ಇ–ಹರಾಜು ಜ.20ರಂದು ಮಧ್ಯಾಹ್ನ 12 ಗಂಟೆಗೆ www.ireps.gov.in ವೆಬ್‌ಸೈಟ್‌ನ ಐ.ಆರ್.ಇ.ಪಿ.ಎಸ್. (IREPS) ಪೋರ್ಟಲ್ ಮೂಲಕ ನಿಗದಿಪಡಿಸಲಾಗಿದೆ ಐಆರ್‌ಇಪಿಎಸ್. ಪೋರ್ಟಲ್‌ನಲ್ಲಿ ನೋಂದಾಯಿಸಿರುವ ಅರ್ಹ ಗುತ್ತಿಗೆದಾರರನ್ನು ಬಿಡ್ಡಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ಆಹ್ವಾನಿಸಲಾಗಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ
ಸೋಮವಾರ 13 ಜನವರಿ 2025

ಸಾಧಕರಿಗೆ ಭೂಮಿಗಿರಿ ನಾರಾಯಣಪ್ಪ ಪ್ರಶಸ್ತಿ



ಮೈಸೂರು, ಜ. 12–ಭೂಮಿಗಿರಿ ನಾರಾಯಣಪ್ಪ ಪ್ರತಿಷ್ಠಾನದ ಪ್ರಶಸ್ತಿಯನ್ನು ನಾಲ್ವರು ಸಾಧಕರಿಗೆ ಜ.14 ರಂದು ಬೆಳಗ್ಗೆ 10.30ಕ್ಕೆ ವಿಜಯನಗರ ಕನ್ನಡ ಸಾಹಿತ್ಯ ಭವನದಲ್ಲಿ ಪ್ರದಾನ ಮಾಡಲಾಗುವುದು ಎಂದು ಅಧ್ಯಕ್ಷ ಎನ್.ಬೆಟ್ಟೇಗೌಡ ತಿಳಿಸಿದ್ದಾರೆ.

ಇತಿಹಾಸಕಾರ ಡಾ.ತಲಕಾಡು ಚಿಕ್ಕರಂಗೇಗೌಡ, ಅಂತಾರಾಷ್ಟ್ರೀಯ ಅಥ್ಲೀಟ್ ಎಂ.ಯೋಗೇಂದ್ರ, ಜೂನಿಯರ್ ವಿಷ್ಣುವರ್ಧನ್ ಅಪೇಕ್ಷಾ ಮಂಜುನಾಥ್, ಚಲನಚಿತ್ರ ನಟಿ ರಿಶಾಗೌಡ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಕಾರ್ಯಕ್ರಮ ಉದ್ಘಾಟಿಸುವರು. ಅಲಯನ್ಸ್ ಅಂತಾರಾಷ್ಟ್ರೀಯ ನಿರ್ದೇಶಕ ನಾಗರಾಜ ವಿ.ಬೈರಿ ಅಧ್ಯಕ್ಷತೆ ವಹಿಸುವರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಪ್ರಶಸ್ತಿ ಪ್ರದಾನ ಮಾಡುವರು. ಹಿರಿಯ ಸಾಹಿತಿ ಡಾ.ಸಿಪಿಕೆಯವರು ಕ್ಯಾಲೆಂಡರ್ ಬಿಡುಗಡೆ ಮಾಡುವರು. ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ರಾಜಶೇಖರ್ ಮೆಡಿಕಲ್ ಫೌಂಡೇಷನ್ ಅಧ್ಯಕ್ಷ ಡಾ.ಎಚ್.ಬಿ.ರಾಜಶೇಖರ್, ಸಾಹಿತ್ಯ ಲೋಕ ಅಧ್ಯಕ್ಷ ಡಾ.ವೈ.ಡಿ.ರಾಜಣ್ಣ ಮುಖ್ಯ ಅತಿಥಿಗಳಾಗಿರುವರು. ಮೈವಿವಿ ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ. ನಿಂಗರಾಜ್‌ಗೌಡ ಮಾತನಾಡುವರು. ನಂತರ ಗಾನ–ನಂದನ ತಂಡದ ಡಾ.ವೈ.ಡಿ.ರಾಜಣ್ಣ, ಎನ್.ಬೆಟ್ಟೇಗೌಡ, ಡಾ.ಬಿ.ಎನ್ ರವೀಶ್, ಡಾ.ಎ.ಎಸ್.ಪೂರ್ಣಿಮಾ, ಶ್ರೀಲತಾ ಮನೋಹರ್, ಸಿ.ಎಸ್.ವಾಣಿ, ಇಂದ್ರಾಣಿ ಅನಂತರಾಮ್, ಅಬ್ದುಲ್ ಖಾಯಮ್ ಗಾಯನ ಪ್ರಸ್ತುತಪಡಿಸುವರು.

2025ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ




ಮೈಸೂರಿನ ವೀರನಗೆರೆಯ ನಾಯಕರ ಸಂಘದ ವತಿಯಿಂದ ಹೊರತರಲಾಗಿರುವ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಶ್ರೀನಿವಾಸಮೂರ್ತಿ, ನರೇಂದ್ರ ಕುಮಾರ್, ಎಂ.ಸ್ವಾಮಿ, ಆರ್ ಶ್ರೀನಿವಾಸ, ದೇವಣ್ಣ, ಎಂ.ಸುಬ್ಬಣ್ಣ, ಆರ್.ಸುರೇಶ್, ಆರ್.ಸಂಜೀವಮೂರ್ತಿ, ವಿ.ಭಾಸ್ಕರ, ಹೇಮರಾಜ್, ತನುಜ್‌ಕುಮಾರ್, ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ ಮತ್ತಿತರರು ಇದ್ದಾರೆ.

ನೂತನ ಎಎಸ್ಪಿಗೆ ಅಭಿನಂದನೆ



ಮೈಸೂರು ಜಿಲ್ಲಾ ಉಪ ಪೊಲೀಸ್ ವರಿಷ್ಠಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿದ ಸಿ.ಮಲ್ಲಿಕ್ ಅವರನ್ನು ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ವತಿಯಿಂದ ಅಭಿನಂದಿಸಲಾಯಿತು. ಈ ವೇಳೆ ಸಮಿತಿ ರಾಜ್ಯಾಧ್ಯಕ್ಷ ಎಸ್.ಭಾಸ್ಕರ್, ವಕೀಲರಾದ ತಿಮ್ಮಯ್ಯ, ಎ.ಆರ್.ಕಾಂತರಾಜ್, ಪ್ರೇಮ್, ಮುಖಂಡರಾದ ಸದಾನಂದ, ಎಲ್.ರವಿಕುಮಾರ್ ಶುಭ ಕೋರಿದರು.

2025ರ ದಿನದರ್ಶಿಕೆ ಬಿಡುಗಡೆ



ಮೈಸೂರಿನ ಎಸ್ ಪ್ರಕಾಶ್ ಪ್ರಿಯದರ್ಶನ್ ಸ್ನೇಹ ಬಳಗದ 2025ರ ದಿನದರ್ಶಿಕೆಯನ್ನು ಹಿರಿಯ ಸಮಾಜ ಸೇವಕ ಕೆ.ರಘುರಾಮ ವಾಜಪೇಯಿ, ನಗರಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮ್ ಪ್ರಸಾದ್, ಡಾ.ಪ್ರೇಮಕುಮಾರಿ, ಮೈಸೂರು ನಗರ ಜೆ.ಡಿ.ಎಸ್. ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ನಿರೂಪಕ ಅಜಯ್ ಶಾಸ್ತ್ರಿ, ವಕೀಲ ಸಿ.ಜೆ.ರಾಘವೇಂದ್ರ, ಸುಚಿಂದ್ರ, ಮಿರ್ಲೆ ಪಣೀಶ್, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೋಮದೇವ್, ನಿಲಯಪಾಲಕಿ ರೇವತಿ, ವೀರಭದ್ರಸ್ವಾಮಿ, ಮಹದೇವ್, ಶ್ರೀಧರ್, ಮಹೇಶ್, ರಾಜೇಶ್‌ಕುಮಾರ್, ನವನೀತ್‌ಕುಮಾರ್, ಜಯಮ್ಮ, ಎಸ್.ಪಿ.ಅಕ್ಷಯ್ ಪ್ರಿಯದರ್ಶನ್, ಹರ್ಷಿತ್ ಎಸ್.ನಾಗೇಶ್ ಇನ್ನಿತರರು ಬಿಡುಗಡೆ ಮಾಡಿದರು.

ಜುಲೂಸ್ ಚಿಸ್ತಿಯಾ ಮೆರವಣಿಗೆ



ಮೈಸೂರಿನ ಲಷ್ಕರ್ ಮೊಹಲ್ಲಾದ ಸರ್ಕಾರ್ ಮೆಹಬೂಬ್ ಸುಭಾನಿ ಫೌಂಡೇಷನ್ ವತಿಯಿಂದ ವೈರಸ್ ನಿವಾರಣೆಗಾಗಿ ಜುಲೂಸ್ ಚಿಸ್ತಿಯಾ ಮೆರವಣಿಗೆ ನಡೆಯಿತು.

ಮೈಸೂರು,ಜ.12–ಮೈಸೂರಿನ ಲಷ್ಕರ್ ಮೊಹಲ್ಲಾದ ಸರ್ಕಾರ್ ಮೆಹಬೂಬ್ ಸುಭಾನಿ ಫೌಂಡೇಷನ್ ವತಿಯಿಂದ ವೈರಸ್ ನಿವಾರಣೆಗಾಗಿ ಜುಲೂಸ್ ಚಿಸ್ತಿಯಾ ಮೆರವಣಿಗೆ ನಡೆಯಿತು.

ಈ ವೇಳೆ ಹಜ಼ರತ್ ಮೌಲಾನಾ ಮುಫ್ತಿ ಶಂಶುಲ್ ಹುದಾ ಸಮದಿ ಚಿಸ್ತಿ, ಮುಖ್ಯ ಖಾಜ಼ಿ, ಇದಾರಾ ಷರಿಯಾ ಮಸೀದಿ ಆಜ಼ಮ್ ಅವರ ಅಧ್ಯಕ್ಷತೆಯಲ್ಲಿ; ಉಲ್ಮಾ ಅಹಲೆ ಸುನ್ನತೋ ಜಮಾತ್, ಹಜ಼ರತ್ ಮೌಲಾನಾ ಜಾವೀದ್ ಹುಸೇನ್ ಜಮಾಲಿ ಸಾಹೆಬ್, ಇಮಾಮ್, ಮಸೀದಿ ಆಜ಼ಮ್; ಹಾಫಿಜ಼್ ಅಮಾನುಲ್ಲಾ ವಾರ್ಸಿ ಸಾಹೆಬ್; ಹಜ಼ರತ್ ಆಜ಼ಮ್ ಸಾಬ್; ಹಾಫಿಜ಼್ ನಾಸಿರ್ ಖಾನ್, ದಾವತ್ ಇಸ್ಲಾಮಿ ಹಿಂದ್; ಹಾಫಿಜ಼್ ಕಲೀಮ್ ರಜ಼ಾ ಅವರ ಆಶ್ರಯದಲ್ಲಿ, ಅನೇಕ ಅರೇಬಿಕ್ ಮದ್ರೀಸ್, ಸಿಬ್ಬಂದಿ, ವಿದ್ಯಾರ್ಥಿಗಳು, ಭಕ್ತಾದಿಗಳು ಧ್ವಜ ಮತ್ತು ಬ್ಯಾನರ್‌ಗಳನ್ನು ಹಿಡಿದು, ಪೊಲೀಸ್ ಬಂದೋಬಸ್ತ್‌ನೊಂದಿಗೆ, ಟೆಂಪೋ, ಮೋಟರ್ ಬೈಕ್‌ಗಳೊಂದಿಗೆ, ಅಶೋಕ ರಸ್ತೆ, ಸಾಡೇ ರಸ್ತೆ, ಮಿಷನ್ ಆಸ್ಪತ್ರೆ ರಸ್ತೆ, ಈದ್ಗಾ ಮಸೀದಿ, ಪುಲಿಕೇಶಿ ರಸ್ತೆಗಳಲ್ಲಿ ಮೆರವಣಿಗೆ ಸಾಗಿತು. ಮುಸ್ಲಿಮರ ರುದ್ರಭೂಮಿಯ ಬಳಿ ನಿಂತು, ಅಲ್ಲಿ ಅಗಲಿದ ಆತ್ಮಗಳಿಗೆ ಭಾವನಾತ್ಮಕ ದುವಾ ಸಲ್ಲಿಸಲಾಯಿತು ಹಾಗೂ ವೈರಸ್ ನಿವಾರಣೆಗಾಗಿ ಪ್ರಾರ್ಥನೆ ಸಲ್ಲಿಸಲಾಯಿತು.

ಇದಕ್ಕೂ ಮುನ್ನ, ಸಂಚಾಲಕ ಹಫೀಜ಼ುಲ್ಲಾ ಷರೀಫ್ ಖಾದ್ರಿಯವರು ಉಲ್ಮಾಗಳಿಗೆ, ಗಣ್ಯರಾದ ಜಮೀಲ್ ಅಹಮದ್ ಅಶ್ರಫಿ, ಕಾರ್ಯದರ್ಶಿ, ತನ್‌ಜ಼ೀಮ್ ಅಹಲೆ ಸುನ್ನತ್ ಜಮಾತ್ ಟ್ರಸ್ಟ್; ಮೀನಾ ಬಜ಼ಾರ್ ಮರ್ಚೆಂಟ್ಸ್ ಅಸೋಸಿಯೇಷನ್ ಅಧ್ಯಕ್ಷ ಶ್ರೀ ಇಲಿಯಾಸ್ ಬೇಗ್, ಸಮಾಜ ಸೇವಕ ಮಿರ್ಜಾ ಜಂಷೀದ್ ಬೇಗ್ ಅಶ್ರಫಿ; ಸೈಯದ್ ಜಮೀಲ್ ಖಾದ್ರಿ, ವಹೀದ್ ಖಾನ್, ಅಹಮದ್ ಪಾಷ ಖಾದ್ರಿ ಅವರನ್ನು ಸನ್ಮಾನಿಸಲಾಯಿತು.

ವಿವೇಕಾನಂದರ ಆದರ್ಶ ಇಡೀ ಪ್ರಪಂಚಕ್ಕೆ ಸ್ಫೂರ್ತಿದಾಯಕ

ರಾಷ್ಟ್ರೀಯ ಯುವ ದಿನ ಕಾರ್ಯಕ್ರಮದಲ್ಲಿ ಶ್ರೀರಾಮಕೃಷ್ಣ ವಿದ್ಯಾಶಾಲಾ ಕರಸ್ಪಾಂಡೆಂಟ್ ಯುಕ್ತೇಶಾನಂದಜೀ ಅಭಿಮತ



ವಿಶ್ವ ಧ್ಯಾನ ದಿನ, ರಾಷ್ಟ್ರೀಯ ಯುವ ದಿನ ಹಾಗೂ ಸುವರ್ಣ ಧ್ಯಾನ ಯುವ ಮಹೋತ್ಸವ ಕಾರ್ಯಕ್ರಮದಲ್ಲಿ 'ಸುವರ್ಣ ಕರ್ನಾಟಕ ಆಯುಷ್ 4ಯು ಕನ್ನಡ ವೈಜ್ಞಾನಿಕ ಸಂಚಿಕೆ'ಯನ್ನು ಮೈಸೂರಿನ ಅರ್ಕಧಾಮ ಸಂಸ್ಥಾಪಕರಾದ ಶ್ರೀ ಶ್ರೀನಿವಾಸ ಅರ್ಕ ಗುರೂಜಿ ಬಿಡುಗಡೆಗೊಳಿಸಿದರು.

ಮೈಸೂರು, ಜ.12(ಎಸ್‌ಬಿಎನ್)– ತಮ್ಮ ಮಾತಿನ ವಾಗ್ಝರಿ ಮೂಲಕ ಸ್ವಾಮಿ ವಿವೇಕಾನಂದರು ತಮ್ಮ 39ನೇ ವಯಸ್ಸಿಗೆ ವಿಶ್ವವಿಖ್ಯಾತಿ ಗಳಿಸಿ, ಭಾರತೀಯ ಪರಂಪರೆಯನ್ನು ವಿಶ್ವಕ್ಕೆ ಪರಿಚಯಿಸುವಲ್ಲಿ ಯಶಸ್ವಿಯಾಗಿದ್ದರು ಎಂದು ಮೈಸೂರು ಶ್ರೀ ರಾಮಕೃಷ್ಣ ವಿದ್ಯಾಶಾಲೆಯ ಕರೆಸ್ಪಾಡೆಂಟ್ ಯುಕ್ತೇಶಾನಂದ ಜೀ ಮಹಾರಾಜ್ ಅಭಿಪ್ರಾಯಪಟ್ಟರು.

ಮೈಸೂರು ಪ್ರಿನ್ಸೆಸ್ ರಸ್ತೆಯ ಆಯುಷ್ ನಿರ್ದೇಶನಾಲಯ, ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರ ಹಾಗೂ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಸಂಶೋಧನಾ ಸಂಸ್ಥೆಯ ಸಹಯೋಗದಲ್ಲಿ ನಡೆದ ವಿಶ್ವ ಧ್ಯಾನ ದಿನ, ರಾಷ್ಟ್ರೀಯ ಯುವ ದಿನ ಹಾಗೂ ಸುವರ್ಣ ಧ್ಯಾನ ಯುವ ಮಹೋತ್ಸವ ಕಾರ್ಯಕ್ರಮದಲ್ಲಿ 'ಸುವರ್ಣ ಕರ್ನಾಟಕ ಆಯುಷ್ 4ಯು ಕನ್ನಡ ವೈಜ್ಞಾನಿಕ ಸಂಚಿಕೆ'ಯನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಸ್ವಾಮಿ ವಿವೇಕಾನಂದರು 1893ರ ಸೆ.11ರಂದು ಅಮೆರಿಕಾ ಚಿಕಾಗೋ ಸರ್ವಧರ್ಮ ಸಮ್ಮೇಳನದಲ್ಲಿ ನೀಡಿದ ಉಪನ್ಯಾಸ ವಿಶ್ವದ ಗಮನ ಸೆಳೆಯಿತು. ಅಂದಿನ ಕಾರ್ಯಕ್ರಮದಲ್ಲಿ ಭಾಗವಹಿಸಲು ಸ್ವಾಮಿ ವಿವೇಕಾನಂದರಿಗೆ ಅಡ್ಡಿಯಾದ ಪ್ರಸಂಗ ಹಲವು. ಇದನ್ನು ವಿವರಿಸಲು ತಾಸುಗಟ್ಟಲೇ ಬೇಕಾಗುತ್ತದೆ. ಹಾಗಾಗಿ ಸ್ವಾಮಿ ವಿವೇಕಾನಂದರು ಭಾರತಕ್ಕೆ ಮಾತ್ರವಲ್ಲದೆ, ಪ್ರಪಂಚದ ಇತರೆ ದೇಶಗಳಿಗೂ ಅವರ ತತ್ವಗಳು, ಬದುಕಿನ ಆದರ್ಶಗಳು ಸ್ಫೂರ್ತಿ ನೀಡುತ್ತಿವೆ ಎಂದು ಹೇಳಿದರು.

ಯುವಜನತೆಗೆ ಸ್ವಾಮಿ ವಿವೇಕಾನಂದರು ಏಳಿ... ಎದ್ದೇಳಿ... ಗುರಿ ಮುಟ್ಟುವ ತನಕ ನಿಲ್ಲದಿರಿ ಎಂಬ ಘೋಷವಾಕ್ಯ ಸರ್ವ ಕಾಲಕ್ಕೂ ಯುವಕರನ್ನು ಆಕರ್ಷಿಸುವ ವಾಕ್ಯವಾಗಿದೆ. ಹೀಗೆ ಸ್ವಾಮಿ ವಿವೇಕಾನಂದರ ಅದೆಷ್ಟೋ ಸಂದೇಶಗಳು ಯುವಕರ ಬದುಕಿಗೆ ದಾರಿದೀಪವಾಗಿವೆ ಎಂದರು.

ಸ್ವಾಮಿ ವಿವೇಕಾನಂದರು ಬದುಕಿದ್ದು ಕೇವಲ 39 ವರ್ಷ. ಅವರು 1893ರ ಸೆ.11ರಂದು ಅಮೆರಿಕಾ ಚಿಕಾಗೋ ಸರ್ವಧರ್ಮ ಸಮ್ಮೇಳನದಲ್ಲಿ ತಮ್ಮ ಭಾಷಣದ ಮೂಲಕ ವಿಶ್ವದಲ್ಲಿ ಪ್ರವರ್ಧಮಾನಕ್ಕೆ ಬಂದರು. ಅಂದು ಅವರಿಗೆ ಕೇವಲ 30 ವರ್ಷ. ಅಂದಿನಿಂದ ಬರೀ 9 ವರ್ಷದ ಅವಧಿಯಲ್ಲಿ ವಿಶ್ವಾದ್ಯಂತ ಸಂಚರಿಸಿ, ಭಾರತದ ಆಧ್ಯಾತ್ಮ, ಪರಂಪರೆಯನ್ನು ಎಲ್ಲಾ ದೇಶದ ಜನರಿಗೆ ಮನ ಮುಟ್ಟುವಂತೆ ಪ್ರಚಾರ ಮಾಡಿದ ಕೀರ್ತಿ ವಿವೇಕಾನಂದರಿಗೆ ಸಲ್ಲುತ್ತದೆ ಎಂದರು.

> ❝ ನಮ್ಮ ಮನಸ್ಸಿನ ಏಕಾಗ್ರತೆ ಸಾಧಿಸುವುದು ಎಷ್ಟು ಕಷ್ಟ ಎಂಬುದು ಎಲ್ಲರಿಗೂ ತಿಳಿದಿರುವ ವಿಷಯ. ನಾವು ಬೆಳೆದಿರುವ ಪರಿಸರ, ವಸ್ತು, ವ್ಯಕ್ತಿ, ಅದರ ವಿವರಗಳು ಸದಾ ನಮ್ಮನ್ನು ಮುತ್ತಿ, ನಮ್ಮ ಇಂದ್ರಿಯಗಳನ್ನು ಸೆಳೆದು ಜೀವನದ ಹಾದಿಯನ್ನೇ ಏರುಪೇರು ಮಾಡುತ್ತವೆ. ಹೀಗೆ ದಾರಿತಪ್ಪುತ್ತಿರುವ ಜೀವನಕ್ಕೆ ಧ್ಯಾನ ಮತ್ತು ಯೋಗಾಭ್ಯಾಸ ಅತ್ಯವಶ್ಯಕ.
>
> –ಶ್ರೀಹರಿ, ಯೋಗ ಫೆಡರೇಶನ್

ಸಾಧನೆಯ ಉತ್ತುಂಗಕ್ಕೆ ಬೆಳೆಯಬೇಕಾದರೆ, ಸಾಧಕರ ಜೀವನ ಚರಿತ್ರೆ ತಿಳಿದುಕೊಳ್ಳಬೇಕು. ಸಮಾಜದಲ್ಲಿ ಹೆಸರು ಮತ್ತು ಕೀರ್ತಿ ಗಳಿಸಬೇಕಾದರೆ, ನಮ್ಮ ಹಾದಿ, ಗುರಿ ಸ್ಪಷ್ಟವಾಗಿರಬೇಕು ಎಂದು ಸ್ವಾಮಿ ವಿವೇಕಾನಂದರು ಸದಾ ಪ್ರತಿಪಾದಿಸುತ್ತಿದ್ದರು. ಹಾಗಾಗಿ ಯುವಕರು ತಮ್ಮ ಜೀವನದ ಗುರಿ ಮುಟ್ಟಲು ಸ್ವಾಮಿ ವಿವೇಕಾನಂದರ ತತ್ವಾದರ್ಶಗಳನ್ನು ಪಾಲಿಸಿ ಎಂದು ಸಲಹೆ ನೀಡಿದರು.

ಯೋಗ ಫೆಡರೇಶನ್‌ನ ಶ್ರೀ ಹರಿ ಮಾತನಾಡಿ, ದಿನಕ್ಕೆ ಐದರಿಂದ ಹತ್ತು ನಿಮಿಷ ಧ್ಯಾನ ಮಾಡಬೇಕು. ಈ ವೇಳೆ 24 ಗಂಟೆಗಳಲ್ಲಿ ನಾವು ಮಾಡಿದ ಎಲ್ಲಾ ಕೆಲಸದ ಕುರಿತು ಆತ್ಮದ ಮೂಲಕ ವಿಮರ್ಶೆಗೊಳಿಸಬೇಕು. ಆಗ ನಮ್ಮಲ್ಲಿನ ಋಣಾತ್ಮಕ ಭಾವನೆ ಹೋಗುತ್ತದೆ ಎಂದರಲ್ಲದೆ, 5 ನಿಮಿಷಗಳ ಪ್ರಾಯೋಗಿಕ ಧ್ಯಾನದ ಮೂಲಕ ಅದರ ಮಹತ್ವ ತಿಳಿಸಿಕೊಟ್ಟರು.

ಮೈಸೂರಿನ ಅರ್ಕಧಾಮ ಸಂಸ್ಥಾಪಕರಾದ ಶ್ರೀ ಶ್ರೀನಿವಾಸ ಅರ್ಕ ಗುರೂಜಿ ಮಾತನಾಡಿ, ಮನುಷ್ಯನ ಬದುಕಿಗೆ ಆಧ್ಯಾತ್ಮ ಪ್ರಮುಖ ಪಾತ್ರವಹಿಸುತ್ತದೆ. ಅದರಲ್ಲೂ ಧ್ಯಾನ ಮತ್ತು ಯೋಗ ಆರೋಗ್ಯಯುತ ಜೀವನ ನಡೆಸಲು ಸಹಕಾರಿಯಾಗುತ್ತವೆ ಎಂದರೆ, ಛಾಯಾದೇವಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ.ಅಂತೋಣಿ ಪೌಲ್‌ರಾಜ್ ಮಾತನಾಡಿ, ಪ್ರತಿಯೊಬ್ಬರು ಒತ್ತಡ ಮುಕ್ತ ಜೀವನ ನಡೆಸಲು ಯೋಗ ಮತ್ತು ಧ್ಯಾನದ ಅವಶ್ಯಕತೆ ಇದೆ ಎಂದರು.

ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಪ್ರಾಧ್ಯಾಪಕ ಡಾ.ಕೆ.ಎಸ್.ಸದಾನಂದ ಅಧ್ಯಕ್ಷತೆ ವಹಿಸಿದ್ದರು. ಜಿಎಎಂಸಿ ಪ್ರಾಂಶುಪಾಲ ಡಾ.ರಾಧಾಕೃಷ್ಣ ರಾಮರಾವ್, ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ.ಲಕ್ಷ್ಮಿನಾರಾಯಣ ಶೆಣೈ, ಜಿಎಸ್‌ಸಿವೈಎಂಸಿ ಪ್ರಾಂಶುಪಾಲ ಡಾ.ಆರ್.ಸಿ.ಮೈತ್ರಿ ಇತರರಿದ್ದರು.

ದೀಪಾ ಶಿಕ್ಷಣ ಸಂಸ್ಥೆ ವಾರ್ಷಿಕೋತ್ಸವ



ಮೈಸೂರಿನ ಕಲಾಮಂದಿರದಲ್ಲಿ ದೀಪಾ ಶಿಕ್ಷಣ ಸಂಸ್ಥೆ ವಾರ್ಷಿಕೋತ್ಸವ ನಡೆಯಿತು.

ಮೈಸೂರು, ಜ. 12– ಅಕ್ಷರ ವಂಚಿತ ಸಮುದಾಯಗಳಿಗೆ ಅಕ್ಷರದ ಬದುಕು ನೀಡಬೇಕು. ಹಿಂದುಳಿದ ನೆಲೆಯಲ್ಲಿ ಬಂದು ಸಾಧಿಸುವುದು ಪ್ರಗತಿಯ ದ್ಯೋತಕ. ಮಾನವೀಯ ನೆಲೆಯಲ್ಲಿ ಗಳಿಸಿದ ವಿಷಯ ಜ್ಞಾನವು ಸಾಂಸ್ಕೃತಿಕ ಮನಸ್ಸನ್ನು ಹೊಂದಿರಬೇಕು ಎಂದು ಸಾಹಿತಿಗಳೂ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಸ್.ಜಿ. ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ಮೈಸೂರಿನ ಕಲಾಮಂದಿರದಲ್ಲಿ ನಡೆದ ದೀಪಾ ಶಿಕ್ಷಣ ಸಂಸ್ಥೆ ವಾರ್ಷಿಕೋತ್ಸವ ಸಮಾರಂಭ ದೀಪಾ ಕಲಾ ಸಂಭ್ರಮದಲ್ಲಿ ಅವರು ಮಾತನಾಡಿದರು.

ಕನ್ನಡ ಚಲನಚಿತ್ರ ಅಭಿನೇತ್ರಿ ಶ್ರೀಮತಿ ಪೂಜಾ ಗಾಂಧಿ ಮಾತನಾಡಿ, ಜೀವನದಲ್ಲಿ ಯಾವುದೂ ಅಸಾಧ್ಯವಲ್ಲ ಹಾಗೇ ಸೋಲು ಹೆಚ್ಚಿನ ಛಲವನ್ನು ಕಲಿಸುತ್ತದೆ. ಇದು ಗೆಲುವಿನ ಕಡೆಗೆ ಕೊಂಡೊಯ್ದು ಬದುಕುವ ಕಲೆಯನ್ನು ತೋರಿಸುತ್ತದೆ ಎಂದರು. ಸಂಸ್ಥೆಯ ಅಧ್ಯಕ್ಷ ಎಂ. ರಾಮಪ್ಪ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಯುಎಸ್‌ಎನಲ್ಲಿ ನ್ಯೂಕ್ಲಿಯರ್ ಇಂಜಿನಿಯರ್ ಮುರಳಿಕೃಷ್, ಪತ್ರಕರ್ತ ಟಿ.ಗುರುರಾಜ್, ಉಪಾಧ್ಯಕ್ಷ ಸದಾಶಿವ ಪೂಜಾರಿ, ಕಾರ್ಯದರ್ಶಿ ಸುಂದರ್ ವಿ.ಎನ್, ನಿರ್ದೇಶಕರಾದ ಬಾಲಕೃಷ್ಣ, ಶ್ರೀಮತಿ ಡಾ. ನಿವೇದಿತಾ ಸುವರ್ಣಾ, ದೀಪಾ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಪ್ರಣೀತಾ ಎವಾರ್ಳ್, ದೀಪಾ ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಶಿಲ್ಪಾ ಜಗದೀಶ್, ದೀಪಾ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಎ.ಕೆ.ಬಾಬು ಮತ್ತಿತರರು ಉಪಸ್ಥಿತರಿದ್ದರು.

ಮಾರ್ವೆಲ್ ಪಬ್ಲಿಕ್ ಸ್ಕೂಲ್, ಪ.ಪೂ. ಕಾಲೇಜು ವಾರ್ಷಿಕೋತ್ಸವ



ಮೈಸೂರಿನ ಲಲಿತಾದ್ರಿನಗರ ವರ್ತುಲ ರಸ್ತೆಯಲ್ಲಿರುವ ಮಾರ್ವೆಲ್ ಪಬ್ಲಿಕ್ ಸ್ಕೂಲ್ ಮತ್ತು ಪದವಿಪೂರ್ವ ಕಾಲೇಜಿನ ವಾರ್ಷಿಕೋತ್ಸವವನ್ನು ವಿಧಾನ ಪರಿಷತ್ ಮಾಜಿ ಉಪ ಸಭಾಪತಿ ಮರಿತಿಬ್ಬೇಗೌಡ ಉದ್ಘಾಟಿಸಿದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸಂಸ್ಥೆಯ ಅಧ್ಯಕ್ಷ ಪ್ರೊ.ಗಿಣಿಸ್ವಾಮಿ, ಖಜಾಂಚಿ ರಾಜಣ್ಣ, ಪ್ರಾಂಶುಪಾಲೆ ವೈ.ಸಿ.ಮಾನಸ ಇದ್ದಾರೆ.

ರೈತರಿಗೆ ಸವಲತ್ತು ವಿತರಣೆ



ಇಲವಾಲ ಹೋಬಳಿ ಗುಂಗ್ರಾಲ್ ಛತ್ರದಲ್ಲಿ ಆರು ಮಂದಿ ರೈತರಿಗೆ ಉಚಿತ ಮೋಟಾರ್ ಚಾಲಿತ ಔಷಧಿ ಸಿಂಪಡಣೆ ಕ್ಯಾನ್ ವಿತರಿಸಲಾಯಿತು. ಮೈಸೂರು ಉತ್ತರ ರೋಟರಿ ಅಧ್ಯಕ್ಷ ಪ್ರಭಾಕರ್, ಶ್ರೀಧರ್, ತೋಟಗಾರಿಕೆ ಇಲಾಖೆ ತಾಲೂಕು ನಿರ್ದೇಶಕಿ ಮಮತಾ, ಸಹಾಯಕ ಅಧಿಕಾರಿ ಅನ್ಸರ್ ಹುಸೇನ್, ಇಲವಾಲ ರೋಟರಿ ಸಮುದಾಯ ದಳದ ಅಧ್ಯಕ್ಷ ನಾಗೇಶ್, ಕೃಷಿಕ ಸಮಾಜದ ನಿರ್ದೇಶಕ ಗೋವಿಂದಸ್ವಾಮಿ, ಹನಿ ನೀರಾವರಿ ತಜ್ಞ ಅಂಜನಪ್ಪ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ವಿಜಿಕುಮಾರ್, ವಿಜ್ಞಾನಿ ಸಿದ್ದಪ್ಪ, ಬಾಳೆಬೆಳೆ ತಜ್ಞ ಮಹದೇವ ಪ್ರಸಾದ್ ಅವರನ್ನು ಚಿತ್ರದಲ್ಲಿ ಕಾಣಬಹುದು.

ಮೈಶುಗರ್ ಸಕ್ಕರೆ ಕಾರ್ಖಾನೆ ಯಾವುದೇ ಕಾರಣಕ್ಕೂ ಖಾಸಗೀಕರಣವಿಲ್ಲ

ಅಪಪ್ರಚಾರಕ್ಕೆ ಕಿವಿಗೊಡದಂತೆ ಎಂಎಲ್‌ಸಿ ದಿನೇಶ್ ಗೂಳಿಗೌಡ ಮನವಿ



ಮಂಡ್ಯ, ಜ.12–ಮಂಡ್ಯ ಜಿಲ್ಲೆಯ ಏಕೈಕ ಸರ್ಕಾರಿ ಸ್ವಾಮ್ಯದ ಸಕ್ಕರೆ ಕಾರ್ಖಾನೆಯಾದ ಮೈಶುಗರ್ ಖಾಸಗೀಕರಣ ಮಾಡಲಾಗುತ್ತಿದೆ ಎಂದು ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಅಪಪ್ರಚಾರ ಮಾಡುತ್ತಿವೆ. ಆದರೆ, ಯಾವುದೇ ಕಾರಣಕ್ಕೂ ಇದನ್ನು ಖಾಸಗೀಕರಣ ಮಾಡುವುದಿಲ್ಲ. ನಮ್ಮ ಸರ್ಕಾರ ರೈತರ ಹಿತ ಕಾಯಲು ಬದ್ಧವಿದೆ ಎಂದು ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಸ್ಪಷ್ಟಪಡಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಅಪಪ್ರಚಾರಕ್ಕೆ ಸಾರ್ವಜನಿಕರಾಗಲೀ, ರೈತರಾಗಲೀ ಕಿವಿಗೊಡಬಾರದು. ಈ ಕಾರ್ಖಾನೆ ಸಂಪೂರ್ಣವಾಗಿ ನಷ್ಟದಲ್ಲಿತ್ತಲ್ಲದೆ, ಮುಚ್ಚಿ ಹೋಗುವ ಹಂತದಲ್ಲಿತ್ತು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಶಾಸಕರಾದ ರವಿಕುಮಾರ್ ಗಣಿಗ ಹಾಗೂ ನಾನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಬಳಿ ಈ ಕಾರ್ಖಾನೆಯ ಪುನಶ್ಚೇತನಕ್ಕಾಗಿ ಮನವಿ ಮಾಡಿದ್ದೆವು ಎಂದಿದ್ದಾರೆ.

ಕಳೆದ ವರ್ಷ 50 ಕೋಟಿ ರೂಗಳನ್ನು ಕಾರ್ಖಾನೆಯ ಕಾರ್ಯಗಳಿಗೆ ಬಿಡುಗಡೆ ಮಾಡಿಸಲು ಯಶಸ್ವಿಯಾಗಿದ್ದೆವು. ಪರಿಣಾಮ ಕಾರ್ಖಾನೆ ಕಳೆದ ಹಂಗಾಮಿನಲ್ಲಿ 2 ಲಕ್ಷ 5 ಸಾವಿರ ಟನ್ ಕಬ್ಬನ್ನು ಅರೆದಿತ್ತು. ಮಾತ್ರವಲ್ಲ ರೈತರಿಗೆ ಕಬ್ಬಿನ ಬಿಲ್‌ನ ಸಂಪೂರ್ಣ ಹಣ ಪಾವತಿಸಲಾಗಿತ್ತು. ಈ ಬಾರಿ ಕಾರ್ಖಾನೆಯು ಸರ್ಕಾರದ ಯಾವುದೇ ಸಹಾಯಧನವನ್ನು ಪಡೆಯದೆಯೇ ಕಬ್ಬನ್ನು ನುರಿಸಿದೆ ಎಂದು ಹೇಳಿದ್ದಾರೆ.

ಈ ವರ್ಷ 2 ಲಕ್ಷದ 1 ಸಾವಿರದ 850 ಟನ್ ಕಬ್ಬನ್ನು ಅರೆಯಲಾಗಿದೆ. ಸುಮಾರು 3400 ರಷ್ಟು ರೈತರು ಕಬ್ಬು ಪೂರೈಕೆ ಮಾಡಿದ್ದರು. ಎಲ್ಲಾ ರೈತರಿಗೆ ಶೇ.100 ರಷ್ಟು ಬಿಲ್ ಪಾವತಿ ಮಾಡಲಾಗಿದೆ. ಅಲ್ಲದೆ, ಕಳೆದ 20 ವರ್ಷಗಳಿಂದ ಬಾಕಿ ಇದ್ದ 52.25 ಕೋಟಿ ವಿದ್ಯುತ್ ಬಿಲ್ ಬಾಕಿಯನ್ನು ಸಹ ಸರ್ಕಾರ ಮನ್ನಾ ಮಾಡಿದೆ. ಹೀಗಾಗಿ ಇದನ್ನು ಖಾಸಗೀಕರಣ ಮಾಡುವಂತಹ ಯಾವುದೇ ಪ್ರಸ್ತಾವ ಸರ್ಕಾರದ ಮುಂದಿಲ್ಲ. ರಾಜ್ಯದಲ್ಲಿ ಇರುವ 72 ಸಕ್ಕರೆ ಕಾರ್ಖಾನೆಗಳಲ್ಲಿ ಮೈಶುಗರ್ ಏಕೈಕ ಸರ್ಕಾರಿ ಸ್ವಾಮ್ಯದ ಸಕ್ಕರೆ ಕಾರ್ಖಾನೆಯಾಗಿದ್ದು, ಮೈಶುಗರ್ ಉಳಿವಿಗೆ ಸರ್ಕಾರ ಬದ್ಧವಿದೆ. ಅಪಪ್ರಚಾರಕ್ಕೆ ಯಾರೂ ಕಿವಿಗೊಡಬೇಡಿ ಎಂದು ದಿನೇಶ್ ಗೂಳಿಗೌಡ ಮನವಿ ಮಾಡಿದ್ದಾರೆ.

ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಮೈಸೂರು: 2024–25ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿಹೆಚ್.ಡಿ ಅಧ್ಯಯನ ಮಾಡುವ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ)ಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನೀಡುವ ಡಿ.ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನಕ್ಕೆ ಅರ್ಜಿ ಸಲ್ಲಿಸುವ ದಿನಾಂಕವನ್ನು ಜ.15ರವರೆಗೆ ವಿಸ್ತರಿಸಲಾಗಿದೆ. ಮಾಹಿತಿಗಾಗಿ https://bcwd.Karnataka.gov.in ನೋಡಬಹುದು ಹಾಗೂ ದೂ.ಸಂ 8050770004 ಅನ್ನು ಸಂಪರ್ಕಿಸಬಹುದು.

ರಸಋಷಿ ಕುವೆಂಪು ವೈಜ್ಞಾನಿಕ ಚಿಂತನೆಯ ಶ್ರೇಷ್ಠ ಕವಿವರ್ಯ

ವಿಶ್ವ ಮಾನವ ದಿನಾಚರಣೆ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಬನ್ನೂರು ಕೆ.ರಾಜು ಅಭಿಪ್ರಾಯ



ಮೈಸೂರಿನ ಧರ್ಮಪ್ರಕಾಶ ಡಿ.ಬನುಮಯ್ಯ ಬಾಲಕರ ಪ್ರೌಢಶಾಲೆ ಮತ್ತು ಹಿರಣ್ಮಯಿ ಪ್ರತಿಷ್ಠಾನ ಹಾಗೂ ಕಾವೇರಿ ಬಳಗ ವತಿಯಿಂದ ಏರ್ಪಡಿಸಿದ್ದ ರಾಷ್ಟ್ರಕವಿ ಕುವೆಂಪು ಜನ್ಮದಿನದ ಅಂಗವಾಗಿ ವಿಶ್ವಮಾನವ ದಿನ ಆಚರಿಸಲಾಯಿತು.

ಮೈಸೂರು,ಜ.12(ಜಿಎ)–ಭಾರತವರ್ಷವಲ್ಲ, ಇಡೀ ವಿಶ್ವ ಕಂಡ ವೈಚಾರಿಕ ಪ್ರಜ್ಞೆಯ, ವೈಜ್ಞಾನಿಕ ಚಿಂತನೆಯ ಶ್ರೇಷ್ಠ ಕವಿವರ್ಯ ನಮ್ಮ ರಸಋಷಿ ಕುವೆಂಪು ಅವರೆಂದು ಹಿರಿಯ ಸಾಹಿತಿ ಬನ್ನೂರು ಕೆ.ರಾಜು ಅಭಿಪ್ರಾಯಪಟ್ಟರು.

ಮೈಸೂರಿನ ಸಯ್ಯಾಜಿರಾವ್ ರಸ್ತೆಯಲ್ಲಿರುವ ಧರ್ಮಪ್ರಕಾಶ ಡಿ.ಬನುಮಯ್ಯ ಬಾಲಕರ ಪ್ರೌಢಶಾಲೆ, ಹಿರಣ್ಮಯಿ ಪ್ರತಿಷ್ಠಾನ, ಕಾವೇರಿ ಬಳಗ ಸಂಯುಕ್ತವಾಗಿ ಶಾಲಾ ಆವರಣದಲ್ಲಿ ರಾಷ್ಟ್ರಕವಿ ಕುವೆಂಪು ಜನ್ಮದಿನದ ಅಂಗವಾಗಿ ಏರ್ಪಡಿಸಿದ್ದ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮಾತನಾಡಿದರು.

ಕನ್ನಡ ಕಂಡ ಶಿಖರ ಸದೃಶ ಪ್ರತಿಭೆ ಕುವೆಂಪು ಅವರಾಗಿದ್ದು, ನಮ್ಮಲ್ಲಿ ಪಂಪನಿಂದ ಕುವೆಂಪುವಿನ ತನಕ ಎಂಬುದೊಂದು ನಾಣ್ಣುಡಿಯಿದ್ದು ಕನ್ನಡ ಸಾಹಿತ್ಯದ ವಿಷಯಕ್ಕೆ ಬಂದರೆ ಹತ್ತನೆಯ ಶತಮಾನಕ್ಕೆ ಪಂಪ ಹೇಗೋ ಹಾಗೆ ಇಪ್ಪತ್ತನೆಯ ಶತಮಾನಕ್ಕೆ ಕುವೆಂಪು ಅವರಾಗಿದ್ದು ಹತ್ತನೆ ಶತಮಾನ ಪಂಪ ಯುಗವಾದರೆ ಇಪ್ಪತ್ತನೆಯ ಶತಮಾನ ಕುವೆಂಪು ಯುಗ ಎಂದು ಹೇಳಿದರು.

ಬಹಳಷ್ಟು ವಿಷಯಗಳಲ್ಲಿ ಪಂಪನಿಗೂ ಕುವೆಂಪುವಿಗೂ ಬೇಕಾದಷ್ಟು ಹೋಲಿಕೆಗಳುಂಟು. ಪಂಪನಿಗಿದ್ದಂಥ ಆತ್ಮಪ್ರತ್ಯೆಯದ ಕೆಚ್ಚಿನ ಧೀರ ವ್ಯಕ್ತಿತ್ವ ಕುವೆಂಪು ಅವರಲ್ಲೂ ಇತ್ತು. ನೆನೆವುದೆನ್ನ ಮನ ಬನವಾಸಿ ದೇಶಮಂ ಎಂದ ಪಂಪ, ಕನ್ನಡ ಎನೆ ಕುಣಿದಾಡುವುದೆನ್ನೆದೆ ಎಂದ ಕುವೆಂಪು ಕನ್ನಡ ನಾಡಿನ ಸಾರಸ್ವತ ಲೋಕದ ಅನರ್ಘ್ಯ ರತ್ನಗಳು. ಕುವೆಂಪು ಅವರ ವಿಶ್ವ ಮಾನವ ಸಂದೇಶಕ್ಕೆ ಪಂಪನ ಮನುಷ್ಯ ಜಾತಿ ತಾನೊಂದೆ ವಲಂ ಎಂಬ ನುಡಿ ರತ್ನವೇ ಮೂಲಾಧಾರ. ಇದರ ಮೂಲಕ ಕುವೆಂಪು ಅವರು ಹತ್ತನೆಯ ಹಾಗೂ ಇಪ್ಪತ್ತನೆಯ ಶತಮಾನಗಳನ್ನು ಬೆಸೆದು ಕನ್ನಡ ಸಾಹಿತ್ಯ ಪರಂಪರೆಯ ಪ್ರಭಾವಳಿಯನ್ನು ಬೆಳಗಿದ್ದಾರೆ. ಯುಗದ ಕವಿಯಾಗಿ, ಜಗದ ಕವಿಯಾಗಿ ಜಗಜ್ಯೋತಿಯಾಗಿದ್ದಾರೆ ಎಂದರು.

ಕುವೆಂಪು ತಮ್ಮ ಪ್ರಬುದ್ಧ ಸಾಹಿತ್ಯದ ಮೂಲಕ ಕನ್ನಡಕ್ಕೆ ವಿಶ್ವ ಮನ್ನಣೆ ತಂದುಕೊಟ್ಟಿದ್ದಾರೆ. ಕನ್ನಡ ನಾಡು– ನುಡಿಯ ಮಹಾ ಭಾಗ್ಯವಾಗಿದ್ದಾರೆ. ಇಂಥ ವಿಶ್ವಕವಿ ಕುವೆಂಪು ಅವರು ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಬಹುತೇಕ ಸಾಹಿತ್ಯದ ಎಲ್ಲಾ ಪ್ರಕಾರಗಳಲ್ಲೂ ಕೃಷಿ ಮಾಡಿ ಎಲ್ಲದರಲ್ಲೂ ಅದ್ಭುತವನ್ನೇ ಸಾಧಿಸಿದ್ದರೂ ಇವರು ಕವಿಯಾಗಿಯೇ ಹೆಚ್ಚು ಜಗದ್ವಿಖ್ಯಾತರು. ಇದಕ್ಕಾಗಿಯೇ ಇಂಥ ಮೇರುಕವಿ ಕುವೆಂಪು ಅವರನ್ನು ವರಕವಿ ಬೇಂದ್ರೆಯವರು ಯುಗದ ಕವಿಗೆ, ಜಗದ ಕವಿಗೆ ಶ್ರೀರಾಮಾಯಣ ದರ್ಶನದಿಂದಲೇ ಕೈಮುಗಿದ ಕವಿಗೆ– ಮಣಿಯದವರು ಯಾರು? ಎಂದು ಅಭಿಮಾನಪಟ್ಟಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದ ಆರಂಭಕ್ಕೂ ಕೇಂದ್ರ ಬಾಲ ಸಾಹಿತ್ಯ ಅಕಾಡೆಮಿ ಹಾಗೂ ರಾಜ್ಯ ಪಂಪ ಪ್ರಶಸ್ತಿ ಪುರಸ್ಕೃತ ಖ್ಯಾತ ಸಾಹಿತಿ, ನಾ.ಡಿಸೋಜಾ ಅವರಿಗೆ ಸಂತಾಪ ಸಲ್ಲಿಸಲಾಯಿತು. ಈ ವೇಳೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಪನ್ಮೂಲ ವ್ಯಕ್ತಿ ಹಾಗೂ ಜಾನಪದ ತಜ್ಞ ಡಾ.ಬಿ.ಸಿ.ವಿಜಯಕುಮಾರ್ ಖ್ಯಾತ ವಾಗ್ಮಿ ಬಸವರಾಜು, ಕಾವೇರಿ ಬಳಗದ ಅಧ್ಯಕ್ಷೆ ಎನ್.ಕೆ.ಕಾವೇರಿಯಮ್ಮ, ಹಿರಣ್ಮಯಿ ಪ್ರತಿಷ್ಠಾನದ ಅಧ್ಯಕ್ಷ ಎ.ಸಂಗಪ್ಪ, ಮುಖ್ಯ ಶಿಕ್ಷಕ ಜಿ.ಎಸ್.ಕೃಪಾಶಂಕರ್, ಶಿಕ್ಷಕರಾದ ಎಂ.ಮಹೇಶ್‌ಕುಮಾರ್, ವಿ.ಗಂಗಾಧರ್, ಕೆ.ಎಂ.ಗೋವಿಂದರಾಜು, ರಾಧಮ್ಮ, ಎನ್.ಉಮಾ, ಎಂ.ಲಕ್ಷ್ಮಿ, ಸಿ.ತಾರ, ಜಿ.ಬಿ.ಕುಸುಮಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ ಸೋಮವಾರ 13 ಜನವರಿ 2025

ನಡತೆ ಶಂಕಿಸಿ ಪತ್ನಿ, ಮಗು ಕೊಲೆ ಮಾಡಿದ ಪತಿ

ಮೃತಳ ಸಹೋದರಿ, ಪೋಷಕರ ಆರೋಪ, ಪೊಲೀಸರಿಗೆ ದೂರು

ಕೆ.ಆರ್.ಪೇಟೆ: ಪತ್ನಿಯ ನಡತೆ ಶಂಕಿಸಿ ತನ್ನ ಸಹೋದರಿ ಮತ್ತು ಮಗುವನ್ನು ಆಕೆಯ ಪತಿಯೇ ಹತ್ಯೆಗೈದು ಆತ್ಮಹತ್ಯೆ ನಾಟಕವಾಡುತ್ತಿದ್ದಾನೆ ಎಂದು ಮೃತ ಶಿಲ್ಪಾಳ ಸಹೋದರಿ ಆಪಾದಿಸಿದ್ದಾರೆ.

ತಾಲೂಕಿನ ಕಿಕ್ಕೇರಿ ಹೋಬಳಿಯ ಜಕ್ಕನಹಳ್ಳಿ ಗ್ರಾಮದ ಪುಟ್ಟಸ್ವಾಮಿ ಅವರ ಪತ್ನಿ ಶಿಲ್ಪ (26) ಮತ್ತು ಪುತ್ರ ದೀಕ್ಷಿತ್(3) ಮೃತಪಟ್ಟಿದ್ದು, ಇದೊಂದು ಕೊಲೆ ಎಂದು ಶಿಲ್ಪಾಳ ಸಹೋದರಿ ಆಶಾ ಮತ್ತು ಪೋಷಕರು ಆಕ್ರೋಶ ವ್ಯಕ್ತಪಡಿಸಿ ಪೊಲೀಸರಿಗೆ ದೂರು ನೀಡಿದ್ದಾರೆ.

ಜಕ್ಕನಹಳ್ಳಿ ಗ್ರಾಮದ ಮರಿ ಹುಚ್ಚಯ್ಯ ಮತ್ತು ಕಾಳಮ್ಮ ದಂಪತಿಗಳ ಮಗ ಪುಟ್ಟಸ್ವಾಮಿ ತನ್ನ ಹೆಂಡತಿ ಶಿಲ್ಪಾಳ ನಡತೆ ಶಂಕಿಸಿ ಆಕೆಯ ಮೇಲೆ ಹಲ್ಲೆ ನಡೆಸಿ, ನೇಣು ಬಿಗಿದು ಹತ್ಯೆ ಮಾಡಿ ನಂತರ ಪುಟ್ಟ ಬಾಲಕ ದೀಕ್ಷಿತ್‌ನನ್ನು ಕತ್ತು ಹಿಸುಕಿ ಬರ್ಬರ ಕೊಲೆ ಮಾಡಿದ್ದು, ನಂತರ ಇಬ್ಬರೂ ಶವಗಳನ್ನು ಮನೆಯಿಂದ ಹೊರಗೆ ಹಾಕಿ, ಆತ್ಮಹತ್ಯೆ ಮಾಡಿಕೊಂಡು ಸಾವನ್ನಪ್ಪಿದ್ದಾರೆ ಎಂದು ನಾಟಕವಾಡುತ್ತಾ, ಪ್ರಕರಣದ ದಿಕ್ಕು ತಪ್ಪಿಸಲು ಯತ್ನಿಸುತ್ತಿದ್ದಾನೆ ಎಂದು ಮೃತಳ ಪೋಷಕರು ಆಪಾದಿಸಿದ್ದಾರೆ.




ಮೃತ ಶಿಲ್ಪಾ ಮತ್ತು ದೀಕ್ಷಿತ್

ಕಳೆದ ನಾಲ್ಕು ವರ್ಷಗಳ ಹಿಂದೆ ಕೋವಿಡ್ ಸಮಯದಲ್ಲಿ ಹಲಸನಹಳ್ಳಿ ಗ್ರಾಮದ ಕಾಂತರಾಜು ಮತ್ತು ಜಯಮ್ಮ ದಂಪತಿಗಳ ಪುತ್ರಿ ಶಿಲ್ಪಾಳನ್ನು ಜಕ್ಕನಹಳ್ಳಿ ಗ್ರಾಮದ ಮರಿ ಹುಚ್ಚಯ್ಯ, ಕಾಳಮ್ಮ ದಂಪತಿಗಳ ಪುತ್ರ ಪುಟ್ಟಸ್ವಾಮಿಗೆ ವಿವಾಹ ಮಾಡಿಕೊಡಲಾಗಿತ್ತು.

ಮದುವೆ ಆದ 3 ತಿಂಗಳಿನಿಂದಲೂ ಶಿಲ್ಪಾಳಿಗೆ ನಿತ್ಯ ಕಿರುಕುಳ ನೀಡುತ್ತಿದ್ದ ಪುಟ್ಟಸ್ವಾಮಿ ನಿರಂತರವಾಗಿ ದೈಹಿಕ, ಮಾನಸಿಕ ಹಿಂಸೆ ನೀಡುತ್ತಲೆ ಬಂದಿದ್ದ. ಇತ್ತೀಚೆಗೆ ಆಕೆಯ ನಡತೆ ಶಂಕಿಸಿ ಹಲ್ಲೆ ಮಾಡುವುದು, ಕೊಲೆ ಬೆದರಿಕೆ ಹಾಕುವುದು ಜಾಸ್ತಿಯಾಗಿತ್ತು ಹಾಗಾಗಿ ನನ್ನ ಸಹೋದರಿ ಶಿಲ್ಪಾ ಸಾವು ಆತ್ಮಹತ್ಯೆಯಲ್ಲ. ಇದೊಂದು ವ್ಯವಸ್ಥಿತ ಕೊಲೆಯಾಗಿದೆ ಇದಕ್ಕೆ ಪುಟ್ಟಸ್ವಾಮಿ ಮತ್ತು ಆತನ ತಾಯಿ, ಸಹೋದರಿ ಯರು ಹಾಗೂ ಇನ್ನಿತರ ಹತ್ತಿರದ ಕುಟುಂಬದ ವರೇ ಕಾರಣ ಎಂದು ಮೃತಳ ಸಹೋದರಿ ಆಶಾ ಆರೋಪಿಸಿದ್ದಾರೆ.

ಘಟನೆ ಸಂಬಂಧ ಆರೋಪಿಗಳ ವಿರುದ್ಧ ವರದಕ್ಷಿಣೆ ಕಿರುಕುಳ ಹಾಗೂ ಕೊಲೆ ಪ್ರಕರಣ ದಾಖಲಿಸಿ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಕೆ.ಆರ್.ಪೇಟೆ ಸರ್ಕಾರಿ ಆಸ್ಪತ್ರೆಯ ಶವಾಗಾರದ ಬಳಿ ಪೋಷಕರು ಪೊಲೀಸ್ ಅಧಿಕಾರಿಗಳನ್ನು ಆಗ್ರಹಿಸಿದ್ದಾರೆ. ಘಟನೆ ಕುರಿತು ಪ್ರಕರಣ ದಾಖಲಿಸಿ ಕೊಂಡಿರುವ ಕಿಕ್ಕೇರಿ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಕಲ್ಲುಕಣಿಯಲ್ಲಿ ಬೌದ್ಧ ಅಂಬೇಡ್ಕರ್ ಮಹಾದ್ವಾರ ಉದ್ಘಾಟಿಸಿದ ಹೆಚ್.ಡಿ.ಕುಮಾರಸ್ವಾಮಿ

ಅಂಬೇಡ್ಕರ್ ಆಶಯದಂತೆ ನರೇಂದ್ರ ಮೋದಿ ಸರ್ಕಾರ ಕೆಲಸ ಮಾಡುತ್ತಿದೆ: ಕುಮಾರಸ್ವಾಮಿ

ಮಂಡ್ಯ/ಮಳವಳ್ಳಿ: ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್ ಅವರ ಸಂವಿಧಾನದ ಆಶಯದಂತೆ ಕೇಂದ್ರದ ನರೇಂದ್ರ ಮೋದಿ ಅವರ ಸರಕಾರ ಕಾರ್ಯ ನಿರ್ವಹಿಸುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ಮಳವಳ್ಳಿ ತಾಲೂಕಿನ ಕಲ್ಕುಣಿ ಗ್ರಾಮದಲ್ಲಿ ನಿರ್ಮಿಸಲಾಗಿರುವ 'ಬೌದ್ಧ ಅಂಬೇಡ್ಕರ್ ಮಹಾದ್ವಾರ'ವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅತ್ಯಂತ ಅರ್ಥಪೂರ್ಣವಾಗಿ ನಿರ್ಮಿಸಲಾಗಿರುವ ಈ ಮಹಾದ್ವಾರ ಸಮ ಸಮಾಜದ ಸಂಕೇತವಾಗಿದೆ ಎಂದರು.

ಐತಿಹಾಸಿಕವಾಗಿ ಅಂಬೇಡ್ಕರ್ ಅವರಿಗೆ ಬಹಳ ಅಪಚಾರವಾಗಿತ್ತು. ಅದನ್ನು ಸರಿಪಡಿಸಿ ಮನುಕುಲ ಇರುವವರೆಗೂ ಬಾಬಾ ಸಾಹೇಬ್ ಅವರನ್ನು ಸ್ಮರಿಸಿಕೊಳ್ಳುವ ಕೆಲಸವನ್ನು ಕೇಂದ್ರ ಸರಕಾರ ಮಾಡುತ್ತಿದೆ ಎಂದು ಕೇಂದ್ರ ಸಚಿವರು ಹೇಳಿದರು.



ಬೌದ್ಧ ಅಂಬೇಡ್ಕರ್ ಮಹಾದ್ವಾರ ಉದ್ಘಾಟಿಸುತ್ತಿರುವ ಕುಮಾರಸ್ವಾಮಿ.

ದೇವೇಗೌಡರು ದಲಿತರ ಉದ್ಧಾರಕ್ಕಾಗಿ ಅನೇಕ ಉತ್ತಮ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದರು. ಗಂಗಾ ಕಲ್ಯಾಣ ಯೋಜನೆಯನ್ನು ಅವರು ಜಾರಿಗೆ ತಂದು ಅನೇಕರಿಗೆ ಸಹಾಯ ಮಾಡಿದ್ದರು. ಸಚಿವರಾಗಿ, ಮುಖ್ಯಮಂತ್ರಿಯಾಗಿ, ಪ್ರಧಾನಿಯಾಗಿ ದಲಿತರ ಉದ್ಧಾರಕ್ಕೆ ಬಹುದೊಡ್ಡ ಕಾಣಿಕೆ ನೀಡಿದ್ದಾರೆ ಎಂದು ಸಚಿವರು ಹೇಳಿದರು.

ಮೊದಲು ಮೀಸಲು ಸೌಲಭ್ಯ ಕೇವಲ ವಿಧಾನಸಭೆ, ಲೋಕಸಭೆ ಕ್ಷೇತ್ರಗಳಿಗೆ ಮೀಸಲಾಗಿತ್ತು ದೇವೇಗೌಡರು ಆ ಮೀಸಲು ಸೌಲಭ್ಯವನ್ನು ಜಿಲ್ಲಾ ಪಂಚಾಯತಿ, ತಾಲೂಕು ಪಂಚಾಯಿತಿ ಸೇರಿ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿಯೂ ಜಾರಿಗೆ ತಂದರು. ಹಾಸನ ಜಿಲ್ಲಾ ಪಂಚಾಯತಿ ಅಧ್ಯಕ್ಷರನ್ನಾಗಿ ಎಂಎ ಪದವೀಧರನಾಗಿದ್ದ ಒಬ್ಬ ದಲಿತ ಯುವಕನನ್ನು ಮಾಡಿದ್ದರು. ತಳಮಟ್ಟದ ಸಮುದಾಯಗಳ ವಿದ್ಯಾವಂತರನ್ನು ಗುರುತಿಸಿ ಅಧಿಕಾರ ನೀಡುವ ಕೆಲಸವನ್ನು ಅವರು ಮಾಡಿದ್ದರು ಎಂದು ಅವರು ಹೇಳಿದರು.

ಗ್ರಾಮದಲ್ಲಿ ಸಮುದಾಯ ಭವನ ನಿರ್ಮಾಣ ಬೇಕೆಂದು ಗ್ರಾಮಸ್ಥರು ಕೇಂದ್ರ ಸಚಿವರಿಗೆ ಬೇಡಿಕೆ ಮಂಡಿಸಿದರು. ಇದಕ್ಕೆ ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವರು; ತಕ್ಷಣವೇ ಸಮುದಾಯ ಭವನ ಮಂಜೂರು ಮಾಡಿ, ನಿರ್ಮಾಣ ಮಾಡಿಕೊಡಲಾಗುವುದು. ಅದಕ್ಕೆ ಅಗತ್ಯವಾದ ಸೂಕ್ತ ಜಾಗವನ್ನು ತಕ್ಷಣವೇ ಗ್ರಾಮಸ್ಥರ ಜತೆ ಸೇರಿ ಗುರುತಿಸುವಂತೆ ಮಾಜಿ ಶಾಸಕ ಅನ್ನದಾನಿ ಅವರಿಗೆ ಸೂಚಿಸಿದರು.

ಸ್ವಾಮಿ ವಿವೇಕಾನಂದ ಪ್ರತಿಯೊಬ್ಬ ಮನುಷ್ಯನಿಗೆ ಪ್ರೇರಣೆ

ಅಭಿನಂದನಾ ಸಮಾರಂಭ, ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಈ.ಸಿ.ನಿಂಗರಾಜೇಗೌಡ ಬಣ್ಣನೆ

ಮಂಡ್ಯ: ಸ್ವಾಮಿ ವಿವೇಕಾನಂದರು ಪ್ರತಿಯೊಬ್ಬ ಮನುಷ್ಯನಿಗೆ ಪ್ರೇರಣೆಯಾಗಿದ್ದು, ಅವರ ಸಂದೇಶಗಳು ಇವತ್ತಿಗೂ ಸಹ ಸಮಾಜಕ್ಕೆ ಮಾದರಿಯಾಗಿವೆ ಎಂದು ಮೈಸೂರು ವಿವಿಯ ಮಾಜಿ ಸಿಂಡಿಕೇಟ್ ಸದಸ್ಯ ಡಾ.ಈ.ಸಿ.ನಿಂಗರಾಜೇಗೌಡ ಬಣ್ಣಿಸಿದರು.

ಡಾ.ಜೀಶಂಪ ಸಾಹಿತ್ಯ ವೇದಿಕೆ, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಫಿಲಂಸ್ ಸಂಯುಕ್ತಾಶ್ರಯದಲ್ಲಿ ನಗರದ ಕರ್ನಾಟಕ ಸಂಘದ ಆವರಣದ ಕೆ.ವಿ.ಶಂಕರಗೌಡ ಶತಮಾನೋತ್ಸವ ಭವನದಲ್ಲಿ ನಡೆದ ಹತ್ತನೇ ಅಖಿಲ ಕರ್ನಾಟಕ ಕನ್ನಡ ಅಕ್ಷರ ಜಾತ್ರೆ ವಿವಿಧ ಪ್ರಶಸ್ತಿ ಪ್ರದಾನ ಹಾಗೂ ಕಾವ್ಯ ಕೌಸ್ತುಭ ಪುಸ್ತಕ ಬಿಡುಗಡೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದ ಅವರು, ವಿವೇಕಾನಂದರು ಅಡು ಮುಟ್ಟದ ಸೊಪ್ಪಿಲ್ಲ, ಸಾಧನೆಗೈದ ಕ್ಷೇತ್ರ ಇಲ್ಲ ಎಂಬಂತೆ ದುಡಿದವರು, ಅವರಿಂದ ಸಮಾಜಕ್ಕೆ ಹಲವು ಸಹಾಯವಾಗಿದೆ. ಅಂತಹ ವ್ಯಕ್ತಿ ನಮ್ಮನ್ನು ಬಹು ಬೇಗ ಅಗಲಿದ್ದು ದುರಂತ ಎಂದು ವಿಷಾದಿಸಿದರು.



ಕರ್ನಾಟಕ ಕನ್ನಡ ಅಕ್ಷರ ಜಾತ್ರೆ, ವಿವಿಧ ಪ್ರಶಸ್ತಿ ಪ್ರದಾನ ಹಾಗೂ ಕಾವ್ಯ ಕೌಸ್ತುಭ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಪಾಲ್ಗೊಂಡಿರುವ ಅತಿಥಿಗಳು.

ಅಂತರರಾಷ್ಟ್ರೀಯ ಮಟ್ಟದಲ್ಲಿ ಇದೀಗ ಕನ್ನಡಕ್ಕೆ ತನ್ನದೇ ಆದ ವಿಶಿಷ್ಟ ಹೆಸರಿದೆ. ಐದು ಕೋಟಿಗೂ ಹೆಚ್ಚು ಜನರು ವಿಶ್ವಾದ್ಯಂತ ಕನ್ನಡ ಮಾತನಾಡುತ್ತಾರೆ. ಐವತ್ತಕ್ಕೂ ಹೆಚ್ಚು ದೇಶದಲ್ಲಿ ಕನ್ನಡ ಮಾತನಾಡುವ ಕನ್ನಡಿಗರಿದ್ದಾರೆ. ಕನ್ನಡ ಮತ್ತಷ್ಟು ಬೆಳೆಯಬೇಕೆಂದರೆ ಮಾತನಾಡುವವರ ಸಂಖ್ಯೆ ಹೆಚ್ಚಾಗಬೇಕು. 1721 ವೈವಿಧ್ಯಮಯ ಭಾಷೆ ನಮ್ಮ ದೇಶದಲ್ಲಿದೆ. ಜನಗಣತಿ ಮಾಡಿದರೆ ಮತ್ತಷ್ಟು ಭಾಷೆ ಹೆಚ್ಚಾಗುವ ಸಾಧ್ಯತೆ ಇದೆ. ಇಷ್ಟು ಭಾಷೆಗಳ ನಡುವೆ ನಮ್ಮ ಕನ್ನಡ ವಿಶೇಷ ಸ್ಥಾನಮಾನ ಉಳಿಸಿಕೊಂಡು ಬಂದಿರುವುದು ಶ್ಲಾಘನೀಯ ಎಂದ ಅವರು, ಊಟಿ, ಕಾಸರಗೋಡು, ಸೊಲ್ಲಾಪುರ ಪ್ರದೇಶಗಳು ಬೇರೆ ರಾಜ್ಯದಲ್ಲಿದ್ದರೂ ಕನ್ನಡ ಮಾತನಾಡುವವರ ಸಂಖ್ಯೆ ಹೆಚ್ಚಿದೆ. ಈ ಪ್ರದೇಶಗಳು ಮೂಲ ಕರ್ನಾಟಕಕ್ಕೆ ಸೇರಿದ್ದವಾದರೂ ಹಿಂದೆ ನಮ್ಮನ್ನಾಳಿದ ರಾಜಕಾರಣಿಗಳ ಲಾಲಸ್ಯದಿಂದ ಈ ಪ್ರದೇಶಗಳು ಇಂದು ಬೇರೆ ರಾಜ್ಯಗಳ ಪಾಲಾಗಿದೆ ಎಂದು ವಿಷಾದಿಸಿದರು.

ಹಿರಿಯ ಸಾಹಿತಿ ಸತೀಶ್ ಜವರೇಗೌಡ ಮಾತನಾಡಿ, ಮಂಡ್ಯ ಜಿಲ್ಲೆಯಂತಹ ಕನ್ನಡ ಹೆಚ್ಚು ಮಾತನಾಡುವ ಜಿಲ್ಲೆಯಲ್ಲಿ ಕನ್ನಡ ಭಾಷೆ ಮತ್ತು ಕನ್ನಡ ಸಾಹಿತ್ಯ ಉಳಿಸಿ, ಬೆಳೆಸುವಂತಹ ಇಂತಹ ಕಾರ್ಯಕ್ರಮ ಹೆಚ್ಚಾಗಿ ನಡೆಯಬೇಕು. ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವ ಕೆಲಸ ಯುವಕರ ಮೇಲಿದೆ. ಇಂದಿನ ಯುವ ಪೀಳಿಗೆ ಆಂಗ್ಲ ಭಾಷೆಗೆ ಜೋತು ಬಿದ್ದಿದೆ. ಆಂಗ್ಲ ಭಾಷೆಯನ್ನು ಕಲಿಕೆಗೆ ಮೀಸಲಿಟ್ಟು, ಕನ್ನಡವನ್ನು ಹೆಚ್ಚು ಬೆಳೆಸುವ ಮೂಲಕ ಕನ್ನಡ ಕಟ್ಟುವ ಕೆಲಸ ಮಾಡಬೇಕೆಂದು ಕರೆ ನೀಡಿದರು.

ಸಮ್ಮೇಳನಾಧ್ಯಕ್ಷ ಡಾ.ಸಿ.ಮರಯ್ಯ ಮಾತನಾಡಿ, ಅನ್ಯ ಭಾಷೆಗಳ ದಬ್ಬಾಳಿಕೆಯಿಂದ ಕನ್ನಡವನ್ನು ರಕ್ಷಿಸಿಕೊಂಡು ಭಾಷಾ ಬೆಳವಣಿಗೆಗೆ ನಾಂದಿಯಾಡಬೇಕು. ಕರ್ನಾಟಕದಲ್ಲಿ ಕನ್ನಡವನ್ನು ದೊಡ್ಡ ಮಟ್ಟಕ್ಕೆ ಕೊಂಡೊಯ್ಯುವುದಲ್ಲದೇ ದೇಶದಲ್ಲಿ ಕನ್ನಡ ಭಾಷೆ ಚಿರಸ್ಥಾಯಿಯಾಗಿ ಉಳಿದುಕೊಳ್ಳುವಂತೆ ನೋಡಿಕೊಳ್ಳಬೇಕಾಗಿರುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ತಿಬ್ಬನಹಳ್ಳಿ ರಮೇಶ್, ಎಚ್.ಆರ್.ಧನಂಜಯ, ಕೆ.ಪಿ.ವೀರಪ್ಪ ನಿರ್ಮಲಾ, ಶಿವಕುಮಾರ್, ಚಂದ್ರು, ಮಂಜುನಾಥ್, ಚಂದ್ರಕಲಾ, ದೇವರಾಜು, ಪುಟ್ಟಸ್ವಾಮಿ, ಶ್ರೀನಿವಾಸ್, ಡಾ.ಲಾವಣ್ಯ, ಪದ್ಮಶ್ರೀ, ಹನುಮಂತಪ್ಪ, ಸಿದ್ದಪ್ಪ ಸೇರಿದಂತೆ ಹಲವು ಗಣ್ಯರನ್ನು ಅಭಿನಂದಿಸಲಾಯಿತು.

ವೇದಿಕೆಯಲ್ಲಿ ಸಾಹಿತಿ ಡಾ.ಬಿ.ಸಿ.ವಿಜಯ್‌ಕುಮಾರ್, ಶರಣ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಬನ್ನಂಗಾಡಿ ಸಿದ್ದಲಿಂಗಯ್ಯ, ಸಮಾಜ ಸೇವಕರಾದ ಚೈತ್ರ ಶಶಿಧರ್‌ಗೌಡ, ಡಾ.ಎಲ್.ಜಿ.ಮಂಜುನಾಥ್, ಕರ್ನಾಟಕ ಜನಪರ ವೇದಿಕೆ ರಾಜ್ಯಾಧ್ಯಕ್ಷ ಕನ್ನಡ ಶಫಿ, ಪಾಂಡವಪುರ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಚಲುವೇಗೌಡ, ಡಾ.ಜೀಶಂಪ ಸಾಹಿತ್ಯ ವೇದಿಕೆ ಅಧ್ಯಕ್ಷ ಎಸ್.ಕೃಷ್ಣಸ್ವರ್ಣಸಂದ್ರ, ಕಾರ್ಯಾಧ್ಯಕ್ಷ ರಾಗಿಮುದ್ದನಹಳ್ಳಿ ನಾಗೇಶ್, ಪ್ರಧಾನ ಕಾರ್ಯದರ್ಶಿ ಮಂಗಲ ಶಿವಣ್ಣ, ಮಹಿಳಾ ಘಟಕದ ಅಧ್ಯಕ್ಷೆ ರೂಪಾ ಹೊಸಹಳ್ಳಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಪಾಂಡವಪುರದಲ್ಲಿ ತಾಯಿ–ಮಗು ನಾಪತ್ತೆ




ರೇಷ್ಮಾಬಾನು ಮತ್ತು ಮಗಳು ತಸ್ಮಿಯಾಬಾನು

ಪಾಂಡವಪುರ, ಜ.12– ಮಹಿಳೆಯೊಬ್ಬರು ತನ್ನ ಏಳು ವರ್ಷದ ಮಗಳೊಂದಿಗೆ ಮನೆಯಿಂದ ನಾಪತ್ತೆಯಾಗಿರುವ ಬಗ್ಗೆ ಪತಿ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಚಿನಕುರುಳಿ ಗ್ರಾಮದ ಗುಜರಿ ವ್ಯಾಪಾರಿ ಇಲಿಯಾಸ್ ಶರೀಫ್ ಅವರ ಪತ್ನಿ ರೇಷ್ಮಾಬಾನು ಮತ್ತು ಮಗಳು ತಸ್ಮಿಯಾಬಾನು ಅವರು ಜ.4ರಂದು ನಾಪತ್ತೆಯಾಗಿದ್ದಾರೆ. ಅಂದು ಬೆಳಿಗ್ಗೆ ವ್ಯಾಪಾರಕ್ಕೆ ತೆರಳುವಾಗ ಇಬ್ಬರೂ ಮನೆಯಲ್ಲಿಯೇ ಇದ್ದರು. ರಾತ್ರಿ ಮನೆಗೆ ಬಂದಾಗ ಇಬ್ಬರೂ ನಾಪತ್ತೆಯಾಗಿರುವುದು ಕಂಡು ಬಂದಿದೆ. ಎಲ್ಲೆಡೆ ಹುಡುಕಿದರೂ ಪತ್ತೆಯಾಗಿಲ್ಲ. ರೇಷ್ಮಾಬಾನು 30 ವರ್ಷ, ಸಾಧಾರಣ ಮೈಕಟ್ಟು ಹೊಂದಿದ್ದು, ಬಲಭಾಗದ ಕಣ್ಣಿನ ಬಳಿ ಗಾಯದ ಗುರುತಿದೆ. ಮಗಳು ತಸ್ಮಿಯಾಬಾನುಗೆ 7 ವರ್ಷ, ಮೂರು ಅಡಿ ಎತ್ತರವಿದ್ದು, ಗೋದಿ ಮೈಬಣ್ಣ ಹೊಂದಿದ್ದಾಳೆ ಎಂದಿರುವ ಇಲಿಯಾಸ್ ಶರೀಫ್, ನನಗೆ ಶ್ರವಣಬೆಳಗೊಳದ ನಿವಾಸಿ ಕೌಸರ್ ಮೇಲೆ ಅನುಮಾನವಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ವೈಕುಂಠ ಏಕಾದಶಿ ವಿಶೇಷ ಪೂಜೆ...



ಕೆ.ಆರ್.ಪೇಟೆ ತಾಲೂಕಿನ ಅಗ್ರಹಾರಬಾಚಹಳ್ಳಿ ಗ್ರಾಮದ ಶ್ರೀ ಭೂದೇವಿ ಸಮೇತ ಶ್ರೀ ಚನ್ನಕೇಶವಸ್ವಾಮಿ ದೇವಾಲಯದಲ್ಲಿ ವೈಕುಂಠ ಏಕಾದಶಿ ಕಾರ್ಯಕ್ರಮ ಶ್ರದ್ಧಾ ಭಕ್ತಿಯಿಂದ ನಡೆಯಿತು. ಮುಂಜಾನೆ 5.30ರಿಂದ ಶ್ರೀ ಸ್ವಾಮಿಗೆ ಪಂಚಾಮೃತ ಅಭಿಷೇಕ, ಪುಷ್ಪಾಭಿಷೇಕ, ಕ್ಷೀರಾಭಿಷೇಕ, ಮಹಾಮಂಗಳಾರತಿ ಮತ್ತಿತರ ಪೂಜೆ ಪುನಸ್ಕಾರಗಳು ನಡೆದವು. ನಂತರ ಸರ್ವಾಲಂಕಾರಗೊಂಡ ಶ್ರೀ ಚನ್ನಕೇಶವಸ್ವಾಮಿಯ ದರ್ಶನಕ್ಕೆ ಹಾಗೂ ಪೂಜೆಗೆ ಅವಕಾಶ ಕಲ್ಪಿಸಲಾಯಿತು.

ಪ್ರಶಸ್ತಿ ಪುರಸ್ಕತರಿಗೆ ಸನ್ಮಾನ...



ಪಟ್ಟಣದ ಪ್ರವಾಸಿ ಮಂದಿರದಲ್ಲಿ ರಾಜ್ಯ ಶೈಕ್ಷಣಿಕ ದಿಕ್ಸೂಚಿ ಮತ್ತು ಸುಧಾರಣಾ ಸಮಿತಿ ವತಿಯಿಂದ ಏರ್ಪಡಿಸಲಾಗಿದ್ದ ಸಮಾರಂಭದಲ್ಲಿ ರಾಷ್ಟ್ರ ಮಟ್ಟದ ಶೈಕ್ಷಣಿಕ ಪ್ರಶಸ್ತಿಗೆ ಭಾಜನರಾದ ಚಂದ್ರಶೇಖರ ದಡದಪುರ ಅವರನ್ನು ಸನ್ಮಾನಿಸಲಾಯಿತು. ಎಡಿಸಿ ಶಿವಾನಂದ ಮೂರ್ತಿ, ವೃತ್ತ ನಿರೀಕ್ಷಕ ಬಿ.ಜಿ.ಕುಮಾರ್, ಡಾ.ಬಿ.ಟಿ. ರಜನಿಕಾಂತ್, ಸಮಿತಿಯ ರಾಜ್ಯಾಧ್ಯಕ್ಷ ಡಾ.ಸುಧಾಕರ್, ಚಂದ್ರಶೇಖರ್ ದಡದಪುರ, ಸೇರಿದಂತೆ ಇತರರು ಉಪಸ್ಥಿತರಿದ್ದರು.

ಎಲ್ಲಾ ಆರೋಗ್ಯಕರ ಟೀಕೆಗಳಿಗೆ ಸ್ವಾಗತ; ರಾಜಕೀಯ ಕಾರಣಕ್ಕೆ ಸುಳ್ಳು ಸುಳ್ಳೇ ಟೀಕಿಸಿದರೆ ಡೋಂಟ್ ಕೇರ್

ಸಿಎಂ ಸಿದ್ದರಾಮಯ್ಯ



ಬೆಂಗಳೂರು, ಜ.12– ಎಲ್ಲಾ ಆರೋಗ್ಯಕರ ಟೀಕೆಗಳನ್ನು ಸ್ವಾಗತಿಸುತ್ತೇನೆ. ತಿದ್ದಿಕೊಳ್ಳುತ್ತೇನೆ. ಆದರೆ ರಾಜಕೀಯ ಕಾರಣಕ್ಕೆ ಸುಳ್ಳು ಸುಳ್ಳೇ ಟೀಕಿಸಿದರೆ ಐ ಡೋಂಟ್ ಕೇರ್ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ಖಡಕ್ ಆಗಿ ಹೇಳಿದರು.

ಪ್ರೆಸ್ ಕ್ಲಬ್ ಆಫ್ ಬೆಂಗಳೂರು ಕೊಡಮಾಡುವ 2024ನೇ ಸಾಲಿನ ವರ್ಷದ ವ್ಯಕ್ತಿ, ವಿಶೇಷ ಪ್ರಶಸ್ತಿ, ಸುವರ್ಣ ಮಹೋತ್ಸವ ಪ್ರಶಸ್ತಿ ಹಾಗೂ ವಾರ್ಷಿಕ ಪ್ರಶಸ್ತಿಗಳನ್ನು ಪ್ರದಾನ ಮಾಡಿ ಮಾತನಾಡಿದ ಅವರು, ನಮ್ಮ ಗ್ಯಾರಂಟಿ ಯೋಜನೆಗಳನ್ನು ಟೀಕಿಸುತ್ತಿದ್ದ ಬಿಜೆಪಿಯವರೇ ನಮ್ಮ ಗ್ಯಾರಂಟಿಗಳನ್ನು ಕಾಪಿ ಮಾಡಿದ್ದಾರೆ. ನಮ್ಮ ಗ್ಯಾರಂಟಿಗಳನ್ನು ಬೇರೆ ಹೆಸರಲ್ಲಿ ಅವರು ಘೋಷಿಸಿದ್ದಾರೆ. ಆದರೂ ಮಹಾರಾಷ್ಟ್ರ ಚುನಾವಣೆ ವೇಳೆ ಕರ್ನಾಟಕದಲ್ಲಿ ಗ್ಯಾರಂಟಿಗಳು ಜಾರಿಯೇ ಆಗಿಲ್ಲ ಎಂದು ಸುಳ್ಳು ಜಾಹಿರಾತು ನೀಡಿದರು ಎಂದು ವ್ಯಂಗ್ಯವಾಡಿದರು.

ಇವತ್ತು ಊಹಾ ಪತ್ರಿಕೋದ್ಯಮ ವ್ಯಾಪಕವಾಗುತ್ತಿದೆ. ಇದು ಅಪಾಯಕಾರಿ. ನಾನು ಇವತ್ತಿನವರೆಗೂ ಯಾವ ಮಾಧ್ಯಮದವರಿಗೂ ಯಾಕೆ ಹೀಗೆ ಬರಿದ್ರಿ ಅಂತ ಕೇಳಿಲ್ಲ ಆದರೆ ನೀವು ಜನರ ಧ್ವನಿಯಾಗಿ ಕೆಲಸ ಮಾಡಬೇಕು. ಸಾಧ್ಯವಾದರೆ ಸತ್ಯ ಬರೆಯೋಕೆ ಟ್ರೈ ಮಾಡಿ ನೋಡೋಣ ಎಂದರು.

ಮನಸಾಕ್ಷಿಗೆ ತಕ್ಕಂತೆ ಮಾಧ್ಯಮಗಳು ವರದಿ ಮಾಡಿದರೆ ಸಮಾಜಕ್ಕೆ ಅದಕ್ಕಿಂತ ದೊಡ್ಡ ಸೇವೆ ಇಲ್ಲ. ಸುದ್ದಿಗಳನ್ನು ವೈಭವೀಕರಿಸುವುದು, ಮೂಢ ನಂಬಿಕೆಗಳನ್ನು ಬೆಂಬಲಿಸೋಕೆ ಹೋಗಬೇಡಿ. ನನ್ನ ಕಾರು ಮೇಲೆ ಕಾಗೆ ಕುಳಿತಿದ್ದಕ್ಕೆ ಜ್ಯೋತಿಷಿಗಳನ್ನು ಚಾನಲ್‌ಗಳಿಗೆ ಕರೆಸಿ ಏನೆಲ್ಲಾ ಹೇಳಿಸಿದಿರಿ. ನಾನು 5 ವರ್ಷ ಮುಖ್ಯಮಂತ್ರಿಯಾಗಿ ಪೂರ್ಣಗೊಳಿಸಲ್ಲ ಎಂದು ತೋರಿಸಿದಿರಿ. ಆದರೆ ನಾನು ಐದು ವರ್ಷ ಪೂರೈಸಿ ಎರಡನೇ ಬಾರಿ ಸಿಎಂ ಆದೆ. ಈಗ ಹೇಳಿ ಕಾಗೆ ಸುದ್ದಿಯಿಂದ ಮಾಧ್ಯಮಗಳ ವಿಶ್ವಾಸಾರ್ಹತೆ ಕಡಿಮೆ ಆಯ್ತೋ ಇಲ್ವೋ ಎಂದು ಪ್ರಶ್ನಿಸಿದರು.

ನಾವು ಜನಪರ ಕೆಲಸ ಮಾಡದಿದ್ದಾಗ, ಕೊಟ್ಟ ಮಾತು ಈಡೇರಿಸದಿದ್ದಾಗ ಅದನ್ನು ಬರೆದು ಜನರ ಕಣ್ಣು ತೆರೆಸುವ ಹಕ್ಕು ಜವಾಬ್ದಾರಿ ಮಾಧ್ಯಮದವರ ಮೇಲಿದೆ. ಅದನ್ನು ನಿಭಾಯಿಸಿ ಎಂದು ಕರೆ ನೀಡಿದರು. ನಾವು ಊಟಕ್ಕೆ ಸೇರಿ ಏನೋ ಮಾತಾಡಿರುತ್ತೇವೆ. ಆದರೆ ಮಾಧ್ಯಮಗಳೇ ಡೈಲಾಗ್ ಬರೆದು ಬಿಡುತ್ತಾರೆ. ನಮಗೆ ಗೊತ್ತೇ ಇರದ ವಿಷಯವನ್ನು ಅವರೇ ಡೈಲಾಗ್ ಬರೆದು ತೋರಿಸಿದ್ದಾರೆ ಎಂದು ಟೀಕಿಸಿದರು. ಬುದ್ಧ, ಬಸವ, ಅಂಬೇಡ್ಕರ್ ಹೇಳಿದ ಸಮ ಸಮಾಜದ ಆಶಯ ಈಡೇರಿಸುವ ದಿಕ್ಕಿನಲ್ಲಿ ವೃತ್ತಿಪರತೆ ನಿರ್ವಹಿಸಿದರೆ ಅದು ಸಮಾಜಕ್ಕೆ ಉಪಯೋಗವಾಗುತ್ತದೆ ಎಂದು ಎಲ್ಲಾ ಪ್ರಶಸ್ತಿ ಪುರಸ್ಕೃತರಿಗೆ ಶುಭ ಹಾರೈಸಿದರು.

ವರ್ಷದ ವ್ಯಕ್ತಿ ಪ್ರಶಸ್ತಿ ಪುರಸ್ಕೃತರಾದ ಸಚಿವ ಎಂ.ಬಿ.ಪಾಟೀಲ್, ಸನ್ಮಾನಿತರಾದ ಸಚಿವರುಗಳಾದ ಲಕ್ಷ್ಮೀ ಹೆಬ್ಬಾಳ್ಕರ್, ಕೆ.ಜೆ.ಜಾರ್ಜ್, ಕೆ.ಹೆಚ್.ಮುನಿಯಪ್ಪ, ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಸಿಎಂ ರಾಜಕೀಯ ಕಾರ್ಯದರ್ಶಿಗಳಾದ ಗೋವಿಂದ ರಾಜು, ನಸೀರ್ ಅಹಮದ್, ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೆಷಾ ಖಾನುಂ, ಸಚಿವ ಜಮೀರ್ ಅಹಮದ್ ಖಾನ್ ಅವರ ಮಾಧ್ಯಮ ಸಂಯೋಜಕ ಲಕ್ಷ್ಮೀನಾರಾಯಣ್, ಸಾಧು ಕೋಕಿಲಾ ಅವರು ಉಪಸ್ಥಿತರಿದ್ದರು.

ವಿಶ್ವಮಾನವ ಉದ್ಯಾನವನದಲ್ಲಿ ಕುವೆಂಪು ಜನ್ಮ ದಿನೋತ್ಸವ ಆಚರಣೆ

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

ಮೈಸೂರು, ಜ.12(ಎಂಕೆ)– ಮೈಸೂರಿನ ಗನ್‌ಹೌಸ್ ಎದುರಿನ ವಿಶ್ವಮಾನವ ಉದ್ಯಾನವನದಲ್ಲಿ ಮೈಸೂರು ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ರಾಷ್ಟ್ರಕವಿ ಕುವೆಂಪು ಅವರ 121ನೇ ಜನ್ಮದಿನೋತ್ಸವ ಆಚರಿಸಲಾಯಿತು.

ಉದ್ಯಾನವನದಲ್ಲಿರುವ ಕುವೆಂಪು ಅವರ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಟಿ.ಎಸ್.ಶ್ರೀವತ್ಸ, ಎಸ್‌ಎಸ್‌ಎಲ್ ಮತ್ತು ಪಿಯುಸಿ ಪರೀಕ್ಷೆಯ ಕನ್ನಡ ವಿಷಯದಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಕುವೆಂಪು ಅವರ ಬಗ್ಗೆ ಪ್ರಬಂಧ, ಕವನ, ಭಾವಚಿತ್ರ ಮತ್ತು ಕುವೆಂಪು ಕಂಡ ಪ್ರಕೃತಿ ಚಿತ್ರಗಳನ್ನು ಬಿಡಿಸಿ ವಿಜೇತರಾದ ಮಕ್ಕಳಿಗೆ ಪ್ರಶಸ್ತಿ ನೀಡಿ ಅಭಿನಂದಿಸಿದರು.



ಕುವೆಂಪು ಜನ್ಮ ದಿನೋತ್ಸವದ ಅಂಗವಾಗಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಶಾಸಕ ಟಿ.ಎಸ್.ಶ್ರೀವತ್ಸ, ವಿದ್ವಾಂಸ ಪ್ರೊ.ಹೆಚ್.ಎಸ್.ಹರಿಶಂಕರ್, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಮೈಸೂರು ನಗರ ಪಾಲಿಕೆ ಆಯುಕ್ತ ಡಾ.ಅಶಾದ್ ಉರ್ ರೆಹಮಾನ್ ಷರೀಫ್ ಮತ್ತಿತರರಿದ್ದರು.

ಈ ವೇಳೆ ಕುವೆಂಪು ಅವರ ಕುರಿತು ಮಾತನಾಡಿದ ವಿದ್ವಾಂಸ ಪ್ರೊ.ಹೆಚ್.ಎಸ್.ಹರಿಶಂಕರ್, ಕುವೆಂಪು ಅವರ ಸಾಹಿತ್ಯವನ್ನು ಕುಳಿತು ಕೇಳುವುದಕ್ಕೆ ಸಮಾದಾನದ ಮನಸ್ಥಿತಿ ಇರಬೇಕು 19ನೇ ಶತಮಾನದ ಉತ್ತರಾರ್ಧ ಮತ್ತು 20ನೇ ಶತಮಾನದ ಪೂರ್ವಾರ್ಧ ಕನ್ನಡ ಸಾಹಿತ್ಯದ ಅಪರೂಪದ ಕಾಲಘಟ್ಟವಾಗಿದೆ. 20ನೇ ಶತಮಾನದಲ್ಲಿ ಬೆಳೆದ ನವೋದಯ ಸಾಹಿತ್ಯಕ್ಕೆ ಬಿ.ಎಂ.ಶ್ರೀಕಂಠಯ್ಯ ಆದ್ಯ ಪ್ರವರ್ತಕರಾದರೆ, ಅವರ ಶಿಷ್ಯರಾಗಿದ್ದ ಕುವೆಂಪು ಮಹಾಕವಿಯಾಗಿ ನವೋದಯ ಸಾಹಿತ್ಯಕ್ಕೆ ಹೊಸ ರೂಪ ತಂದರು. ಅವರನ್ನು ಪಡೆದದ್ದೇ ಕನ್ನಡದ ಪುಣ್ಯ ಎಂದು ಸ್ಮರಿಸಿದರು.

ಪ್ರತೀ ವರ್ಷ ಕುವೆಂಪು ಅವರನ್ನು ನೆನೆದು ಸುಮ್ಮನಾಗುವುದಲ್ಲ ಕನಿಷ್ಠ ಆರು ತಿಂಗಳಿಗೊಮ್ಮೆಯಾದರೂ ಕುವೆಂಪು ಅವರ ಒಂದೊಂದು ಕೃತಿಯನ್ನು ಕೊಂಡು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಕನ್ನಡ ಭಾಷೆ ಮೇಲಿನ ಅಭಿಮಾನ ಶೂನ್ಯವಾಗಬಾರದೆಂದರೆ ಕನ್ನಡ ಪುಸ್ತಕಗಳನ್ನು ಓದುವ ಅಭ್ಯಾಸವನ್ನು ರೂಡಿಸಿಕೊಳ್ಳಬೇಕು. ವಿದ್ಯಾರ್ಥಿಗಳು ಕನ್ನಡ ಸಾಹಿತ್ಯ ಅಧ್ಯಯನ ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಮಾತನಾಡಿ, ವಿಶ್ವದಲ್ಲಿಯೇ ಮಕ್ಕಳ ಸಾಹಿತ್ಯದಿಂದ ಹಿಡಿದು ಮಹಾ ಸಾಹಿತ್ಯದವರೆಗೂ ಸಾಹಿತ್ಯ ರಚನೆ ಮಾಡಿದ್ದು ಕುವೆಂಪು ಅವರು ಮಾತ್ರ. ಕುವೆಂಪು ಅವರಿಂದ ಕನ್ನಡ ಉದ್ದಾರವಾಗಿದೆ ಎಂದು ನೆನೆದರು.

ಮೈಸೂರು ನಗರ ಪಾಲಿಕೆ ಆಯುಕ್ತ ಡಾ.ಅಶಾದ್ ಉರ್ ರೆಹಮಾನ್ ಷರೀಫ್, ಉದ್ಯಮಿ ಎ.ಪಿ.ನಾಗೇಶ್, ನಗರಪಾಲಿಕ ಮಾಜಿ ಸದಸ್ಯ ಬಿ.ವಿ.ಮಂಜುನಾಥ್, ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಎಂ.ಚಂದ್ರ ಶೇಖರ್, ವ್ಯಂಗ್ಯಚಿತ್ರಕಾರ ನಾಗೇಶ್‌ಬಾಬು, ಜಿ.ಪ್ರಕಾಶ್, ಕೆಂಪಣ್ಣ, ಗಂಟಯ್ಯ (ಕೃಷ್ಣಪ್ಪ), ಪಾಲಿಕೆ ಅಧಿಕಾರಿಗಳಾದ ಅಂಕಯ್ಯ, ಚೇತನಾ ಮತ್ತಿತರರು ಉಪಸ್ಥಿತರಿದ್ದರು.

ಅದ್ದೂರಿಯಾಗಿ ನಡೆದ ಹೆಜ್ಜೆ–ಗೆಜ್ಜೆ ರಾಷ್ಟ್ರೀಯ ನೃತ್ಯೋತ್ಸವ

ಕಲಾಭಿಮಾನಿಗಳ ಹೃನ್ಮನ ಸೆಳೆದ ಶಿವತಾಂಡವ ನೃತ್ಯ

ಮೈಸೂರು, ಜ.12(ಎಂಕೆ)– ಶಿವತಾಂಡವ ಅಮೋಘ ನೃತ್ಯ ಪ್ರದರ್ಶನ, ಸಾಧಕರಿಗೆ ಅಭಿನಂದನೆ, ಶಿಷ್ಯ ವೃಂದದ ಕಲಿಕಾ ಪ್ರೌಢಿಮೆಯ ಅನಾವರಣದೊಂದಿಗೆ ಶ್ರೀ ನಿಮಿಷಾಂಬ ಡಾನ್ಸ್ ಪ್ರಮೋ ಟರ್ಸ್‌ನ 27ನೇ ವರ್ಷದ ಹೆಜ್ಜೆ–ಗೆಜ್ಜೆ ರಾಷ್ಟ್ರೀಯ ನೃತ್ಯೋತ್ಸವ ಅದ್ದೂರಿಗೆ ನಡೆಯಿತು.

ಮೈಸೂರಿನ ಕರ್ನಾಟಕ ಕಲಾಮಂದಿರದಲ್ಲಿ ಭಾನುವಾರ ನೂರಾರು ಕಲಾವಿದರ ಸಮಾಗಮದ ನಡುವೆ ಜರುಗಿದ ನೃತ್ಯೋತ್ಸವದಲ್ಲಿ, 200 ಮಂದಿ ಕಲಾವಿದರಿಂದ ಪ್ರದರ್ಶನಗೊಂಡ ಶಿವತಾಂಡವ ನೃತ್ಯ ಪ್ರದರ್ಶನ ಕಲಾ ಆರಾಧಕರ ಹೃನ್ಮನ ಸೆಳೆಯಿತು.



ಹೆಜ್ಜೆ–ಗೆಜ್ಜೆ ರಾಷ್ಟ್ರೀಯ ನೃತ್ಯೋತ್ಸವದಲ್ಲಿ ಹಿರಿಯ ಚಲನಚಿತ್ರ ನಟಿ ಗಿರಿಜಾ ಲೋಕೇಶ್ ಹಾಗೂ ಆರ್ಟಿಕ್ಯುಲೇಟ್ ಟ್ರಸ್ಟ್ ಫಾರ್ ಆರ್ಟ್ಸ್ ನಿರ್ದೇಶಕ ಮೈಸೂರು ಬಿ.ನಾಗರಾಜ್ ಅವರಿಗೆ 'ಕನ್ನಡ ರತ್ನ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇದಕ್ಕೂ ಮುನ್ನ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಖ್ಯಾತ ರಂಗಭೂಮಿ ಹಿರಿಯ ಕಲಾವಿದೆ, ಚಲನಚಿತ್ರ ನಟಿ ಗಿರಿಜಾ ಲೋಕೇಶ್ ಹಾಗೂ ಆರ್ಟಿಕ್ಯುಲೇಟ್ ಟ್ರಸ್ಟ್ ಫಾರ್ ಆರ್ಟ್ಸ್ ನಿರ್ದೇಶಕ ಮೈಸೂರು ಬಿ.ನಾಗರಾಜ್ ಅವರಿಗೆ 'ಕನ್ನಡ ರತ್ನ' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಹಾಗೆಯೇ ರಂಗಕರ್ಮಿ ಡಾ.ವಸಂತಕುಮಾರ್, ವಿದ್ವಾನ್ ನಿಖಿಲ್ ಪರಮಾರ್, ವಿದುಷಿ ಬೆಳ್ಳಿ ಸುರೇಶ್, ವಿದ್ವಾನ್ ನಿದಾಗ್, ವಿದುಷಿ ರಚನಾ ಕರಣಿಕ್ ಹಾಗೂ ವೈಶಲಿ ಪ್ರಭು ಅವರಿಗೆ ಹೆಜ್ಜೆ–ಗೆಜ್ಜೆ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು.

ಕಾರ್ಯಕ್ರಮದ ಗೌರವ ಅತಿಥಿಯಾಗಿ ಭಾಗವಹಿಸಿದ್ದ ಭಾರತೀಯ ಜೈನ್ ಮಿಲನ್ ರಾಷ್ಟ್ರೀಯ ಕಾರ್ಯಾಧ್ಯಕ್ಷ ಡಿ.ಸುರೇಂದ್ರ ಕುಮಾರ್ ಮಾತನಾಡಿ, ಶ್ರೀ ನಿಮಿಷಾಂಬ ಡಾನ್ಸ್ ಪ್ರಮೋಟರ್ಸ್ ಸಂಸ್ಥೆಯು ನಿರಂತರವಾಗಿ 27 ವರ್ಷದಿಂದ ಸಂಗೀತ, ನೃತ್ಯದ ಮೂಲಕ ಕಲಾ ಸೇವೆ ಮಾಡಿಕೊಂಡು ಬಂದಿರುವುದು ಶ್ಲಾಘನೀಯ. ನಮ್ಮ ಸಂಸ್ಕೃತಿ ಉಳಿಸುವಲ್ಲಿ ಪ್ರಮುಖ ಪಾತ್ರವಹಿಸಿದೆ. ಯಾವುದೇ ಕ್ಷೇತ್ರದಲ್ಲಿ ಮುಖ್ಯವಾಗಿ ಶ್ರದ್ಧೆ ಇರಬೇಕು ಎಂದರು.


ಯಾವುದೇ ವಿದ್ಯೆ ನಿರರ್ಥಕವಲ್ಲ: ಕನ್ನಡ ರತ್ನ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಹಿರಿಯ ಚಲನಚಿತ್ರ ನಟಿ ಗಿರಿಜಾ ಲೋಕೇಶ್, ಬದುಕಿನಲ್ಲಿ ಯಾವುದೇ ವಿದ್ಯೆ ನಿರರ್ಥಕವಲ್ಲ. ಅದು ಯಾವುದಾದರೂ ಸಂದರ್ಭದಲ್ಲಿ ಉಪಯುಕ್ತವಾಗಲಿದೆ. ಪ್ರತಿಯೊಬ್ಬರು ಸಮಾಜಮುಖಿ ಕೆಲಸದಲ್ಲಿ ತೊಡಗಿಕೊಳ್ಳಬೇಕು. ಕೈಲಾದ ಸೇವೆ ಮಾಡಬೇಕು. ಕಲಾವಿದರಿಗೆ ಪ್ರೋತ್ಸಾಹ ಅಗತ್ಯ ಎಂದರು.

ಅಟೆನ್ ಡಾನ್ಸ್‌ನ ಆಶಿಶ್ ಮೋಹನ್ ಖೋಕರ್, ಜಿನ ಭಜನಾ ಕೇಂದ್ರ ಸಮಿತಿ ಮಾರ್ಗದರ್ಶಿ ಶ್ರದ್ಧಾ ಅಮಿತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಂ.ಡಿ.ಸುದರ್ಶನ್, ವಿದ್ವಾನ್ ಶ್ರೀಧರ್ ಜೈನ್, ವಿದುಷಿ ಸೌಮ್ಯ ಶ್ರೀಧರ್ ಜೈನ್ ಉಪಸ್ಥಿತರಿದ್ದರು.

ಮೈಸೂರು ಸಂಸ್ಕೃತಿಯ ಪುಣ್ಯ ಭೂಮಿ...

ಮೈಸೂರು ಸಾಂಸ್ಕೃತಿಕ ನಗರಿ ಮಾತ್ರವಲ್ಲ. ಸಂಸ್ಕೃತಿಯ ಪುಣ್ಯ ಭೂಮಿ. ಇಲ್ಲಿ ಕಲೆಗೆ ವಿಶೇಷ ಸ್ಥಾನಮಾನ ನೀಡಲಾಗಿದೆ. ಭರತನಾಟ್ಯ ಕಲೆ ಉಳಿಸಬೇಕಿದ್ದು ಎಲ್ಲರ ಪ್ರೋತ್ಸಾಹ ಅಗತ್ಯವಾಗಿದೆ ಹಾಗೆಯೇ ಕಲಾ ಸೇವೆಯನ್ನು ಗುರ್ತಿಸಬೇಕು. – ಡಿ.ಸುರೇಂದ್ರ ಕುಮಾರ್, ರಾಷ್ಟ್ರೀಯ ಕಾರ್ಯಾಧ್ಯಕ್ಷ, ಭಾರತೀಯ ಜೈನ್ ಮಿಲನ್

ಟಿ.ಆರ್.ಚಿನ್ನಸ್ವಾಮಿ ನಿಧನ



ಕುಶಾಲನಗರ, ಜ.12–ಕೊಡಗು ಜಿಲ್ಲಾ ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷ, ನಿವೃತ್ತ ಮುಖ್ಯ ಶಿಕ್ಷಕರಾದ ಮೂಲತಃ ಕುಶಾಲನಗರದ ಹೌಸಿಂಗ್ ಬೋರ್ಡ್ ಬಡಾವಣೆ ನಿವಾಸಿ ಟಿ.ಆರ್.ಚಿನ್ನಸ್ವಾಮಿ (79) ಭಾನುವಾರ ನಿಧನರಾದರು. ಮೃತರು ಪತ್ನಿ, ಪುತ್ರ ಹಾಗೂ ಮೂವರು ಪುತ್ರಿಯರನ್ನು ಅಗಲಿದ್ದಾರೆ. ಸೋಮವಾರ ಬೆಳಗ್ಗೆ ಪಟ್ಟಣದ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜಿ.ನರಸಿಂಹಮೂರ್ತಿ



ಮೈಸೂರು, ಜ.12– ಮೈಸೂರಿನ ತಪೋವನ ಸೋಲೇಸ್ ಅಪಾರ್ಟ್‌ಮೆಂಟ್ ನಿವಾಸಿ ಜಿ.ನರಸಿಂಹಮೂರ್ತಿ(84) ಅವರು ಭಾನುವಾರ ನಿಧನರಾದರು.

ಇಬ್ಬರು ಪುತ್ರಿಯರಾದ ವಿದ್ಯಾರಾವ್ ಮತ್ತು ಕೃಪಾ ಮೂರ್ತಿ ಸೇರಿ ದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಗಾಲ್ಫ್ ಆಟಗಾರರಾಗಿದ್ದ ನರಸಿಂಹಮೂರ್ತಿ ಅವರು ಜೆಡಬ್ಲ್ಯೂಜಿಸಿ ಇಂಜಿನಿಯರ್ಸ್ ಗಾಲ್ಫಿಂಗ್ ಅಸೋಸಿಯೇಷನ್ ಅನ್ನು ರಚಿಸಿದ್ದರು. ಅವರ ಪಾರ್ಥಿವ ಶರೀರವನ್ನು ಕಾಳಿದಾಸ ರಸ್ತೆ 16ನೇ ಕ್ರಾಸ್‌ನಲ್ಲಿರುವ ಪುತ್ರಿಯ ನಿವಾಸ(#117)ದ ಬಳಿ ಅಂತಿಮ ದರ್ಶನಕ್ಕಿಡ ಲಾಗಿದ್ದು, ಸೋಮವಾರ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸೈಯದ್ ಅಸ್ಲಂ



ಮೈಸೂರು, ಜ.12– ಮೈಸೂರಿನ ಕಲ್ಯಾಣಗಿರಿನಗರ ನಿವಾಸಿ ಸೈಯದ್ ಅಸ್ಲಂ(64) ಅವರು ಭಾನುವಾರ ನಿಧನರಾದರು.

ಇವರು ಮೈಸೂರಿನ ಬಿಎಆರ್‌ಸಿಯಲ್ಲಿ ಪರಮಾಣು ವಿಜ್ಞಾನಿಯಾಗಿ ಕಾರ್ಯ ನಿರ್ವಹಿಸಿ, ನಿವೃತ್ತರಾಗಿದ್ದರು. ಟಿಪ್ಪು ಸರ್ಕಲ್ ಬಳಿಯ ಮುಖ್ಯ ಸ್ಮಶಾನದಲ್ಲಿ ಸೋಮವಾರ ಮಧ್ಯಾಹ್ನ 1.30ರ ನಂತರ ಅಂತಿಮ ವಿಧಿವಿಧಾನಗಳು ನೆರವೇರಲಿವೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಮಿತ್ರ

ಮದ್ದೂರಿನ ಸೊಸೆ ಡಾ. ಪ್ರಿಯಾ ಗೋಸ್ವಾಮಿಗೆ ಮಿಸೆಸ್ ಇಂಡಿಯಾ ಪ್ರೈಡ್ ಆಫ್ ನೇಷನ್ ಕಿರೀಟ

ನವದೆಹಲಿ, ಜ12– ಮಂಡ್ಯ ಜಿಲ್ಲೆ ಮದ್ದೂರಿನ ಸೊಸೆ ಡಾ.ಪ್ರಿಯಾ ಗೋಸ್ವಾಮಿ ಅವರು ಮಿಸೆಸ್ ಇಂಡಿಯಾ ಪ್ರೈಡ್ ಆಫ್ ನೇಷನ್–2024 ಸ್ಪರ್ಧೆಯಲ್ಲಿ ಎಂಚಾಟಿಂಗ್ ವಿಭಾಗದ ಕಿರೀಟವನ್ನು ಗೆದ್ದಿದ್ದಾರೆ. ಪಶು ವೈದ್ಯೆಯಾಗಿರುವ ಇವರು ಭಾರತೀಯ ಸೇನೆಯ ಕರ್ನಲ್ ಸಂಜೀತ್ ಅವರ ಪತ್ನಿ.

ಇತ್ತೀಚೆಗೆ ನವದೆಹಲಿಯಲ್ಲಿ ಮದುವೆಯಾದ ಸ್ತ್ರೀಯರಿಗಾಗಿ ನಡೆದ ಸೌಂದರ್ಯ ಸ್ಪರ್ಧೆ ಮಿಸೆಸ್ ಇಂಡಿಯಾ ಪ್ರೈಡ್ ಆಫ್ ನೇಷನ್–2024 ಕಿರೀಟವು ಕನ್ನಡತಿ ಡಾ.ಪ್ರಿಯಾ ಗೋಸ್ವಾಮಿಗೆ ಒಲಿದು ಬಂದಿದೆ.

ನವದೆಹಲಿಯಲ್ಲಿ ಐದು ದಿನಗಳು ನಡೆದ ಅಂತಿಮ ಸುತ್ತಿನಲ್ಲಿ ಕರ್ನಾಟಕದ ಮದ್ದೂರಿನ ಸೊಸೆ ಡಾ.ಪ್ರಿಯಾ ಗೋಸ್ವಾಮಿ ಅವರು ಎಂಚಾಟಿಂಗ್ ವಿಭಾಗದ ಕಿರೀಟ ಗೆದ್ದು ಬೀಗಿದ್ದಾರೆ. ಜೊತೆಗೆ ಅದೇ ವೇದಿಕೆಯಲ್ಲಿ ಸೋಷಿಯಲ್ ಇನ್ಫ್ಲುಯೆನ್ಸ್ ಗೌರವಕ್ಕೂ ಪಾತ್ರರಾಗಿದ್ದಾರೆ. ವೃತ್ತಿಯಿಂದ ಪಶುವೈದ್ಯರಾದ ಡಾ ಪ್ರಿಯಾ ಗೋಸ್ವಾಮಿ, ಮೂಲತಃ ಪಂಜಾಬಿಯಾದರೂ ಗೋವಾದಲ್ಲಿ ಬೆಳೆದವರು. ಕಳೆದ ಎರಡು ದಶಕಗಳಿಂದ ಮದ್ದೂರಿನ ನಿವಾಸಿಯಾಗಿ ಕನ್ನಡತಿಯಾಗಿದ್ದಾರೆ. ಭಾರತೀಯ ಸೇನೆಯಲ್ಲಿರುವ ಇವರ ಪತಿ ಕರ್ನಲ್ ಸಂಜೀತ್ ಮಂಡ್ಯ ಜಿಲ್ಲೆಯ ಮದ್ದೂರಿನವರು. ಮದ್ದೂರಿನ ಎಚ್.ಕೆ. ವೀರಣ್ಣಗೌಡ ಕಾಲೇಜಿನ ನಿವೃತ್ತ ಕನ್ನಡ ಪ್ರಾಧ್ಯಾಪಕ ಪ್ರೊ..ಬಿ.ಸಿದ್ದೇಗೌಡ ಅವರ ಪುತ್ರರಾದ ಕರ್ನಲ್ ಸಂಜೀತ್, ಪ್ರಸ್ತುತ ಉತ್ತರಖಾಂಡ್‌ನಲ್ಲಿ ಭಾರತೀಯ ಸೇನೆಯ ಕುದುರೆ ತರಬೇತಿ ವಿಭಾಗದ ಡೆಪ್ಯೂಟಿ ಕಮಾಂಡೆಂಟ್ ಆಗಿದ್ದಾರೆ.

ಪಶುವೈದ್ಯರಾಗಿರುವ ಡಾ.ಪ್ರಿಯಾ ಕೂಡ ಭಾರತೀಯ ಸೇನೆಯ ಕೆಲವು ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ. 16 ವರ್ಷದ ಮಗಳು ಧ್ರುವಿ ಸಂಜಿತ್ ಹಾಗೂ 9 ವರ್ಷದ ಮಗ ಶೌರ್ಯಗೌಡ, ಮಾವ ಸಿದ್ದೇಗೌಡ, ಅತ್ತೆ ಸುಮಿತ್ರಮ್ಮ ಅವರ ಸಹಕಾರ ಹಾಗೂ ಪತಿ ಕರ್ನಲ್ ಸಂಜಿತ್, ನಾದಿನಿ ಸುಪ್ರೀತಾ ಅವರ ಪ್ರೋತ್ಸಾಹವೇ ಈ ಯಶಸ್ಸಿಗೆ ಕಾರಣ ಎಂದು ಡಾ.ಪ್ರಿಯಾ ಗೋಸ್ವಾಮಿ ಸಂತಸ ಹಂಚಿಕೊಂಡಿದ್ದಾರೆ. ಈ ಕಾರ್ಯಕ್ರಮದ ನಿರ್ದೇಶಕರಾದ ಭಾರ್ಕಾ ನಂಗಿಯಾ ಮತ್ತು ಅಭಿಷೇಕ್ ಅವರ ಸಲಹೆಗಳೇ ಗೆಲುವಿಗೆ ದಾರಿ ತೋರಿಸಿದವು ಎಂದು ಸ್ಮರಿಸಿದ್ದಾರೆ.



ನವದೆಹಲಿಯಲ್ಲಿ ಮದುವೆಯಾದ ಸ್ತ್ರೀಯರಿಗಾಗಿ ನಡೆದ ಸೌಂದರ್ಯ ಸ್ಪರ್ಧೆ ಮಿಸೆಸ್ ಇಂಡಿಯಾ ಪ್ರೈಡ್ ಆಫ್ ನೇಷನ್–2024 ಕಿರೀಟಕ್ಕೆ ಕನ್ನಡತಿ ಡಾ. ಪ್ರಿಯಾ ಗೋಸ್ವಾಮಿ ಭಾಜನರಾಗಿದ್ದಾರೆ.

ಚುನಾವಣೆ ಮೂಲಕ ಜೆಡಿಎಸ್ ನೂತನ ರಾಜ್ಯಾಧ್ಯಕ್ಷರ ಆಯ್ಕೆಗೆ ನಿರ್ಧಾರ

ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ



ಬೆಂಗಳೂರು, ಜ.12– ಜೆಡಿಎಸ್ ರಾಜ್ಯಾಧ್ಯಕ್ಷರ ಆಯ್ಕೆಯನ್ನು ಮುಂದಿನ ಏಪ್ರಿಲ್ ತಿಂಗಳ ಒಳಗೆ ಚುನಾವಣೆ ಮೂಲಕ ನಡೆಸುವ ನಿರ್ಧಾರವನ್ನು ಜೆಡಿಎಸ್ ಕೈಗೊಂಡಿದೆ ಎಂದು ಕೇಂದ್ರ ಸಚಿವರು ಹಾಗೂ ಪಕ್ಷದ ರಾಜ್ಯಾಧ್ಯಕ್ಷ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದರು.


ಜೆ.ಪಿ. ಭವನದಲ್ಲಿ ಪಕ್ಷದ ಮುಖಂಡರ ಜೊತೆ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು, ರಾಜ್ಯಾಧ್ಯಕ್ಷ ಸ್ಥಾನಕ್ಕೆ ಯಾರನ್ನು ಆಯ್ಕೆ ಮಾಡಬೇಕು ಎಂಬ ಬಗ್ಗೆ ಈ ಸಭೆಯಲ್ಲಿ ಚರ್ಚೆ ಆಗಿಲ್ಲ. ಪಕ್ಷದ ದ್ವೈವಾರ್ಷಿಕ ಸಾಂಸ್ಥಿಕ ಚುನಾವಣೆ, ಸದಸ್ಯತ್ವ ಅಭಿಯಾನ ಚುರುಕುಗೊಳಿಸುವುದು, ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆ ತಯಾರಿ ಹಾಗೂ ಪಕ್ಷ ಸಂಘಟನೆ ವಿಷಯಗಳ ಬಗ್ಗೆ ಸಭೆಯಲ್ಲಿ ಮಹತ್ವದ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ ಎಂದರು.

ಮುಂದಿನ ಏಪ್ರಿಲ್ ಒಳಗೆ ರಾಜ್ಯ ಘಟಕದ ಅಧ್ಯಕ್ಷ ಸ್ಥಾನವನ್ನು ಚುನಾವಣೆ ಮೂಲಕ ಆಯ್ಕೆ ಮಾಡುವ ತೀರ್ಮಾನ ಆಗಿದೆ. ಪಕ್ಷದ ಸಂಘಟನೆ ಬಗ್ಗೆ ಪಕ್ಷದ ನಾಯಕರಿಗೆ ಕಠಿಣವಾಗಿಯೇ ಹೇಳಿದ್ದೇನೆ. ಯಾರು ಪ್ರಾಮಾಣಿಕವಾಗಿ ಪಕ್ಷದ ಸಂಘಟನೆಗೆ ದುಡಿಯು ತ್ತಾರೋ ಅಂಥವರಿಗೆ ಆದ್ಯತೆ ಕೊಡುತ್ತೇವೆ. ನಾನು ಕೂಡ ಪಕ್ಷ ಸಂಘಟನೆಯಲ್ಲಿ ನಿಯಮಿತವಾಗಿ ತೊಡಗಿಸಿಕೊಳ್ಳುತ್ತೇನೆ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ವಾರದಲ್ಲಿ ನಾಲ್ಕು ದಿನ ನವದೆಹಲಿ ಸಚಿವಾಲಯದಲ್ಲಿ ಕೆಲಸ ಮಾಡುತ್ತೇನೆ. ಒಂದು ಅಥವಾ ಎರಡು ದಿನ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವಾಲಯದ ಕಾರ್ಖಾನೆಗಳಿಗೆ ಭೇಟಿ ಕೊಡುತ್ತೇನೆ. ಉಳಿದ ಸಮಯವನ್ನು ಪಕ್ಷದ ಕೆಲಸಕ್ಕೆ ಮೀಸಲಿಡುತ್ತೇನೆ. ಪಕ್ಷದ ಸಂಘಟನೆ, ಸಭೆ, ಪ್ರವಾಸ, ಮಂಡ್ಯ ಕ್ಷೇತ್ರಕ್ಕೆ ಭೇಟಿ ಇತ್ಯಾದಿಗಳ ಬಗ್ಗೆ ವೇಳಾಪಟ್ಟಿ ಸಿದ್ಧ ಮಾಡಿಕೊಂಡಿದ್ದೇನೆ. ಇನ್ನು ಮುಂದೆ ಅದರಂತೆಯೇ ಕೆಲಸ ಮಾಡುತ್ತೇನೆ ಎಂದು ಸಚಿವರು ಹೇಳಿದರು.

ಸಚಿವ ಎಂ.ಬಿ.ಪಾಟೀಲ್ ವಿರುದ್ಧ ಕಿಡಿ: ಸಂಕ್ರಾಂತಿ ನಂತರ ಜೆಡಿಎಸ್ ಇರುವುದೇ ಇಲ್ಲ ಎಂದು ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ. ಸಚಿವರೇ, ಮೊದಲು ನಿಮ್ಮ ಪಕ್ಷದ ಕಥೆ ನೋಡಿಕೊಳ್ಳಿ. ದೆಹಲಿಯಲ್ಲಿ ಆಮ್ ಆದ್ಮಿ ಪಕ್ಷ ಕಾಂಗ್ರೆಸನ್ನು ದೂರ ಇಟ್ಟು ಏಕಾಂಗಿಯಾಗಿ ಚುನಾವಣೆ ಎದುರಿಸುತ್ತಿದೆ. ಇಂಡಿ ಕೂಟವನ್ನು ವಿಸರ್ಜನೆ ಮಾಡಿ ಎಂದು ಜಮ್ಮು ಕಾಶ್ಮೀರ್ ಸಿಎಂ ಓಮರ್ ಅಬ್ದುಲ್ಲಾ ಹೇಳುತ್ತಿದ್ದಾರೆ. ಮಹಾರಾಷ್ಟ್ರದಲ್ಲಿ ನಾವು ಏಕಾಂಗಿಯಾಗಿ ಸ್ಥಳೀಯ ಸಂಸ್ಥೆಗಳ ಚುನಾವಣೆ ಎದುರಿಸುತ್ತೇವೆ ಎಂದು ಶಿವಸೇನೆ ಹೇಳುತ್ತಿದೆ. ಅಲ್ಲೆಲ್ಲಾ ಎಲ್ಲಿದೆ ಕಾಂಗ್ರೆಸ್. ನಿಮ್ಮ ಪಕ್ಷದ ಒಳಗೆ ಏನಾಗುತ್ತಿದೆ ಎನ್ನುವುದನ್ನು ಮೊದಲು ನೋಡಿಕೊಳ್ಳಿ. ನಿಮ್ಮ ಪಕ್ಷದ ತಟ್ಟೆಯಲ್ಲಿಯೇ ಹೆಗ್ಗಣ ಸತ್ತುಬಿದ್ದಿದೆ ಎಂದು ಕುಮಾರಸ್ವಾಮಿ ಅವರು ಟಾಂಗ್ ಕೊಟ್ಟರು.

ಮಾರ್ಚ್‌ನಿಂದ ಜಿಲ್ಲಾ ಪ್ರವಾಸ, ಕಾರ್ಯಕರ್ತರ ಮನೆಯಲ್ಲೇ ವಾಸ್ತವ್ಯ ಹೂಡಿ ಪಕ್ಷ ಕಟ್ಟುವೆ

ಮಾಜಿ ಪ್ರದಾನಿ ಹೆಚ್.ಡಿ.ದೇವೇಗೌಡ



ಬೆಂಗಳೂರು, ಜ.12– ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮತ್ತು ಜೆಡಿಎಸ್ ಪಕ್ಷವನ್ನು ಮುಗಿಸಬೇಕೆಂದು ಕಾಂಗ್ರೆಸ್ ಹೊಂಚು ಹಾಕುತ್ತಿದೆ. ಯಾವುದೇ ಕಾರಣಕ್ಕೂ ಆ ಕನಸು ಈಡೇರುವುದಿಲ್ಲ ಎಂದು ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡ ತಿಳಿಸಿದರು.

ಜೆಡಿಎಸ್ ಪಕ್ಷದ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಮ್ಮದು ಸಮರ್ಥ ನಾಯಕರ, ಸಮರ್ಥ ಕಾರ್ಯಕರ್ತರ ಪಕ್ಷ. ನಮ್ಮ ಪಕ್ಷವನ್ನು ಬೇರೆಯವರು ಮುಗಿಸುವುದು ಅಸಾಧ್ಯ. ಮಾರ್ಚ್ ತಿಂಗಳಿಂದ ನಾನು ಜಿಲ್ಲೆಗಳಲ್ಲಿ ಪ್ರವಾಸ ಮಾಡುತ್ತೇನೆ, ಕಾರ್ಯಕರ್ತರ ಮನೆಗಳಲ್ಲಿಯೇ ವಾಸ್ತವ್ಯ ಹೂಡಿ ಪಕ್ಷ ಕಟ್ಟುತ್ತೇನೆ. ಸದಸ್ಯತ್ವ ಅಭಿಯಾನವನ್ನು ನೀವು ಮುಂದುವರಿಸಿ ಎಂದು ಕರೆ ನೀಡಿದರು.

ಕುಮಾರಸ್ವಾಮಿ ಅವರನ್ನು ಮುಗಿಸಿದರೆ ಜೆಡಿಎಸ್ ಮುಗಿದು ಹೋಗುತ್ತದೆ ಎಂದು ಕಾಂಗ್ರೆಸ್ ನಂಬಿದೆ. ಆದರೆ, ಅದು ಸಾಧ್ಯವಿಲ್ಲ. ಏಕೆಂದರೆ, ಕುಮಾರಸ್ವಾಮಿ ಅವರ ಹಿಂದೆ ಲಕ್ಷಾಂತರ ಕಾರ್ಯಕರ್ತರು ಇದ್ದಾರೆ. ಅವರು ಬಲಿಷ್ಠವಾಗಿ ನಿಂತಿದ್ದಾರೆ. ಹೀಗಾಗಿ ಅವರನ್ನು ಮುಗಿಸುವುದು ಸಾಧ್ಯವಿಲ್ಲದ ಮಾತು ದೇವೇಗೌಡರು ಖಡಕ್ ಸಂದೇಶ ರವಾನಿಸಿದರು.

ಜೆಡಿಎಸ್ ಕುಟುಂಬ ಆಧಾರಿತ ಪಕ್ಷ ಎಂದು ಕಾಂಗ್ರೆಸ್ ಹೇಳುತ್ತದೆ. ಯಾರಾದರೂ ಒಮ್ಮೆ ಕಾಂಗ್ರೆಸ್ ಪಕ್ಷದ ಕಚೇರಿಗೆ ಹೋಗಿ, ಅಲ್ಲಿ ಗೋಡೆಗಳ ಮೇಲೆ ನೇತು ಹಾಕಿರುವ ಫೋಟೋಗಳನ್ನು ಒಮ್ಮೆ ನೋಡಿ. ಕುಟುಂಬ ಆಧಾರಿತ ಪಾರ್ಟಿ ಯಾವುದು ಎನ್ನುವುದು ಗೊತ್ತಾಗುತ್ತದೆ ಎಂದು ಮಾಜಿ ಪ್ರಧಾನಿ ಗುಡುಗಿದರು.

2025ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ




ನಿಖಿಲ್ ಕುಮಾರಸ್ವಾಮಿ ಅಭಿಮಾನಿ ಬಳಗದ ವತಿಯಿಂದ ಹೊರತಂದಿರುವ ನೂತನ ವರ್ಷದ ಕ್ಯಾಲೆಂಡರ್ ಅನ್ನು ನಿಖಿಲ್ ಕುಮಾರಸ್ವಾಮಿ ಅವರು ಬೆಂಗಳೂರಿನ ತಮ್ಮ ನಿವಾಸದಲ್ಲಿ ಬಿಡುಗಡೆ ಮಾಡಿದರು. ಬಳಗದ ಅಧ್ಯಕ್ಷ ಪ್ರದೀಪ್ ಕೃಷ್ಣೇಗೌಡ, ಕುಮಾರ್, ಬಿಡನಹಳ್ಳಿ ಮಹೇಶ್, ಉಮೇಶ್, ನಾಗರಾಜು, ಚಂದ್ರಶೇಖರ್, ಅಜಯ್, ಸಚಿನ್, ಮನು ಮುಂತಾದವರಿದ್ದರು.

ವೈಭವಿಗೆ ಅಭಿನಂದನೆ...




ಮೈಸೂರಿನ ಜ್ಞಾನೋದಯ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಕೆ.ಕೆ.ವೈಭವಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ವತಿಯಿಂದ ತುಮಕೂರಿನಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ ಸಾಂಸ್ಕೃತಿಕ ಮತ್ತು ಸಹಪಠ್ಯ ಸ್ಪರ್ಧೆಯ ಭಕ್ತಿಗೀತೆ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಪಡೆದಿದ್ದಾರೆ. ಇವರನ್ನು ಕಾಲೇಜು ಆಡಳಿತ ಮಂಡಳಿ, ಪ್ರಾಂಶುಪಾಲರು, ಬೋಧಕ–ಬೋಧಕೇತರ ವರ್ಗ ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

ವಿದುಷಿ ಮೇಧಾ ಮಂಜುನಾಥ್‌ರಿಂದ ಗಾಯನ



ಮೈಸೂರಿನ ವೀಣೆ ಶೇಷಣ್ಣ ಭವನದ ಗಾನ ಭಾರತಿ ಸಭಾಂಗಣದಲ್ಲಿ ವಿದುಷಿ ಮೇಧಾ ಮಂಜುನಾಥ್ ಅವರಿಂದ ಗಾಯನ ಏರ್ಪಡಿಸಲಾಗಿತ್ತು. ಪಿಟೀಲು ವಾದನದಲ್ಲಿ ವಿದ್ವಾನ್ ಕೇಶವ್ ಮೋಹನ್, ಮೃದಂಗದಲ್ಲಿ ವಿದ್ವಾನ್ ಎ.ರಾಧೇಶ್, ಘಟಂನಲ್ಲಿ ವಿದ್ವಾನ್ ಎಸ್.ಮಂಜುನಾಥ್ ಸಹಕಾರ ನೀಡಿದರು.

ನೂತನ ವರ್ಷದ ದಿನದರ್ಶಿಕೆ ಬಿಡುಗಡೆ



ಮಾಜಿ ಮೇಯರ್ ನಾರಾಯಣ ಅಭಿಮಾನಿಗಳ ಟ್ರಸ್ಟ್ ಹೊರತಂದಿರುವ ನೂತನ ವರ್ಷದ ಕ್ಯಾಲೆಂಡರ್ ಅನ್ನು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಜಿಲ್ಲಾ ಪತ್ರಕರ್ತರ ಭವನದಲ್ಲಿ ಬಿಡುಗಡೆಗೊಳಿಸಿದರು. ಈ ವೇಳೆ ಟ್ರಸ್ಟ್ ಗೌರವ ಕಾರ್ಯದರ್ಶಿ ಯತಿರಾಜ್, ಆನಂದ ಸಹಕಾರ ಆರ್.ಲಕ್ಷ್ಮಣ್, ಕಾರ್ಯದರ್ಶಿ ಲೋಕೇಶ್, ನಿರ್ದೇಶಕ ಪಿ.ಶ್ರೀನಿವಾಸ್, ಖಜಾಂಚಿ ಎನ್.ಬಸವರಾಜು ಉಪಸ್ಥಿತರಿದ್ದರು.

ವೃದ್ಧನ ಎಟಿಎಂ ಕಾರ್ಡ್ ಎಗರಿಸಿ 50 ಸಾವಿರ ಲಪಟಾಯಿಸಿದ ಖದೀಮರು ತೆಲಂಗಾಣದಲ್ಲಿ ಸೆರೆ

ಮೈಸೂರು, ಜ.12(ಎಸ್‌ಬಿಡಿ)– ವೃದ್ಧರೊಬ್ಬರ ಅಸಲಿ ಎಟಿಎಂ ಕಾರ್ಡ್ ಎಗರಿಸಿ ಸುಮಾರು 50 ಸಾವಿರ ರೂ. ಲಪಟಾಯಿಸಿ ತಲೆಮರೆಸಿಕೊಂಡಿದ್ದ ಖದೀಮರು ತೆಲಂಗಾಣದ ಸಿಕ್ಕಿಬಿದ್ದಿದ್ದಾರೆ.

ಕಲ್ಯಾಣಗಿರಿಯ ನೂರ್ ಅಹ್ಮದ್(75) ಅವರನ್ನು ಯಾಮಾರಿಸಿ ಹಣ ಲಪಟಾಯಿಸಿದ್ದ ಖದೀಮರನ್ನು ತೆಲಂಗಾಣದ ಹೈದರಾಬಾದ್ ಪೊಲೀಸರು ನಿನ್ನೆ ವಶಕ್ಕೆ ಪಡೆದಿರುವುದಾಗಿ ತಿಳಿದುಬಂದಿದೆ. ಹಣ ಸಿಗುವುದಿಲ್ಲ ಎಂದು ಸುಮ್ಮನಿದ್ದ ನೂರ್ ಅಹ್ಮದ್ ಅವರು ಹೈದರಾಬಾದ್ ಪೊಲೀಸರ ಸೂಚನೆಯಂತೆ ಉದಯಗಿರಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಮನೆ ಬಾಡಿಗೆ ನೀಡಲು ಜ.4ರಂದು ಬೆಳಗ್ಗೆ 11.30ರ ಸಮಯದಲ್ಲಿ ಹಣ ಡ್ರಾ ಮಾಡಿಕೊಂಡು ಬರಲು ಡಾ.ರಾಜ್‌ಕುಮಾರ್ ರಸ್ತೆಯಲ್ಲಿರುವ ಎಟಿಎಂಗೆ ಹೋಗಿದ್ದೆ. ಅಲ್ಲಿ ನಿಂತಿದ್ದ ಇಬ್ಬರು ನಾವು ಹೆಚ್ಚು ಹಣ ಡ್ರಾ ಮಾಡಬೇಕು, ನೀವು ಮೊದಲು ಹಣ ಬಿಡಿಸಿಕೊಂಡು ಹೋಗಿ ಎಂದು ತಿಳಿಸಿದರು. ಹಾಗೆಯೇ ನಾನು 8 ಸಾವಿರ ರೂ. ಹಣ ಡ್ರಾ ಮಾಡಿದೆ. ಬಳಿಕ ಎಟಿಎಂ ಯಂತ್ರದಿಂದ ಕಾರ್ಡ್ ತೆಗೆದುಕೊಳ್ಳುವಷ್ಟರಲ್ಲಿ ಪಕ್ಕದ ಯಂತ್ರದ ಬಳಿ ನಿಂತಿದ್ದ ಮತ್ತೋರ್ವ ವ್ಯಕ್ತಿ ಭುಜದಿಂದ ನನ್ನನ್ನು ಮೆಲ್ಲನೆ ತಳ್ಳಿದ. ಆಗ ಆತನ ಕಡೆಗೆ ತಿರುಗಿ ನೋಡಿ ಕಾರ್ಡ್ ತೆಗೆದುಕೊಳ್ಳುವಷ್ಟರಲ್ಲಿ ಹೆಚ್ಚು ಹಣ ಡ್ರಾ ಮಾಡಬೇಕೆಂದು ಹೇಳಿದ್ದ ಇಬ್ಬರು ಅಲ್ಲಿಂದ ತರಾತುರಿಯಲ್ಲಿ ಹೊರಟು ಹೋದರು.

ಇದರಿಂದ ಅನುಮಾನಗೊಂಡು ತಕ್ಷಣ ಬ್ಯಾಂಕ್‌ಗೆ ಹೋಗಿ ವಿಷಯ ತಿಳಿಸಿದೆ. ಬ್ಯಾಂಕ್ ಸಿಬ್ಬಂದಿ ನನ್ನ ಬಳಿ ಇದ್ದ ಎಟಿಎಂ ಕಾರ್ಡ್ ಪರಿಶೀಲಿಸಿ, ಇದು ನಕಲಿ ಕಾರ್ಡ್ ಎಂದರು. ನಿಮ್ಮ ಪಾನ್ ಕಾರ್ಡ್ ಕೊಡಿ ಬ್ಯಾಂಕ್ ಅಕೌಂಟ್ ಹಾಗೂ ಎಟಿಎಂ ಕಾರ್ಡ್ ಬ್ಲಾಕ್ ಮಾಡುವುದಾಗಿ ಹೇಳಿದರು. ಅದೇ ವೇಳೆ ನನ್ನ ಬ್ಯಾಂಕ್ ಖಾತೆಯ ವಹಿವಾಟಿನ ಮಾಹಿತಿ ಪಡೆದಾಗ ಅಷ್ಟರಲ್ಲೇ 52,400 ಕಡಿತವಾಗಿರುವುದು ತಿಳಿಯಿತು. ಎಟಿಎಂ ಬಳಿ ಇದ್ದವರು ನನ್ನನ್ನು ವಂಚಿಸಿದ್ದಾರೆ, ಇನ್ನು ಹಣ ಸಿಗುವುದಿಲ್ಲ ಎಂದು ಸುಮ್ಮನಾಗಿದ್ದೆ. ಆದರೆ ಇಂದು ಹೈದರಾಬಾದ್ ಪೊಲೀಸರು ಕರೆ ಮಾಡಿ ಎಟಿಎಂ ಕಾರ್ಡ್ ಕಳ್ಳರು ಸಿಕ್ಕಿದ್ದಾರೆ, ಕೂಡಲೇ ಸ್ಥಳೀಯ ಪೊಲೀಸ್ ಠಾಣೆಗೆ ದೂರು ನೀಡಿ ಎಂದು ತಿಳಿಸಿದರು ಎಂದು ನೂರ್ ಅಹ್ಮದ್ ಅವರು ಉದಯಗಿರಿ ಠಾಣೆಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದು, ಈ ಬಗ್ಗೆ ಪ್ರಕರಣ ದಾಖಲಾಗಿದೆ.

ಸ್ಥಳೀಯ ಸಂಸ್ಥೆ ಚುನಾವಣೆ ನಡೆಸದೆ ಪ್ರಜಾಪ್ರಭುತ್ವ ವಿರೋಧಿ ಧೋರಣೆ

ರಾಜ್ಯ ಸರ್ಕಾರದ ವಿರುದ್ಧ ಎಸ್‌ಡಿಪಿಐ ಪ್ರಧಾನ ಕಾರ್ಯದರ್ಶಿ ವಾಗ್ದಾಳಿ

ಮೈಸೂರು, ಜ.12(ಎಸ್‌ಪಿಎನ್)– ರಾಜ್ಯ ಸರ್ಕಾರ, ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸದೆ ಪ್ರಜಾಪ್ರಭುತ್ವ ವಿರೋಧಿ ಧೋರಣೆ ತಳೆದಿದೆ ಎಂದು ಎಸ್‌ಡಿಪಿಐ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಇಬ್ರಾಹಿಂ ಮಜೀದ್ ತುಂಬೆ ವಾಗ್ದಾಳಿ ನಡೆಸಿದರು.

ಮೈಸೂರು ನಗರದ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ಎಸ್‌ಡಿಪಿಐ ಜಿಲ್ಲಾ ಪ್ರತಿನಿಧಿಗಳ ಸಭೆ ಹಾಗೂ ನೂತನ ಜಿಲ್ಲಾ ಸದಸ್ಯರ ಆಯ್ಕೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸರ್ಕಾರದ ಈ ನಿಲುವಿಗೆ ಶಾಸಕರ ಅಧಿಕಾರ ದಾಹವೇ ಪ್ರಮುಖ ಕಾರಣ ಎಂದು ಆರೋಪಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಬಿಜೆಪಿಯ ಐಟಿ ಘಟಕಕ್ಕೆ ಹೆದರುತ್ತಿದೆ. ಕರ್ನಾಟಕದಲ್ಲಿ ಒಂದೂವರೆ ವರ್ಷದಲ್ಲಿ ಜಾತ್ಯತೀತ ವಾತಾವರಣ ನಿರ್ಮಾಣವಾಗಿದೆ ಎನ್ನುವುದರಲ್ಲಿ ಇಂದಿಗೂ ಗೊಂದಲವಿದೆ. ಕಾಂಗ್ರೆಸ್ ಸರ್ಕಾರ ಬಂದಾಗ ಬಹಳ ಹರ್ಷ ವ್ಯಕ್ತಪಡಿಸಿದ್ದ ಅಲ್ಪಸಂಖ್ಯಾತ ಸಮುದಾಯದವರು. ಈಗ ಅವಲೋಕನ ಮಾಡಿಕೊಳ್ಳುವ ಕಾಲ ಬಂದಿದೆ. ಇದು ಯೂಟರ್ನ್ ಸರ್ಕಾರ ಎಂದು ಟೀಕಿಸಿದರು.

ರಾಜ್ಯದಲ್ಲಿ ಅಲ್ಪ ಸಂಖ್ಯಾತರ ಬೇಡಿಕೆ ಈಡೇರಿಲ್ಲ. ದಲಿತರ ಒಳಮೀಸಲಾತಿ ಜಾರಿಗೊಳಿಸಿಲ್ಲ. ಈ ಸರ್ಕಾರ ಅಲ್ಪಸಂಖ್ಯಾತರನ್ನು ಮಂಗ ಮಾಡುತ್ತಿದೆ. ಸರ್ಕಾರದ ವಿರುದ್ಧವಾಗಿ ಮಾತನಾಡಿದರೆ ಪ್ರಕರಣ ದಾಖಲಿಸುತ್ತಿದೆ. ಬಿಜೆಪಿ ರಾಜ್ಯ ಘಟಕದ ಐಟಿ ಸೆಲ್ ಆಣತಿ ಮೇರೆಗೆ ಕೇಸ್ ಬುಕ್ ಮಾಡುತ್ತಿದೆ. ರಾಜ್ಯದಲ್ಲಿ ಶ್ರೀರಾಮ ಸೇನೆಯವರು ಬಂದೂಕು ಹಿಡಿದು ತಿರುಗಾಡಿದರೂ ಕೇಸ್ ಹಾಕಲು ಯೋಚಿಸುತ್ತಾರೆ. ಆದರೆ, ನಮ್ಮವರ ವಿರುದ್ಧ ಸುಖಾ ಸುಮ್ಮನೆ ಪೊಲೀಸರು ಕೇಸ್ ಹಾಕುತ್ತಾರೆ ಎಂದು ದೂರಿದರು.

ಜಿಲ್ಲಾ ಘಟಕದ ಅಧ್ಯಕ್ಷ ರಫತ್ ಖಾನ್, ಪಕ್ಷದ ರಾಜ್ಯ ಘಟಕದ ಉಪಾಧ್ಯಕ್ಷ ದೇವನೂರು ಪುಟ್ಟನಂಜಯ್ಯ, ಪ್ರಧಾನ ಕಾರ್ಯದರ್ಶಿ ಮುಜಾಹಿದ್ ಪಾಷಾ, ಕಾರ್ಯದರ್ಶಿ ಮೌಲಾನಾ ಅಕ್ರಮ್, ಖಜಾಂಚಿ ಅಮ್ಜದ್ ಖಾನ್, ಜಿಲ್ಲಾ ಘಟಕದ ಉಪಾಧ್ಯಕ್ಷ ಎಸ್. ಸ್ವಾಮಿ, ಪ್ರಧಾನ ಕಾರ್ಯದರ್ಶಿ ಮಹಮ್ಮದ್ ಶಫಿವುಲ್ಲಾ, ಕಾರ್ಯದರ್ಶಿ ಫರ್ದಿನ್ ಅಹಮದ್, ವಿಮೆನ್ ಇಂಡಿಯಾ ಮೂವ್‌ಮೆಂಟ್ ಜಿಲ್ಲಾಧ್ಯಕ್ಷೆ ಆಯೇಷಾ ರುಬಿ, ಖಜಾಂಚಿ ಎಂ.ಎನ್. ಫಿರ್ದೋಸ್, ಮುಖಂಡ ಸೈಯದ್ ಅಕ್ಬರ್ ಹುಣಸೂರು ಪಾಲ್ಗೊಂಡಿದ್ದರು.



ಎಸ್‌ಡಿಪಿಐ ಜಿಲ್ಲಾ ಪ್ರತಿನಿಧಿಗಳ ಸಭೆ ಹಾಗೂ ನೂತನ ಜಿಲ್ಲಾ ಸದಸ್ಯರ ಆಯ್ಕೆ ನಡೆಸಲಾಯಿತು.

2024–27ನೇ ಸಾಲಿಗೆ ಎಸ್‌ಡಿಪಿಐ ಮೈಸೂರು ಜಿಲ್ಲಾ ಘಟಕದ ಪದಾಧಿಕಾರಿಗಳನ್ನು ರಾಜ್ಯ ಘಟಕದ ಅಧ್ಯಕ್ಷ ಅಬ್ದುಲ್ ಮಜೀದ್ ಘೋಷಿಸಿದರು. ಅಧ್ಯಕ್ಷರಾಗಿ ರಫತ್ ಖಾನ್. ಉಪಾಧ್ಯಕ್ಷರಾಗಿ ಎಸ್. ಸ್ವಾಮಿ, ಮೊಹಮ್ಮದ್ ಶಫಿಯುಲ್ಲಾ, ಪ್ರಧಾನ ಕಾರ್ಯದರ್ಶಿಗಳಾಗಿ ಎಂ.ಎನ್. ಫಿರ್ದೋಸ್, ಸೈಯದ್ ಅರ್ಸೀಮ್, ಕಾರ್ಯದರ್ಶಿಗಳಾಗಿ ಆಯೇಷಾ ರುಬಿ, ಫರ್ದಿನ್, ಅಕ್ಬರ್, ಕೋಶಾಧಿಕಾರಿ– ಮನ್ಸೂರ್ ಖಾನ್, ಸಮಿತಿ ಸದಸ್ಯರಾಗಿ ಜೆ. ಮಹದೇವ, ಮೌಲಾನಾ ನೂರುದ್ದಿನ್ ಫಾರೂಕಿ, ಮನ್ಸೂರ್ ಅಹಮದ್ ಮೆಡಿಕಲ್, ತಬರೇಜ್ ಸೇಠ್, ಸುಹೇಲ್ ಅತಿಫ್, ಜಬೀನಾ ಬಾನು, ಮೊಹಮ್ಮದ್ ವಸೀಂ, ಅಮ್ಜದ್ ಹುಸೇನ್ ಆಯ್ಕೆಯಾಗಿದ್ದಾರೆ.

ಸಹಕಾರಿ ಸಂಘದಲ್ಲಿ 30 ಲಕ್ಷ ದುರುಪಯೋಗ

ಸಿಇಓ ವಿರುದ್ಧ ದೂರು

ಮೈಸೂರು, ಜ.12 (ಎಸ್‌ಬಿಡಿ)– ಹಣ ದುರುಪಯೋಗ ಆರೋಪದಡಿ ಸಹಕಾರಿ ಸಂಘವೊಂದರ ಸಿಇಓ ವಿರುದ್ಧ ಮೈಸೂರಿನ ಅಶೋಕಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರಿನ ನೇಗಿಲಯೋಗಿ ವಿವಿಧೋದ್ದೇಶ ಸೌಹಾರ್ದ ಸಹಕಾರಿ ಸಂಘದ ಸಿಇಓ ಆರ್. ವೆಂಕಟೇಶ್ ಸುಮಾರು 30 ಲಕ್ಷ ಹಣವನ್ನು ದುರುಪಯೋಗ ಮಾಡಿಕೊಂಡಿದ್ದಾರೆ ಎಂದು ಸಂಘದ ಅಧ್ಯಕ್ಷ ಪರಮೇಶ್ವರ ದೂರು ನೀಡಿದ್ದಾರೆ. ಸಿಇಓ ವೆಂಕಟೇಶ್ ಸಂಸ್ಥೆಯ ಷೇರುದಾರರು ಹಾಗೂ ಸಾಲಗಾರರು ಸಂದಾಯ ಮಾಡುವ ಹಣವನ್ನು ಕಳೆದ ಸಂಘದ ಬ್ಯಾಂಕ್ ಖಾತೆಗೆ ಜಮಾವಣೆ ಮಾಡಿದ್ದಾರೆಂದು ಆಡಳಿತ ಮಂಡಳಿ ನಂಬಿತ್ತು. ಆದರೆ ಕಾರಣಾಂತರಗಳಿಂದ 2024ರ ಫೆ.19ರಿಂದ ಜೂನ್ 27ರವರೆಗೆ ಸಂಘದ ಕಾರ್ಯನಿರ್ವಹಣೆಗೆ ಸೂಕ್ತ ಜಾಗವಿರಲಿಲ್ಲ. ನಂತರ ಸಂಸ್ಥೆ ಪಕ್ಕದ ಹೊಸ ಕಟ್ಟಡದಲ್ಲಿ ಕಚೇರಿ ಪುನಾರಂಭಗೊಂಡಿತು. ಆ ವೇಳೆ ಲೆಕ್ಕ ಪರಿಶೀಲನೆ ನಡೆಸಿದಾಗ ಸಿಇಓ ವೆಂಕಟೇಶ್ ಸಂಘದ ಖಾತೆ ಬದಲು ವೈಯಕ್ತಿಕ ಖಾತೆಗೆ ಹಣ ಜಮಾವಣೆ ಮಾಡಿಕೊಂಡಿರುವುದು ತಿಳಿಯಿತು.

ನಂತರ ದುರುಪಯೋಗಪಡಿಸಿಕೊಂಡಿರುವ ಹಣವನ್ನು ಸಂಸ್ಥೆಗೆ ಭರಿಸುವಂತೆ ಆಡಳಿತ ಮಂಡಳಿ ಆದೇಶಿಸಿದಾಗ ವೆಂಕಟೇಶ್, 3.06 ಲಕ್ಷ ರೂ.ಗಳನ್ನು ಬಳಸಿಕೊಂಡಿರುವುದಾಗಿ ಒಪ್ಪಿಕೊಂಡು ಕ್ಷಮೆಯಾಚಿಸಿದರಲ್ಲದೆ ವಾಪಸ್ ಭರಿಸುವುದಾಗಿ ತಿಳಿಸಿದ್ದರು. ಬಳಿಕ ಆಡಿಟ್ ಸಂಸ್ಥೆಯೊಂದರ ಮೂಲಕ ಆಂತರಿಕ ಆಡಿಟ್ ನಡೆಸಿದ ಸಂದರ್ಭದಲ್ಲಿ 30.18 ಲಕ್ಷ ರೂ. ದುರುಪಯೋಗವಾಗಿದೆ ಎಂದು ತಿಳಿದುಬಂದಿದೆ ಎಂದು ಸಂಘದ ಅಧ್ಯಕ್ಷ ಪರಮೇಶ್ವರ ಅವರು ಪೊಲೀಸರಿಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ.

ದೇಶ - ವಿದೇಶ

ಭೂಮಿಯ ಒಳಗಡೆ ಇರಾನ್‌ನಿಂದ ರಹಸ್ಯ ಮಿಸೈಲ್ ಸಿಟಿ ನಿರ್ಮಾಣ

ಟೆಹ್ರಾನ್: ಮಧ್ಯಪ್ರಾಚ್ಯದಲ್ಲಿನ ಬೆಳವಣಿಗೆಗಳಿಂದ ಇಸ್ರೇಲ್ ಜೊತೆ ಕಣ್ಣು ಕೆಂಪಗೆ ಮಾಡಿಕೊಂಡಿರುವ ಇರಾನ್ ಈಗ ತನ್ನ ಭೂಗತ ಮಿಸೈಲ್ ನಗರವನ್ನು ಜಗತ್ತಿಗೆ ಪರಿಚಯಿಸಿದೆ. ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಹೊಸ ವಿಡಿಯೋವನ್ನು ಬಿಡುಗಡೆ ಮಾಡಿದ್ದು, ಇರಾನ್ ಭೂಗತ ಕ್ಷಿಪಣಿ ಸಂಗ್ರಹಣಾ ಸೌಲಭ್ಯ ಪರಿಚಯಿಸಿದ್ದಾರೆ. ಇಲ್ಲಿಂದಲೇ ಹೊಸ ವಿಶೇಷ ಕ್ಷಿಪಣಿಗಳನ್ನು ತಯಾರಿಸುತ್ತಿದ್ದೇವೆ ಎಂದು ಕೂಡ ಇರಾನ್ ತಿಳಿಸಿದೆ. ಇರಾನ್‌ನ ಸರ್ಕಾರಿ ಪ್ರಾಯೋಜಿತ IRIB ಟಿವಿಯಲ್ಲಿ ವಿಡಿಯೋ ಬಿಡುಗಡೆಯಾಗಿದ್ದು, ಐಆರ್‌ಜಿಸಿ ಕಮಾಂಡರ್ ಮೇಜರ್ ಜನರಲ್ ಹುಸೇನ್ ಸಲಾಮಿ ಮತ್ತು ಬ್ರಿಗೇಡಿಯರ್ ಜನರಲ್ ಅಮೀರ್ ಅಲಿ ಹಾಜಿಜಾದೆ ಮಿಸೈಲ್ ಸಿಟಿಯನ್ನು ವೀಕ್ಷಿಸುತ್ತಿರುವುದು ಕಂಡುಬಂದಿದೆ. ಹಾಜಿಜಾದೆ ಈ ಸ್ಥಳವನ್ನು ಸುಪ್ತ ಜ್ವಾಲಾಮುಖಿ ಎಂದು ಕರೆದಿದ್ದಾರೆ ಎಂದು ಹೇಳಲಾಗಿದೆ. ಕಳೆದ ವರ್ಷ ಏಪ್ರಿಲ್ ಹಾಗೂ ಅಕ್ಟೋಬರ್‌ನಲ್ಲಿ ಇಸ್ರೇಲ್ ವಿರುದ್ಧ ನಡೆದ ಕ್ಷಿಪಣಿ ಕಾರ್ಯಾಚರಣೆಗೆ ಈ ಮಿಸೈಲ್ ಸೌಲಭ್ಯವನ್ನು ಬಳಸಿಕೊಳ್ಳಲಾಗಿತ್ತು ಎಂಬುದು ಬಹಿರಂಗವಾಗಿದೆ. ಆದರೆ, ಈ ಸ್ಥಳ ಎಲ್ಲಿದೆ ಎಂಬುದು ಇರಾನ್‌ನ ಕೆಲವೇ ಕೆಲ ಮಂದಿಗೆ ಬಿಟ್ಟು ಬೇರೆಯವರಿಗೆ ಗೊತ್ತಿಲ್ಲ. ಅಂಡರ್‌ಗ್ರೌಂಡ್‌ನಲ್ಲಿ ಮಿಸೈಲ್ ಹಾಗೂ ಡ್ರೋನ್ ಸಿಟಿಗಳನ್ನು ಜಗತ್ತಿಗೆ ಪರಿಚಯಿಸುತ್ತೇವೆ ಎಂದು ಇರಾನ್ ಹೇಳಿದೆ.

ವಿದ್ಯಾರ್ಥಿನಿಯರ ಶರ್ಟ್ ಬಿಚ್ಚಿಸಿ ಮನೆಗೆ ಕಳುಹಿಸಿದ ಪ್ರಾಂಶುಪಾಲ!



ರಾಂಚಿ: ಖಾಸಗಿ ಶಾಲೆಯೊಂದರ ಪ್ರಾಂಶುಪಾಲರೊಬ್ಬರು 80 ವಿದ್ಯಾರ್ಥಿನಿಯರ ಶರ್ಟ್ ಬಿಚ್ಚಿಸಿ ಮನೆಗೆ ಕಳುಹಿಸಿದ ಘಟನೆ ವರದಿಯಾಗಿದೆ. ಜಾರ್ಖಂಡ್‌ನ ಧನ್ಬಾದ್ ಜಿಲ್ಲೆಯ ಜೋರಾಪೋಖರ್ ಪೊಲೀಸ್ ಠಾಣೆ ವ್ಯಾಪ್ತಿಯ ಡಿಗ್ವಾಡಿಹದಲ್ಲಿರುವ ಪ್ರತಿಷ್ಠಿತ ಶಾಲೆಯಲ್ಲಿ ಈ ಘಟನೆ ನಡೆದಿದ್ದು, ಇದೀಗ ಪ್ರಾಂಶುಪಾಲರ ವಿರುದ್ಧ ದೂರು ದಾಖಲಾಗಿದೆ. ಮೂಲಗಳ ಪ್ರಕಾರ 10ನೇ ತರಗತಿ ವಿದ್ಯಾರ್ಥಿನಿಯರು ಪರಸ್ಪರರ ಅಂಗಿಗಳ ಮೇಲೆ ಸಂದೇಶಗಳನ್ನು ಬರೆದುಕೊಂಡಿದ್ದರು. ಇದನ್ನು ಗಮನಿಸಿದ ಪ್ರತಿಷ್ಠಿತ ಖಾಸಗಿ ಶಾಲೆಯ ಪ್ರಾಂಶುಪಾಲರು ವಿದ್ಯಾರ್ಥಿನಿಯರ ನಡೆಗೆ ಆಕ್ರೋಶಗೊಂಡು ವಿದ್ಯಾರ್ಥಿನಿಯರ ಶರ್ಟ್ ಬಿಚ್ಚಿಸಿ ಕೇವಲ ಬ್ಲೇಜರ್ ಧರಿಸಿ ಮನೆಗೆ ಹೋಗುವಂತೆ ಹೇಳಿದ್ದಾರೆ. ಈ ಕುರಿತು ವಿದ್ಯಾರ್ಥಿನಿಯರ ಪಾಲಕರು ದೂರು ನೀಡಿದ್ದು, ಆರೋಪಗಳ ಬಗ್ಗೆ ತನಿಖೆ ನಡೆಸುವಂತೆ ಜಿಲ್ಲಾಧಿಕಾರಿ ಮಾಧವಿ ಮಿಶ್ರಾ ಆದೇಶಿಸಿದ್ದಾರೆ. ವಿದ್ಯಾರ್ಥಿನಿಯರು ನೀಡಿರುವ ಮಾಹಿತಿಯಂತೆ ಶುಕ್ರವಾರ ಪರೀಕ್ಷೆ ಮುಗಿದ ನಂತರ ವಿದ್ಯಾರ್ಥಿನಿಯರು 'ಪೆನ್ ಡೇ' ಹಮ್ಮಿಕೊಂಡಿದ್ದರು. ಕಾರ್ಯಕ್ರಮದಲ್ಲಿ 100ಕ್ಕೂ ಅಧಿಕ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಇದರ ಭಾಗವಾಗಿ ಪರಸ್ಪರರ ಅಂಗಿಗಳ ಮೇಲೆ ಸಂದೇಶಗಳನ್ನು ಬರೆದಿದ್ದರು.

ಚೀನಾದಿಂದ ಮತ್ತೊಂದು ವಿಚಿತ್ರ ಯೋಜನೆ; ಆಕಾಶದಲ್ಲೇ ಸೋಲಾರ್ ಪ್ಯಾನೆಲ್ ಸ್ಥಾಪನೆ



ಬೀಜಿಂಗ್: ಕೆಲ ದಿನಗಳ ಹಿಂದಷ್ಟೇ ವಿಶ್ವದ ಅತಿದೊಡ್ಡ ಅಣೆಕಟ್ಟು ನಿರ್ಮಿಸುವ ಯೋಜನೆಯನ್ನು ಚೀನಾ ಘೋಷಿಸಿತ್ತು. ಇದರ ಬೆನ್ನಲ್ಲೇ ಈಗ ಚೀನಾ ಮತ್ತೊಂದು ವಿಚಿತ್ರ ಸಾಧನೆಗೆ ಮುಂದಾದಂತೆ ಕಾಣುತ್ತಿದೆ. ಸೌರಶಕ್ತಿಯನ್ನು ಪರಿಣಾಮಕಾರಿಯಾಗಿ ಬಳಕೆ ಮಾಡುವುದಕ್ಕೆ ಮುಂದಾಗಿರುವ ಡ್ರ್ಯಾಗನ್ ರಾಷ್ಟ್ರ ಚೀನಾ ಮತ್ತೊಂದು ಮಹತ್ವಾಕಾಂಕ್ಷೆಯ ಯೋಜನೆಯನ್ನು ಘೋಷಿಸಿದೆ. ಇದನ್ನು ಆಕಾಶದಲ್ಲಿ ನಿರ್ಮಾಣವಾಗುವ ಥ್ರೀ ಗೋರ್ಜಸ್ ಡ್ಯಾಂ ಯೋಜನೆಯೆಂದು ಅಲ್ಲಿನ ಸೌತ್ ಚೀನಾ ಮಾರ್ನಿಂಗ್ ಪೋಸ್ಟ್ ಕರೆದಿದೆ. ಆಗಸದಲ್ಲಿ ಸುಮಾರು ಒಂದು ಕಿಲೋ ಮೀಟರ್‌ನಷ್ಟು ಸೋಲಾರ್ ಪ್ಯಾನೆಲ್ ಅನ್ನು ಸ್ಥಾಪಿಸಲು ಚೀನಾ ಮುಂದಾಗಿದೆ. ಚೀನಾದ ಪ್ರಮುಖ ರಾಕೆಟ್ ವಿಜ್ಞಾನಿ ಲಾಂಗ್ ಲೆಹಾವೊ ಅವರು ಈ ಪರಿಕಲ್ಪನೆಯನ್ನು ಪರಿಚಯಿಸಿದ್ದು, ಭೂಮಿಯಿಂದ 36,000 ಕಿಲೋ ಮೀಟರ್ ದೂರದಲ್ಲಿರುವ ಭೂಸ್ಥಿರ ಕಕ್ಷೆಯಲ್ಲಿ ಒಂದು ಕಿಲೋ ಮೀಟರ್ ಅಗಲದ ಬೃಹತ್ ಸೌರಶಕ್ತಿ ಪ್ಯಾನೆಲ್ ಅನ್ನು ಸ್ಥಾಪಿಸುವುದನ್ನು ಒಳಗೊಂಡಿದೆ. ಇದರಿಂದ ಹಗಲು ರಾತ್ರಿಯ ಸೈಕಲ್ ಹಾಗೂ ಹವಾಮಾನ ಪರಿಸ್ಥಿತಿಗಳಿಂದ ಯಾವುದೇ ಪ್ರಭಾವಿತವಾಗದೇ ಸೌರಶಕ್ತಿಯನ್ನು ನಿರಂತರವಾಗಿ ಸಂಗ್ರಹಿಸಬಹುದು ಎಂದು ಹೇಳಲಾಗುತ್ತಿದೆ.

ಪಾರ್ಕಿಂಗ್ ಸರ್ಟಿಫಿಕೇಟ್ ಇದ್ದರೆ ಮಾತ್ರ ಹೊಸ ಕಾರು ಖರೀದಿ, ನಿಯಮ ಜಾರಿಗೆ ತಯಾರಿ



ಮುಂಬೈ: ಪಾಲಿಕೆಯಿಂದ ಪಾರ್ಕಿಂಗ್ ಸರ್ಟಿಫಿಕೇಟ್ ಇದ್ದರೆ ಮಾತ್ರ ಹೊಸ ಕಾರು ಖರೀದಿದಾರನ ಹೆಸರಿಗೆ ನೋಂದಣಿಯಾಗಲಿದೆ. ಈ ಮೂಲಕ ದಾರಿಯಲ್ಲಿ ಪಾರ್ಕಿಂಗ್ ಮಾಡುವ ಸಮಸ್ಯೆಗೆ ಇತಿಶ್ರೀ ಹಾಡಲು ಮಹಾರಾಷ್ಟ್ರ ಸರ್ಕಾರ ಮುಂದಾಗಿದೆ. ಆರಂಭಿಕ ಹಂತದಲ್ಲಿ ಮುಂಬೈ, ನಾಗ್ಪುರ ಹಾಗೂ ಪುಣೆ ನಗರಗಳಲ್ಲಿ ಈ ಹೊಸ ನಿಯಮ ಜಾರಿಗೆ ತರಲು ಮಹಾರಾಷ್ಟ್ರ ಸರ್ಕಾರ ಮುಂದಾಗಿದೆ. ಬಳಿಕ ಹಂತ ಹಂತವಾಗಿ ಈ ನಿಯಮ ಮಹಾರಾಷ್ಟ್ರದ ಇತರ ನಗರಗಳು, ಪಟ್ಟಣಗಳಿಗೆ ವಿಸ್ತರಣೆಯಾಗಲಿದೆ. ಈ ನಿಯಮ ಯಶಸ್ವಿಯಾದರೆ ಬೆಂಗಳೂರು ಸೇರಿದಂತೆ ಇತರ ನಗರಗಳಲ್ಲೂ ಜಾರಿಗೆ ಬರವು ಸಾಧ್ಯತೆ ಇದೆ. ಮುಂಬೈನಲ್ಲಿ ನಡೆದ ಮಹತ್ವದ ಸಭೆಯಲ್ಲಿ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಈ ನಿಯಮದ ಕುರಿತು ಪ್ರಸ್ತಾಪಿಸಿದ್ದಾರೆ. ಪ್ರಮುಖವಾಗಿ ಮುಂಬೈನಲ್ಲಿ ಹೆಚ್ಚುತ್ತಿರುವ ಟ್ರಾಫಿಕ್ ಸಮಸ್ಯೆ, ವಾಯುಮಾಲಿನ್ಯ ಸಮಸ್ಯೆಗಳಿಂದ ಮುಕ್ತಿ ಪಡೆಯಲು ಹೊಸ ನಿಯಮ ಜಾರಿಗೆ ಮುಂದಾಗಿದೆ. ಹೌಸಿಂಗ್ ಬೋರ್ಡ್, ಮಹಾನಗರ ಪಾಲಿಕೆ, ನಗರಾಭಿವೃದ್ಧಿ ಇಲಾಖೆ ಸೇರಿದಂತೆ ಕೆಲ ಇಲಾಖೆಗಳ ಸಹಯೋಗದಲ್ಲಿ ಹೊಸ ನಿಯಮ ಜಾರಿಗೆ ತರಲು ಚರ್ಚೆ ನಡೆದಿದೆ. ಪ್ರಮುಖವಾಗಿ ಕಾರು, ಜೀಪು ಸೇರಿದಂತೆ ಇತರ ವಾಹನಗಳ ರಿಜಿಸ್ಟ್ರೇಶನ್ ಮಾಡಲು ಪಾರ್ಕಿಂಗ್ ಸರ್ಟಿಫಿಕೇಟ್ ನೀಡಬೇಕು.

ಪಾಕಿಸ್ತಾನದ ಗಣಿ ಸ್ಫೋಟದಲ್ಲಿ ನಾಲ್ವರು ಸಾವು: ಎಂಟು ಮಂದಿ ರಕ್ಷಣೆಗೆ ಪ್ರಯತ್ನ

ಕ್ವೆಟ್ಟಾ: ಕ್ವೆಟ್ಟಾದ ಸಂಜ್ದಿ ಪ್ರದೇಶದಲ್ಲಿ ಕಲ್ಲಿದ್ದಲು ಗಣಿಯಲ್ಲಿ ಅನಿಲ ಸ್ಫೋಟ ಸಂಭವಿಸಿ ನಾಲ್ವರು ಗಣಿ ಕಾರ್ಮಿಕರು ಮೃತಪಟ್ಟಿದ್ದಾರೆ. ಗಣಿಯೊಳಗೆ ಇನ್ನೂ 8 ಮಂದಿ ಸಿಲುಕಿರುವ ಶಂಕೆ ಇದ್ದು, ಅವರೆಲ್ಲರನ್ನೂ ರಕ್ಷಣೆ ಮಾಡುವ ಪ್ರಯತ್ನಗಳು ಮುಂದುವರೆದಿವೆ ಎಂದು ಅಲ್ಲಿನ ರಕ್ಷಣಾ ತಂಡಗಳು ಹೇಳಿವೆ.

ಸ್ಫೋಟ ಸಂಭವಿಸಿದ ತಕ್ಷಣ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದ್ದು, 27 ಗಂಟೆಗಳಿಗೂ ಹೆಚ್ಚು ಕಾಲದಿಂದ ಕಾರ್ಯಾಚರಣೆ ಮುಂದುವರೆದಿದೆ. ಗಣಿಯೊಳಗೆ ಸಿಕ್ಕಿಬಿದ್ದ ಗಣಿಗಾರರನ್ನು ತಲುಪಲು ಅಧಿಕಾರಿಗಳು ಅವಿರತವಾಗಿ ಶ್ರಮಿಸುತ್ತಿದ್ದಾರೆ. ಪ್ರಾಂತೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಗಣಿಯಿಂದ ಮೂರು ಮೃತದೇಹಗಳನ್ನು ವಶಕ್ಕೆ ಪಡೆದಿದೆ ಎಂದು ದೃಢಪಡಿಸಿದೆ. ಒಟ್ಟು ನಾಲ್ವರು ಕಾರ್ಮಿಕರು ಮೃತಪಟ್ಟಿದ್ದಾರೆ. ಅನಿಲ ಸ್ಫೋಟದಿಂದಾಗಿ ಕಲ್ಲಿದ್ದಲು ಗಣಿಯ ಒಂದು ಭಾಗ ಕುಸಿದು 12 ಕಾರ್ಮಿಕರು ಸಿಲುಕಿಕೊಂಡಿದ್ದರು. ಈ ಎಲ್ಲ ಕಾರ್ಮಿಕರು ಗಣಿಯ ಸುಮಾರು 4300 ಅಡಿ ಆಳದಲ್ಲಿ ಕೆಲಸ ಮಾಡುತ್ತಿದ್ದರು. ಗಣಿಯೊಳಗೆ ದೊಡ್ಡ ಸ್ಫೋಟ ಸಂಭವಿಸಿದ್ದರಿಂದ ಅಲ್ಲಿ ಸಿಲುಕಿದವರ ರಕ್ಷಣೆಗೆ ಪರ್ಯಾಯ ಮಾರ್ಗ ರಚನೆಗೆ ರಕ್ಷಣಾ ತಂಡಗಳು ಕೆಲಸ ಮಾಡುತ್ತಿವೆ. ಗಣಿಯೊಳಗಿನ ಅನಿಲ ಮತ್ತು ಸವಾಲಿನ ಹವಾಮಾನದ ಕಾರಣದಿಂದಾಗಿ ಕಾರ್ಯಾಚರಣೆ ಕಷ್ಟಕರವಾಗಿದೆ.

ಸ್ಕ್ವಾ.ಲೀ.ಅಜ್ಜಮಾಡ ದೇವಯ್ಯರ ಸ್ಕೈ ಫೋರ್ಸ್ ತೆರೆಗೆ ಸಿದ್ಧ

• ಬಾಲಿವುಡ್‌ನಲ್ಲಿ ದೇಶ ಭಕ್ತಿಯ ಚಿತ್ರ ನಿರ್ಮಾಣ • ಕೊಡಗಿಗೆ ಮತ್ತೊಂದು ಹೆಮ್ಮೆಯ ಗರಿ



ಮಡಿಕೇರಿ ಹಳೇ ಖಾಸಗಿ ಬಸ್ ನಿಲ್ದಾಣ ಬಳಿ ಅಜ್ಜಮಾಡ ಬಿ.ದೇವಯ್ಯ ಪ್ರತಿಮೆ ಸ್ಥಾಪಿಸಿರುವುದು.

ಮಡಿಕೇರಿ, ಜ.12–ಭಾರತ–ಪಾಕ್ ನಡುವೆ 1965ರಲ್ಲಿ ನಡೆದ ಯುದ್ಧದಲ್ಲಿ ಶತ್ರು ರಾಷ್ಟ್ರದ ವಿಮಾನವನ್ನು ಹೊಡೆದುರುಳಿಸಿ ಬಲಿದಾನಗೈದ ಕೊಡಗಿನ ವೀರಯೋಧ ಮಹಾವೀರ ಚಕ್ರ ಪುರಸ್ಕೃತ ಸ್ಕ್ವಾಡ್ರನ್ ಲೀಡರ್ ಅಜ್ಜಮಾಡ ಬಿ.ದೇವಯ್ಯ ಅವರ ಸಾಹಸ ಕುರಿತ ಬಾಲಿವುಡ್‌ನಲ್ಲಿ ಚಲನ ಚಿತ್ರ ತೆರೆ ಕಾಣಲು ಸಿದ್ಧವಾಗಿದೆ.

ಗಣರಾಜ್ಯೋತ್ಸವ ಅಂಗವಾಗಿ ಜ.24 ರಂದು ಮುಂಬೈನಲ್ಲಿ 'ಸ್ಕೈ ಫೋರ್ಸ್' ಹೆಸರಲ್ಲಿ ಹುತಾತ್ಮ ಯೋಧನ ಸಾಹಸ ಗಾಥೆಯ ಚಿತ್ರ ಮೂಡಿ ಬರಲಿದೆ ಈಗಾಗಲೇ ಸಿನಿಮಾದ ಟ್ರೈಲರ್ ಕೂಡ ಬಿಡುಗಡೆ ಮಾಡಲಾಗಿದ್ದು, ದೇಶ ಭಕ್ತಿಯ ಕಿಚ್ಚು ಹಬ್ಬಿಸಿದೆ.

ದೇಶ ಭಕ್ತಿಯ ಈ ಸಿನಿಮಾ ಹಿಂದಿ ಭಾಷೆಯಲ್ಲಿದ್ದು, ಸಿನಿಮಾವನ್ನು ಖ್ಯಾತ ನಿರ್ದೇಶಕರಾದ ಸಂದೀಪ್ ಕೇವ್‌ಲಾನಿ ಹಾಗೂ ಅಭಿಷೇಕ್ ಅನಿಲ್ ಕಪೂರ್ ಅವರು ನಿರ್ದೇಶಿಸಿದ್ದಾರೆ. ಸ್ಕ್ವಾಡ್ರನ್ ಲೀಡರ್ ಅಜ್ಜಮಾಡ ಬಿ.ದೇವಯ್ಯ ಅವರ ಪಾತ್ರದಲ್ಲಿ ನಟ ವೀರ್ ಪಹರಿಯ ಅವರು ವಿಜಯ್ ಎಂಬ ಹೆಸರಲ್ಲಿ ಕಾಣಿಸಿಕೊಂಡಿದ್ದರೆ. ವಿಂಗ್ ಕಮಾಂಡರ್ ಓ.ಪಿ.ಟನಿಜಾ (ವೀರ ಚಕ್ರ) ಪಾತ್ರಕ್ಕೆ ಖ್ಯಾತ ಬಾಲಿವುಡ್ ನಟ ಅಕ್ಷಯ್ ಕುಮಾರ್ ಬಣ್ಣ ಹಚ್ಚಿದ್ದಾರೆ. ಸಾ.ರಾ.ಅಲಿ ಖಾನ್ ಅವರು ಅಜ್ಜಮಾಡ ದೇವಯ್ಯ ಅವರ ಪತ್ನಿಯ ಪಾತ್ರದಲ್ಲಿದ್ದು, ಮುಂಬೈ ಮತ್ತು ಇಂಗ್ಲೆಂಡ್‌ನಲ್ಲಿ ಸಿನಿಮಾವನ್ನು ಚಿತ್ರೀಕರಣ ಮಾಡಲಾಗಿದೆ. ಈ ಎಲ್ಲಾ ಅಂಶಗಳನ್ನು ಒಳಗೊಂಡ ಯುದ್ಧ ವೀರನ ಸಾಹಸದ ಘಟನೆ ಇದೀಗ ಬಾಲಿವುಡ್ ಚಿತ್ರವಾಗಿ ತೆರೆಗೆ ಬರುತ್ತಿದ್ದು, ಕೊಡಗಿಗೆ ಮತ್ತೊಂದು ಹೆಮ್ಮೆಯ ಗರಿ ಮೂಡಿಸಿದೆ.

ಅನುಮತಿ ಪಡೆದು ಚಿತ್ರ: ವೀರಯೋಧ ಸ್ಕ್ವಾಡ್ರನ್ ಲೀಡರ್ ಅಜ್ಜಮಾಡ ಬಿ.ದೇವಯ್ಯ ಅವರ ಕುರಿತು ಚಿತ್ರ ನಿರ್ಮಾಣಕ್ಕೂ ಮುನ್ನ ಅವರ ಪತ್ನಿ ಸುಂದರಿ ದೇವಯ್ಯ ಮತ್ತು ಮಕ್ಕಳು, ಸ್ಕ್ವಾಡ್ರನ್ ಲೀಡರ್ ಅಜ್ಜಮಾಡ ಬಿ.ದೇವಯ್ಯ ಅವರ ಸಾಹಸ ಗಾಥೆ ಕುರಿತು ಪುಸ್ತಕ ರಚಿಸಿದ್ದ ಪತ್ರಕರ್ತ ಹಾಗೂ ಸಾಹಿತಿ ಐತಿಚಂಡ ರಮೇಶ್ ಉತ್ತಪ್ಪ, ಈ ಪುಸ್ತಕ ಹೊರ ತಂದಿದ್ದ ಕೊಡವ ಮಕ್ಕಡ ಕೂಟದ ಅನುಮತಿ ಸಹಿತ ಅವರಿಂದ ನಿರಾಪೇಕ್ಷಣಾ ಪತ್ರವನ್ನು ಚಿತ್ರತಂಡ ಪಡೆದುಕೊಂಡಿದೆ.



ಕೊಡವ ಮಕ್ಕಡ ಕೂಟ ನಗರದ ಹಳೇ ಖಾಸಗಿ ಬಸ್ ನಿಲ್ದಾಣದ ಬಳಿ ಸ್ಕ್ವಾಡ್ರನ್ ಲೀಡರ್ ಅಜ್ಜಮಾಡ ಬಿ.ದೇವಯ್ಯ ಪ್ರತಿಮೆಯನ್ನು ಸ್ಥಾಪಿಸುವ ಮೂಲಕ ಗೌರವ ಸಲ್ಲಿಸಿದೆ.

ಸಿನಿಮಾಗೆ 'ಯುದ್ಧ ಪ್ರೇರಣೆ': ವಿರಾಜಪೇಟೆ ತಾಲೂಕಿನ ಕುಟ್ಟ ಸಮೀಪದ ಮಂಚಳ್ಳಿ ಗ್ರಾಮದ ಅಜ್ಜಮಾಡ ಕುಟುಂಬದ ಬೋಪಯ್ಯ ಹಾಗೂ ನೀಲಮ್ಮ ದಂಪತಿ ಪುತ್ರ ದೇವಯ್ಯ 1932ರ ಡಿ.24ರಂದು ಜನಿಸಿದರು. ದೇವಯ್ಯ ಅವರು 1954ರ ಡಿ.6ರಂದು ಭಾರತೀಯ ವಾಯುಪಡೆಯ ಪೈಲಟ್ ಆಗಿ ನೇಮಕಗೊಂಡರು.

1965ರ ಪಾಕಿಸ್ತಾನ ಭಾರತದ ಯುದ್ಧದಲ್ಲಿ ಅಜ್ಜಮಾಡ ದೇವಯ್ಯ ಪಾಕಿಸ್ತಾನದ ಮೇಲೆ ಬಾಂಬ್ ದಾಳಿ ನಡೆಸಿ, ಹಿಂತಿರುಗುತ್ತಿದ್ದಾಗ ಪಾಕಿಸ್ತಾನದ ಯುದ್ಧ ವಿಮಾನ ಹಿಂಬಾಲಿಸಿ ಬರುತ್ತಿತ್ತು. ಈ ಸಂದರ್ಭ ದೇವಯ್ಯ ಅವರಿಗೆ ಪಾಕ್ ಫೈಟರ್‌ನಿಂದ ತಪ್ಪಿಸಿಕೊಳ್ಳುವ ಎಲ್ಲಾ ಅವಕಾಶವೂ ಇತ್ತಾದರೂ, ಅವರು ಭಾರತದ ಉಳಿದ ಯುದ್ಧ ವಿಮಾನಗಳ ರಕ್ಷಣೆಗಾಗಿ ತನ್ನ ವಿಮಾನದೊಂದಿಗೆ ಕಾದಾಟಕ್ಕೆ ನಿಂತರು. ತಮ್ಮ ಎರಡನೇ ತಲೆಮಾರಿನ ದುರ್ಬಲ ವಿಮಾನದಲ್ಲಿ ಕೆಚ್ಚೆದೆಯಿಂದ ನೇರವಾಗಿ ಹೋರಾಡಿ ಶತ್ರುವಿನ ವಿಮಾನವನ್ನು ಹೊಡೆದುರುಳಿಸಿದ್ದರು.

1965ರಲ್ಲಿ ದೇವಯ್ಯ ಅವರ ಫೈಟರ್ ವಿಮಾನ ಕಣ್ಮರೆಯಾದ ನಂತರ ಅವರ ಬಗ್ಗೆ ಯಾವುದೇ ಮಾಹಿತಿ ಇರಲಿಲ್ಲ. ಹೀಗಾಗಿ ಸೇನೆ ಅವರನ್ನು ನಾಪತ್ತೆಯಾದವರ ಪಟ್ಟಿಗೆ ಸೇರಿಸಿತ್ತು ಆದರೆ, 1979ರಲ್ಲಿ ಬ್ರಿಟನ್ ಲೇಖಕರೊಬ್ಬರು ಬರೆದ ಪುಸ್ತಕದಲ್ಲಿ ಎ.ಬಿ.ದೇವಯ್ಯ ತನ್ನ ಪ್ರಾಣದ ಹಂಗು ತೊರೆದು, ದೇಶ ರಕ್ಷಣೆಗೆ ಮುಂದಾದ ಸಂದರ್ಭವನ್ನು ವಿವರವಾಗಿ ಹೇಳಿದ್ದರು. ನಂತರ ಸರ್ಕಾರ ದೇವಯ್ಯ ಅವರನ್ನು ಹುತಾತ್ಮರೆಂದು ಪರಿಗಣಿಸಿ 1988ರಲ್ಲಿ ದೇವಯ್ಯ ಅವರಿಗೆ ಮರಣೋತ್ತರ 'ಮಹಾವೀರ ಚಕ್ರ' ಪ್ರಶಸ್ತಿ ನೀಡಿ ಗೌರವಿಸಿತ್ತು.

> ಪತ್ರಕರ್ತ ಹಾಗೂ ಸಾಹಿತಿ ಐತಿಚಂಡ ರಮೇಶ್ ಉತ್ತಪ್ಪ ಬರೆದ ಕೊಡವ ಮಕ್ಕಡ ಕೂಟ ಹೊರತಂದಿದ್ದ '1965ರ ಯುದ್ಧ ಹಾಗೂ ಕೊಡಗಿನ ಮಹಾವೀರ (ಮಹಾವೀರ ಚಕ್ರ ಪುರಸ್ಕೃತ ಸ್ಕ್ವಾ.ಲೀ ಅಜ್ಜಮಾಡ ಬಿ.ದೇವಯ್ಯ ಅವರ ಜೀವನಾಧರಿತ) ಕುರಿತ ಪುಸ್ತಕ ಇದೀಗ 'ಸ್ಕೈ ಫೋರ್ಸ್' ಎಂಬ ಹೆಸರಿನಲ್ಲಿ ಬಾಲಿವುಡ್‌ನಲ್ಲಿ ಚಿತ್ರ ತೆರೆ ಕಾಣುತ್ತಿದೆ. ಇದು ಕೊಡವ ಮಕ್ಕಡ ಕೂಟದ ಹೆಗ್ಗಳಿಕೆಗೆ ಕಾರಣವಾಗಿದೆ. ಇದು ಕೊಡಗು ಜಿಲ್ಲೆಗೆ ಹೆಮ್ಮೆ.
>
> –ಬೊಳ್ಳಜಿರ ಬಿ.ಅಯ್ಯಪ್ಪ, ಕೊಡವ ಮಕ್ಕಡ ಕೂಟ

ಕೆಲವೇ ಗಂಟೆಗಳಲ್ಲಿ ಕಾರು ಕಳ್ಳ ಬಂಧನ

ಮಡಿಕೇರಿ: ನಗರದ ಹೃದಯ ಭಾಗದಲ್ಲಿ ಕಾರು ಕಳವು ಮಾಡಿದ್ದ ಆರೋಪಿಯನ್ನು ಕೆಲವೇ ಗಂಟೆಗಳಲ್ಲಿ ಮಡಿಕೇರಿ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ನಾಪೋಕ್ಲು ನಿವಾಸಿ ರಫೀಕ್ (30) ಬಂಧಿತ ಆರೋಪಿ. ನಗರದ ನಿವಾಸಿ ಅಂಬೇಕಲ್ ನವೀನ್ ಕುಶಾಲಪ್ಪ ಅವರು ಜನರಲ್ ತಿಮ್ಮಯ್ಯ ವೃತ್ತದಿಂದ ಮಂಗಳೂರು ರಸ್ತೆ ಕಡೆಗೆ ತೆರಳುವ ಮಾರ್ಗದ ಪಾರ್ಕಿಂಗ್ ಸ್ಥಳದಲ್ಲಿ ತಮ್ಮ ಕಾರು ನಿಲ್ಲಿಸಿ ಸ್ಟುಡಿಯೋಗೆ ತೆರಳಿದ್ದರು.

ಮರಳಿ ಬಂದು ನೋಡಿದಾಗ ಸ್ಥಳದಲ್ಲಿ ಕಾರು ಇರಲಿಲ್ಲ. ಇದರಿಂದ ಆತಂಕಗೊಂಡ ಅಂಬೇಕಲ್ ನವೀನ್ ಕುಶಾಲಪ್ಪ ಅಲ್ಲಿನ ಸಿಸಿ ಕ್ಯಾಮರಾ ದೃಶ್ಯಗಳನ್ನು ಪರಿಶೀಲನೆ ನಡೆಸಿದರು. ಈ ವೇಳೆ ಯುವಕನೋರ್ವ ನೇರವಾಗಿ ಕಾರು ಬಳಿ ಬಂದು ಕಾರಿನ ಬಾಗಿಲು ತೆಗೆದು ಕಾರನ್ನು ಚಲಾಯಿಸಿಕೊಂಡು ಹೋಗುತ್ತಿರುವುದು ಕಂಡು ಬಂದಿದೆ. ಈ ಸಂಬಂಧ ನವೀನ್ ಕುಶಾಲಪ್ಪ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಕಾರಿನಲ್ಲಿ ಜಿಪಿಎಸ್ ಅಳವಡಿಸಿದ್ದ ಹಿನ್ನೆಲೆಯಲ್ಲಿ ಅದರ ಆಧಾರದಲ್ಲಿ ಕಾರಿನ ಲೊಕೇಶನ್ ಪತ್ತೆ ಹಚ್ಚಿ ಕಾರು ಸಹಿತ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ಜ.15, ಭಾಗಮಂಡಲದಲ್ಲಿ ಚಂಡಿಕಾ ಹೋಮ



ಸುದ್ದಿಗೋಷ್ಠಿಯಲ್ಲಿ ಕಾವೇರಮ್ಮೆ ಕೊಡವ ಮತ್ತು ಅಮ್ಮ ಕೊಡವ ಹಿತರಕ್ಷಣಾ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಮುದ್ದಂಡ ಬಿ.ದೇವಯ್ಯ ಮಾತನಾಡಿದರು.

ಮಡಿಕೇರಿ: ಶ್ರೀ ಕಾವೇರಮ್ಮೆ ಕೊಡವ ಮತ್ತು ಅಮ್ಮ ಕೊಡವ ಹಿತರಕ್ಷಣಾ ಚಾರಿಟಬಲ್ ಟ್ರಸ್ಟ್ ವತಿಯಿಂದ ಲೋಕ ಕಲ್ಯಾಣಕ್ಕಾಗಿ ಜ.15ರಂದು ಕಾವೇರಿ ಕ್ಷೇತ್ರವಾದ ಭಾಗಮಂಡಲದ ಟ್ರಸ್ಟ್ ಜಾಗದಲ್ಲಿ 12ನೇ ವರ್ಷದ ಚಂಡಿಕಾ ಹೋಮ ಒಳಗೊಂಡಂತೆ ವಿವಿಧ ಪೂಜಾ ಕಾರ್ಯ ನಡೆಯಲಿದೆ ಎಂದು ಟ್ರಸ್ಟ್ ಅಧ್ಯಕ್ಷ ಮುದ್ದಂಡ ಬಿ.ದೇವಯ್ಯ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 7 ಗಂಟೆಯಿಂದ ಗಣಪತಿ ಹೋಮ, ಸತ್ಯನಾರಾಯಣಸ್ವಾಮಿ ಪೂಜೆ, ಶತರುದ್ರ ಪಠಣ ಹಾಗೂ ಚಂಡಿಕಾ ಹೋಮ ನಡೆಯಲಿದೆ. ಕೊಡವ ಮತ್ತು ಅಮ್ಮ ಕೊಡವರು ಒಟ್ಟಾಗಿ ಚಂಡಿಕಾ ಹೋಮ ಆಯೋಜಿಸಿಕೊಂಡು ಬರುತ್ತಿದ್ದಾರೆ. ಅಷ್ಟಮಂಗಲ ದೋಷಗಳ ನಿವಾರಣೆಗಾಗಿ ನಿರಂತರವಾಗಿ ಚಂಡಿಕಾ ಯಾಗ ನಡೆಸಿಕೊಂಡು ಬರಲಾಗುತ್ತಿದೆ. ಈ ಧಾರ್ಮಿಕ ಕಾರ್ಯ ಮುಂದುವರೆಸಲು ಟ್ರಸ್ಟ್ ಸಿದ್ಧವಿದೆ ಎಂದರು.

ಕೋಟಿ ರೂ. ಅನುದಾನ: ಭಾಗಮಂಡಲದ ಟ್ರಸ್ಟ್‌ನ 50 ಸೆಂಟ್ ಜಾಗದಲ್ಲಿ 4.50 ಸೆಂಟ್‌ನಲ್ಲಿ ಟ್ರಸ್ಟ್ ಕಟ್ಟಡ ನಿರ್ಮಾಣಕ್ಕೆ ಒಂದೂವರೆ ವರ್ಷದ ಹಿಂದೆ ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಎಂಎಲ್‌ಸಿ ಸುಜಾ ಕುಶಾಲಪ್ಪ ಅವರ ಸಹಕಾರ ಮತ್ತು ಪ್ರಯತ್ನಗಳಿಂದ 1 ಕೋಟಿ ಅನುದಾನ ಲಭ್ಯವಾಗಿದೆ. ಇದರ ಸಹಕಾರದೊಂದಿಗೆ ಕಟ್ಟಡ ನಿರ್ಮಿಸಲಾಗುವುದು ಎಂದು ಮಾಹಿತಿ ನೀಡಿದರು.

ಖಜಾಂಚಿ ತೋಲಂಡ ಸೋಮಯ್ಯ ಮಾತನಾಡಿ, ಉದ್ದೇಶಿತ ಕಟ್ಟಡದಲ್ಲಿ ಟ್ರಸ್ಟ್‌ನ ಕಚೇರಿ, ಸಭಾಂಗಣ ಸೇರಿದಂತೆ ಕ್ಷೇತ್ರಕ್ಕೆ ಭೇಟಿ ನಿಡುವ ಭಕ್ತರಿಗೆ ಅಗತ್ಯ ಸೌಲಭ್ಯ ಒದಗಿಸಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಟ್ರಸ್ಟಿಗಳಾದ ನಾಯಕಂಡ ಅಯ್ಯಣ್ಣ, ನೆರೆಯಂಡಮ್ಮಂಡ ಪ್ರಭು, ಹಂಚೆಟ್ಟಿರ ಮನು ಮುತ್ತಪ್ಪ, ಕುಕ್ಕೇರ ಶ್ಯಾಮಲ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳ ಕಲಿಕೆಗೆ ಪೋಷಕರು ಪ್ರೋತ್ಸಾಹಿಸಬೇಕು



ವಿರಾಜಪೇಟೆ ಲಿಟಲ್ ಸ್ಕಾಲರ್ಸ್ ಶಾಲಾ ವಾರ್ಷಿಕೋತ್ಸವದಲ್ಲಿ ಕಾಂತಾರ ಚಿತ್ರದ ಶೈನ್‌ಶೆಟ್ಟಿ ಅವರನ್ನು ಸನ್ಮಾನಿಸಲಾಯಿತು.

ವಿರಾಜಪೇಟೆ, ಜ.12–ವಿದ್ಯಾರ್ಥಿಗಳಿಗೆ ಪಾಠದ ಜೊತೆಗೆ ಕ್ರೀಡೆ ಮತ್ತು ಕಲೆಯನ್ನು ಕಲಿಸಲು ಪೋಷಕರು ಪ್ರೋತ್ಸಾಹ ನೀಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ ಹೇಳಿದರು.

ಪಟ್ಟಣದ ಸಂತ ಅನ್ನಮ್ಮ ವಿದ್ಯಾಸಂಸ್ಥೆ ಸಭಾಂಗಣದಲ್ಲಿ ಆಯೋಜಿಸಿದ್ದ ಲಿಟಲ್ ಸ್ಕಾಲರ್ಸ್ ಶಾಲಾ ವಾರ್ಷಿಕೋತ್ಸವದಲ್ಲಿ ಮಾತನಾಡಿದ ಅವರು, ಶಿಲ್ಪಿಗಳು ಕಲ್ಲನ್ನು ಕೆತ್ತಿ ಮೂರ್ತಿ ಮಾಡಿದಂತೆ ಶಿಕ್ಷಕರು ಮಕ್ಕಳನ್ನು ತಿದ್ದಿ ಅವರ ಭವಿಷ್ಯ ರೂಪಿಸಲು ಮುಂದಾಗಬೇಕು. ಪ್ರತಿ ಮಕ್ಕಳಲ್ಲೂ ಪ್ರತಿಭೆ ಇದೇ ಇರುತ್ತದೆ, ಅದನ್ನು ಹೊರತರಲು ವೇದಿಕೆ ಅವಶ್ಯವಿದೆ. ವಿದ್ಯಾರ್ಥಿಗಳು ಅವಕಾಶಗಳನ್ನು ಸದುಪಯೋಗ ಪಡಿಸಿಕೊಂಡು ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ತಹಸೀಲ್ದಾರ್ ರಾಮಚಂದ್ರ ಮಾತನಾಡಿ, ಮಕ್ಕಳ ಪ್ರತಿಭೆಗೆ ಪೋಷಕರು ಪ್ರೋತ್ಸಾಹ ನೀಡುವ ಮೂಲಕ ಶಿಕ್ಷಣ ಮತ್ತು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ನೆರವಾಗಬೇಕು. ವಿದ್ಯಾರ್ಥಿಗಳು ಶಿಸ್ತು ಪಾಲಿಸಬೇಕು. ಶಿಕ್ಷಣದಿಂದ ಯಾರು ವಂಚಿತರಾಗಬಾರದು ಎಂದರು.

ಲಿಟಲ್ ಸ್ಕಾಲರ್ಸ್ ಶಾಲಾ ಮುಖ್ಯಸ್ಥೆ ಪೂಜಾ ಸಜೇಶ್ ಮಾತನಾಡಿದರು. ಅರಮೇರಿ ಕಳಂಚೇರಿ ಮಠಾಧ್ಯಕ್ಷ ಶ್ರೀ ಶಾಂತಮಲ್ಲಿಕಾರ್ಜುನಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸಿದರು. ಇದೇ ವೇಳೆ ಕಾಂತಾರ ಚಿತ್ರದ ಶೈನ್‌ಶೆಟ್ಟಿ ಅವರನ್ನು ಸನ್ಮಾನಿಸಲಾಯಿತು.

ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ವಿರಾಜಪೇಟೆ ಡಿವೈಎಸ್‌ಪಿ ಮೋಹನ್ ಕುಮಾರ್, ಪುರಸಭೆ ಸದಸ್ಯ ಮಹಮ್ಮದ್ ರಫಿ, ಅನೂರುಲ್ಲಾ ಶಾಲೆ ಮುಖ್ಯಸ್ಥ ಎಲಿಯಾಸ್, ಸಂತ ಅನ್ನಮ್ಮ ದೇವಾಲಯ ಧರ್ಮಗುರು ಜೇಮ್ ಡುಮೇನಿಕ್, ಲಿಟಲ್ ಸ್ಕಾಲರ್ಸ್ ವಿದ್ಯಾಸಂಸ್ಥೆಯ ಪ್ರಮುಖ ಸಜೇಶನ್, ಮಲಯಾಳಿ ಮಹಿಳಾ ಅಸೋಸಿಯೇಷನ್ ಅಧ್ಯಕ್ಷೆ ಶೀಭಾ ಪ್ರಥ್ವಿನಾಥ್, ಶಿಕ್ಷಣ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಜ.ತಿಮ್ಮಯ್ಯ ಸ್ಮಾರಕ ಭವನಕ್ಕೆ ಏರ್ ಮಾರ್ಷಲ್ ಭೇಟಿ




ಮಡಿಕೇರಿಯ ಜನರಲ್ ತಿಮ್ಮಯ್ಯ ಸ್ಮಾರಕ ಭವನಕ್ಕೆ ಏರ್ ಮಾರ್ಷಲ್ ನಾಗೇಶ್ ಕಪೂರ್ ಭೇಟಿ ನೀಡಿದರು.

ಮಡಿಕೇರಿ, ಜ.12– ನಗರದ ಜನರಲ್ ತಿಮ್ಮಯ್ಯ ಸ್ಮಾರಕ ಭವನಕ್ಕೆ ಭಾರತೀಯ ವಾಯು ಪಡೆಯ ತರಬೇತಿ ವಿಭಾಗದ ಬೆಂಗಳೂರಿನ ಮುಖ್ಯಸ್ಥ ಏರ್ ಮಾರ್ಷಲ್ ನಾಗೇಶ್ ಕಪೂರ್ ಭೇಟಿ ನೀಡಿ, ಭವನದ ಸಮಗ್ರ ಮಾಹಿತಿ ಪಡೆದರು.

ಜನರಲ್ ತಿಮ್ಮಯ್ಯ ಜನ್ಮ ನಿವಾಸ ಸನ್ನಿಸೈಡ್‌ಗೆ ಭೇಟಿ ನೀಡಿದ್ದ ಅವರು, ಸ್ಮಾರಕ ಭವನದ ಬಗ್ಗೆ ಮತ್ತು ವೀರ ಸೇನಾಧಿಕಾರಿ ಜನರಲ್ ತಿಮ್ಮಯ್ಯ ಅವರ ಸೇನಾ ಜೀವನ ಸಂಬಂಧಿತ ಮಾಹಿತಿ ಪಡೆದರು.

ಈ ಸಂದರ್ಭ ಮಾತನಾಡಿದ ಏರ್ ಮಾರ್ಷಲ್ ನಾಗೇಶ್ ಕಪೂರ್, ಭಾರತದ ವೀರ ಸೇನಾನಿ ಬಗ್ಗೆ ಸಂಪೂರ್ಣ ಮಾಹಿತಿಯುಳ್ಳ ಸ್ಮಾರಕ ಭವನಕ್ಕೆ ಭೇಟಿ ನೀಡಿರುವುದು ಅಪೂರ್ವ ಕ್ಷಣವಾಗಿದೆ. ಈ ವೀರ ಸೇನಾನಿಯ ಜೀವನ ಯುವ ಪೀಳಿಗೆಗೆ ಆದರ್ಶಪ್ರಾಯವಾಗಬೇಕು ಎಂದರು. ಇದೇ ವೇಳೆ ಸ್ಮಾರಕ ಭವನದ ವ್ಯವಸ್ಥಾಪಕ ಸುಬೇದಾರ್ ಮೇಜರ್ ಗೌಡಂಡ ತಿಮ್ಮಯ್ಯ ಏರ್ ಮಾರ್ಷಲ್ ನಾಗೇಶ್ ಕಪೂರ್ ಅವರಿಗೆ ಮ್ಯೂಸಿಯಂ ಬಗ್ಗೆ ಮಾಹಿತಿ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕ ಕುಮಾರ್, ಸೈನಿಕ ಕಲ್ಯಾಣಾಧಿಕಾರಿ ಬಿ.ಆರ್.ಶೆಟ್ಟಿ, ಜನರಲ್ ತಿಮ್ಮಯ್ಯ ಸ್ಮಾರಕ ಭವನದ ಸಿಬ್ಬಂದಿಯಾದ ಪಿ.ಆರ್.ಮೋಹನ್, ರಮ್ಯ ಮಾಚಯ್ಯ, ಸುಭಾಷ್ ಹಾಜರಿದ್ದರು.

ಹೆದ್ದಾರಿಯಲ್ಲಿ ಅಡ್ಡಲಾಗಿ ನಿಂತ ಕಾಡಾನೆ ವಾಹನ ಸಂಚಾರಕ್ಕೆ ಅಡಚಣೆ



ಬಂಡೀಪುರ ಉದ್ಯಾನವನದ ಊಟಿ ಹೆದ್ದಾರಿ ಬದಿಯಲ್ಲಿದ್ದ ಆನೆ ರಸ್ತೆಯತ್ತ ಬರುತ್ತಿರುವುದು.

ಗುಂಡ್ಲುಪೇಟೆ, ಜ.12–ಬಂಡೀಪುರ ಉದ್ಯಾನವನದ ಊಟಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾಡಾನೆ ಅಡ್ಡಲಾಗಿ ನಿಂತಿದ್ದರಿಂದ ವಾಹನಗಳ ಸಂಚಾರಕ್ಕೆ ಕೆಲಕಾಲ ಅಡಚಣೆಯಾಗಿತ್ತು. ನಂತರ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಆನೆಯನ್ನು ಕಾಡಿಗಟ್ಟಿದರು.

ಇತ್ತೀಚೆಗೆ ಕೆಲ ದಿನಗಳಿಂದ ಕಾಡಾನೆಯೊಂದು ತರಕಾರಿ ತಿನ್ನಲು ಹೆದ್ದಾರಿಯಲ್ಲಿ ಸಾಗುವ ವಾಹನಗಳನ್ನು ಅಡ್ಡಗಟ್ಟುತ್ತಿದೆ. ಹದಿನೈದು ದಿನಗಳ ಹಿಂದೆ ಬೆಳ್ಳಂಬೆಳಗ್ಗೆ ಆನೆ ರಸ್ತೆಯಲ್ಲಿ ಲಾರಿಗಳನ್ನು ಅಡ್ಡಗಟ್ಟಿತ್ತು. ಇದೇ ವೇಳೆ ಮಂಜುಮು ಸುಕಿದ ವಾತಾವರಣವಿದ್ದರಿಂದ ಗಲಿಬಿಲಿಗೊಳಗಾದ ವಾಹನ ಸವಾರರು ಆನೆಯಿಂದ ಪಾರಾಗಲು ಹೆಣಗಾಡಿದರು. ಅರಣ್ಯ ಸಿಬ್ಬಂದಿ ಪಟಾಕಿ ಸಿಡಿಸಿ ಕಾಡಿಗಟ್ಟಲು ಮುಂದಾದರೂ ಆನೆ ಅವರ ಮೇಲೆ ದಾಳಿಗೆ ಯತ್ನಿಸಿದ್ದರಿಂದ ಮಧ್ಯಾಹ್ನದವರೆಗೂ ಕಾರ್ಯಾಚರಣೆ ನಡೆಸಲಾಗಿತ್ತು.

ಮತ್ತೆ ಭಾನುವಾರ ಮುಸ್ಸಂಜೆ ಬಂಡೀಪುರ–ಊಟಿ ರಸ್ತೆಯ ಕೆರೆ ಬಳಿ ಮೇಯುತ್ತಿದ್ದ ಹೆದ್ದಾರಿಗೆ ಬಂದು ತರಕಾರಿ ಸಾಗಿಸುತ್ತಿದ್ದ ಟೆಂಪೋಗಳು ಸೇರಿದಂತೆ ಲಾರಿಗಳನ್ನು ಅಡ್ಡಗಟ್ಟಿ ಟಾರ್ಪಾಲ್‌ಗಳನ್ನು ಎಳೆದು ತೊಂದರೆ ಕೊಡುತ್ತಿತ್ತು. ಇದರಿಂದ ವಾಹನಗಳ ಸಂಚಾರಕ್ಕೆ ಅಡಚಣೆಯಾಗಿತ್ತು. ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಹೆದ್ದಾರಿ ಗಸ್ತು ಪಡೆ ಹಾಗೂ ಅರಣ್ಯ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಆನೆಯನ್ನು ಕಾಡಿಗಟ್ಟಿದರು. ನಂತರ ವಾಹನಗಳು ಸುಗಮವಾಗಿ ಸಂಚರಿಸಿದವು.

ವಿಜೃಂಭಣೆಯ ಕಸ್ತೂರು ಬಂಡಿ ಜಾತ್ರೆ

• ಒಂದೆಡೆ ಸೇರಿದ ಹದಿನಾರು ಹಳ್ಳಿಗಳ ಬಂಡಿಗಳು • ದೊಡ್ಡಮ್ಮ ತಾಯಿಗೆ ವಿಶೇಷ ಪೂಜೆ

ಚಾಮರಾಜನಗರ, ಜ.12–ಹದಿನಾರು ಹಳ್ಳಿಗಳ ಬಂಡಿಗಳು ಒಂದೆಡೆ ಸೇರುವ ಕಸ್ತೂರು ದೊಡ್ಡಮ್ಮ ತಾಯಿ ಬಂಡಿ ಜಾತ್ರೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಭಾನುವಾರ ವಿಜೃಂಭಣೆಯಿಂದ ನೆರವೇರಿತು.

ವರ್ಷಾರಂಭದ ಮೊದಲ ಜಾತ್ರೆ ನಡೆದ ಪರಿಣಾಮ ಜಾತ್ರೆ ಆವರಣದ ತುಂಬೆಲ್ಲಾ ಭಕ್ತರು ನೆರೆದಿದ್ದರು. ಒಂದೊಂದಾಗಿ ಬಂಡಿಗಳು ಜಾತ್ರೆಯಂಗಳಕ್ಕೆ ಆಗಮಿಸುತ್ತಿದಂತೆ ಭಕ್ತರ ಜಯಘೋಷ ಮೊಳಗುತ್ತಿತ್ತು. ಜಾತ್ರೆ ಉದ್ದಕ್ಕೂ ಎತ್ತ ನೋಡಿದರೂ ಜನಜಂಗುಳಿ.

ಜಾತ್ರೆಯಲ್ಲಿ ಒಟ್ಟು ಹದಿನಾರು ಹಳ್ಳಿಗಳ ಬಂಡಿಗಳು ಬಂದು ಸೇರುತ್ತವೆ. ಆದರೆ, ಕಸ್ತೂರು, ಮರಿಯಾಲ, ಮರಿಯಾಲದ ಹುಂಡಿ, ಕೆಲ್ಲಂಬಳ್ಳಿ, ಭೋಗಾಪುರ, ಕಿರಗಸೂರು, ದಾಸನೂರು, ಸಪ್ಪಯ್ಯನಪುರ, ಹನಹಳ್ಳಿ, ಮೂಕಹಳ್ಳಿ, ಚಿಕ್ಕಹೊಮ್ಮ, ದೊಡ್ಡ ಹೊಮ್ಮ, ಅಂಕುಶರಾಯನಪುರ, ತೊರವಳ್ಳಿ, ಪುಟ್ಟಯ್ಯನಹುಂಡಿ, ಹೊನ್ನೇಗೌಡನ ಹುಂಡಿ, ಬಸವನಪುರ ಸೇರಿದಂತೆ 23 ಗ್ರಾಮಗಳಲ್ಲೂ ಜಾತ್ರೆ ಸಂಭ್ರಮ ಮನೆ ಮಾಡಿತ್ತು.

ಜಾತ್ರೆ ಅಂಗವಾಗಿ ಎಲ್ಲಾ 16 ಗ್ರಾಮಗಳ ಬಂಡಿಗಳಿಗೂ ಬಾಳೆಹಣ್ಣು ಗೊನೆ, ಬೃಹತ್ ಗಾತ್ರದ ಹೂವಿನ ಹಾರಗಳನ್ನು ಕಟ್ಟಿ ಸಿಂಗಾರ ಮಾಡಲಾಗಿತ್ತು. ಹೀಗಾಗಿ ಬಂಡಿಗಳು ಎಲ್ಲರ ಗಮನ ಸೆಳೆದವು. ಮಧ್ಯಾಹ್ನ 12ರ ಹೊತ್ತಿಗೆ ಕಸ್ತೂರು ಗ್ರಾಮದ ಜಾತ್ರೆಯಂಗಳಕ್ಕೆ ತೆರಳಿದ ಬಂಡಿಗಳು ದೇವಸ್ಥಾನ ಸುತ್ತಲೂ ಪ್ರದಕ್ಷಿಣೆ ಹಾಕಿ, ತೀರ್ಥ ಸಂಪ್ರೋಕ್ಷಣೆ ಮಾಡಿಸಿಕೊಂಡು ಗ್ರಾಮಕ್ಕೆ ತೆರಳುವ ಸಂದರ್ಭದಲ್ಲಿ ನೆರೆದಿದ್ದ ಭಕ್ತರು ಬಂಡಿಗೆ ಕಾಯಿ ಒಡೆದು ಭಕ್ತಿ ಸಮರ್ಪಿಸಿದರು.



ಕಸ್ತೂರು ಬಂಡಿ ಜಾತ್ರೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ವ್ಯವಸ್ಥಿತ ದರ್ಶನ: ಗ್ರಾಮಸ್ಥರು ಎತ್ತುಗಳ ಕೊಂಬುಗಳಿಗೆ ಬಣ್ಣ ತುಂಬಿ, ಕೊರಳಿಗೆ ಗೆಜ್ಜೆ ಹಾರ ಕಟ್ಟಿ ದೇವಸ್ಥಾನ ಸುತ್ತ ದೀವಟಿಗೆ ಸೇವೆ ಮಾಡಿದರು. ದೇವರ ದರ್ಶನಕ್ಕೆ ತೆರಳುವ ಭಕ್ತರಿಗೆ ಸರತಿ ಸಾಲಿನಲ್ಲಿ ನಿಲ್ಲಲು ಬ್ಯಾರಿಕೇಡ್ ಅಳವಡಿಸಿದ್ದರಿಂದ ಎಲ್ಲರೂ ದೇವಿಯ ದರ್ಶನ ಪಡೆಯಲು ಅನುಕೂಲವಾಯಿತು.

ಕೆರೆಯಂಗಳ ಸಮೀಪವೇ ಇರುವ ಮಹದೇಶ್ವರ ದೇವಸ್ಥಾನದಲ್ಲೂ ವಿಶೇಷ ಪೂಜೆ ಜರುಗಿದವು. ಈ ಬಾರಿ ಜಾತ್ರೆಯಲ್ಲಿ ಸಿಸಿ ಕ್ಯಾಮರಾ ಅಳವಡಿಸಲಾಗಿತ್ತು.

ಮಕ್ಕಳ ಕಲರವ: ಜಾತ್ರೆಯಲ್ಲಿ ದೊಡ್ಡಮ್ಮ ತಾಯಿಗೆ ಪೂಜೆ, ಪಂಜಿನ ಸೇವೆ ಒಂದೆಡೆಯಾದರೆ, ಸೌಂದರ್ಯ ವರ್ಧಕಗಳು, ಮಕ್ಕಳ ಆಟಿಕೆಗಳು, ಐಸ್‌ಕ್ರೀಂ, ಕಜ್ಜಾಯ, ಚಕ್ಕುಲಿ, ನಿಪ್ಪಟ್ಟು ಹಾಗೂ ಸಿಹಿ ತಿಂಡಿ–ತಿನಿಸು, ಮನೆ ಬಳಕೆ ವಸ್ತುಗಳ ವ್ಯಾಪಾರ ಜೋರಾಗಿತ್ತು. ಮಕ್ಕಳು ಜೋಕಾಲಿ, ಮರದ ಕುದುರೆ ಸವಾರಿ ಮಾಡಿ ಆನಂದಿಸಿದರು.

ಬಿಗಿ ಬಂದೋಬಸ್ತ್: ಮುಂಜಾಗ್ರತಾ ಕ್ರಮವಾಗಿ ತಾಲೂಕು ಆಡಳಿತದಿಂದ ಸಿದ್ಧತೆಗಳೊಂದಿಗೆ ಬಿಗಿ ಬಂದೋಬಸ್ತ್ ಮಾಡಲಾಗಿತ್ತು.

ಮುಂಬರುವ ಜಿಪಂ, ತಾಪಂ ಚುನಾವಣೆಯಲ್ಲಿ ಮಾದಿಗ ಸಮುದಾಯಕ್ಕೆ ಟಿಕೆಟ್ ನೀಡದಿದ್ದರೆ

ಚುನಾವಣೆ ಬಹಿಷ್ಕರಿಸಲು ಸಭೆ ನಿರ್ಣಯ



ಚಾಮರಾಜನಗರದ ಅಂಬೇಡ್ಕರ್ ಭವನದಲ್ಲಿ ಮಾದಿಗ ಸಮುದಾಯದ ಜಿಲ್ಲಾ ಮಟ್ಟದ ಮುಖಂಡರ ಸಭೆ ನಡೆಯಿತು.

ಚಾಮರಾಜನಗರ, ಜ.12–ಮುಂಬರುವ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆಯಲ್ಲಿ ಮಾದಿಗ ಸಮುದಾಯಕ್ಕೆ ಎಲ್ಲಾ ಪಕ್ಷಗಳು ಅವಕಾಶ ನೀಡಬೇಕು ಎಂದು ಜಿಲ್ಲಾ ಮಟ್ಟದ ಮಾದಿಗ ಸಮುದಾಯ ಮುಖಂಡರ ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯ ಕೈಗೊಳ್ಳಲಾಯಿತು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಮಾದಿಗ ಸಮುದಾಯದ ಜಿಲ್ಲಾ ಮಟ್ಟದ ಮುಖಂಡರ ಸಭೆಯಲ್ಲಿ ಸಮುದಾಯದ ಜಿಲ್ಲೆಯ ಎಲ್ಲಾ ಮುಖಂಡರು ಮಾತನಾಡಿ, ಜಿಲ್ಲೆಯಲ್ಲಿ ಪರಿಶಿಷ್ಟ ಹಾಗೂ ಹಿಂದುಳಿದ ವರ್ಗದವರು ಹೆಚ್ಚಾಗಿದ್ದಾರೆ. ಅದರಲ್ಲೂ ಬಹುತೇಕ ಚುನಾವಣೆಯಲ್ಲಿ ಮಾದಿಗರ ಮತಗಳು ಗೆಲುವಿಗೆ ನಿರ್ಣಯವಾಗಿವೆ. ಇಷ್ಟಾಗಿಯೂ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮಾದಿಗ ಸಮುದಾಯಕ್ಕೆ ಟಿಕೆಟ್ ನೀಡಿ ಗೆಲ್ಲಿಸಿಕೊಳ್ಳಲು ರಾಜಕೀಯ ಪಕ್ಷಗಳು ವಿಫಲವಾಗಿವೆ ಎಂದರು.

ಮಾದಿಗ ಸಮುದಾಯಕ್ಕೆ ಅವಕಾಶ ನೀಡಲು ಹಿಂದೇಟು ಹಾಕುತ್ತಿರುವುದು ವಿಪರ್ಯಾಸ. ಈ ಪರಿಪಾಠ ಬಿಟ್ಟು ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಎಲ್ಲಾ ರಾಜಕೀಯ ಪಕ್ಷಗಳು ಮಾದಿಗ ಸಮುದಾಯಕ್ಕೆ ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ಡಾ.ಬಾಬು ಜಗಜೀವನರಾಂ ಸಂಘಗಳ ಒಕ್ಕೂಟದ ಅಧ್ಯಕ್ಷ ಎಂ.ಶಿವಮೂರ್ತಿ, ಸಮುದಾಯ ಮುಖಂಡರಾದ ಬಸವನಪುರ ರಾಜಶೇಖರ, ಮೂಡಹಳ್ಳಿ ಮೂರ್ತಿ, ಬೂದುಬಾಳು ಮಹದೇವು, ಹೆಚ್.ಹೆಚ್.ನಾಗರಾಜು, ಸೋಮಶೇಖರ್ ಗುಂಡ್ಲುಪೇಟೆ, ಹಂಗಳ ನಾಗಮಲ್ಲು, ರಾಜಶೇಖರ, ರೇವಣ್ಣ ಆರ್.ಕೆ.ಜಗದೀಶ್, ನಿವೃತ್ತ ಅಧಿಕಾರಿ ಅರಕಲವಾಡಿ ಜವರಯ್ಯ, ಕೆಸ್ತೂರು ಮರಪ್ಪ, ಅಂಕಹಳ್ಳಿ ಸಿದ್ದಯ್ಯ, ವಕೀಲರಾದ ರಾಜೇಶ್, ಹರವೆ ಮಹದೇವಯ್ಯ, ನಾಗಯ್ಯ ಹೊನ್ನೇಗೌಡನಹಳ್ಳಿ, ಗುನರಸಿಂಹ, ಶಂಕರ್, ಸುದೇಶ್, ಶಾಂತರಾಜು, ಯಳಂದೂರು ನಾಗರಾಜು ಭಾಗವಹಿಸಿದ್ದರು.

ಸೇವಾ ಭಾರತಿಯಲ್ಲಿ ಸಂಭ್ರಮದ ಸಾಮರಸ್ಯ ಸಂಗಮ



ಚಾಮರಾಜನಗರ ಸೇವಾ ಭಾರತಿ ಶಿಕ್ಷಣ ಸಂಸ್ಥೆಯಲ್ಲಿ ನಡೆದ ಸಾಮರಸ್ಯ ಸಂಗಮದ ವಾರ್ಷಿಕೋತ್ಸವದಲ್ಲಿ ಗಣ್ಯರು ಭಾಗವಹಿಸಿದ್ದರು.

ಚಾಮರಾಜನಗರ, ಜ.12–ನಗರದ ಚೆನ್ನಿಪುರದಮೋಳೆ ರಸ್ತೆಯ ಸೇವಾ ಭಾರತಿ ಶಿಕ್ಷಣ ಸಂಸ್ಥೆಯಲ್ಲಿ ಸಾಮರಸ್ಯ ಸಂಗಮದ ವಾರ್ಷಿಕೋತ್ಸವ ರತನ್ ಟಾಟಾ ವೇದಿಕೆಯಲ್ಲಿ ಸತ್ಯಂ, ಶಿವಂ, ಸುಂದರಂ, ವಸುದೈವ ಕುಟುಂಬಕಂ ಶೀರ್ಷಿಕೆಯಡಿ ಸಂಭ್ರಮದಿಂದ ನಡೆಯಿತು.

ಗಣ್ಯರನ್ನು ಸಾಂಪ್ರದಾಯಿಕವಾಗಿ ಶಂಖನಾದದೊಂದಿಗೆ ಘೋಷ್ ತಂಡದೊಂದಿಗೆ ಸ್ವಾಗತಿಸಲಾಯಿತು. ನಂತರ ಸೇವಾ ಭಾರತಿ ಶಿಕ್ಷಣ ಸಂಸ್ಥೆಯ ಶಾಲಾ ತಂಡಗಳೊಂದಿಗೆ ನಡೆಸಿಕೊಟ್ಟ ಅತಿಥಿ ವಂದನೆ ಹಾಗೂ ಘೋಷ್ ವ್ಯೂಹ್ ರಚನೆ ನೋಡುಗರ ಗಮನ ಸೆಳೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮೈಸೂರಿನ ಮಹಾರಾಜ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಎಸ್.ಮುರುಳಿ, ಭಾರತದ ಇತಿಹಾಸದಲ್ಲಿ ಕರ್ನಾಟಕದ ಶ್ರೇಷ್ಠ ದೊರೆಗಳು ಆಳ್ವಿಕೆ ನಡೆಸಿ ಕನ್ನಡದ ಸಾಂಸ್ಕೃತಿಕ ಪರಂಪರೆಯನ್ನು ಶ್ರೀಮಂತಗೊಳಿಸಿ ಕಲೆ, ಸಾಹಿತ್ಯ, ವಾಸ್ತುಶಿಲ್ಪಕ್ಕೆ ಅದ್ವಿತೀಯ ಕೊಡುಗೆ ನೀಡಿದ್ದಾರೆ ಎಂದು ಬಣ್ಣಿಸಿದರು.

ಮೈಸೂರಿನ ಆರ್‌ಎಸ್‌ಎಸ್ ಸಂಘಚಾಲಕ ವಾಸುದೇವಭಟ್ ಮಾತನಾಡಿ, ಅಯೋಧ್ಯೆಯಲ್ಲಿ ಶ್ರೀಬಾಲರಾಮ ಮೂರ್ತಿ ಪ್ರತಿಷ್ಠಾಪಿಸಿ ಒಂದು ವರ್ಷವಾಗಿದ್ದು ಇಂತಹ ಸಂದರ್ಭದಲ್ಲಿ ಸಾಮರಸ್ಯ ಸಂಗಮ ಕಾರ್ಯಕ್ರಮ ಸೇವಾ ಭಾರತಿಯಲ್ಲಿ ಅರ್ಥಪೂರ್ಣವಾಗಿ ನಡೆದಿದೆ ಎಂದು ತಿಳಿಸಿದರು.

ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಚಾಮರಾಜನಗರ ವಿವಿಧತೆಯಲ್ಲಿ ಏಕತೆ ಹೊಂದಿರುವ ಸಂಪದ್ಭರಿತ ಜಿಲ್ಲೆಯಾಗಿದೆ. ಸರ್ಕಾರಗಳು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ಚಾಮರಾಜನಗರದಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ದೊರೆಯುತ್ತಿದೆ. ಈ ನಿಟ್ಟಿನಲ್ಲಿ ಸೇವಾ ಭಾರತಿ ಶಿಕ್ಷಣ ಸಂಸ್ಥೆ ನಗರ ಹಾಗೂ ಗ್ರಾಮೀಣ ಭಾಗಗಳಲ್ಲಿ ಶಿಕ್ಷಣದ ಮೂಲಕ ಸಮಾಜಮುಖಿಯಾಗಿ ಕೆಲಸ ನಿರ್ವಹಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಆದಾಯ ತೆರಿಗೆ ಇಲಾಖೆ ಹೆಚ್ಚುವರಿ ಆಯುಕ್ತ ಕಿರಣ್ ಮಾತನಾಡಿದರು. ಆರ್‌ಎಸ್‌ಎಸ್ ಮೈಸೂರು ವಿಭಾಗದ ಕಾರ್ಯಕಾರಿಣಿ ಸದಸ್ಯ ಡಾ.ವಾಮನರಾವ್ ಬಾಪಟ್, ನಗರಸಭೆ ಅಧ್ಯಕ್ಷ ಸುರೇಶ್, ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಮಂಜುನಾಥ ಪ್ರಸನ್ನ, ಮೈಸೂರಿನ ಆದಿತ್ಯ ಆಸ್ಪತ್ರೆ ಮುಖ್ಯಸ್ಥ ಡಾ.ಎಸ್.ಚಂದ್ರಶೇಖರ್, ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಶೆಟ್ಟಿ, ಕೆರೆಗೋಡು ಮಾಧವ ವಿದ್ಯಾಲಯ ಕಾರ್ಯದರ್ಶಿ ಶ್ರೀಪತಿ, ಉದ್ಯಮಿ ಪ್ರೇಮ್ ಕುಮಾರ್, ಹರ್ಮನ್ ಇಂಟರ್ ನ್ಯಾಷನಲ್ ಕಂಪನಿ ಸಿಇಓ ಪ್ರವೀಣ್ ಪೈ, ಸೇವಾ ಭಾರತಿ ಶಿಕ್ಷಣ ಸಂಸ್ಥೆ ಅಧ್ಯಕ್ಷ ಮ.ವೆಂಕಟರಾಮು, ಕಾರ್ಯದರ್ಶಿ ವಾಸುದೇವರಾವ್, ಆಡಳಿತಾಧಿಕಾರಿ ಎಸ್.ರಮೇಶ್, ಉಪಾಧ್ಯಕ್ಷ ಕೆ.ಬಾಲಸುಬ್ರಮಣ್ಯಂ, ಖಜಾಂಚಿ ಮಧು, ಸದಸ್ಯರಾದ ರಾ.ಸತೀಶ್, ಎಸ್.ಬಾಲಸುಬ್ರಮಣ್ಯಂ, ವೆಂಕನಾಗಪ್ಪ ಶೆಟ್ಟಿ, ಹೇಮಂತ್, ಪ್ರಾಂಶುಪಾಲರು, ಮುಖ್ಯ ಶಿಕ್ಷಕರು, ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು ಹಾಜರಿದ್ದರು.

ಇದೇ ವೇಳೆ ಸೇವಾ ಭಾರತಿ ಶಿಕ್ಷಣ ಸಂಸ್ಥೆ ಶಾಲಾ–ಕಾಲೇಜು ವಿದ್ಯಾರ್ಥಿಗಳಿಂದ ಕಲೆ, ಜಾನಪದ, ಸಂಸ್ಕೃತಿ, ಪರಂಪರೆ, ದೈವಿಕತೆ ಕುರಿತು ಸಾಂಸ್ಕೃತಿಕ ಕಾರ್ಯಕ್ರಮ, ನೃತ್ಯ ರೂಪಕ, ಸೈಕಲ್, ಬೆಂಕಿ ಸಾಹಸ ಸೇರಿದಂತೆ ವೈವಿಧ್ಯಮಯ ಶಾರೀರಿಕ ಕಾರ್ಯಕ್ರಮಗಳು ನೋಡುಗರ ಹುಬ್ಬೇರಿಸಿತು.

ಇಂದು, ನಾಳೆ ಕರಡಿಹಳ್ಳ ಕುಂಭೇಶ್ವರಸ್ವಾಮಿ ಜಾತ್ರೆ

ಚಾಮರಾಜನಗರ, ಜ.12–ತಾಲೂಕಿನ ಕರಡಿಹಳ್ಳದ ಶ್ರೀ ಕುಂಭೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಜ.13 ಮತ್ತು 14ರಂದು ನಡೆಯಲಿದೆ.

ಜ.13ರ ಸಂಜೆ 6 ಗಂಟೆಗೆ ಗಣಪತಿ ಹೋಮ ಮತ್ತು ದೀಪಾಲಂಕಾರ ಏರ್ಪಡಿಸಲಾಗಿದೆ. 14ರ ಸಂಕ್ರಾತಿ ಹಬ್ಬದಂದು ಬೆಳಗ್ಗೆ 10 ಗಂಟೆಗೆ ಹುಲಿವಾಹನ ಮೆರವಣಿಗೆ, ಹಾಲರವಿ, ಡೋಲು ಕುಣಿತ, ಮಧ್ಯಾಹ್ನ 1 ಗಂಟೆಗೆ ಪೂಜೆ ಏರ್ಪಡಿಸಲಾಗಿದೆ. 2 ಗಂಟೆಗೆ ಪ್ರಸಾದ ವಿನಿಯೋಗ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ವಿಜೃಂಭಣೆಯ ಶ್ರೀಕಂಠೇಶ್ವರಸ್ವಾಮಿ ಅಂಧಕಾಸುರ ವಧೆ

ನಂಜನಗೂಡು, ಜ.12– ಕಳೆದ ಬಾರಿ ತಾರಕಕ್ಕೇರಿ ಗೊಂದಲ ಸೃಷ್ಟಿಸಿದ್ದ ಶ್ರೀಕಂಠೇಶ್ವರ ಸ್ವಾಮಿಯವರ ಅಂಧಕಾಸುರನ ವಧೆ ಕಾರ್ಯಕ್ರಮ ಭಾನುವಾರ ಯಾವುದೇ ಗೊಂದಲವಿಲ್ಲದೇ ನಿರ್ವಿಘ್ನವಾಗಿ ವಿಜೃಂಭಣೆಯಿಂದ ನೆರವೇರಿತು.

ಶ್ರೀಕಂಠೇಶ್ವರ ದೇವಾಲಯದ ವತಿಯಿಂದ ನಗರದ ರಾಕ್ಷಸ ಮಂಟಪ ವೃತ್ತದ ಬಳಿ ಅಂಧಕಾಸುರನ ಚಿತ್ರವನ್ನು ರಂಗೋಲಿಯಲ್ಲಿ ಬರೆಯಲಾಗಿತ್ತು. ಅಲ್ಲದೆ ಬೃಹತ್ ಗಾತ್ರದ ಅಂಧಕಾಸುರನ ಚಿತ್ರಪಟ ನಿರ್ಮಿಸಲಾಗಿತ್ತು. ಮೊದಲಿಗೆ ದೇವಾಲಯದ ಆಗಮಿಕ ಪ್ರಧಾನ ಅರ್ಚಕರಾದ ನಾಗಚಂದ್ರ ದೀಕ್ಷಿತ್ ನೇತೃತ್ವದಲ್ಲಿ ರಂಗೋಲಿಯಲ್ಲಿ ಬರೆಯಲಾಗಿದ್ದ ಅಂಧಕಾಸುರನ ಚಿತ್ರಕ್ಕೆ ಬಲಿ ಪೂಜೆ ನೆರವೇರಿಸಿ ಜೀವ ಕಳೆ ತುಂಬಲಾಯಿತು. ನಂತರ ಶ್ರೀಕಂಠೇಶ್ವರ ದೇವಾಲಯದಿಂದ ನಟರಾಜ ಉತ್ಸವ ಮೂರ್ತಿಯನ್ನು ದೇವಾಲಯದ ಅರ್ಚಕರ ತಂಡ ಹೂವಿನ ಪಲ್ಲಕ್ಕಿಯೊಡನೆ ಮೆರವಣಿಗೆ ಮೂಲಕ ಕರೆತರಲಾಯಿತು. ರಾಕ್ಷಸ ಮಂಟಪ ಬಳಿ ಬರೆಯಲಾಗಿದ್ದ ಅಂಧಕಾಸುರನ ರಂಗೋಲಿಯ ಭಾವಚಿತ್ರವನ್ನು ಉತ್ಸವ ಮೂರ್ತಿ ಹೊತ್ತಿದ್ದ ಅರ್ಚಕರ ತಂಡ ತುಳಿದು ಅಳಿಸುವ ಮೂಲಕ ಸಂಹಾರ ಕಾರ್ಯಕ್ರಮ ನೆರವೇರಿಸಲಾಯಿತು. ಇದೇ ವೇಳೆಗೆ ಅಂಧಕಾಸುರನ ಬೃಹತ್ ಗಾತ್ರದ ಭಾವಚಿತ್ರವನ್ನು ಕೆಳಗೆ ಇಳಿಸುವ ಮೂಲಕ ಅಂಧಕಾಸುರನ ವಧೆ ಕಾರ್ಯಕ್ರಮವನ್ನು ಶ್ರದ್ಧಾಭಕ್ತಿಯಿಂದ ನಿರ್ವಿಘ್ನವಾಗಿ ನೆರವೇರಿಸಲಾಯಿತು. ಇದೇ ವೇಳೆ ನೆರೆದಿದ್ದ ಭಕ್ತರು ಜೈ ಶ್ರೀಕಂಠೇಶ್ವರ, ಜೈ ಪಾರ್ವತಿ ದೇವಿ ಎಂಬ ಘೋಷಣೆ ಮುಗಿಲು ಮುಟ್ಟುವಂತೆ ಕೂಗಿ ಅಂಧಕಾಸುರನ ರಂಗೋಲಿ ಚಿತ್ರವನ್ನು ತುಳಿದು ಕುಣಿದು ಕುಪ್ಪಳಿಸಿದರಲ್ಲದೆ, ದೇವರ ಉತ್ಸವ ಮೂರ್ತಿಯನ್ನು ಕಣ್ತುಂಬಿಕೊಂಡು ಇಷ್ಟಾರ್ಥಗಳನ್ನು ನೆರವೇರಿಸುವಂತೆ ಹರಕೆ ಕಟ್ಟಿ ಭಕ್ತಿ ಮೆರೆದರು. ನಂತರ ಅಂಧಕಾಸುರನ ವಧೆಗಾಗಿ ನಟರಾಜನ ರೌದ್ರಾವತಾರದಲ್ಲಿ ಕಾಣಿಸಿಕೊಂಡ ಶ್ರೀಕಂಠೇಶ್ವರಸ್ವಾಮಿ ಅವರನ್ನು ಪಾರ್ವತಿ ದೇವಿ ಉತ್ಸವ ಮೂರ್ತಿಯನ್ನು ತಂದು ಸಮಾಧಾನ ಪಡಿಸಿ ಪೂಜೆ ನೆರವೇರಿಸಿ ದೇವಾಲಯದ ಕಡೆಗೆ ಹೂವಿನ ಪಲ್ಲಕ್ಕಿಯಲ್ಲಿ ಮೆರವಣಿಗೆ ಮೂಲಕ ಕರೆದೊಯ್ದು ದೇವಾಲಯದಲ್ಲಿ ಧಾರ್ಮಿಕ ಪೂಜಾ ಕಾರ್ಯಗಳನ್ನು ನೆರವೇರಿಸುವ ಮೂಲಕ ಅಂಧಕಾಸುರ ವಧೆ ಕಾರ್ಯಕ್ರಮಕ್ಕೆ ತೆರೆ ಎಳೆಯಲಾಯಿತು.


ನಂಜನಗೂಡಲ್ಲಿ ಅಂಧಕಾಸುರನ ವಧೆ ವಿಜೃಂಭಣೆಯಿಂದ ನಡೆಯಿತು.

ಕಳೆದ ಬಾರಿ ಅಂಧಕಾಸುರನ ಚಿತ್ರಪಟದ ಬದಲಾಗಿ ಮಹಿಷಾಸುರನ ಚಿತ್ರ ಅಳವಡಿಸಿದ್ದರಿಂದ ದಲಿತ ಸಂಘಟನೆಗಳು ಆಕ್ಷೇಪ ವ್ಯಕ್ತಪಡಿಸಿದ್ದ ಹಿನ್ನೆಲೆಯಲ್ಲಿ ಗೊಂದಲ ಉಂಟಾಗಿ ತಾರಕಕೇರಿತ್ತು. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದ ಜಿಲ್ಲಾಡಳಿತ ಪೂರ್ವಭಾವಿ ಸಭೆ ಕರೆದು ಅಂಧಕಾಸುರನ ಭಾವಚಿತ್ರವನ್ನು ಧಾರ್ಮಿಕ ದತ್ತಿ ಇಲಾಖೆ ಪ್ರಧಾನ ಆಗಮಿಕರ ನೇತೃತ್ವದಲ್ಲಿ ಶಿವ ಪುರಾಣದಲ್ಲಿರುವಂತೆ ಚಿತ್ರಪಟವನ್ನು ಪ್ರದರ್ಶಿಸಿ ಒಪ್ಪಿಗೆ ಪಡೆಯಲಾಗಿತ್ತು. ಅಲ್ಲದೇ ಮುನ್ನೆಚ್ಚರಿಕೆ ಕ್ರಮವಾಗಿ ಹೆಚ್ಚುವರಿ ಎಸ್ಪಿ ಮಲ್ಲಿಕ್, ಡಿವೈಎಸ್ಪಿ ರಘು, ವೃತ್ತ ನಿರೀಕ್ಷಕ ಸುನೀಲ್ ಕುಮಾರ್ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿತ್ತು.

ಈ ವೇಳೆ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ಹೆಚ್ಚುವರಿ ಎಸ್‌ಪಿ ಮಲ್ಲಿಕ್, ಡಿವೈಎಸ್ಪಿ ರಘು, ಯುವ ಬ್ರಿಗೇಡ್ ದಕ್ಷಿಣ ವಲಯ ಸಂಚಾಲಕ ಚಂದ್ರಶೇಖರ್, ಮುಖಂಡರುಗಳಾದ ಕೃಷ್ಣಜೋಯಿಸ್, ರಾಚಪ್ಪ, ಸುನೀಲ್, ಗಿರೀಶ್ ಸೇರಿದಂತೆ ಇನ್ನಿತರರಿದ್ದರು.

ಸುತ್ತೂರು ಜಾತ್ರೆ ಪ್ರಚಾರ ರಥಕ್ಕೆ ಬೀಳ್ಕೊಡುಗೆ


ಹೆಚ್.ಡಿ.ಕೋಟೆಯ ಜೆಎಸ್‌ಎಸ್ ಮಂಗಳ ಮಂಟಪದ ಆವರಣಕ್ಕೆ ಆಗಮಿಸಿದ ಸುತ್ತೂರು ಜಾತ್ರೆ ಪ್ರಚಾರ ರಥವನ್ನು ಭಾನುವಾರ ಬೆಳಗ್ಗೆ ಬೀಳ್ಕೊಡಲಾಯಿತು. ಈ ವೇಳೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಅಧ್ಯಕ್ಷ ರುದ್ರಪ್ಪ, ರಾಜ್ಯ ಸಮಿತಿ ಸದಸ್ಯ ಮೊತ್ತ ಬಸವರಾಜಪ್ಪ, ಪ್ರಧಾನ ಕಾರ್ಯದರ್ಶಿ ಜಕ್ಕಳ್ಳಿ ಮಾದೇವಪ್ಪ, ನಿರ್ದೇಶಕರಾದ ಸುರೇಶ್, ಬ್ಯಾಂಕ್ ವೀರಪ್ಪ, ಸುಮ ಸಂತೋಷ್, ಗಿರೀಶ್, ಕುಸುಮ್ಮ, ಸ್ವಾಮಿ ಮಾಸ್ಟರ್, ಮಹಿಳಾ ಸಮಿತಿ ಅಧ್ಯಕ್ಷೆ ದೇವಮಣಿ, ಯುವಸಮಿತಿ ಅಧ್ಯಕ್ಷ ಸತೀಶ, ಮುಖಂಡರಾದ ಜೆ.ಪಿ.ಶಿವರಾಜು, ನಾಗಣ್ಣ, ಜೆ.ಪಿ.ಚಂದ್ರಶೇಖರ್, ದಯಾನಂದ, ರಾಮಚಂದ್ರ, ಮಲ್ಲೇಶ್, ಜೆ.ಬಿ.ಶಿವಸ್ವಾಮಿ, ಜೆ.ಕೆ.ಯೋಗೇಶ್, ಇತರರಿದ್ದರು.

ಜ.26ಕ್ಕೆ ಶಿಕ್ಷಕರ ಸಂಘದ ಚುನಾವಣೆ

ಹುಣಸೂರು, ಜ.12– ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಹಕಾರ ಸಂಘದ ಚುನಾವಣೆ ಜ.26 ರಂದು ಬೆಳಗ್ಗೆ 9 ರಿಂದ ಸಂಜೆ 4ರವರೆಗೆ ನಗರದ ಶಿಕ್ಷಕರ ಭವನದಲ್ಲಿ ನಡೆಯಲಿದೆ ಎಂದು ಕಾರ್ಯದರ್ಶಿ ಜಿ.ಆರ್.ರಘು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನಾಮಪತ್ರ ಸಲ್ಲಿಸಲು ಜ.18 ಕೊನೆ ದಿನ. ಬೆಳಗ್ಗೆ 11 ರಿಂದ ಮಧ್ಯಾಹ್ನ 2 ಗಂಟೆವರೆಗೆ ಸಂಘದ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಬಹುದು.

ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ಸಿಗೆ ಸಹಕರಿಸಿ

ಶಾಸಕ ಅನಿಲ್ ಮನವಿ

ಸರಗೂರು, ಜ.12– ವನಜಲಸಿರಿ ನಾಡಿನಲ್ಲಿ ಇದೇ ಮೊದಲ ಬಾರಿಗೆ ನಡೆಯುತ್ತಿರುವ ತಾಲೂಕು ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನದ ಅದ್ಧೂರಿ ಯಶಸ್ಸಿಗೆ ಎಲ್ಲರೂ ಸಹಕರಿಸಬೇಕು ಎಂದು ಶಾಸಕ ಅನಿಲ್ ತಿಳಿಸಿದರು.

ಪಟ್ಟಣದ ನಾಮಧಾರಿಗೌಡ ಸಮುದಾಯ ಭವನದಲ್ಲಿ ನಡೆದ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ತಾಲೂಕಿನಲ್ಲಿ ಜ.17ರಂದು ನಡೆಯುವ ನುಡಿಜಾತ್ರೆ ವಿಜೃಂಭಣೆಯಿಂದ ನಡೆಯಬೇಕು. ಸಾಹಿತ್ಯಾಸಕ್ತರನ್ನು ಸೇರಿಸುವ ಕೆಲಸ ಎಲ್ಲರೂ ಜವಾಬ್ದಾರಿಯಾಗಿದ್ದು, ತಾಲೂಕು ಮಟ್ಟದ ಅಧಿಕಾರಿಗಳು ಇದರ ಯಶಸ್ಸಿಗೆ ಶ್ರಮಿಸಬೇಕು ಎಂದು ಸಲಹೆ ನೀಡಿದರು.

ನುಡಿಜಾತ್ರೆ ನಡೆಯುವ ಸಂದರ್ಭ ಬುಕ್‌ಸ್ಟಾಲ್ ತೆರೆಯಬೇಕು. ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಮುಂದಾಗಬೇಕು. ಸಾಹಿತ್ಯಾಸ್ತಕರನ್ನು ಕರೆತರಲು ಸಾರಿಗೆ ಬಸ್ ಸೌಲಭ್ಯ ಒದಗಿಸಬೇಕು. ಯಾವುದೇ ಅಹಿತಕರ ಘಟನೆ ಜರುಗದಂತೆ ಮುನ್ನೆಚ್ಚರಿಕಾ ಕ್ರಮವಾಗಿ ಅಧಿಕಾರಿಗಳು ಸಕಲ ಸಿದ್ಧತೆ ಮಾಡಿಕೊಳ್ಳಬೇಕು. ಮಾದರಿ ಸಮ್ಮೇಳನವಾಗಿ ರೂಪುಗೊಳ್ಳುವಂತೆ ಅಧಿಕಾರಿಗಳು ಸ್ಪಂದಿಸುವ ಕೆಲಸ ಮಾಡಬೇಕು ಎಂದರು.


ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಶಾಸಕ ಅನಿಲ್ ಆಹ್ವಾನ ಪತ್ರಿಕೆ ಬಿಡುಗಡೆಗೊಳಿಸಿದರು.

ಕಸಾಪ ಅಧ್ಯಕ್ಷ ಎಂ.ಕೆಂಡಗಣ್ಣಸ್ವಾಮಿ ಮಾತನಾಡಿ, ತಾಲೂಕಿನ ನಾನಾ ಕಲಾವಿದರು ಸಮ್ಮೇಳನದಲ್ಲಿ ಭಾಗಿಯಾಗಲಿದ್ದು, ನಾನಾ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಇರಲಿದೆ. ಅಲ್ಲದೆ ಹಾಸ್ಯ ಕಲಾವಿದರಿಂದಲೂ ಮಿಮಿಕ್ರಿ ಕಾರ್ಯಕ್ರಮ ಇರಲಿದೆ ಎಂದರು.

ಜಿಪಂ ಮಾಜಿ ಸದಸ್ಯರಾದ ಪಿ.ರವಿ ಮಾತನಾಡಿ, ಕನ್ನಡ ಸಾಹಿತ್ಯ ಸಮ್ಮೇಳನದ ರೂಪುರೇಷೆ ಬಗ್ಗೆ ಮಾಹಿತಿ ನೀಡಿದರು. ಕೋಟೆ ಕಸಾಪ ಅಧ್ಯಕ್ಷ ಕನ್ನಡ ಪ್ರಮೋದ್, ಪಪಂ ಅಧ್ಯಕ್ಷೆ ರಾಧಿಕಾ, ಜಿಪಂ ಮಾಜಿ ಸದಸ್ಯರಾದ ಪಿ.ರವಿ, ಭಾಗ್ಯಲಕ್ಷ್ಮಿ, ಸಿ.ಕೆ.ಗಿರೀಶ್, ಎಂ.ಪಿ. ಮನುಗನಹಳ್ಳಿ ಮಂಜು ಮಾತನಾಡಿದರು. ಪಪಂ ಉಪಾಧ್ಯಕ್ಷ ಶಿವಕುಮಾರ್, ಸದಸ್ಯರಾದ ಶ್ರೀನಿವಾಸ್, ಚಲುವಕೃಷ್ಣ, ನೂರಾಳಸ್ವಾಮಿ, ಚಂದ್ರಕಲಾ, ಮುಖಂಡರಾದ ರಾಮು, ಸ್ವಾಮಿ, ಶಂಭುಲಿಂಗನಾಯಕ, ಭೀಮರಾಜು, ತಹಸೀಲ್ದಾರ್ ಮೋಹನಕುಮಾರಿ, ತಾಪಂ ಇಓ ಪ್ರೇಮ್ ಕುಮಾರ್, ಪಪಂ ಮುಖ್ಯಾಧಿಕಾರಿ ಸಂತೋಷ್, ಚೆನ್ನಿಪುರ ಚಲುವರಾಜು, ಹೋಬಳಿ ಘಟಕದ ಅಧ್ಯಕ್ಷ ಕಂದೇಗಾಲ ಶಿವರಾಜು, ಗ್ರಾಮೀಣ ಮಹೇಶ್, ವನಸಿರಿ ಉಮೇಶ್ ಸೇರಿದಂತೆ ಇಲಾಖಾಧಿಕಾರಿಗಳು ಹಾಜರಿದ್ದರು.

ಸಂಸದ ಯದುವೀರ್ ರಾಜವಂಶಸ್ಥರಲ್ಲ ಎಂಬ ಲಕ್ಷ್ಮಣ್ ಹೇಳಿಕೆಗೆ ಖಂಡನೆ

ಮತ್ತೊಮ್ಮೆ ಹೇಳಿಕೆ ನೀಡಿದರೇ ದೂರು ದಾಖಲು

ವಾಲ್ಮೀಕಿ ನಾಯಕ ಸಂಘಗಳ ಒಕ್ಕೂಟದ ಮೈಸೂರು ಜಿಲ್ಲಾಧ್ಯಕ್ಷ ತಾಯೂರು ಪ್ರಕಾಶ್ ಎಚ್ಚರಿಕೆ

ತಿ.ನರಸೀಪುರ, ಜ.12– ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಒರಿಜಿನಲ್ ರಾಜವಂಶಸ್ಥರಲ್ಲ ಎಂದು ಹೇಳಿಕೆ ನೀಡಿರುವ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮತ್ತೊಮ್ಮೆ ಇಂತಹ ಅಸಂಬದ್ಧ ಮಾತುಗಳನ್ನಾಡಿದರೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗುವುದು ಎಂದು ವಾಲ್ಮೀಕಿ ನಾಯಕ ಸಂಘಗಳ ಒಕ್ಕೂಟದ ಮೈಸೂರು ಜಿಲ್ಲಾಧ್ಯಕ್ಷ ತಾಯೂರು ಪ್ರಕಾಶ್ ಎಚ್ಚರಿಕೆ ನೀಡಿದರು.


ಸುದ್ದಿಗೋಷ್ಠಿಯಲ್ಲಿ ತಾಯೂರು ಪ್ರಕಾಶ್ ಮಾತನಾಡಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಪಿಸಿಸಿ ವಕ್ತಾರ ಲಕ್ಷ್ಮಣ್ ಇಂತಹ ಹೇಳಿಕೆ ನೀಡುವ ಮೂಲಕ ರಾಜಮನೆತನಕ್ಕೆ ಅಗೌರವ ತೋರಿದ್ದಾರೆ. ಇದು ಕೇವಲ ರಾಜ ಮನೆತನಕ್ಕೆ ಮಾಡಿದ ಅಪಮಾನವಲ್ಲ. ಜಿಲ್ಲೆ ಮತ್ತು ರಾಜ್ಯದ ಜನತೆಗೆ ಮಾಡಿದ ಅಪಮಾನವಾಗಿದ್ದು, ಕೂಡಲೇ ತಾವಾಡಿರುವ ಮಾತಿಗೆ ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದರು.

ನೀವು ಕಾಂಗ್ರೆಸ್ ಪಕ್ಷದ ವಕ್ತಾರರಾಗಿದ್ದೀರಿ. ಪಕ್ಷದ ವಿಚಾರ ಬಂದಾಗ ಏನು ಬೇಕಾದರೂ ಮಾತನಾಡಿ. ಆದರೆ ಸುಖಾಸುಮ್ಮನೆ ರಾಜಮನೆತನಕ್ಕೆ ಅಪಮಾನವಾಗುವ ರೀತಿಯ ಹೇಳಿಕೆ ನೀಡುವುದು ಅಸಂಬದ್ಧ. ಮೈಸೂರು ರಾಜ ಮನೆತನಕ್ಕೆ 800 ವರ್ಷಗಳ ಇತಿಹಾಸವಿದೆ. ತನ್ನದೇ ಆದ ವೈಶಿಷ್ಟ್ಯತೆ, ವೈವಿಧ್ಯತೆ ರಾಜಮನೆತನಕ್ಕಿದೆ. ಪಾರಂಪರಿಕ ಮನೆತನದ ಬಗ್ಗೆ ನೀವು ಅಗೌರವ ತೋರಿ ಮಾತನಾಡಿದ್ದೀರಿ. ಮುಂದೆ ಈ ಹೇಳಿಕೆ ಮರುಕಳಿಸಬಾರದು. ಮತ್ತೆ ರಾಜ ಮನೆತನದ ಬಗ್ಗೆ ಹಗುರವಾಗಿ ಮಾತನಾಡಿದರೆ ಪ್ರತಿಭಟನೆಯೊಂದಿಗೆ ಪೊಲೀಸರಿಗೆ ನಿಮ್ಮ ವಿರುದ್ಧ ದೂರು ನೀಡಲಾಗುತ್ತದೆ ಎಂದು ಎಚ್ಚರಿಸಿದರು.

ಮೈಸೂರು ಮಹಾರಾಜರ ಬಗ್ಗೆ ನಾಯಕ ಸಮಾಜ ವಿಶೇಷ ಗೌರವ ಹೊಂದಿದೆ. ರಾಜ ಮನೆತನಕ್ಕೆ ನಾಯಕ ಸಮಾಜದ ಮೇಲೆ ಅಪಾರ ಪ್ರೀತಿ, ವಿಶ್ವಾಸ, ಗೌರವ ಇದೆ. ಹಾಗಾಗಿ ಮುಂದೆ ನೀವೇನಾದರೂ ರಾಜವಂಶಸ್ಥರ ಬಗ್ಗೆ ಕೀಳಾಗಿ ಮಾತನಾಡಿದರೇ ನಾಯಕ ಸಮಾಜ ಸಹ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ವಿಶ್ವ ಋಷಿ ವಾಲ್ಮೀಕಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಸೋಮೇಶ್ವರಪುರ ಕೃಷ್ಣನಾಯಕ, ನಿರ್ದೇಶಕ ವಾಲ್ಮೀಕಿ ನಿಂಗರಾಜು, ಸೂರಹಳ್ಳಿ ಮಹದೇವ ನಾಯಕ, ಯಡದೊರೆ ದೇವರಾಜು, ಮಹರ್ಷಿ ವಾಲ್ಮೀಕಿ ಚಾರಿಟಬಲ್ ಅಧ್ಯಕ್ಷ ಯಡದೊರೆ ಮಹೇಶ್ ನಾಯಕ್ ಹಾಜರಿದ್ದರು.

ರೈತರು ಗುಣಮಟ್ಟದ ಹಾಲು ಪೂರೈಸಲು ಮನವಿ

ತಿ.ನರಸೀಪುರ, ಜ.12– ರೈತರು ಹೈನುಗಾರಿಕೆಯಲ್ಲಿ ಹೆಚ್ಚು ತೊಡಗಿಸಿಕೊಂಡು ಡೈರಿಗೆ ಹೆಚ್ಚಿನ ಪ್ರಮಾಣದಲ್ಲಿ ಗುಣಮಟ್ಟದ ಹಾಲು ಪೂರೈಸುವ ಮೂಲಕ ಸಂಘದ ಬೆಳವಣಿಗೆಗೆ ಸಹಕಾರ ನೀಡಬೇಕು ಎಂದು ಬಿಳಿಗೆರೆಹುಂಡಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಮಹದೇವಸ್ವಾಮಿ ಮನವಿ ಮಾಡಿದರು.

ರೈತ ಮಹಿಳೆ ಬಸಮ್ಮ ಅವರು ನಿಧನರಾದ ಹಿನ್ನೆಲೆಯಲ್ಲಿ ಗ್ರಾಮದ ಡೈರಿಯಲ್ಲಿ ಮೊಮ್ಮಗಳು ಸವಿತಾ ಅವರಿಗೆ ಧನ ಸಹಾಯದ ಚೆಕ್ ವಿತರಿಸಿ ಮಾತನಾಡಿದ ಅವರು, ಹಾಲು ಒಕ್ಕೂಟಕ್ಕೆ ಭೇಟಿ ನೀಡಿ ರೈತರು ಮತ್ತು ಷೇರುದಾರರಿಗೆ ಸಿಗಬಹುದಾದ ಸವಲತ್ತುಗಳನ್ನು ತರಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ ಎಂದರು.


ಡೈರಿಯಲ್ಲಿ ಧನಸಹಾಯದ ಚೆಕ್ ವಿತರಿಸಲಾಯಿತು.

ಸಂಘದ ಉಪಾಧ್ಯಕ್ಷ ಏಳು ಮಂಜು ಮಾತನಾಡಿ, ಪ್ರಸ್ತುತ ಹೈನುಗಾರಿಕೆ ಜನರ ಪ್ರಮುಖ ಕಸುಬಾಗಿದೆ. ರೈತರು ಸಹಕಾರ ಸಂಘಕ್ಕೆ ಗುಣಮಟ್ಟದ ಹಾಲನ್ನು ಸರಬರಾಜು ಮಾಡಿದರೆ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಭಿವೃದ್ಧಿ ಸಾಧ್ಯ. ಇದರಿಂದ ರೈತರಿಗೂ ಹೆಚ್ಚಿನ ಅನುಕೂಲವಾಗಲಿದೆ ಎಂದರು.

ಉತ್ಪಾದಕರು ತಮ್ಮ ಮನೆ ಬಳಕೆಗೆ ಅಗತ್ಯವಾದ ಹಾಲನ್ನು ಇಟ್ಟುಕೊಂಡು ಸೇವಿಸಬೇಕು. ಇದರಿಂದ ದೇಹಕ್ಕೆ ಬೇಕಾದ ಪೌಷ್ಟಿಕಾಂಶಗಳು ದೊರೆಯಲಿವೆ. ಕೃಷಿಯೊಂದಿಗೆ ಉಪಕಸುಬಾಗಿ ಹೈನುಗಾರಿಕೆ, ಕೋಳಿ/ಕುರಿ ಸಾಕಣೆಯಂತಹ ಉಪ ಕಸುಬುಗಳನ್ನು ರೂಢಿಸಿಕೊಳ್ಳಬೇಕು. ಇಲ್ಲದಿದ್ದರೆ ಆರ್ಥಿಕ ಸಂಕಷ್ಟಕ್ಕೆ ಒಳಗಾಗಬೇಕಾಗುತ್ತದೆ. ಸಂಘಕ್ಕೆ ಉತ್ತಮ ಕಟ್ಟಡ ದೊರಕಿದೆ. ಆದರೆ ಹಾಲು ಉತ್ಪಾದನೆ ಕಡಿಮೆ ಇದೆ. ಹಾಗಾಗಿ ರೈತರು ಹಾಲು ಉತ್ಪಾದನೆ ಹೆಚ್ಚಿಸುವ ಮೂಲಕ ಆರ್ಥಿಕಾಭಿವೃದ್ಧಿ ಹೊಂದಲು ಮುಂದಾಗಬೇಕೆಂದು ತಿಳಿಸಿದರು.

ಇಓ ಪುರುಷೋತ್ತಮ್, ನಿರ್ದೇಶಕರಾದ ಎನ್.ಮಹೇಶ್, ಮಹದೇವಪ್ಪ, ಸುಂದರಸ್ವಾಮಿ, ಶಂಕರ್, ಸಿದ್ದೇಗೌಡ, ನಾಗರಾಜು, ಸಣ್ಣಯ್ಯ ಮಹದೇವ, ನಾಯಕ, ಸ್ವಾಮಿ, ಮಹದೇವಮ್ಮ, ಪುಟ್ಟಮಲ್ಲಮ್ಮ, ಹಾಲು ಪರೀಕ್ಷಕ ಅಭಿಷೇಕ್, ಸಿದ್ದೇಗೌಡ, ರಾಜಣ್ಣ ಇದ್ದರು.

ಸಿಂಹ ವಾಹನೋತ್ಸವ


ಮೂಗೂರಿನ ಶ್ರೀತ್ರಿಪುರ ಸುಂದರಿ ಅಮ್ಮನವರ ಬಂಡಿ ಜಾತ್ರಾ ಮಹೋತ್ಸವದ ಅಂಗವಾಗಿ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಭಾನುವಾರ ಸಿಂಹ ವಾಹನೋತ್ಸವ ನಡೆಯಿತು. ಸಂಜೆ ಚಂದ್ರ ಮಂಡಲೋತ್ಸವ ಹಾಗೂ ರಾತ್ರಿ ಬಂಡಿ ಮಂಟಪದ ಬಳಿ ರಾಕ್ಷಸ ಸಂಹಾರ ನಡೆಯಿತು.

ನಂ.ಗೂಡಲ್ಲಿ ಭೀಮ ಕೋರೆಗಾಂವ್ ವಿಜಯೋತ್ಸವ


ಕಾರ್ಯಕ್ರಮವನ್ನು ಪ್ರಗತಿಪರ ಚಿಂತಕ ಮುಕುಂದರಾಜು ಉದ್ಘಾಟಿಸಿದರು.

ನಂಜನಗೂಡು, ಜ.12– ನಗರದ ಅಂಬೇಡ್ಕರ್ ಭವನದಲ್ಲಿ ಭಾನುವಾರ ದಲಿತ ಸಂಘಟನೆಗಳ ಒಕ್ಕೂಟದಿಂದ ಭೀಮ ಕೋರೆಗಾಂವ್ ವಿಜಯೋತ್ಸವ ಕಾರ್ಯಕ್ರಮ ನಡೆಯಿತು.

ತಾಲೂಕು ದಲಿತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ನಗರ್ಲೆ ವಿಜಯ್ ಕುಮಾರ್ ಮಾತನಾಡಿ, ಇದೊಂದು ಐತಿಹಾಸಿಕ ಕಾರ್ಯಕ್ರಮ. 500 ಮಾದರ ಸೈನಿಕರು 25 ಸಾವಿರಕ್ಕೂ ಹೆಚ್ಚು ಪೇಶ್ವೆ ಸೈನಿಕರನ್ನು ಹೊಡೆದುರುಳಿಸಿ ಅವರನ್ನು ಯಮಲೋಕಕ್ಕೆ ಅಟ್ಟಿದ ಸುದಿನ. ಈ ಕಥೆಯನ್ನು ನಮ್ಮ ಮುಂದಿನ ಪೀಳಿಗೆಗೆ ತಿಳಿಸಬೇಕು. ಈ ಯುದ್ಧ ಯಾವುದೇ ಹಣ, ಆಸ್ತಿ, ಹೆಣ್ಣಿಗಾಗಿ ನಡೆದ ಯುದ್ಧವಲ್ಲ. ದಲಿತರ ಸ್ವಾಭಿಮಾನಕ್ಕಾಗಿ ನಡೆದ ಯುದ್ಧ. ನಮ್ಮ ಮುಂದಿನ ತಲೆಮಾರುಗಳು ಈ ಸಂಸ್ಕೃತಿ ಬೆಳೆಸಿಕೊಂಡು ಹೋಗಬೇಕು ಎಂದರು.

ಪ್ರಗತಿಪರ ಚಿಂತಕ ಮುಕುಂದರಾಜು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಬೆಳಗ್ಗೆ ನಗರದ ಕ್ರೀಡಾಂಗಣದಲ್ಲಿ ಕೋರೆಗಾಂವ್ ವಿಜಯೋತ್ಸವದ ಸ್ಥಬ್ಧಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆ ಡೊಳ್ಳು ಕುಣಿತ, ಗೊಂಬೆ ಕುಣಿತ, ವೀರಗಾಸೆ, ಕಂಸಳೆ ಕುಣಿತ ಸೇರಿದಂತೆ ಮುಂತಾದ ಜಾನಪದ ಕಲಾ ತಂಡಗಳೊಂದಿಗೆ ರಾಷ್ಟ್ರಪತಿ ರಸ್ತೆಯ ಮೂಲಕ ಶ್ರೀಕಂಠೇಶ್ವರನ ದೇವಾಲಯ, ಬಜಾರ್ ರಸ್ತೆ ಮೂಲಕ ಅಂಬೇಡ್ಕರ್ ಭವನ ತಲುಪಿತು. ಕಾರ್ಯಕ್ರಮದಲ್ಲಿ, ರೈತ ಸಂಘದ ಜಿಲ್ಲಾಧ್ಯಕ್ಷ ವಿದ್ಯಾಸಾಗರ್, ಅಭಿ ನಾಗಭೂಷಣ, ಮಲ್ಲಹಳ್ಳಿ ನಾರಾಯಣ, ಚುಂಚನಹಳ್ಳಿ ಮಲ್ಲೇಶ್, ಕಾರ್ಯ ಬಸವಣ್ಣ, ಜಯಶಂಕರ್, ಯಶವಂತ್, ಶಂಕರಪುರ ಸುರೇಶ್, ಬೊಕ್ಕಹಳ್ಳಿ ನಂಜುಂಡಸ್ವಾಮಿ, ಪುಟ್ಟಸ್ವಾಮಿ, ಸತೀಶ್‌ರಾವ್ ಸೇರಿದಂತೆ ಇತರರಿದ್ದರು.

ಶಿಕ್ಷಣದಿಂದ ಉತ್ತಮ ಪ್ರಜೆಯಾಗಲು ಸಾಧ್ಯ

ಸಂಸದ ಸುನೀಲ್ ಬೋಸ್


ಕಾರ್ಯಕ್ರಮವನ್ನು ಸಂಸದ ಸುನೀಲ್ ಬೋಸ್ ಉದ್ಘಾಟಿಸಿದರು.

ಮಲ್ಕುಂಡಿ, ಜ.12– ದೇಶದಲ್ಲಿ ಉತ್ತಮ ಪ್ರಜೆಯಾಗಲು ಶಿಕ್ಷಣ ಬಹು ಮುಖ್ಯವಾಗಿದೆ ಎಂದು ಸಂಸದ ಸುನೀಲ್ ಬೋಸ್ ಹೇಳಿದರು.

ಸಮೀಪದ ಹುರ ಗ್ರಾಮದ ಶ್ರೀಗಾಯಿತ್ರಿ ವಿದ್ಯಾಸಂಸ್ಥೆ ಆವರಣದಲ್ಲಿ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಕಲಿಯಬೇಕು. ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಆಸ್ತಿಗಿಂತ ಮುಖ್ಯವಾಗಿ ಶಿಕ್ಷಣ ಕೊಡಿಸಿ ದೇಶದ ಉತ್ತಮ ಪ್ರಜೆಯಾಗಲು ಸಹಕರಿಸಬೇಕು. ವಿದ್ಯಾರ್ಥಿಗಳು ಪ್ರಾಥಮಿಕ ಹಂತದಲ್ಲಿಯೇ ಅಧ್ಯಯನ ಮಾಡುವ ಹವ್ಯಾಸ ರೂಢಿ ಮಾಡಿಕೊಳ್ಳಬೇಕು. ಮಕ್ಕಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ತೊಡಗಿಸಿಕೊಳ್ಳಬೇಕು. ಗ್ರಾಮೀಣ ಭಾಗದಲ್ಲಿ ಖಾಸಗಿ ಶಾಲೆ ತೆರೆದು ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಇಂತಹ ಶಾಲೆ ಅಭಿವೃದ್ಧಿಗೆ ಪ್ರತಿಯೊಬ್ಬರ ಸಹಕಾರ ಮುಖ್ಯ. ಇತ್ತೀಚಿನ ದಿನಗಳಲ್ಲಿ ಮಕ್ಕಳ ಮೊಬೈಲ್ ಬಳಕೆ ಹೆಚ್ಚಾಗಿದೆ. ಪೋಷಕರು ಇದರ ಬಗ್ಗೆ ಗಮನ ಹರಿಸಿ ಅವರು ಓದಿನ ಕಡೆ ಗಮನ ಹರಿಸುವಂತೆ ಆಸಕ್ತಿ ವಹಿಸಬೇಕು ಎಂದರು.

ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮಾತನಾಡಿ, ಪೋಷಕರು ತಮ್ಮ ಮಕ್ಕಳಿಗೆ ಆಸ್ತಿ ಮಾಡುವುದನ್ನು ಬಿಟ್ಟು ಗುಣಮಟ್ಟದ ಶಿಕ್ಷಣವನ್ನು ಕಡ್ಡಾಯವಾಗಿ ಕೊಡಿಸಬೇಕು. ಶಿಕ್ಷಣ ಎಂಬುದು ಎಲ್ಲಾ ಸಂಪತ್ತಿಗಿಂತಲೂ ಶ್ರೇಷ್ಠವಾದ ಸಂಪತ್ತು. ಮಕ್ಕಳಿಗೆ ಉತ್ತಮ ವಿದ್ಯೆ ನೀಡಿದಲ್ಲಿ ಅವರೇ ತಮ್ಮ ಎಲ್ಲಾ ಸಂಪತ್ತುಗಳನ್ನು ಪಡೆದುಕೊಳ್ಳುತ್ತಾರೆ. ಆದ್ದರಿಂದ ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಮಾದಪಟ್ಟಣ ವಿರಕ್ತ ಮಠಾಧ್ಯಕ್ಷ ತೋಂಟದಾರ್ಯ ಸ್ವಾಮೀಜಿ, ಹಲ್ಲರೆ ಮಠಧ್ಯಾಕ್ಷ ಬಸವಣ್ಣ ಸ್ವಾಮೀಜಿ, ಮುಖಂಡರಾದ ಇಂಧನಬಾಬು, ಮಹದೇವಪ್ಪ ನಂಜುಂಡಸ್ವಾಮಿ, ಸ್ವಾಮಿ, ಗಿರೀಶ್, ಬಸವರಾಜ್, ಕೂಸಪ್ಪ, ಪ್ರತಿಧ್ವನಿ ತ್ರಿನೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ಮಹೇಶ್, ಗಾಯಿತ್ರಿ ವಿದ್ಯಾಸಂಸ್ಥೆ ಕಾರ್ಯದರ್ಶಿ ನಟರಾಜ್, ಮುಖ್ಯ ಶಿಕ್ಷಕ ಮಹದೇವಯ್ಯ ಸೇರಿದಂತೆ ಶಿಕ್ಷಕ ವೃಂದ ಹಾಜರಿದ್ದರು.

ಸಿಎಂ ಸಿದ್ದರಾಮಯ್ಯರಿಂದ ಅಹಿಂದ ಸಮಾಜ ಮೇಲೆತ್ತುವ ಕೆಲಸ

ಪ್ರತಿಭಾ ಪುರಸ್ಕಾರ, ಕ್ಯಾಲೆಂಡರ್ ಬಿಡುಗಡೆ ಸಮಾರಂಭದಲ್ಲಿ ಶಾಸಕ ಪುಟ್ಟರಂಗಶೆಟ್ಟಿ

ಕೆ.ಆರ್.ನಗರ, ಜ.12– ಹಿಂದುಳಿದ ವರ್ಗದ ನಾಯಕ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಹಿಂದ ಸಮಾಜಗಳನ್ನು ಎಲ್ಲಾ ರೀತಿಯಲ್ಲೂ ಮೇಲೆತ್ತುವ ಕೆಲಸ ಮಾಡುತ್ತಿದ್ದಾರೆ ಎಂದು ಶಾಸಕ ಪುಟ್ಟರಂಗಶೆಟ್ಟಿ ತಿಳಿಸಿದರು.

ಸಾಲಿಗ್ರಾಮ ಮತ್ತು ಕೆ.ಆರ್.ನಗರ ತಾಲೂಕುಗಳ ಶ್ರೀಭಗೀರಥ ಉಪ್ಪಾರ ಸಂಘದಿಂದ ಪಟ್ಟಣದ ಶ್ರೀಉಪ್ಪಾರ ರಾಮ ಮಂದಿರದಲ್ಲಿ ನಡೆದ ಪ್ರತಿಭಾ ಪುರಸ್ಕಾರ, ಕ್ಯಾಲೆಂಡರ್ ಬಿಡುಗಡೆ ಮತ್ತು ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಉಪ್ಪಾರ ಸಮಾಜವನ್ನು ಪ್ರ.ವರ್ಗ–1ರಿಂದ ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕೆಂಬ ಸಮಾಜದ ಬೇಡಿಕೆ ಇದ್ದು ಮುಖ್ಯಮಂತ್ರಿಗಳು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಿ ಕೇಂದ್ರಕ್ಕೆ ಕಳುಹಿಸಿಕೊಡಲಿದ್ದಾರೆ ಎಂದು ಭರವಸೆ ನೀಡಿದ ಪುಟ್ಟರಂಗಶೆಟ್ಟಿ ಸಮಾಜದ ಹಲವು ಮುಖಂಡರಿಗೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡುವಂತೆ ಮನವಿ ಸಲ್ಲಿಸಲಾಗಿದೆ ಎಂದರು.



ಸಮಾರಂಭವನ್ನು ಶಾಸಕ ಡಿ.ರವಿಶಂಕರ್ ಉದ್ಘಾಟಿಸಿದರು.

ಮೈಸೂರು ನಗರದಲ್ಲಿ ಉಪ್ಪಾರ ಸಮಾಜದ ಸಮುದಾಯ ಭವನ ನಿರ್ಮಾಣ ಮಾಡಲು ಜಿಲ್ಲಾ ಸಂಘ ಮುಂದಾಗಬೇಕೆಂದು ಸಲಹೆ ನೀಡಿದ ಅವರು ಮುಡಾದಿಂದ ನಿವೇಶನ ಮಂಜೂರು ಮಾಡಿಸಲು ಮತ್ತು ಸರ್ಕಾರದಿಂದ ಅನುದಾನ ಕೊಡಿಸಲು ಈ ಭಾಗದ ಶಾಸಕರುಗಳೊಂದಿಗೆ ನಾನು ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿ ಶಾಸಕ ಡಿ.ರವಿಶಂಕರ್ ಮಾತನಾಡಿ, ಸಾಲಿಗ್ರಾಮ ತಾಲೂಕು ಕೇಂದ್ರದಲ್ಲಿ ಸಮುದಾಯ ಭವನ ನಿರ್ಮಾಣ ಮಾಡಲು ನಿವೇಶನ ಕೊಡಿಸುವುದರ ಜೊತೆಗೆ ಕೆ.ಆರ್.ನಗರದ ಸಮುದಾಯ ಭವನದ ಮುಂದುವರೆದ ಕಾಮಗಾರಿಗೆ ಅಗತ್ಯವಿರುವ 25 ಲಕ್ಷ ರೂ.ಗಳನ್ನು ಶೀಘ್ರ ಮಂಜೂರು ಮಾಡಿಸಲಾಗುತ್ತದೆ ಎಂದರು.

ಮೈಸೂರು ಭಾಗದಲ್ಲಿ ಎಲ್ಲಾ ಶಾಸಕರು ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡುವಂತೆ ಸರ್ಕಾರ ರಚನೆಗೊಂಡ ಸಂದರ್ಭದಲ್ಲಿ ಒತ್ತಡ ಹೇರಲಾಗಿತ್ತು. ಮುಂದಿನ ದಿನಗಳಲ್ಲಿ ಅವರಿಗೆ ಮಂತ್ರಿ ಭಾಗ್ಯ ದೊರೆಯಲಿದೆ ಎಂದ ಶಾಸಕರು ಜಿಪಂ ಮತ್ತು ತಾಪಂ ಚುನಾವಣೆಯಲ್ಲಿ ಸಮಾಜದ ಮುಖಂಡರು ಸ್ಪರ್ಧಿಸಲು ಅವಕಾಶ ಕಲ್ಪಿಸಲಾಗುತ್ತದೆ ಎಂದು ಭರವಸೆ ನೀಡಿದರು.

ಹಿಂದುಳಿದ ಸಮಾಜಗಳು ಅಭಿವೃದ್ಧಿ ಕಾಣಬೇಕಾದರೆ ರಾಜಕೀಯ ಅಧಿಕಾರದ ಜೊತೆಗೆ ಹೆಚ್ಚು ಮಂದಿ ಅಧಿಕಾರಿಗಳು ಇರಬೇಕು. ಇದನ್ನು ಸಮುದಾಯದವರು ಅರಿತು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕೆಂದು ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್, ಮುಡಾ ಮಾಜಿ ಅಧ್ಯಕ್ಷ ಹೆಚ್.ಎನ್.ವಿಜಯ್, ರಾಜ್ಯ ಸಂಘದ ಪ್ರಧಾನ ಕಾರ್ಯದರ್ಶಿ ಯು.ವೆಂಕೊಬ, ಜಿಲ್ಲಾ ಸಂಘದ ಅಧ್ಯಕ್ಷ ಯೋಗೇಶ್ ಉಪ್ಪಾರ್, ತಾಲೂಕು ಅಧ್ಯಕ್ಷ ಮಹದೇವ್, ನೌಕರರ ಸಂಘದ ಅಧ್ಯಕ್ಷ ಹೆಚ್.ಟಿ.ಪಾಂಡು ಮಾತನಾಡಿದರು. ಈ ವೇಳೆ ಪ್ರತಿಭಾವಂತ ಮಕ್ಕಳಿಗೆ ಪುರಸ್ಕಾರ ನೀಡಿ ಗೌರವಿಸಲಾಯಿತು. ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಡಾ.ದಿವ್ಯತಾ, ಪತ್ರಕರ್ತರಾದ ಕೆ.ಟಿ.ಮಂಜುನಾಥ್, ಎಸ್.ಯೋಗಾನಂದ್, ಪೊಲೀಸ್ ಇಲಾಖೆ ಗುರುಪ್ರಸಾದ್, ರವಿಕುಮಾರ್, ಗುತ್ತಿಗೆದಾರ ನಿಂಗರಾಜು, ತಿಪ್ಪೂರು ನಳಿನಿ ಅವರನ್ನು ಸನ್ಮಾನಿಸಲಾಯಿತು.

ತಾಪಂ ಮಾಜಿ ಅಧ್ಯಕ್ಷ ಹೆಚ್.ಟಿ.ಮಂಜುನಾಥ್, ಸಹಕಾರ ಯೂನಿಯನ್ ನಿರ್ದೇಶಕ ಟಿ.ರಾಮೇಗೌಡ, ಸಂಘದ ಗೌರವಾಧ್ಯಕ್ಷ ಡಿ.ತಮ್ಮಯ್ಯ, ಉಪಾಧ್ಯಕ್ಷ ರಾಮಕೃಷ್ಣ, ಕಾರ್ಯದರ್ಶಿ ಸಂದೀಪ್, ಪದಾಧಿಕಾರಿಗಳಾದ ಗೋವಿಂದೇಗೌಡ, ಎಂ.ಕುಮಾರ್, ಬಿ.ಕೆ.ನಾಗಣ್ಣ, ಕೆ.ಎಲ್.ಲೋಕೇಶ್, ಬಸವೇಗೌಡ, ರಂಗರಾಜು, ಯೋಗೇಶ್‌ಕುಮಾರ್ ಮತ್ತಿತರರಿದ್ದರು.

ಅಂಬೇಡ್ಕರ್, ಸಂವಿಧಾನದ ಬಗ್ಗೆ ಮಾತನಾಡುವುದು ಕಾಂಗ್ರೆಸ್‌ಗೆ ಚಟವಾಗಿದೆ

ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಟೀಕೆ

- ಬದುಕಿದ್ದಾಗ ಅಂಬೇಡ್ಕರ್‌ಗೆ ಗೌರವ ನೀಡಲಿಲ್ಲ
- ದಲಿತರನ್ನು ದಾರಿ ತಪ್ಪಿಸುತ್ತಿದ್ದಾರೆ
- ಹಲವು ರಾಜ್ಯಗಳಲ್ಲಿ ಕಾಂಗ್ರೆಸ್ ಲೆಕ್ಕಕ್ಕೆ ಇಲ್ಲ



ಮೈಸೂರಿನ ಕುರಿಮಂಡಿಯಲ್ಲಿ ಬಿಜೆಪಿ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರನ್ನು ಸನ್ಮಾನಿಸಲಾಯಿತು.

ಮೈಸೂರು, ಜ.12(ಬಿಎಲ್‌ಯು)– ಅಂಬೇಡ್ಕರ್ ಹಾಗೂ ಸಂವಿಧಾನದ ಬಗ್ಗೆ ಮಾತನಾಡುವುದು ಕಾಂಗ್ರೆಸ್‌ನವರಿಗೆ ಚಟವಾಗಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಕಿಡಿಕಾರಿದರು.

ಮೈಸೂರಿನ ಕುರಿಮಂಡಿಯಲ್ಲಿ ಇಂದು ಬಿಜೆಪಿ ಆಯೋಜಿಸಿದ್ದ ಅಭಿನಂದನಾ ಸಮಾರಂಭಕ್ಕೂ ಮೊದಲು ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಅಂಬೇಡ್ಕರ್ ಬದುಕಿದ್ದ ಸಂದರ್ಭದಲ್ಲಿ ಗೌರವ ಕೊಡದ ಕಾಂಗ್ರೆಸ್‌ನವರಿಗೆ ಈಗ ದಿಢೀರ್ ಪ್ರೀತಿ ಉಕ್ಕುತ್ತಿದೆ ಎಂದು ಗೇಲಿ ಮಾಡಿದರು.

ಸಂವಿಧಾನದ ಪೀಠಿಕೆ ಬದಲಿಸಿದ್ದ ಕಾಂಗ್ರೆಸ್‌ನವರು ಈಗ ತಾವು ಸಂವಿಧಾನದ ಪರ ಇದ್ದೇವೆ ಎಂದು ಜನರನ್ನು ನಂಬಿಸಲು ಯತ್ನಿಸುತ್ತಿದ್ದಾರೆ. ಈ ಕಾರಣದಿಂದ ಹೋದ ಬಂದ ಕಡೆಯಲ್ಲೆಲ್ಲಾ ಸಂವಿಧಾನದ ಪುಸ್ತಕ ಹಿಡಿದುಕೊಂಡು ಓಡಾಡುತ್ತಿದ್ದಾರೆ ಎಂದು ಛಲವಾದಿ ನಾರಾಯಣಸ್ವಾಮಿ ಲೇವಡಿ ಮಾಡಿದರು.

ನಾವು ಕಾಂಗ್ರೆಸ್‌ನವರ ವಿರುದ್ಧ ಪ್ರತಿಹೋರಾಟ ಮಾಡುವುದಿಲ್ಲ. ಬದಲಿಗೆ ಅಂಬೇಡ್ಕರ್ ಹಾಗೂ ಸಂವಿಧಾನಕ್ಕೆ ಬಿಜೆಪಿ ಯಾವ ರೀತಿ ಗೌರವ ನೀಡುತ್ತಿದೆ ಎಂದು ಜನರಿಗೆ ಮನದಟ್ಟು ಮಾಡಿಕೊಡುತ್ತಿದ್ದೇವೆ ಎಂದರು.

ಈ ದೇಶದಲ್ಲಿ ಸಂವಿಧಾನವನ್ನು ಎರಡು ವರ್ಷ ಜಾರಿಗೆ ತರದೆ ಆಡಳಿತ ನಡೆಸಿದ ಕಾಂಗ್ರೆಸ್ ತುರ್ತು ಪರಿಸ್ಥಿತಿ ಹೇರಿತ್ತು ಅಧಿಕಾರ ಉಳಿಸಿಕೊಳ್ಳಲು ಈ ರೀತಿಯ ಕ್ರಮ ಕೈಗೊಂಡಿದೆ ಎಂದು ದೇಶದ ಜನರಿಗೆ ತಿಳಿದಿದೆ. ಇದರಿಂದ ಬಹಳಷ್ಟು ರಾಜ್ಯಗಳಲ್ಲಿ ಕಾಂಗ್ರೆಸ್ ನೆಲಕಚ್ಚಿದೆ ಎಂದು ಹೇಳಿದರು.

ಆದರೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಸಂವಿಧಾನ ಉಳಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿದ್ದ ಆರ್ಟಿಕಲ್ 370 ತೆರವು ಮಾಡಿ ಸಮಾನ ಹಕ್ಕು ನೀಡಿದ್ದಾರೆ ಎಂದರು.

ಕಾಂಗ್ರೆಸ್ ದಲಿತ ಸಮುದಾಯವನ್ನು ದಾರಿ ತಪ್ಪಿಸುವ ಕೆಲಸ ಮಾಡುತ್ತಿದೆ. ಅಂಬೇಡ್ಕರ್‌ಗೆ ಮೋಸ ಮಾಡಿದ ಸತ್ಯ ಅರಿಯದ ದಲಿತ ಸಂಘಟನೆಗಳು ಅಂಬೇಡ್ಕರ್ ಭಾವಚಿತ್ರ ಹಾಗೂ ನೀಲಿ ಶಾಲು ಹಾಕಿಕೊಂಡು ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಛಲವಾದಿ ನಾರಾಯಣ ಸ್ವಾಮಿ ತಿಳಿಸಿದರು.

ಸಾವಿರ ಕೋಟಿಗೂ ಮೀರಿದ ಆಸ್ತಿವಂತರು ಸಿದ್ದರಾಮಯ್ಯ ಬೆನ್ನಿಗಿದ್ದಾರೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆಗೆ ಸಾವಿರ ಕೋಟಿಗೂ ಹೆಚ್ಚು ಮೌಲ್ಯವಿರುವ 25 ಆಸ್ತಿವಂತರು ಇದ್ದಾರೆ. ಇದೇ ಧೈರ್ಯದಿಂದ ಸಿದ್ದರಾಮಯ್ಯ ಅವರೆ ಹೈಕಮಾಂಡ್ ಅನ್ನು ಹೆದರಿಸುತ್ತಿದ್ದಾರೆ ಎಂದು ಛಲವಾದಿ ನಾರಾಯಣ ಸ್ವಾಮಿ ಆರೋಪಿಸಿದರು.

ಡಿ.ಕೆ.ಶಿವಕುಮಾರ್ ಎಂತಹ ನಿಪುಣ ರಾಜಕೀಯ ತಂತ್ರಗಾರಿಕೆ ರೂಪಿಸಿದರೂ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನ ಮಾತ್ರ ಬಿಟ್ಟು ಕೊಡುವುದಿಲ್ಲ ಎಂದು ಭವಿಷ್ಯ ನುಡಿದರು.

ಸಿದ್ದರಾಮಯ್ಯ ತಮ್ಮ 40 ವರ್ಷದ ರಾಜಕಾರಣದಲ್ಲಿ ಪಕ್ಷ ಸ್ಥಾಪನೆ ಮಾಡಿ ರಾಜಕಾರಣ ಮಾಡಿಲ್ಲ. ಗೆದ್ದಲು ಕಟ್ಟಿದ ಹುತ್ತದಲ್ಲಿ ಹಾವು ವಾಸ ಮಾಡಿದಂತೆ ಯಾರೋ ಕಟ್ಟಿದ ಪಕ್ಷದಲ್ಲಿ ಅಧಿಕಾರ ಚಲಾಯಿಸುತ್ತಿದ್ದಾರೆ ಎಂದು ಛಲವಾದಿ ನಾರಾಯಣ ಸ್ವಾಮಿ ಟೀಕಿಸಿದರು.

ಹಸುವಿನ ಕೆಚ್ಚಲು ಕೊಯ್ದವರಿಗೆ ಶಿಕ್ಷೆ ಆಗಬೇಕು

ಬೆಂಗಳೂರಿನ ಚಾಮರಾಜಪೇಟೆಯಲ್ಲಿ ಹಸುವಿನ ಕೆಚ್ಚಲು ಕೊಯ್ದ ಪ್ರಕರಣದ ಬಗ್ಗೆ ತನಿಖೆ ಆಗಬೇಕು ಎಂದು ಛಲವಾದಿ ನಾರಾಯಣ ಸ್ವಾಮಿ ಆಗ್ರಹಿಸಿದರು.

ಇದೊಂದು ಅಮಾನವೀಯ ಘಟನೆಯಾಗಿದ್ದು, ತಪ್ಪಿತಸ್ಥರಿಗೆ ಶಿಕ್ಷೆ ಆಗಬೇಕು ಎಂದು ಒತ್ತಾಯಿಸಿದರು. ರಾಜ್ಯ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದ ದರಿದ್ರವನ್ನು ಹೊತ್ತುಕೊಂಡು ಬಂದಿದೆ. ಗ್ಯಾರಂಟಿ ಯೋಜನೆಗಾಗಿ ದಲಿತ ಸಮುದಾಯಕ್ಕೆ ಮೀಸಲಿಟ್ಟಿದ್ದ 25 ಸಾವಿರ ಕೋಟಿಯನ್ನು ಬಳಕೆ ಮಾಡಿಕೊಂಡಿದ್ದಾರೆ. ಇದನ್ನು ಪ್ರಶ್ನಿಸಿದರೆ ಸಿದ್ದರಾಮಯ್ಯ ಹಾರಿಕೆ ಉತ್ತರ ನೀಡುತ್ತಾರೆ. ಅಲ್ಲದೆ ದಲಿತರನ್ನು ವಿರೋಧಿಸುವ ಮಾಫಿಯಾವನ್ನು ಕಾಂಗ್ರೆಸ್ ಹುಟ್ಟು ಹಾಕಿದೆ ಎಂದು ಆರೋಪಿಸಿದರು.

ಬಿಜೆಪಿಯಲ್ಲಿ ಬಣ ರಾಜಕೀಯವಿಲ್ಲ. ಕೇವಲ ಭಿನ್ನಾಭಿಪ್ರಾಯವಿದೆ ಅಷ್ಟೆ, ಇದನ್ನು ಹೈಕಮಾಂಡ್ ಸರಿ ಮಾಡುತ್ತದೆ. ಇದಕ್ಕಿಂತ ಬೇರೆ ಮಾರ್ಗವಿಲ್ಲ. ಆದರೆ ಯಾರೂ ಬೀದಿಯಲ್ಲಿ ನಿಂತು ಜಗಳ ಮಾಡಬಾರದು ಎಂದು ಸಲಹೆ ನೀಡಿದರು.

ಬಿಜೆಪಿ ಹೈಕಮಾಂಡ್ ಎಷ್ಟರ ಮಟ್ಟಿಗೆ ಸ್ಟ್ರಾಂಗ್ ಆಗಿದೆ ಎಂದು ಇಡೀ ದೇಶಕ್ಕೆ ತಿಳಿದಿದೆ. ಭಿನ್ನಾಭಿಪ್ರಾಯ ಶಮನ ಮಾಡಲು ಸ್ವಲ್ಪ ಸಮಯಬೇಕಷ್ಟೆ. ಆದರೆ ಕಾಂಗ್ರೆಸ್‌ನಲ್ಲಿ ಹೈಕಮಾಂಡ್ ಇಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೆ ಹೈಕಮಾಂಡ್ ಆಗಿದ್ದಾರೆ ಎಂದು ಟೀಕಿಸಿದರು.

ಸಿದ್ದರಾಮಯ್ಯ ಆರೋಗ್ಯ ಮಾರ್ಗ ನೋಟಿಫಿಕೇಷನ್ ಹಿಂಪಡೆಯದಿದ್ದರೆ ಹೈಕೋರ್ಟ್‌ನಲ್ಲಿ ಪಿಐಎಲ್

ಮಾಜಿ ಸಂಸದ ಪ್ರತಾಪ್ ಸಿಂಹ ಎಚ್ಚರಿಕೆ



ಮೈಸೂರು, ಜ.12(ಎಂಟಿವೈ)– ಮೈಸೂರಿನ ಪ್ರಿನ್ಸೆಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಹೆಸರಿಡಲು ಮುಂದಾಗಿರುವ ಮೈಸೂರು ಮಹಾನಗರ ಪಾಲಿಕೆ ನೋಟಿಫಿಕೇಷನ್ ಹಿಂಪಡೆಯದಿದ್ದರೆ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ(ಪಿಐಎಲ್) ದಾಖಲಿಸಿ ಹೋರಾಟ ಮುಂದುವರೆಸುವುದಾಗಿ ಮಾಜಿ ಸಂಸದ ಪ್ರತಾಪಸಿಂಹ ಎಚ್ಚರಿಕೆ ನೀಡಿದರು.

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಯಾವುದೇ ರಸ್ತೆಗೆ ನನ್ನ ಹೆಸರಿಡಿ ಎಂದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೀಡಿದ್ದ ಸ್ಪಷ್ಟನೆಗೆ ಪ್ರತಿಕ್ರಿಯೆ ನೀಡಿದ ಅವರು, ಕೆಆರ್‌ಎಸ್ ರಸ್ತೆಗೆ ಯಾವುದೇ ಹೆಸರು ಇಟ್ಟಿರಲಿಲ್ಲ ಎಂಬ ಭಾವನೆಯಿಂದ ಆ ರಸ್ತೆಗೆ ಸಿದ್ದರಾಮಯ್ಯ ಅವರ ಹೆಸರಿಡುವ ಪ್ರಸ್ತಾಪಕ್ಕೆ ಸಮ್ಮತಿ ನೀಡಿದ್ದೆ. ಆದರೆ, ಆ ರಸ್ತೆಗೆ ಪ್ರಿನ್ಸೆಸ್ ರಸ್ತೆ ಎಂದು ನಾಮಕರಣ ಮಾಡಿರುವುದು ದಾಖಲೆ ಸಹಿತ ಬಹಿರಂಗವಾಗಿದೆ. ಈ ನಿಟ್ಟಿನಲ್ಲಿ ಪ್ರಿನ್ಸೆಸ್ ರಸ್ತೆಗೆ ಹೊಸದಾಗಿ ಹೆಸರು ಇಡದಂತೆ ಮನವಿ ಮಾಡಿದ್ದೆ. ಈ ಸಂಬಂಧ ಶಾಸಕ ಕೆ.ಹರೀಶ್‌ಗೌಡ ಅವರಿಗೂ ಹೆಸರಿಡುವ ಪ್ರಸ್ತಾವನೆಯನ್ನು ಕೈಬಿಡುವಂತೆ ಮನವಿ ಮಾಡಿದ್ದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಆ ರಸ್ತೆಗೆ ನನ್ನ ಹೆಸರು ಇಡುವಂತೆ ಹೇಳಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. ಇದು ಸ್ವಾಗತಾರ್ಹ. ಇನ್ನಾದರೂ ಮೈಸೂರು ಮಹಾನಗರ ಪಾಲಿಕೆ ಹೆಸರು ನಾಮಕರಣ ಮಾಡಲು ಹೊರಡಿಸಿದ್ದ ನೋಟಿಫಿಕೇಷನ್ ಅನ್ನು ಹಿಂಪಡೆಯಬೇಕು. ಇಲ್ಲದಿದ್ದರೆ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ ಹೂಡುವುದಾಗಿ ಎಚ್ಚರಿಸಿದರು.

ಸಿಎಂ ಸಿದ್ದರಾಮಯ್ಯ ಅವರು ಪ್ರಿನ್ಸೆಸ್ ರಸ್ತೆಗೆ ತನ್ನ ಹೆಸರು ಇಡಲು ಮುಂದಾಗಿರುವುದನ್ನು ವಿರೋಧಿಸಿರುವುದು ಜನಾಭಿಪ್ರಾಯಕ್ಕೆ ಮನ್ನಣೆ ನೀಡಿದಂತಾಗಿದೆ. ಇದನ್ನು ನಗರ ಪಾಲಿಕೆಯು ಅನುಸರಿಸಬೇಕು. ತಾನು ನೀಡಿರುವ ನೋಟಿಫಿಕೇಷನ್ ಅನ್ನು ಹಿಂಪಡೆದು ಹಾಲಿ ಇರುವ ಪ್ರಿನ್ಸೆಸ್ ಹೆಸರನ್ನೇ ಮುಂದುವರೆಸಬೇಕು ಎಂದು ಆಗ್ರಹಿಸಿದರು.

ಅವರ ಕಚ್ಚಾಟಕ್ಕೆ ಪ್ರತಿಕ್ರಿಯೆ ನೀಡಲ್ಲ ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಸಂಬಂಧ ನಾಯಕರಲ್ಲಿ ಉಂಟಾಗಿರುವ ಬಿಕ್ಕಟ್ಟಿನ ಕುರಿತು ಪತ್ರಕರ್ತರು ಕೇಳಿದ ಪ್ರಶ್ನೆಗೆ ಮಾಜಿ ಸಂಸದ ಪ್ರತಾಪ್ ಸಿಂಹ ಪ್ರತಿಕ್ರಿಯೆ ನೀಡಲು ನಿರಾಕರಿಸಿದರಲ್ಲದೆ, ಕಾಂಗ್ರೆಸ್‌ನಲ್ಲಿ ಎಷ್ಟಾದರೂ ಬಡಿದಾಡಿಕೊಳ್ಳಲಿ, ನಾವು ತಲೆ ಕೆಡಿಸಿಕೊಳ್ಳುವುದಿಲ್ಲ ಎಂದರು.

ಸಿಎಂ ಸಿದ್ದರಾಮಯ್ಯ ಹೇಳಿಕೆ ಸ್ವಾಗತಾರ್ಹ, ಪ್ರಕರಣ ಇಲ್ಲಿಗೇ ಅಂತ್ಯಗೊಳಿಸುವುದು ಒಳ್ಳೆಯದು

ಸಂಸದ ಯದುವೀರ್ ಅಭಿಮತ



ಮೈಸೂರು, ಜ.12(ಎಂಟಿವೈ)–ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಿನ್ಸೆಸ್ ರಸ್ತೆಗೆ ತನ್ನ ಹೆಸರಿಡಲು ಸೂಚಿಸಿಲ್ಲ ಎಂದು ನೀಡಿರುವ ಹೇಳಿಕೆ ಸ್ವಾಗತಾರ್ಹ. ಇನ್ನಾದರೂ ಈ ಪ್ರಕರಣವನ್ನು ಇಲ್ಲಿಗೇ ಅಂತ್ಯ ಮಾಡುವುದು ಒಳ್ಳೆಯದು ಎಂದು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯ ಪಟ್ಟಿದ್ದಾರೆ.

ಮೈಸೂರಿನಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಇತ್ತೀಚೆಗಷ್ಟೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಿನ್ಸೆಸ್ ರಸ್ತೆಗೆ ತನ್ನ ಹೆಸರಿಡುವಂತೆ ನಾನು ಯಾರಿಗೂ ಹೇಳಿಲ್ಲ ಎಂದು ಹೇಳಿಕೆ ನೀಡಿದ್ದಾರೆ. ಇದು ಒಳ್ಳೆಯ ಬೆಳವಣಿಗೆ. ಸಿಎಂ ಅವರೇ ಖುದ್ದಾಗಿ ತನ್ನ ಹೆಸರಿಡಲು ಹೇಳಿಲ್ಲ ಎಂದಿರುವಾಗ ಈ ವಿವಾದ ಇಲ್ಲಿಗೇ ಅಂತ್ಯಗೊಳಿಸುವುದು ಸೂಕ್ತ ಎಂದರು.

ಬೆಂಗಳೂರಿನಲ್ಲಿ ಮೈಸೂರು ಅಭಿವೃದ್ಧಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಹಲವಾರು ವಿಚಾರಗಳು ಚರ್ಚೆಯಾದವು. ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುವ ವಿಚಾರಗಳನ್ನು ರಾಜ್ಯ ಸರ್ಕಾರದ ಪ್ರತಿನಿಧಿಗಳು ವಿವರಿಸುತ್ತಾರೆ. ಪ್ರಮುಖವಾಗಿ ಮೈಸೂರು ವಿಮಾನ ನಿಲ್ದಾಣವನ್ನು ವಿಸ್ತರಿಸುವ ಸಂಬಂಧ ಚರ್ಚೆಯಾಗಿದ್ದು, ಅದಕ್ಕೆ ಬೇಕಾದ ಭೂಮಿ ಸ್ವಾಧೀನ ಪ್ರಕ್ರಿಯೆಗೆ ಚರ್ಚೆಯಾಗಿದೆ. ಮೈಸೂರಿನ ಹಳೇ ಜಿಲ್ಲಾಧಿಕಾರಿ ಕಚೇರಿಯನ್ನು ಮ್ಯೂಸಿಯಂ ಆಗಿ ಪರಿವರ್ತಿಸಲು ಡಿಪಿಆರ್ ಸಿದ್ಧಪಡಿಸಿರುವ ಸಂಬಂಧ ಲ್ಯಾನ್ಸ್‌ಡೌನ್ ಬಿಲ್ಡಿಂಗ್, ದೇವರಾಜ ಮಾರುಕಟ್ಟೆ ನಿರ್ಮಾಣ ಸಂಬಂಧ ಚರ್ಚೆಯಾಗಿದೆ. ಈ ಎರಡೂ ಪಾರಂಪರಿಕ ಕಟ್ಟಡದ ಸಂರಕ್ಷಣೆ ವಿಚಾರದಲ್ಲಿ ರಚಿಸಿದ್ದ ಕೆಲ ಕಮಿಟಿಗಳು, ಸರಿಯಾಗಿ ಕೆಲಸ ಮಾಡಿಲ್ಲ. ಈ ಹಿನ್ನೆಲೆಯಲ್ಲಿ ಕಟ್ಟಡ ಸಂರಕ್ಷಣೆ ವಿಚಾರದಲ್ಲಿ ಕೆಲವು ಲೋಪ–ದೋಷಗಳಾಗಿವೆ. ಕೆಲವರು ಈ ಎರಡೂ ಕಟ್ಟಡವನ್ನು ನೆಲಸಮ ಮಾಡಿ ಪುನರ್ ನಿರ್ಮಾಣ ಮಾಡಬೇಕು ಎನ್ನುತ್ತಾರೆ. ಆದರೆ ಇದು ಸರಿಯಾದ ಕ್ರಮವಲ್ಲ. ಕಟ್ಟಡ ದುರಸ್ತಿ ಸಂಬಂಧ ಈಗಾಗಲೇ ಪ್ರಕರಣ ನ್ಯಾಯಾಲಯದಲ್ಲಿದೆ. ನ್ಯಾಯಾಲಯದಲ್ಲಿ ಏನು ತೀರ್ಮಾನವಾಗುತ್ತದೋ ಕಾದು ನೋಡೋಣ ಎಂದು ಸ್ಪಷ್ಟಪಡಿಸಿದರು.

ಐಷರ್ ವಾಹನ ಡಿಕ್ಕಿ ಹೊಡೆದು ಪಾದಚಾರಿ ಸಾವು

ಮೈಸೂರು, ಜ.12(ಎಸ್‌ಬಿಡಿ)– ಐಷರ್ ವಾಹನ ಡಿಕ್ಕಿ ಹೊಡೆದು ಪಾದಚಾರಿ ಸಾವನ್ನಪ್ಪಿದ ಘಟನೆ ಮೈಸೂರಿನ ಇಲವಾಲದಲ್ಲಿ ಭಾನುವಾರ ಮಧ್ಯಾಹ್ನ ನಡೆದಿದೆ.

ಇಲವಾಲದಲ್ಲಿ ಕುಟುಂಬದೊಂದಿಗೆ ಬಾಡಿಗೆ ಮನೆಯಲ್ಲಿ ವಾಸವಿದ್ದ ಹೊಳೆನರಸೀಪುರ ತಾಲೂಕು ಮೂಲದ ಜವರೇಗೌಡ(ಅಣ್ಣೇಗೌಡ–72) ಅಪಘಾತದಲ್ಲಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಮೈಸೂರು–ಹುಣಸೂರು ಮುಖ್ಯರಸ್ತೆ, ಇಲವಾಲದ ಸರ್ಕಾರಿ ಆಸ್ಪತ್ರೆ ಸಮೀಪ ಜವರೇಗೌಡ ಅವರು ರಸ್ತೆ ದಾಟುತ್ತಿದ್ದಾಗ ಹುಣಸೂರು ಕಡೆಗೆ ಹೋಗುತ್ತಿದ್ದ ಈಚರ್ ವಾಹನ(ಕೆಎ–47, 2337) ಡಿಕ್ಕಿ ಹೊಡೆದಿದೆ. ಇದರಿಂದ ತೀವ್ರವಾಗಿ ಗಾಯಗೊಂಡಿದ್ದ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲು ಪ್ರಯತ್ನಿಸುವಾಗಲೇ ಸಾವನ್ನಪ್ಪಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಈ ಸಂಬಂಧ ಇಲವಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ತಂಬಾಕು ತೊರೆಯುವ ಕಾರ್ಯಕ್ರಮ

ಮೈಸೂರು, ಜ.12– ಮೈಸೂರಿನ ಸರಸ್ವತಿಪುರಂನಲ್ಲಿರುವ ಆರ್ಟ್ ಆಫ್ ಲಿವಿಂಗ್ ಧ್ಯಾನ ಕೇಂದ್ರದಲ್ಲಿ ಜ. 15 ರಿಂದ 19 ರವರೆಗೆ ತಂಬಾಕು ತೊರೆಯುವ ಕಾರ್ಯಕ್ರಮವನ್ನು ಬೆಳಗ್ಗೆ 5.30 ರಿಂದ 9 ರವರೆಗೆ ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 9620947215, 7899860100 ಸಂಪರ್ಕಿಸಬಹುದು.

ಕುವೆಂಪುನಗರ ಗುರು ಭವನಕ್ಕೆ ಎಂಎಲ್‌ಸಿ ಕೆ.ವಿವೇಕಾನಂದ ಭೇಟಿ



ಮೈಸೂರು ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಹಾಗೂ ಸಂಯುಕ್ತ ಪದವಿಪೂರ್ವ ಕಾಲೇಜು ಪ್ರಾಂಶುಪಾಲರ ಸಂಘದ ಕಚೇರಿಗೆ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಭೇಟಿ ನೀಡಿ, ಪರಿಶೀಲಿಸಿದರು.

ಮೈಸೂರು, ಜ.12(ಎಸ್‌ಬಿಡಿ)– ಮೈಸೂರಿನ ಕುವೆಂಪುನಗರದಲ್ಲಿರುವ ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಹಾಗೂ ಸಂಯುಕ್ತ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರ ಸಂಘದ ಕಚೇರಿ 'ಗುರು ಭವನ'ಕ್ಕೆ ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಭೇಟಿ ನೀಡಿ, ಪರಿಶೀಲಿಸಿದರು.

ಸಂಘದ ಕಟ್ಟಡ ಹಾಗೂ ಆವರಣವನ್ನು ಪರಿಶೀಲಿಸಿದ ನಂತರ ಪದಾಧಿಕಾರಿಗಳೊಂದಿಗೆ ಚರ್ಚಿಸಿದರು. ಈ ವೇಳೆ ಸಂಘದ ಶ್ರೇಯೋಭಿವೃದ್ಧಿ ಮತ್ತು ಕಟ್ಟಡದ ಅಭಿವೃದ್ಧಿಗೆ ನೆರವು ನೀಡುವಂತೆ ಪದಾಧಿಕಾರಿಗಳು ಮನವಿ ಮಾಡಿದರು. ಇದಕ್ಕೆ ಸಮ್ಮತಿ ಸೂಚಿಸಿದ ವಿಧಾನಪರಿಷತ್ ಸದಸ್ಯರು, ಸಂಘದ ಶ್ರೇಯೋಭಿವೃದ್ಧಿಗೆ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಈ ವೇಳೆ ಸಂಘದ ಅಧ್ಯಕ್ಷ ಮಹದೇವಯ್ಯ, ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳಾದ ರಂಗಸ್ವಾಮಿ ಶೆಟ್ಟರು, ವೈ.ಎಸ್.ಹರಗಿ, ಮಹೇಶ್, ಕುಮಾರ್, ಕೆಂಪರಾಜು, ಶಂಕರ್, ಚಂದ್ರಶೇಖರ್ ಮತ್ತಿತರರು ಹಾಜರಿದ್ದರು.

ಕಟ್ಟಡ ಕಾರ್ಮಿಕರ ಹಿತ ಕಾಯಲು ಸರ್ಕಾರ ಬದ್ಧ

ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ



ಮೈಸೂರಿನ ಜೆ.ಕೆ.ಮೈದಾನದಲ್ಲಿರುವ ಮೈಸೂರು ಮೆಡಿಕಲ್ ಕಾಲೇಜಿನ ಅಮೃತೋತ್ಸವ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ವಿವಿಧ ಫಲಾನುಭವಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ವಿವಿಧ ಸೌಲಭ್ಯಗಳನ್ನು ವಿತರಿಸಿದರು.

ಮೈಸೂರು, ಜ.12(ಎಂಟಿವೈ)–ಕಟ್ಟಡ ಕಾರ್ಮಿಕರ ಹಿತ ಕಾಯಲು ಸರ್ಕಾರ ಬದ್ಧವಾಗಿದ್ದು, ಭದ್ರತೆ, ಆರೋಗ್ಯ ಮತ್ತು ಕಲ್ಯಾಣ ಕಾರ್ಯಕ್ರಮ ಜಾರಿಗೊಳಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಮೈಸೂರಿನ ಜೆ.ಕೆ.ಮೈದಾನದಲ್ಲಿರುವ ಮೈಸೂರು ಮೆಡಿಕಲ್ ಕಾಲೇಜಿನ ಅಮೃತೋತ್ಸವ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಫಲಾನುಭವಿಗಳಿಗೆ ಟೂಲ್ ಕಿಟ್ ವಿತರಣೆ, ಮಾಹಿತಿ ಶಿಕ್ಷಣ ಸಂವಹನ ಜಾಗೃತಿ ಮತ್ತು ಪ್ರಚಾರ ಚಟುವಟಿಕೆ, ರಾಜ್ಯ ಅಸಂಘಟಿತ ಸಾಮಾಜಿಕ ಭದ್ರತಾ ಮಂಡಳಿಯ ಫಲಾನುಭವಿಗಳಿಗೆ ಚೆಕ್ ವಿತರಿಸಿ ಮಾತನಾಡಿದ ಅವರು, ಕಾರ್ಮಿಕರಿಗೆ ಭದ್ರತೆ ಒದಗಿಸಿ ರಕ್ಷಣೆ ನೀಡುವುದಕ್ಕೆ ಡಾ.ಅಂಬೇಡ್ಕರ್ ಅವರು ಈ ಹಿಂದೆಯೇ ಸಂವಿಧಾನದಲ್ಲಿ ನಿಯಮ ರೂಪಿಸಿದ್ದಾರೆ. ಕಾರ್ಮಿಕರ ರಕ್ಷಣೆ ಸರ್ಕಾರದ ಜವಾಬ್ದಾರಿ ಹಾಗೂ ಭದ್ರತೆ ಒದಗಿಸಬೇಕು ಎಂದು ಸಂವಿಧಾನದಲ್ಲಿ ತಿಳಿಸಲಾಗಿದೆ. ಹೀಗಾಗಿ ಕಾರ್ಮಿಕರಿಗೆ ವೇತನ ನಿಗದಿ, ಆರೋಗ್ಯ ಸೇವೆ, ಕಲ್ಯಾಣ ಕಾರ್ಯಕ್ರಮಗಳನ್ನು ಸರ್ಕಾರ ಜಾರಿಗೊಳಿಸಿದೆ ಎಂದರು.

ಮೈಸೂರಿನ ನಿರ್ಮಾಣದಲ್ಲಿ ಕಟ್ಟಡ ಕಾರ್ಮಿಕರು ಪ್ರಮುಖ ಪಾತ್ರ ವಹಿಸಿದ್ದಾರೆ. ಪ್ರತಿನಿತ್ಯ ದುಡಿದ ಹಣದಲ್ಲಿ ಜೀವನ ನಡೆಸುತ್ತಿರುವ ಕಾರ್ಮಿಕರಿಗೆ ಕುಟುಂಬ ನಿರ್ವಹಣೆ, ಮಕ್ಕಳ ವಿದ್ಯಾಭ್ಯಾಸ ಕೊಡಿಸುವುದಕ್ಕೆ ಸಾಧ್ಯವಾಗದಂತಹ ಪರಿಸ್ಥಿತಿಯಲ್ಲಿ ಸಿಲುಕಿದ್ದಾರೆ. ಕೊರೊನಾ ಸಂದರ್ಭದಲ್ಲಿ ಅನೇಕರು ಸಂಕಷ್ಟಕ್ಕೆ ಸಿಲುಕಿದ್ದರು. ಇಂತಹ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜಾರಿಗೆ ತಂದ ಅನ್ನಭಾಗ್ಯ ಕಾರ್ಮಿಕರನ್ನು ಸಂಕಷ್ಟದಿಂದ ಪಾರು ಮಾಡಿತು ಎಂದು ತಿಳಿಸಿದರು.

ಕಾರ್ಮಿಕ ಸಚಿವ ಸಂತೋಷ್ ಲಾಡ್ ಕಟ್ಟಡ ಮತ್ತು ಅಸಂಘಟಿತ ಕಾರ್ಮಿಕರ ಬಗ್ಗೆ ಅಪಾರ ಕಾಳಜಿ ಹೊಂದಿದ್ದಾರೆ. ಕಾರ್ಮಿಕರಿಗೆ ಸಂಬಂಧಿಸಿದ ಅನೇಕ ಯೋಜನೆಗಳಿಗೆ ಸಚಿವ ಸಂಪುಟದಲ್ಲಿ ಅನುಮೋದನೆ ದೊರಕಿಸಿದ್ದಾರೆ. ಆರೋಗ್ಯ, ಮಕ್ಕಳ ಶಿಕ್ಷಣ, ಕಲ್ಯಾಣ ಸರ್ಕಾರ ಅಸಂಘಟಿತ ಕಾರ್ಮಿಕರಿಗೆ ಕಲ್ಯಾಣಕ್ಕಾಗಿ ವಿಶೇಷ ಕಾರ್ಯಕ್ರಮಗಳನ್ನು ಸರ್ಕಾರ ರೂಪಿಸಿದೆ. ಈ ಯೋಜನೆಗಳ ಸದುಪಯೋಗ ಮಾಡಿಕೊಳ್ಳಲು ಪ್ರತಿಯೊಬ್ಬ ಕಾರ್ಮಿಕರು ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಮಿಕ ಇಲಾಖೆ ಅಪರ ಕಾರ್ಮಿಕ ಆಯುಕ್ತ ಎಸ್.ಟಿ.ರವಿಕುಮಾರ್ ಮಾತನಾಡಿ, ಪ್ರತ್ಯೇಕ ಕಟ್ಟಡ ಕಾರ್ಮಿಕರ ಮಂಡಳಿಯಿಂದ ಕಾರ್ಮಿಕರಿಗೆ ಹಲವಾರು ಯೋಜನೆಗಳನ್ನು ನೀಡಲಾಗುತ್ತಿದೆ. ಮೈಸೂರಿನಲ್ಲಿ 50 ಸಾವಿರ ಜನರಿಗೆ ಪರಿಹಾರ ವಿತರಿಸಲಾಗಿದೆ. ಪ್ರಸ್ತುತ ಸರ್ಕಾರದ ಕಾರ್ಮಿಕ ಸಚಿವ ಸಂತೋಷ ಲಾಡ್ ಅಸಂಘಟಿತ ಕಾರ್ಮಿಕರಿಗೆ ಬಹಳಷ್ಟು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಪತ್ರಿಕಾ ವಿತರಕರಿಗೆ ವಿಮಾ ಸೌಲಭ್ಯ, ಸಿನಿಮಾ, ಸಾಂಸ್ಕೃತಿಕ ರಂಗದ ಕಾರ್ಮಿಕರಿಗೆ ಕಾಯ್ದೆ ರೂಪಿಸಲಾಗುತ್ತಿದೆ. ಸಾರಿಗೆ ನೌಕರರಿಗೆ ಕಾಯ್ದೆ ರೂಪಿಸಿ ಪ್ರತ್ಯೇಕ ಮಂಡಳಿ ರಚಿಸಲಾಗಿದೆ. ಆಶಾ ಯೋಜನೆ ಜಾರಿಗೆ ತರಲಾಗಿದೆ. ಇವುಗಳನ್ನು ಕಾರ್ಮಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಮೈಸೂರು ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತರಾದ ಎಸ್.ಆರ್.ವೀಣಾ, ಪ್ರಚಾರ ಮತ್ತು ಅಂಕಿ ಅಂಶ ಇಲಾಖೆಯ ಉಪ ಆಯುಕ್ತ ಡಿ.ಜಿ.ನಾಗೇಶ್, ಹಿರಿಯ ಕಾರ್ಮಿಕ ನಿರೀಕ್ಷಕರಾದ ಮಾದಪ್ಪ, ಜಯಣ್ಣ, ಮಂಗಳಗೌರಮ್ಮ, ಲಕ್ಷ್ಮೀಶ್, ಎನ್.ಮಂಜು ನಾಥ್, ಅಂಬಿಕಾ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಗೇಮ್ ಚೇಂಜರ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಗೇಮ್ ಚೇಂಜರ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಫತೇ(ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಛೂ ಮಂತರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುಐ (ಕ)	4 ಪ್ರದರ್ಶನಗಳು
ರಾಜಕಮಲ್	
ಗೇಮ್ ಚೇಂಜರ್(ತೆ)	4 ಪ್ರದರ್ಶನಗಳು
ಸಂಗಂ	
ಮ್ಯಾಕ್ಸ್(ಕ)	4 ಪ್ರದರ್ಶನಗಳು
ಲಿಡೋ	
ಛೂ ಮಂತರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಗೇಮ್ ಚೇಂಜರ್ (ಹಿ)	4 ಪ್ರದರ್ಶನಗಳು
ಪ್ರಭಾ	
ಮದಗಜ ರಾಜ (ತೆ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಆಫ್ಟರ್ ದಿ ಬ್ರೇಕಪ್ (ಕ): ಬೆ.9.40ಕ್ಕೆ, ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಮ.12.10ಕ್ಕೆ, ಸಂ.5.20ಕ್ಕೆ, ರಾ.7.45ಕ್ಕೆ, ಯುಐ (2024) (ಕ): ಮ.2.35ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 2	ಸೋನಿಕ್ ದಿ ಹೆಡ್ಜಾಗ್ 3(ಇಂ): ಬೆ.11.25ಕ್ಕೆ, ಸಂ.4.30ಕ್ಕೆ, ದೇಶಕ್ಕಾರನ್ (ಮ): ಮ.1.55ಕ್ಕೆ, ಮಾರ್ಕೊ (ಹಿಂ): ರಾ.7ಕ್ಕೆ, ಮಾರ್ಕೊ (ಮ): ರಾ.10.10ಕ್ಕೆ.
ಸ್ಕ್ರೀನ್ 3	ಹರಿದಾಸರ ದಿನಚರಿ (ಕ): ಬೆ.10.30ಕ್ಕೆ, ಕ್ರಾವೆನ್ ದಿ ಹಂಟರ್ (ಇಂ): ಮ.1.40ಕ್ಕೆ, ಸಂ.4.30ಕ್ಕೆ, ಎ ಲೆಜೆಂಡ್ (ಇಂ): ರಾ.7.20ಕ್ಕೆ, ಐಡೆಂಟಿಟಿ (ಮ): ರಾ.10.05ಕ್ಕೆ.
ಸ್ಕ್ರೀನ್ 4	ಮ್ಯಾಕ್ಸ್ (ಕ): ಬೆ.10.20ಕ್ಕೆ, ಮ.1.15ಕ್ಕೆ, ಸಂ.4.10ಕ್ಕೆ, ರಾ.7.05ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪುಷ್ಪಾ 2 (ಕ): ಮ.1ಕ್ಕೆ, ಸ್ವೇಚ್ಛಾ (ಕ): ಸಂ.4.40ಕ್ಕೆ, ಯುಐ (ಕ): ಸಂ.6.55ಕ್ಕೆ, ದೇಶಕ್ಕಾರನ್ (ಮ): ರಾ.9.25ಕ್ಕೆ.
ಸ್ಕ್ರೀನ್ 2	ಮ್ಯಾಕ್ಸ್ (ಕ): ಮ.1.10ಕ್ಕೆ, ಮ.3.50ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 3	ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಬೆ.11.25ಕ್ಕೆ, ಯುಐ (ಕ): ಮ.1.45ಕ್ಕೆ, ಮ್ಯಾಕ್ಸ್ (ಕ): ಸಂ.6.25ಕ್ಕೆ.
ಸ್ಕ್ರೀನ್ 4	ಮ್ಯಾಕ್ಸ್ (ಕ): ಬೆ.11ಕ್ಕೆ, ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಮ.1.45ಕ್ಕೆ, ಸಂ.6.55ಕ್ಕೆ, ಕ್ರಾವೆನ್ ದಿ ಹಂಟರ್ (ಇಂ): ಸಂ.4.25ಕ್ಕೆ, ರಾ.9.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಜೆ.ಪಿ.ನಗರ ಸ್ಪೋರ್ಟ್ಸ್ ಕ್ಲಬ್‌ನಲ್ಲಿ ಸಾಧಕರಿಗೆ ಸನ್ಮಾನ



ಮೈಸೂರು, ಜ.12 (ಎಸ್‌ಬಿಡಿ)– ಮೈಸೂರಿನ ಜೆ.ಪಿ.ನಗರ ಸ್ಪೋರ್ಟ್ಸ್ ಕ್ಲಬ್‌ನ ವಾರ್ಷಿಕ ಮಹಾಸಭೆಯಲ್ಲಿ ಹಿರಿಯ ನಾಗರಿಕರು ಹಾಗೂ ಸಾಧಕರನ್ನು ಅಭಿನಂದಿಸಲಾಯಿತು.

ಕ್ಲಬ್‌ನ ಅಧ್ಯಕ್ಷ ರವಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಹಿರಿಯ ನಾಗರಿಕರಾದ ಚಂದ್ರಶೇಖರ್, ರಾಮಸ್ವಾಮಿ, ಬಸವರಾಜ, ಹೊನ್ನೇಗೌಡ ಹಾಗೂ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕೆ.ಜಯಪ್ರಕಾಶ್ ರಾವ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಕ್ಲಬ್‌ನ ನಾಗರಾಜು, ಸುರೇಶ್ ಮತ್ತಿತರರು ಉಪಸ್ಥಿತರಿದ್ದರು.


ಸನ್ಮಾನಿತರಾದ ಲೇಖಕ ಕೆ.ಜಯಪ್ರಕಾಶ್ ರಾವ್ ಅವರು, ಕೇಂದ್ರ ರಕ್ಷಣೆ ಹಾಗೂ ಅನುಸಂಧಾನ ವಿಭಾಗದ ಪ್ರಧಾನ ಸಾರ್ವಜನಿಕ ಸಂಪರ್ಕಾಧಿಕಾರಿಯಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ದಿವಂಗತ ಮಾಜಿ ರಾಷ್ಟ್ರಪತಿ ಡಾ.ಅಬ್ದುಲ್ ಕಲಾಂ ಅವರ ಜೀವನ ಚರಿತ್ರೆ ಕುರಿತ ಅಗ್ನಿಯ ರೆಕ್ಕೆಗಳು ಸೇರಿದಂತೆ 7 ಕನ್ನಡ ಪುಸ್ತಕಗಳನ್ನು ಬರೆದಿದ್ದಾರೆ. ಮೈಸೂರಿನ ಪೊಲೀಸ್ ಅಕಾಡೆಮಿ, ಎಟಿಐ, ಹಲವು ವಿಶ್ವವಿದ್ಯಾಲಯ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಗೌರವ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುವುದರ ಜೊತೆಗೆ ಹಲವು ಸಂಘ ಸಂಸ್ಥೆಗಳಲ್ಲೂ ಸಕ್ರಿಯರಾಗಿದ್ದಾರೆ.

ಹಿರಿಯರಿಗೆ ಸನ್ಮಾನ



ಶ್ರೀ ಚಾಮುಂಡೇಶ್ವರಿ ಮಹಿಳಾ ಸಂಸ್ಥೆಯ ವಾರ್ಷಿಕ ಮಹಾಸಭೆಯಲ್ಲಿ ಸಂಸ್ಥೆಗೆ ಸೇವೆ ನೀಡಿದ ಹಿರಿಯರಾದ ಹೇಮಾಕ್ಷಿ ತಿರುಮಲಯ್ಯ, ಗಾಯತ್ರಮ್ಮ ಹಾಗೂ ಸಿದ್ದಮ್ಮ ಅವರನ್ನು ಅಭಿನಂದಿಸಲಾಯಿತು. ಸಂಸ್ಥೆಯ ಕಾರ್ಯದರ್ಶಿ ರತ್ನಮ್ಮ ನರಸೇಗೌಡ, ಕುಮಾರಿ ರಾಮೇಗೌಡ, ಲಕ್ಷ್ಮೀ ವಿಜಯ್, ಭಾಗ್ಯಮ್ಮ, ದೇವಿರಮ್ಮ, ರಾಜಮ್ಮ, ಪ್ರಮೀಳಾ, ಸತ್ಯವತಿ ಮತ್ತಿತರರು ಉಪಸ್ಥಿತರಿದ್ದರು.

1ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇಂದಿಗೆ ಒಂದು ವರ್ಷ ಕಳೆದರೂ ನಿಮ್ಮ ನೆನಪಿನಲ್ಲಿರುವ ಮಗ ಸಿದ್ದೇಗೌಡ, ಪುಟ್ಟಮ್ಮ, ಮಕ್ಕಳು, ಮೊಮ್ಮಕ್ಕಳು ಕುಟುಂಬವರ್ಗದವರು ಕೆ.ಬಡಗಲಹುಂಡಿ ಮೈಸೂರು ತಾಲ್ಲೂಕು

ಶ್ರೀ ಯಜಮಾನ್ ಪಟೇಲ್ ಮಾದೇಗೌಡ್ರು

6ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇಂದಿಗೆ 6 ವರ್ಷ ಕಳೆದರೂ ನಿಮ್ಮ ನೆನಪು ನಮ್ಮ ಹೃದಯದಲ್ಲಿ ಸದಾ ಹಸಿರಾಗಿದೆ. ನಿಮ್ಮ ದಿವ್ಯ ಆತ್ಮಕ್ಕೆ ಚಿರಶಾಂತಿ ನೀಡಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇವೆ.

ದುಃಖತಪ್ತರು: ಜಯ, ಸಂತೋಷ್ ಕುಮಾರ, ಸುಮಿತ್ರ, ಹೇಮಪ್ರಭ, ಹೇಮಂತ್ ಹಾಗೂ ಕುಟುಂಬವರ್ಗದವರು ಮಹದೇಶ್ವರ ಬಡಾವಣೆ, ಮೈಸೂರು–16. 9945973735

ಶ್ರೀ ಕೃಷ್ಣ
ನಿಧನ: 13.01.2019

ಮೊದಲನೇ ವರ್ಷದ ಸವಿನೆನಪು



ಶ್ರೀಮತಿ ತನುಶ್ರೀ

ಆಟೋ ಪುಟ್ಟಸ್ವಾಮಿಗೌಡರ ಸೊಸೆ
ನೀವು ನಮ್ಮನ್ನಗಲಿ ಇಂದಿಗೆ 1 ವರ್ಷ ಕಳೆದರೂ ನಿಮ್ಮ ನೆನಪಿನಲ್ಲಿರುವ

ದುಃಖತಪ್ತರು:
ಶ್ರೀಮತಿ ಪುಟ್ಟಲಕ್ಷ್ಮಿ– ಪುಟ್ಟಸ್ವಾಮಿ,
ಶ್ರೀಮತಿ ಅಭಿಲಾಷ್ ಹರೀಶ್

14ನೇ ವರ್ಷದ ಸವಿನೆನಪು



ಶ್ರೀಮತಿ ಕೆಂಪಮ್ಮನವರು
ನಿಧನ: 13.01.2011

ನೀವು ನಮ್ಮನ್ನಗಲಿ ಇಂದಿಗೆ 14 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ ಶ್ರೀಮಾನ್ ಬಂದೀಗೌಡರು ಹಾಗೂ ಮಕ್ಕಳು, ಸೊಸೆ ಮತ್ತು ಕುಟುಂಬವರ್ಗದವರು ಚಿಕ್ಕೇಗೌಡನಹುಂಡಿ

ಬ್ಯಾಂಗಲ್ ಮತ್ತು ಬ್ರೇಸ್ಲೆಟ್ ಮೇಳ

ಸಂಕ್ರಾಂತಿ ಕೊಡುಗೆ
9 ರಿಂದ 15 ಜನವರಿ, 2025

ಪ್ರತಿ ರೂ. 25,000 ಖರೀದಿಗೆ ಚಿನ್ನದ ನಾಣ್ಯ ಉಚಿತ*




ಹಳೆಯ ಚಿನ್ನದ ಎಕ್ಸ್‌ಚೇಂಜ್‌ಗೆ ಮಾರಾಟದ ಬೆಲೆಗಿಂತ ಪ್ರತಿ ಗ್ರಾಂ ಗೆ ರೂ. 75/– ಅಧಿಕ ಪಡೆಯಿರಿ

ಈ ನಿಮ್ಮ ಸುಂದರವಾದ ಕೈಗಳನ್ನು ವಿಶೇಷ ಶ್ರೇಣಿಯ ಬಳೆಗಳೊಂದಿಗೆ ಅಲಂಕರಿಸಿ

SINCE 1925
A. SHANKARA CHETTY & SONS
FOUNDER - A. GOPALA CHETTY
PLATINUM DIAMOND GOLD SILVER JEWELLERS
ಕೆ ಆರ್ ಸರ್ಕಲ್, ಮೈಸೂರು । ಫೋನ್ : 88808 66661
ವ್ಯಾಲೆಟ್ ಪಾರ್ಕಿಂಗ್ ಲಭ್ಯವಿದೆ | ಸಮಯ: ಬೆಳಿಗ್ಗೆ 11 ರಿಂದ ರಾತ್ರಿ 8 ರವರೆಗೆ

ಶ್ರದ್ಧಾಂಜಲಿ



ಇವರು ದಿನಾಂಕ 12.01.2025 ಭಾನುವಾರ ಬೆಳಗ್ಗೆ ಬೆಂಗಳೂರಿನಲ್ಲಿ ದೈವಾಧೀನರಾಗಿದ್ದಾರೆ.

ದುಃಖತಪ್ತರು: ಕುಟುಂಬವರ್ಗದವರು

ಟಿ.ಎಸ್.ಸತ್ಯನಾರಾಯಣ
ವಿಜಯನಗರ 2ನೇ ಹಂತ

ಬೇಕಾಗಿದ್ದಾರೆ

ಪೆಟ್ರೋಲ್ ಬಂಕ್‌ನಲ್ಲಿ ಬೆಳಗ್ಗೆ 6 ರಿಂದ ಮಧ್ಯಾಹ್ನ 2 ಗಂಟೆವರೆಗೆ ಕೆಲಸ ನಿರ್ವಹಿಸಲು ಬೇಕಾಗಿದ್ದಾರೆ.
ವಿದ್ಯಾಭ್ಯಾಸ: ಎಸ್.ಎಸ್.ಎಲ್.ಸಿ / ಪಿಯುಸಿ, ವಯಸ್ಸು: 20 ರಿಂದ 30.

9606222435

10ನೇ ವರ್ಷದ ಸವಿನೆನಪು



ಪ್ರೊ ಪಿ.ಎಂ.ಚಿಕ್ಕಬೋರಯ್ಯ

ಮಾಜಿ ಶಾಸಕರು, ಮಾಜಿ ಅಧ್ಯಕ್ಷರು, ವಿದ್ಯಾವರ್ಧಕ ಸಂಘ ಮೈಸೂರು.

ಕಷ್ಟಗಳು ಬಂದಾಗ ಬೆಟ್ಟವಾಗಿ ನಿಂತಿರಿ. ಸಮಾಜ ಸೇವೆಗೆ ನದಿಯಾಗಿ ಹರಿದಿರಿ. ನೀವು ಇದ್ದಾಗಲೂ ಇದ್ದಿರಿ, ಇಲ್ಲದಾಗಲೂ ಇದ್ದೀರಿ. ನೀವು ಕಟ್ಟಿ ಬೆಳೆಸಿದ ಮಹಾಸಂಸ್ಥೆಗಳು ನಿಮ್ಮ ಸೇವಾನಿಷ್ಠೆಯ ಸಾಕ್ಷಿಯಾಗಿವೆ. ಅಲ್ಲಿಯ ಕಲ್ಲು ಇಟ್ಟಿಗೆಗಳೆಲ್ಲಾ ನಿಮ್ಮ ಕಥೆ ಹೇಳುತ್ತಿವೆ. ನಿಮ್ಮಿಂದ ಅದೆಷ್ಟೋ ಮನೆಗಳ ದೀಪ ಬೆಳಗುತ್ತಿವೆ. ಸಾರ್ಥಕ ಬದುಕು ನಿಮ್ಮದು. ಇಂದಿಗೆ ನೀವು ದೇಹ ಬಿಟ್ಟು ಒಂದು ದಶಕವಾಯಿತು. ನೀವಿಲ್ಲಿಯೇ ಇದ್ದೀರಿ. ನಮ್ಮ ಮನೆಮನಗಳ ಬೆಳಕಾಗಿ. ನಮ್ಮ ನೆನಪುಗಳ ನಂದಾದೀಪವಾಗಿ.
ಸಾಷ್ಟಾಂಗ ನಮಸ್ಕಾರ.

ಸದಾ ನಿಮ್ಮ ಸ್ಮರಣೆಯಲ್ಲಿ
ಬಿ. ಹರೀಶ್ ಹಾಗೂ ಜಯಂತಿ ಹರೀಶ್, ಮೊ: 9900468880

100% TEAK WOOD

FACTORY FINISH DOORS & FRAMES
@ FACTORY DEPOT RATES
10 YEARS WARRANTY*
9845426862
9901291267

NEW YEAR OFFER

MUDA APPROVED
Vee2 Developers
₹20 Lakhs Only
(20 x 30 Site)
HERITAGE CITY
Uttanahalli, Mysuru
PRM/KA/RERA/1268/PR/160124/006555
READY FOR REGISTRATION
Available Plots 20x30 & 30x40
8055 004 400

SILK FAB®



ಕೈಮಗ್ಗ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ

Sponsored by: Office of the Development Commissioner (Handlooms), Ministry of Textiles, Govt. of India
वस्त्र मंत्रालय MINISTRY OF TEXTILES
Organised by: National Handloom Development Corporation Ltd.
My Handloom My Pride

05-18 ಜನವರಿ 2025
ಬೆಳಗ್ಗೆ 11.00 ರಿಂದ ರಾತ್ರಿ 8.00 ರ ವರೆಗೆ

ಸ್ಥಳ
ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್
ಹೆಬ್ಬಾಳು ಕೈಗಾರಿಕಾ ಪ್ರದೇಶ, ವರ್ತುಲ ರಸ್ತೆ, ಮೈಸೂರು - 570 016

ಪ್ರವೇಶ ಉಚಿತ
ರೇಷ್ಮೆ & ಕಾಟನ್ ಸೀರೆಗಳು | ಸಲ್ವಾರ್ ಸೂಟ್‌ಗಳು | ಡ್ರೆಸ್ ಮೆಟಿರಿಯಲ್‌ಗಳು
ದುಪಟ್ಟಾಗಳು & ಸ್ಟೋಲ್‌ಗಳು | ಕೈಮಗ್ಗ ಮತು ಕರಕುಶಲ ವಸ್ತುಗಳು
Follow us on: SilkFab /silkfabofficial /silkfabofficial /silkfabofficial
Scan for Location
ಭಾರತದ ಸಮೃಧ ಪರಂಪರೆ – ಹೆಮ್ಮೆಯಿಂದ ಕೈಮಗ್ಗದ ಬಟ್ಟೆಗಳನ್ನು ಧರಿಸಿ

THE NEW CASTLE HALL

available on 8th & 9th May 2025
Contact:
0821-2416419, 9535491919

BUILDING CONSTRUCTION

Starts from 1599 Rs./sqft.,
Call 7897891986

SITE FOR SALE

40x60 E/F
Residential Site at Yelwala Town Limit.
Contact:
9845118777

ಮೈಸೂರು ಮಿತ್ರ — ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

